ಸಂಪುಟ: 04 ಸಂಚಿಕೆ: 145 ಪುಟಗಳು: 08 ಬುಧವಾರ 07 ಆಗಸ್ಟ್ 2024 www.udayavahini.in epaper.udayavahini.in Udayavahini news Udayavahini news Udayavahini news youtube udayavahininews@gmail.com

ಸಂಪಾದಕರು: ಟಿ. ಹೊಂಬೇಗೌಡ RNI No. KARKAN/2021/80833 9448225696 +91 8035841833 ₹5

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

**ಮುಂಜಾನೆ ಮಾತು**

ಒಂದು ಸಾಮಾನ್ಯ ಕೆಲಸವನ್ನು ಅತ್ಯುತ್ತಮವಾಗಿ ಮಾಡುವುದರಿಂದ ಶ್ರೇಷ್ಠ ಪ್ರತಿಫಲ ದೊರಕುತ್ತದೆ..

## ಮುಡಾ ಹಗರಣದಲ್ಲಿ ಸಿಎಂ ಸಿದ್ದರಾಮಯ್ಯ ನಂ.1 ಆರೋಪಿ

• ಉದಯವಾಹಿನಿ, ಮೈಸೂರು

ವಾಲ್ಮೀಕಿ, ಮುಡಾ ಹಗರಣದಲ್ಲಿ ಸಿಎಂ ಸಿದ್ದರಾಮಯ್ಯ ನಂ.1 ಆರೋಪಿಯಾಗಿದ್ದಾರೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ವಾಗ್ದಾಳಿ ನಡೆಸಿದ್ದಾರೆ. ಬಿಜೆಪಿ-ಜೆಡಿಎಸ್ ಪಾದಯಾತ್ರೆಯಲ್ಲಿ ಮಾತನಾಡಿ ಅವರು, ಮುಡಾ, ವಾಲ್ಮೀಕಿ ಹಗರಣದಲ್ಲಿ ಸಿಎಂ ಸಿದ್ದರಾಮಯ್ಯ ನಂ.1 ಆರೋಪಿಯಾಗಿದ್ದಾರೆ. ಆ ಕಾರಣಕ್ಕೆ ಇಬ್ಬರ ಹೆಸರನ್ನು ಕೈಬಿಟ್ಟು ಕೆಲಸ ಮಾಡುವಂತೆ ಸೂಚಿಸಿದ್ದಾರೆ. ಎಸ್‌ಸಿ ಸಮುದಾಯದ 187 ಕೋಟಿ ರೂ. ಲೂಟಿ ಹೊಡೆದ ಮಾಜಿ ಸಚಿವ ಬಿ.ನಾಗೇಂದ್ರ, ಹಾಗೂ ಶಾಸಕ ಬಸನಗೌಡ ದದ್ದಲ್ ಅವರನ್ನು ಹಗರಣದ ಚಾರ್ಜ್‌ಶೀಟ್‌ನಿಂದ ಕೈಬಿಟ್ಟಿದ್ದಾರೆ. ಕಾಂಗ್ರೆಸ್ ಸರ್ಕಾರ ಭ್ರಷ್ಟರ ರಕ್ಷಣೆಗೆ ನಿಂತಿದೆ. ಕಾಂಗ್ರೆಸ್ ಅಧಿಕಾರಕ್ಕೆ ಬಂದ ಮೇಲೆ ರಾಜ್ಯದಲ್ಲಿ ಭ್ರಷ್ಟಾಚಾರ ಹೆಚ್ಚಿದೆ ಎಂದರು.

## ಸಿಎಂ ವಿರುದ್ಧ ರಾಜ್ಯಪಾಲರಿಗೆ ಮತ್ತೊಂದು ದೂರು ಸಲ್ಲಿಕೆ!

• ಉದಯವಾಹಿನಿ, ಬೆಂಗಳೂರು

ಸಿಎಂ ಸಿದ್ದರಾಮಯ್ಯಗೆ ಮತ್ತೊಂದು ಸಂಕಷ್ಟ ಎದುರಾಗಿದ್ದು, ಪ್ರಭಾವ ಭೀರಿ ಜಮೀನು ಅಕ್ರಮವಾಗಿ ಡಿನೋಟಿಫಿಕೇಷನ್ ಆರೋಪದ ಹಿನ್ನೆಲೆಯಲ್ಲಿ ರಾಜ್ಯಪಾಲರಿಗೆ ದೂರು ಸಲ್ಲಿಕೆಯಾಗಿದೆ. ಸಿಎಂ ಸಿದ್ದರಾಮಯ್ಯ ವಿರುದ್ಧ ಕೇಸ್ ದಾಖಲಿಸುವಂತೆ ಕೋರಿ ರಾಜ್ಯಪಾಲರಿಗೆ ಮೈಸೂರು ಮೂಲದ ಸ್ನೇಹಮತಿ ಕೃಷ್ಣ ಎಂಬುವರು ದಾಖಲೆ ಸಮೇತ ದೂರು ಸಲ್ಲಿಸಿದ್ದಾರೆ. ಫಲಾನುಭವಿಗಳ ಆಶ್ರಯ ಮನೆ ಹಂಚಿಕೆಯ ಭೂಸ್ವಾಧೀನ ಮಾಡಿಕೊಂಡು 1979 ರಲ್ಲಿ ಅಕ್ರಮ ಭೂಮಿಯನ್ನು ಸ್ವಾಧೀನ ಮಾಡಿಕೊಳ್ಳಲಾಗಿದೆ ಎಂದು ಸ್ನೇಹಮಯಿ ಕೃಷ್ಣ ದಾಖಲೆ ಸಮೇತ ರಾಜ್ಯಪಾಲರಿಗೆ ದೂರು ಸಲ್ಲಿಸಿದ್ದಾರೆ.

## ಮಳೆಗೆ 65 ಸಾವಿರ ಹೆಕ್ಟರ್ ಬೆಳೆ ಹಾನಿ, 58 ಮಂದಿ ಸಾವು

• ಉದಯವಾಹಿನಿ, ಶಿವಮೊಗ್ಗ

ರಾಜ್ಯದಲ್ಲಿ ಈ ಬಾರಿ ಸುಮಾರು 65 ಸಾವಿರ ಹೆಕ್ಟರ್ ಬೆಳೆ ಹಾನಿಯಾಗಿದ್ದು, 58 ಜನರು ಮೃತಪಟ್ಟಿದ್ದಾರೆ ಎಂದು ಸಚಿವ ಕೃಷ್ಣ ಬೈರೇಗೌಡ ತಿಳಿಸಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯದಲ್ಲಿ ಈ ಬಾರಿ ಸುಮಾರು 65 ಸಾವಿರ ಹೆಕ್ಟರ್ ಬೆಳೆ ಹಾನಿಯಾಗಿದ್ದು, 58 ಜನರು ಮೃತಪಟ್ಟಿದ್ದಾರೆ.ಮೃತಪಟ್ಟವರಿಗೆ ರಾಜ್ಯ ಸರ್ಕಾರದಿಂದ ಈಗಾಗಲೇ ಪರಿಹಾರ ನೀಡಲಾಗಿದೆ. ಮಳೆ ಕಳೆದುಕೊಂಡವರಿಗೂ ಪರಿಹಾರ ನೀಡಲು ಸೂಚನೆ ನೀಡಲಾಗಿದೆ ಎಂದು ತಿಳಿಸಿದ್ದಾರೆ.ಇನ್ನು ರಾಜ್ಯದಲ್ಲಿ ಜೂನ್ ಹಾಗೂ ಜುಲೈ ನಲ್ಲಿ ಶೇ. 32 ರಷ್ಟು ಅಧಿಕ ಮಳೆಯಾಗಿದೆ. ಕೋಲಾರ, ಚಿಕ್ಕಬಳ್ಳಾಪುರ, ಬೆಂಗಳೂರು, ಕೊಪ್ಪಳ, ಯಾದಗಿರಿ ಸೇರಿದಂತೆ ಹಲವು ಜಿಲ್ಲೆಗಳಲ್ಲಿ ಮಳೆ ಕೊರತೆಯೂ ಆಗಿದೆ ಎಂದರು.

## ಪಶ್ಚಿಮ ಘಟ್ಟದಲ್ಲಿ 69 ಎಕರೆ ಅರಣ್ಯ ಒತ್ತುವರಿ ತೆರವು

• ಉದಯವಾಹಿನಿ, ಬೆಂಗಳೂರು


ರಾಜ್ಯದ 10 ಜಿಲ್ಲೆಗಳ ವ್ಯಾಪ್ತಿಯ ಪಶ್ಚಿಮಘಟ್ಟ ಮತ್ತು ಇತರ ಘಟ್ಟ ಪ್ರದೇಶಗಳಲ್ಲಿನ ಒತ್ತುವರಿಯನ್ನು ತತ್ ಕ್ಷಣದಿಂದಲೇ ತೆರವು ಮಾಡುವಂತೆ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಖಂಡ್ರೆ ಸೂಚಿಸಿದ 24 ಗಂಟೆಯಲ್ಲಿ ನೂತನ ಕಾರ್ಯಪಡೆ 31 ಎಕರೆ ಅರಣ್ಯ ಭೂಮಿ ಒತ್ತುವರಿ ತೆರವು ಕಾರ್ಯಾಚರಣೆ ಆರಂಭಿಸಿದೆ. ಚಿಕ್ಕಮಗಳೂರು ಜಿಲ್ಲೆ ಕೊಪ್ಪ ಹೋಬಳಿಯ ಮಾಗುಂಡಿ ಸರ್ವೆ ನಂ. 29ರಲ್ಲಿ 17 ಎಕರೆ 17 ಗುಂಟೆ, ಹಲಸೂರು ಸರ್ವೆ ನಂ. 55ರಲ್ಲಿ 13 ಎಕರೆ 38 ಗುಂಟೆ ಹಾಗೂ ತನುಡಿ ಸರ್ವೆ ನಂ. 9, 21, 22,23, 72ಮತ್ತು 97ರಲ್ಲಿ ಒಟ್ಟು 36 ಎಕರೆ ಸೇರಿ ಒಟ್ಟು 69 ಎಕರೆ ಅರಣ್ಯ ಭೂಮಿ ಒತ್ತುವರಿಯನ್ನು ತೆರವು ಮಾಡಿಸಲಾಗುತ್ತಿದೆ. ಪಶ್ಚಿಮಘಟ್ಟ ಮತ್ತು ಅರಣ್ಯ ಒತ್ತುವರಿ ತೆರವು ಕಾರ್ಯಪಡೆಯ ಅಧ್ಯಕ್ಷರಾಗಿರುವ ಇಲಾಖೆಯ ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ ಬ್ರಿಜೇಶ್ ದೀಕ್ಷಿತ್ ಅವರ ಆದೇಶದಂತೆ ಈ ಕ್ರಮ ಜರುಗಿಸಲಾಗಿದೆ.

## ಪರಮೇಶ್ವರ್ ಬರ್ತ್‌ಡೇ ಆಚರಣೆ ವೇಳೆ ಉರುಳಿ ಬಿದ್ದ ಮರ

• ಉದಯವಾಹಿನಿ, ಬೆಂಗಳೂರು

ಗೃಹ ಸಚಿವ ಡಾ.ಪರಮೇಶ್ವರ್ ಹುಟ್ಟು ಹಬ್ಬದ ಆಚರಣೆ ವೇಳೆ ತೆಂಗಿನಮರವೊಂದು ಉರುಳಿ ಬಿದಿದ್ದು, ಭಾರಿ ಅನಾಹುತವೊಂದು ತಪ್ಪಿದೆ. ಬೆಂಗಳೂರಿನ ಸದಾಶಿವನಗರದ ಪರಮೇಶ್ವರ್ ನಿವಾಸದಲ್ಲಿ ಡಾ.ಪರಮೇಶ್ವರ್ ಬರ್ತ್ ಡೇ ಕಾರ್ಯಕ್ರಮದ ಆಚರಣೆ ವೇಳೆ ಭಾರಿ ಗಾಳಿ ಮಳೆಗೆ ತೆಂಗಿನಮರವೊಂದು ಉರುಳಿ ಬಿದ್ದಿದೆ. ಅದೃಷ್ಟವಶಾತ್ ತೆಂಗಿನ ಮರ ಜರ್ಮನ್ ಟೆಂಟ್ ಮೇಲೆ ಉರುಳಿ ಬಿದ್ದಿದ್ದು, ಅದೃಷ್ಟವಶಾತ್ ಯಾವುದೇ ಪ್ರಾಣಾಪಾಯ ಸಂಭವಿಸಿಲ್ಲ ಎಂಬುದಾಗಿ ತಿಳಿದು ಬಂದಿದೆ. ಈ ಬಗ್ಗೆ ಹೆಚ್ಚಿನ ಮಾಹಿತಿ ನಿರೀಕ್ಷಿಸಲಾಗಿದೆ.

## ಅಧಿಕಾರ ದಾಹದಿಂದ ಪಾದಯಾತ್ರೆ ಹಮ್ಮಿಕೊಂಡಿಲ್ಲ



• ಉದಯವಾಹಿನಿ, ಬೆಂಗಳೂರು

ರಾಜ್ಯದ ಇತಿಹಾಸದಲ್ಲಿ ಇಂಥ ಬೃಹತ್ ಪಾದಯಾತ್ರೆಯನ್ನು ಯಾರೂ ಹಮ್ಮಿಕೊಂಡಿರಲಿಲ್ಲ. ಯಾವುದೇ ಅಧಿಕಾರ ದಾಹದಿಂದ ನಮ್ಮ ಈ ಪಾದಯಾತ್ರೆ ಹಮ್ಮಿಕೊಂಡಿಲ್ಲ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಮತ್ತು ಶಾಸಕ ಬಿ.ವೈ.ವಿಜಯೇಂದ್ರ ಅವರು ತಿಳಿಸಿದರು. ನಾಲ್ಕನೇ ದಿನವಾದ ಇಂದು ಮೈಸೂರು ಚಲೋ ಪಾದಯಾತ್ರೆಯ ಸಂದರ್ಭದಲ್ಲಿ ಅವರು ಮಾತನಾಡಿದರು.

ಭ್ರಷ್ಟ ಕಾಂಗ್ರೆಸ್ ಸರಕಾರ ಮತ್ತು ಭ್ರಷ್ಟ ಮುಖ್ಯಮಂತ್ರಿ ಸಿದ್ದರಾಮಯ್ಯನವರನ್ನು ಅಧಿಕಾರದಿಂದ ಕಿತ್ತೆಸೆಯಬೇಕೆಂದು ಸಂಕಲ್ಪದೊಂದಿಗೆ ಈ ಪಾದಯಾತ್ರೆ ಹಮ್ಮಿಕೊಂಡಿದ್ದೇವೆ ಎಂದು ತಿಳಿಸಿದರು. ರಾಜ್ಯದ ಆರೂವರೆ ಕೋಟಿ ಜನರಿಗೆ ಚುನಾಯಿತ ಸರಕಾರ ಇದೆ ಎಂದು ಅನಿಸುತ್ತಿಲ್ಲ. ಕಾಂಗ್ರೆಸ್‌ನವರು ಅನೇಕ ಭರವಸೆಯೊಂದಿಗೆ ಅಧಿಕಾರಕ್ಕೆ ಬಂದಿದೆ. ಕಳೆದ 14 ತಿಂಗಳಿನಲ್ಲಿ ರಾಜ್ಯದಲ್ಲಿ ವಿದ್ಯುತ್ ದರ ಏರಿಸಿದ್ದಾರೆ. ಹಾಲಿನ ದರ ಹೆಚ್ಚಿಸಿದರೂ ಅದರ ಪ್ರಯೋಜನ ರೈತರು, ಹೈನುಗಾರರಿಗೆ ಲಭಿಸಿಲ್ಲ. ಯಡಿಯೂರಪ್ಪನವರು, ಬಿಜೆಪಿ ಸರಕಾರವು ಹಾಲು ಉತ್ಪಾದಕರಿಗೆ 5 ರೂ. ಪ್ರೋತ್ಸಾಹಧನ ಕೊಡುತ್ತಿತ್ತು ಎಂದು ವಿವರಿಸಿದರು.

**ಸಿಎಂ ಮೊಸಳೆ ಕಣ್ಣೀರು**

ಸಿದ್ದರಾಮಯ್ಯನವರು ರೈತರ ಬಗ್ಗೆ ಮೊಸಳೆ ಕಣ್ಣೀರು ಹಾಕುತ್ತಿದ್ದಾರೆ. ಹಾಲು ಉತ್ಪಾದಕರಿಗೆ ಪ್ರೋತ್ಸಾಹಧನ 1200 ಕೋಟಿ ರೂ. ಹಾಗೇ ಉಳಿಸಿಕೊಂಡಿದ್ದಾರೆ. ನೋಂದಣಿ ಶುಲ್ಕ ಹೆಚ್ಚಾಗಿದೆ. ಅಕ್ಕಿ, ದವಸ ಧಾನ್ಯವೂ ದುಬಾರಿಯಾಗಿದೆ. 1 ಲಕ್ಷ 95 ಸಾವಿರ ಕೋಟಿ ಸಾಲವನ್ನು ಸಿದ್ದರಾಮಯ್ಯನವರ ಸರಕಾರ ಮಾಡಿದೆ ಎಂದು ಟೀಕಿಸಿದರು.



# ಬಾಂಗ್ಲಾ ಬೇಗುದಿ

## ಪಾಕ್,ಚೀನಾ ಕುತಂತ್ರ ಬುದ್ಧಿ



## ಬಾಂಗ್ಲಾದೇಶದ ಅರಾಜಕತೆ ಹಿಂದೆ ಪಾಕಿಸ್ತಾನ, ಚೀನಾ ಕೈವಾಡ

## ಭಾರತವೇ ಮೇನ್ ಟಾರ್ಗೆಟ್! 3 ಕಡೆಯಿಂದ ಕಾಟ ಕೊಡಲು ಕುತಂತ್ರ

• ಉದಯವಾಹಿನಿ, ನವದೆಹಲಿ

ಬಾಂಗ್ಲಾದೇಶದಲ್ಲಿ ನಡೆದಿರುವ ಕ್ಷಿಪ್ರ ರಾಜಕೀಯ ಬೆಳವಣಿಗೆಗಳ ಹಿನ್ನೆಲೆ ನಡೆದ ಸರ್ವಪಕ್ಷಗಳ ಸಭೆಯಲ್ಲಿ ಭಾರತ ಸರ್ಕಾರ ತೆಗೆದುಕೊಂಡಿರುವ ಕ್ರಮಗಳಿಗೆ ಪ್ರಶಂಸೆ ವ್ಯಕ್ತವಾಗಿದ್ದು, ಭವಿಷ್ಯದ ಕಾರ್ಯಯೋಜನೆಗಳಿಗೂ ಸರ್ವಾನುಮತದ ಬೆಂಬಲ ವ್ಯಕ್ತವಾಗಿದೆ. ಒಗ್ಗಟ್ಟನ್ನು ಪ್ರದರ್ಶಿಸಲಾಗಿದೆ. ಕೇಂದ್ರ ವಿದೇಶಾಂಗ ಸಚಿವ ಎಸ್.ಜಯಶಂಕರ್ ಅಧ್ಯಕ್ಷತೆಯಲ್ಲಿ ನಡೆದ ಸರ್ವಪಕ್ಷಗಳ ಸಭೆಯಲ್ಲಿ ಕೇಂದ್ರ ಗೃಹಸಚಿವ ಅಮಿತ್ ಶಾ, ರಕ್ಷಣಾ ಸಚಿವ ರಾಜನಾಥ ಸಿಂಗ್, ಸಚಿವರಾದ ಕಿರಣ್ ರಿಜೀಜು, ಜೆ.ಪಿ. ನಡ್ಡಾ, ಎಚ್.ಡಿ.ಕುಮಾರಸ್ವಾಮಿ ಭಾಗವಹಿಸಿದ್ದರು.

**ಭಾರತದ ಭದ್ರತೆಗೆ ಸರ್ವಪಕ್ಷ ಸಭೆ**

1. ನೆರೆಯ ರಾಷ್ಟ್ರ ಬಾಂಗ್ಲಾದೇಶದಲ್ಲಿ ಅರಾಜಕತೆ ಸೃಷ್ಟಿಯಾಗಿದ್ದು , ಮೀಸಲಾತಿ ವಿರೋಧಿ ವಿದ್ಯಾರ್ಥಿಗಳ ಹಿಂಸಾತ್ಮಕ ಪ್ರತಿಭಟನೆ
2. ಈ ಕೃತ್ಯದ ಹಿಂದೆ ನಮ್ಮದೇ ಮತ್ತೊಂದು ನೆರೆ ರಾಷ್ಟ್ರ ಪಾಕಿಸ್ತಾನದ ಕೈವಾಡ .
3. ಬಾಂಗ್ಲಾದಲ್ಲಿ ತಾಲಿಬಾನ್ ಮಾದರಿ ಸರ್ಕಾರ ರಚನೆ ಗುರಿ; ಸಪ್ತ ಸಹೋದರಿಯರ ವಿಷಯದಲ್ಲಿ ಹೆಚ್ಚಿದ ಆತಂಕ

ಕಾಂಗ್ರೆಸ್‌ನಿಂದ ಲೋಕಸಭೆ ವಿರೋಧಪಕ್ಷದ ನಾಯಕ ರಾಹುಲ್ ಗಾಂಧಿಯ , ವಿರೋಧಪಕ್ಷದ ನಾಯಕರು ಸಭೆಯಲ್ಲಿ ಉಪಸ್ಥಿತರಿದ್ದರು. ಸರ್ವಪಕ್ಷ ಸಭೆಯಲ್ಲಿ ಜಯಶಂಕರ್ ಮಾತನಾಡಿ, ಭಾರತ , ಬಾಂಗ್ಲಾದೇಶದ ರಾಜಕೀಯ ಕ್ರಾಂತಿ, ನಂತರ ಭಾರತದಲ್ಲಿ ಸೃಷ್ಟಿಯಾಗುವ ಪರಿಸ್ಥಿತಿ ನಿಭಾಯಿಸಲು ಕೈಗೊಂಡಿರುವ ನಿರ್ಣಯಗಳ ಬಗ್ಗೆ ವಿವರಣೆ ನೀಡಿದ್ದಾರೆ. ಭಾರತಕ್ಕೆ ವಲಸೆ ಬಂದ ಪ್ರಧಾನಿ ಶೇಖ್ ಹಸೀನ, ಇತರ ರಾಜಕೀಯ ನಾಯಕರ ಬಗ್ಗೆ ಯಾವ ರೀತಿ ಕಾಳಜಿ ವಹಿಸಲಾಗಿದೆ ಎಂಬುದನ್ನು ವಿವರಿಸಿದ್ದಾರೆ. ಶೇಖ್ ಹಸೀನ ಅವರು ಸದ್ಯಕ್ಕೆ ಭಾರತದಲ್ಲಿದ್ದಾರೆ. ನಮ ಸರ್ಕಾರ ಅವರಿಗೆ ಸಾಕಷ್ಟು ಕಾಲಾವಕಾಶ ನೀಡಲಿದೆ ಮತ್ತು ಅವರ ಭವಿಷ್ಯದ ಕ್ರಮಗಳ ಬಗ್ಗೆಯೂ ತಿಳಿಯಬಯಸುತ್ತದೆ ಎಂದು ಹೇಳಿದ್ದಾರೆ. ಭಾರತ ಸರ್ಕಾರ ಬಾಂಗ್ಲಾದೇಶದ ಸೇನೆಯೊಂದಿಗೆ ಉತ್ತಮ ಸಂಪರ್ಕದಲ್ಲಿದೆ. ಪರಿಸ್ಥಿತಿಯ ಬೆಳವಣಿಗೆ ನೋಡಿಕೊಂಡು ಸರಿಯಾದ ಸಮಯದಲ್ಲಿ ಸೂಕ್ತ ಕ್ರಮಗಳನ್ನು ಕೈಗೊಳ್ಳಲಾಗುವುದು. ಬಾಂಗ್ಲಾದಲ್ಲಿ ಸುಮಾರು 20 ಸಾವಿರ ಭಾರತೀಯರಿದ್ದಾರೆ. ಸುಮಾರು 8ಸಾವಿರ ವಾಪಸ್ ಭಾರತಕ್ಕೆ ಮರಳಿದ್ದಾರೆ. ಕೇಂದ್ರ ಸರ್ಕಾರ ಬಾಂಗ್ಲಾ ದೇಶದಲ್ಲಿರುವ ಭಾರತೀಯರ ಸಂಪರ್ಕದಲ್ಲಿದ್ದು, ರಾಯಭಾರಿ ಕಚೇರಿಯಿಂದ ಅಗತ್ಯ ನೆರವು ನೀಡಲಾಗುತ್ತಿದೆ ಎಂದು ಜಯಶಂಕರ್ ವಿವರಿಸಿದ್ದಾರೆ. ಬಾಂಗ್ಲಾ ದೇಶದಲ್ಲಿನ ಅಲ್ಪಸಂಖ್ಯಾತರ ಮೇಲೆ ಗಮನ ಕೇಂದ್ರೀಕರಿಸಲಾಗಿದೆ ಮತ್ತು ಅವರ ಸುರಕ್ಷತೆಗೆ ಕ್ರಮ ಕೈಗೊಳ್ಳಲಾಗಿದೆ ಎಂದು ಹೇಳಿದ್ದಾರೆ. ಸಭೆಯಲ್ಲಿ ರಾಹುಲ್‌ಗಾಂಧಿಯವರು ದೀರ್ಘಾವಧಿ, ಅಲ್ಪಾವಧಿಯ ರಾಜತಾಂತ್ರಿಕ ಕ್ರಮಗಳ ಬಗ್ಗೆ ಪ್ರಶ್ನಿಸಿದ್ದು, ಕೇಂದ್ರ ಸರ್ಕಾರದ ಹೇಳಿಕೆ ಪ್ರಕಾರ ಅಲ್ಲಿ ಪ್ರಗತಿಪರ ಬೆಳವಣಿಗೆಗಳಾಗಿವೆ. ಮುಂದುವರೆದ ಪರಿಸ್ಥಿತಿಯನ್ನು ವಿಶ್ಲೇಷಣಾತಕವಾಗಿ ನೋಡಬೇಕಿದೆ ಎಂದು ಸಲಹೆ ನೀಡಿದ್ದಾರೆ.

ಕೇಂದ್ರ ಸರ್ಕಾರ ಸಾಧ್ಯವಾದ ಸಹಭಾಗಿತ್ವ ವಿದೇಶಿ ನೆರವಿಗೆ ಚಾಚಬೇಕು ಎಂದು ರಾಹುಲ್ ಸಲಹೆ ನೀಡಿದ್ದಕ್ಕೆ, ಈ ಬಗ್ಗೆ ಪರಿಶೀಲನೆ ನಡೆಸುವುದಾಗಿ ಜಯಶಂಕರ್ ಭರವಸೆ ನೀಡಿದ್ದು, ಎಲ್ಲಾ ದೃಷ್ಟಿಕೋನಗಳಿಂದಲೂ ಪರಿಸ್ಥಿತಿ ಅವಲೋಕಿಸುವುದಾಗಿ ತಿಳಿಸಿದ್ದಾರೆ ಎನ್ನಲಾಗಿದೆ. ಭವಿಷ್ಯದಲ್ಲಿ ವಿದೇಶಾಂಗ ನೀತಿಯ ಬಗೆಗಿನ ಪರಿಣಾಮಗಳ ಬಗ್ಗೆಯೂ ಎಚ್ಚರಿಕೆ ವಹಿಸಬೇಕು. ಭಾರತದಲ್ಲಿ ಅಲ್ಪಸಂಖ್ಯಾತರ ಮೇಲೆ ಹಿಂಸಾಚಾರ, ದೌರ್ಜನ್ಯಗಳಾಗುತ್ತಿರುವ ಬಗ್ಗೆ ದೂರುಗಳಿದ್ದು, ಅದರ ಬಗ್ಗೆ ಕಾಳಜಿ ವಹಿಸಬೇಕೆಂದು ರಾಹುಲ್‌ಗಾಂಧಿ ಸಲಹೆ ನೀಡಿದ್ದಾರೆ. ಒಟ್ಟಾರೆ ಸಭೆಯಲ್ಲಿ ಬಾಂಗ್ಲಾ ದೇಶದ ವಿಚಾರವಾಗಿ ಒಗ್ಗಟ್ಟು ಪ್ರದರ್ಶನವಾಗಿದ್ದು, ಭಾರತ ತನ್ನ ಹಿತಾಸಕ್ತಿಗನುಗುಣವಾಗಿ ತೆಗೆದುಕೊಳ್ಳುವ ಕ್ರಮಗಳಿಗೆ ಬೆಂಬಲ ವ್ಯಕ್ತಪಡಿಸುವುದಾಗಿ ವಿಶ್ವಾಸ ವ್ಯಕ್ತವಾಗಿದೆ ಎಂದು ಮೂಲಗಳು ತಿಳಿಸಿವೆ. ಬಾಂಗ್ಲಾ ದೇಶದಲ್ಲಿ ನಿನ್ನೆ ಕ್ಷಿಪ್ರ ರಾಜಕೀಯ ಬೆಳವಣಿಗೆ ನಡೆದಿದ್ದು, ಸರ್ಕಾರಿ ಉದ್ಯೋಗಗಳಲ್ಲಿ ಮೀಸಲಾತಿ ನೀಡುವ ನಿಲುವನ್ನು ವಿರೋಧಿಸಿ ಕೆಲ ದಿನಗಳಿಂದ ಪ್ರತಿಭಟನೆಗಳು ನಡೆಯುತ್ತಿದ್ದು, ಅದು ಇದ್ದಕ್ಕಿದ್ದಂತೆ ಹಿಂಸಾರೂಪ ಪಡೆದುಕೊಂಡಿತ್ತು.

**ಪಾಕಿಸ್ತಾನಕ್ಕೆ ಏನಿದೆ ದ್ವೇಷ?**

ಶೇಖ್ ಹಸೀನಾ ನೇತೃತ್ವದ ಬಾಂಗ್ಲಾದೇಶ ಸರ್ಕಾರ ಭಾರತದ ಪರ ನಿಲುವನ್ನು ತಾಳಿತ್ತು. ಯಾವುದೇ ವಿಷಯವಾದರೂ ಕೂಡ ಭಾರತದ ಜೊತೆ ಉತ್ತಮ ಸಂಬಂಧವನ್ನು ಹೊಂದಿತ್ತು. ಇದು ಪಾಕಿಸ್ತಾನಕ್ಕೆ ಸಹಿಸಲು ಆಗುತ್ತಿದ್ದಿಲ್ಲ. ಅದಲ್ಲದೇ 2009 ರಿಂದ 2024 ರವರೆಗೂ ಶೇಖ್ ಹಸೀನಾ ಸರ್ಕಾರವೇ ಬಾಂಗ್ಲಾದೇಶದಲ್ಲಿ ಇರುವುದರಿಂದ ಭಾರತದ ಪೂರ್ವದಲ್ಲಿ ಪಾಕಿಸ್ತಾನದ ಆಟ ನಡೆಯುತ್ತಿದ್ದಿಲ್ಲ. ಅದಕ್ಕಾಗಿಯೇ ಪಾಕಿಸ್ತಾನ ಬಾಂಗ್ಲಾದೇಶದ ಸರ್ಕಾರವನ್ನು ಅಸ್ಥಿರಗೊಳಿಸಲು ಮುಂದಾಗಿತ್ತು. ಜೊತೆಗೆ ಆ ಪ್ರಯತ್ನದಲ್ಲಿ ಐಎಸ್ಐ ಯಶಸ್ವಿ ಕೂಡ ಆಗಿದೆ. ಇಲ್ಲದಿದ್ದರೇ ಮೀಸಲಾತಿಯನ್ನು ಹಿಂದಕ್ಕೆ ತೆಗೆದುಕೊಂಡ ಮೇಲೂ ಇಷ್ಟರ ಮಟ್ಟಿಗೆ ಹಿಂಸಾಚಾರ ನಡೆಯುತ್ತದೆ ಎಂದರೆ ಅದರ ಹಿಂದೆ ಐಎಸ್ಐನ ಪ್ರಚೋದನೆ ಇರುವುದು ಸ್ಪಷ್ಟವಾಗಿದೆ.



**ಕ್ರಾಸ್ ಬಾರ್ಡರ್ ಟೆರರಿಸಂ**

ಜಮ್ಮು ಮತ್ತು ಕಾಶ್ಮೀರದಲ್ಲಿ ಕ್ರಾಸ್ ಬಾರ್ಡರ್ ಟೆರರಿಸಂ ನಡೆಸುತ್ತಿರುವ ಪಾಕಿಸ್ತಾನ, ಬಾಂಗ್ಲಾದೇಶದಲ್ಲಿ ಹಿಡಿತ ಸಾಧಿಸಿ ಭಾರತದ ಈಶಾನ್ಯ ರಾಜ್ಯಗಳು ಹಾಗೂ ಪಶ್ಚಿಮ ಬಂಗಾಳದಲ್ಲಿ ಭಯೋತ್ಪಾದನಾ ಚಟುವಟಿಕೆಗಳನ್ನು ಹೆಚ್ಚಿಸಿ, ಇಂಡಿಯಾದಲ್ಲಿ ಅಸ್ಥಿರತೆ ಸೃಷ್ಟಿಸುವ ತಂತ್ರವನ್ನು ಹೆಣೆದಿದೆ. ಅರುಣಾಚಲ ಪ್ರದೇಶ ನನ್ನದು ಎಂದು ಕುಳಿತಿರುವ ಚೀನಾ ಕೂಡ ಬಾಂಗ್ಲಾದೇಶದ ಮೂಲಕ ಸಪ್ತ ಸಹೋದರಿಯರು ಎಂದು ಕರೆಸಿಕೊಳ್ಳುವ ಈಶಾನ್ಯ ಭಾರತ ಕಬಳಿಸುವ ಷಡ್ಯಂತ್ರ ಹೆಣೆದಿದೆ. ಬಾಂಗ್ಲಾದೇಶದಲ್ಲಿ ತಮ್ಮ ಪರವಾದ ಸರ್ಕಾರ ತರಲು ಪಾಕ್, ಚೀನಾ ಮುಂದಾಗಿವೆ.



**ಶೇಖ್ ಹಸೀನಾ ಸರ್ಕಾರ ಬೀಳಿಸಲು ತಿಂಗಳುಗಳ ಪ್ರಯತ್ನ!**

ಬಾಂಗ್ಲಾದೇಶದಲ್ಲಿ ನಡೆದ ಹಿಂಸಾಚಾರ ದಿಢೀರ್ ಎಂದು ಸೃಷ್ಟಿಯಾಗಿದ್ದಲ್ಲ. ಇದರ ಹಿಂದೆ ಹಲವು ತಿಂಗಳುಗಳ ಕಾಲದ ಪ್ರಯತ್ನ ಇದೆ. ಶೇಖ್ ಹಸೀನಾ ಸರ್ಕಾರವನ್ನು ಪತನಗೊಳಿಸಲು ಜಮಾತ್ ಇ ಇಸ್ಲಾಮಿ ಪಕ್ಷಕ್ಕೆ ಪಾಕಿಸ್ತಾನದ ಐಎಸ್ಐ ಈ ವರ್ಷದ ಆರಂಭದಲ್ಲಿಯೇ ಹಣಕಾಸಿನ ನೆರವನ್ನು ನೀಡಿತ್ತು. ಪಾಕಿಸ್ತಾನವೇ ಸಂಕಷ್ಟದಲ್ಲಿರುವಾಗ ಅಷ್ಟೊಂದು ಹಣ ಕೊಡುವುದಕ್ಕೆ ಆಗಲ್ಲ ಎಂದೇ ಚೀನಾ ಜಮಾತ್ ಇ ಇಸ್ಲಾಮಿಗೆ ಫಂಡ್ ಮಾಡಿದೆ. ಅದಷ್ಟೇ ಅಲ್ಲದೇ ಬಾಂಗ್ಲಾದಲ್ಲಿನ ಪ್ರತಿಭಟನೆಯನ್ನು ಜಾಗತಿಕ ಮಟ್ಟದಲ್ಲಿ ಮಾನವ ಹಕ್ಕುಗಳ ಉಲ್ಲಂಘನೆ ಎಂದು ಬಿಂಬಿಸುವಲ್ಲಿಯೂ ಕೂಡ ಐಎಸ್ಐ ಯಶ ಕಂಡಿತ್ತು. ಇದರ ಹಿಂದೆ ಕೇವಲ ಪಾಕ್ ಮತ್ತು ಚೀನಾ ಮಾತ್ರವಲ್ಲದೇ ಪಾಶ್ಚಿಮಾತ್ಯ ರಾಷ್ಟ್ರಗಳ ಕೈವಾಡ ಕೂಡ ಇದೆ.

## ಮೈಸೂರಿನಲ್ಲಿ 600 ಕೋಟಿ ರೂ ಹೂಡಿಕೆಯೊಂದಿಗೆ ಹೊಸ ಕಂಪನಿಗಳ ಸ್ಥಾಪನೆ

• ಉದಯವಾಹಿನಿ, ಬೆಂಗಳೂರು

ಕರ್ನಾಟಕ ಇಎಸ್‌ಡಿಎಂ (ಎಲೆಕ್ಟ್ರಾನಿಕ್ಸ್ ಸಿಸ್ಟಂಸ್ ಡಿಸೈನ್ ಮತ್ತು ತಯಾರಿಕೆ) ವಲಯದಲ್ಲಿ ಕರ್ನಾಟಕವನ್ನು ಜಾಗತಿಕ ನಾಯಕನನ್ನಾಗಿಸುವ ಗುರಿ ಹೊಂದಲಾಗಿದ್ದು, ವಿಶ್ವಮಟ್ಟದಲ್ಲಿ ಹೂಡಿಕೆಗಳ ಹರಿವು ಹೆಚ್ಚಿಸುವುದು, ಹೊಸ ಉದ್ಯಮಗಳನ್ನು ಆರಂಭಿಸಲು ಉತ್ತೇಜನ ನೀಡುವುದು ಮತ್ತು ರಾಜ್ಯದಲ್ಲಿ ಪ್ರಾರಂಭಿಸಿರುವ ಉದ್ಯಮಗಳನ್ನು ಉಳಿಸಿಕೊಳ್ಳುವ ವಾತಾವರಣವನ್ನು ಸೃಷ್ಟಿಸುವುದು ಕರ್ನಾಟಕ ಸರ್ಕಾರದ ಉದ್ದೇಶವಾಗಿದೆ ಎಂದು ಕರ್ನಾಟಕ ಸರ್ಕಾರದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಖಾತೆ ಸಚಿವರಾದ ಪ್ರಿಯಾಂಕ್ ಖರ್ಗೆ ಹೇಳಿದ್ದಾರೆ. ಮೈಸೂರಿನಲ್ಲಿ ಸೆಮಿಕಂಡಕ್ಟರ್, ಎಲಿಮೆಂಟ್ ಮ್ಯಾನೇಜ್ಮೆಂಟ್ ಸಿಸ್ಟಂ ಮತ್ತು ಘಟಕ ಗೋದಾಮುಗಳು ಸೇರಿದಂತೆ 20ಕ್ಕೂ ಹೆಚ್ಚು ಇಎಸ್‌ಡಿಎಂ ಕಂಪನಿಗಳು ಕ್ಲಸ್ಟರ್‌ಗೆ ಸೇರ್ಪಡೆಗೊಳ್ಳುತ್ತಿದ್ದು ಸುಮಾರು 600ಕೋಟಿ ರೂ. ಗಳ ಹೊಸ ಹೂಡಿಕೆ ಹರಿದು ಬಂದಿದೆ. ಹೆಚ್ಚುವರಿಯಾಗಿ, 150 ಎಕರೆಗಳಷ್ಟು ಪಿಸಿಬಿ ಕ್ಲಸ್ಟರ್ ಅನ್ನು ಸ್ಥಾಪಿಸುವ ಉದ್ದೇಶದಿಂದ ಪ್ರಸ್ತುತ ಪರೀಕ್ಷಾ ಸೌಲಭ್ಯವನ್ನು ವಿಸ್ತರಿಸಲು, ಮಲ್ಟಿಟೆನ್ನಿ ಕ್ಲೀನ್ ರೂಮ್ ಅನ್ನು ಸೇರಿಸಲು ಉದ್ದೇಶಿಸಿದ್ದೇವೆ. ಇದು 5000 ಹೊಸ ಉದ್ಯೋಗಗಳಿಗೆ ಚಾಲನೆ ನೀಡಲಿದೆ, ಅಷ್ಟೇ ಅಲ್ಲದೆ, ಮಹಿಳಾ ಉದ್ಯೋಗಿಗಳನ್ನು ಸಬಲೀಕರಣಗೊಳಿಸಲು ಸಹಕಾರವಾಗಲಿದೆ, ಈ ಎಲ್ಲಾ ಬೆಳವಣಿಗೆಯಿಂದ ಜಾಗತಿಕ ಕಂಪನಿಗಳು ಮೈಸೂರಿನಲ್ಲಿ ಬೆಳೆಯಲು ಇದು ಉತ್ತಮ ಸಮಯವಾಗಿದೆ ಎಂದು ಪ್ರಿಯಾಂಕ್ ಖರ್ಗೆ ಹೇಳಿದ್ದಾರೆ. ಮೈಸೂರಿನಲ್ಲಿ ಇಂದು (ಆಗಸ್ಟ್ 6) ಡಿಜಿಟಲ್ ಎಕಾನಮಿ ಮಿಷನ್ (ಕೆಡಿಇಎಂ) ಮತ್ತು ಇಂಡಿಯಾ ಎಲೆಕ್ಟ್ರಾನಿಕ್ಸ್ ಮತ್ತು ಸೆಮಿಕಂಡಕ್ಟರ್ ಅಸೋಸಿಯೇಷನ್ (ಐಇಎಸ್‌ಎ) ಸಹಯೋಗದಲ್ಲಿ 4ನೆ ಆವೃತ್ತಿ ಅನಾವರಣಗೊಳಿಸುತ್ತಿರುವ ಸಂದರ್ಭದಲ್ಲಿ ನೀಡಿರುವ ಸಂದೇಶದಲ್ಲಿ ಸಚಿವರು ಮೈಸೂರನ್ನು ಉದ್ಯೋಗಶೀಲ ನಗರವನ್ನಾಗಿ ವರ್ಧಿಸಲು ಮಾಹಿತಿ ತಂತ್ರಜ್ಞಾನ ಇಲಾಖೆ ಯೋಜಿಸಿದೆ ಎಂದು ಹೇಳಿದ್ದಾರೆ.

**20ಕ್ಕೂ ಹೆಚ್ಚು ಇಎಸ್‌ಡಿಎಂ ಕಂಪನಿಗಳು ಕ್ಲಸ್ಟರ್‌ಗೆ ಸೇರ್ಪಡೆ**



## ಕೆಲ ರಾಜ್ಯಗಳಲ್ಲಿ ನವೀಕರಿಸಬಹುದಾದ ಇಂಧನ ಕ್ಷೇತ್ರ ಕಡೆಗಣನೆ

### ರಾಜ್ಯಸಭೆಯಲ್ಲಿ ಹೊಸ ಮತ್ತು ನವೀಕರಿಸಬಹುದಾದ ಇಂಧನ ಸಚಿವಾಲಯದ ಮೇಲಿನ ಚರ್ಚೆ

• ಉದಯವಾಹಿನಿ, ನವದೆಹಲಿ

ನವೀಕರಿಸಬಹುದಾದ ಇಂಧನ ಶಕ್ತಿಗಳ ಬಗ್ಗೆ ರಾಜ್ಯಸಭೆಯಲ್ಲಿ ಇಂದು ಮಹತ್ವದ ಭಾಷಣ ಮಾಡಿದ ಮಾಜಿ ಪ್ರಧಾನಿಗಳಾದ ಹೆಚ್.ಡಿ.ದೇವೇಗೌಡರು, ಈ ಕ್ಷೇತ್ರವನ್ನು ಕರ್ನಾಟಕವೂ ಸೇರಿ ಹಲವಾರು ರಾಜ್ಯಗಳು ಕಡೆಗಣಿಸುತ್ತಿವೆ ಎಂದು ಅತ್ಯಂತ ಬೇಸರದಿಂದ ಹೇಳಿದರು. ರಾಜ್ಯಸಭೆಯಲ್ಲಿ ಹೊಸ ಮತ್ತು ನವೀಕರಿಸಬಹುದಾದ ಇಂಧನ ಸಚಿವಾಲಯದ ಮೇಲಿನ ಚರ್ಚೆಯಲ್ಲಿ ಸೋಮವಾರ ಪಾಲ್ಗೊಂಡು ಮಾತನಾಡಿದರು ಅವರು.

ಹಿಂದೆ ಕರ್ನಾಟಕ ರಾಜ್ಯವು ನವೀಕರಿಸಬಹುದಾದ ಇಂಧನ ಕ್ಷೇತ್ರದಲ್ಲಿ ಇಡೀ ದೇಶಕ್ಕೆ ನಾಯಕತ್ವ ನೀಡಿತ್ತು. ಈ ಕ್ಷೇತ್ರದಲ್ಲಿ ಗಣನೀಯ ದಾಪುಗಾಲು ಇರಿಸಿತ್ತು. ಆದರೆ ಕೆಲ ವರ್ಷಗಳಿಂದ ಈಚೆಗೆ ಕರ್ನಾಟಕದಲ್ಲಿ ಈ ಕ್ಷೇತ್ರ ಗಣನೀಯವಾಗಿ ಹಿನ್ನೆಡೆ ಅನುಭವಿಸಿದೆ ಎಂದು ಅವರು ಹೇಳಿದರು. ನಮ್ಮ ದೇಶದಲ್ಲಿ ನವೀಕರಿಸಬಹುದಾದ ಇಂಧನ ಕ್ಷೇತ್ರದ ಬೆಳವಣಿಗೆ ಪ್ರಮಾಣ ಶೇಕಡಾ 14ರಷ್ಟು ಇದ್ದು, ಕರ್ನಾಟಕ ರಾಜ್ಯದಲ್ಲಿ ಆ ಪ್ರಮಾಣ ಶೇಕಡಾ 2.58ರಷ್ಟು ಇದೆ. ಈ ಸಂದರ್ಭದಲ್ಲಿ ಈ ಕ್ಷೇತ್ರದ ಬೆಳವಣಿಗೆಯ ದರ ಕುಂಠಿತವಾಗಿರುವ ಬಗ್ಗೆ ಎಲ್ಲಾರೂ ಗಂಭೀರ ಚಿಂತನೆ ನಡೆಸಬೇಕು ಎಂದು ಮಾಜಿ ಪ್ರಧಾನಿಗಳು ಸಲಹೆ ಮಾಡಿದರು. ಈ ಕ್ಷೇತ್ರದಲ್ಲಿ ಉಂಟಾಗುವ ತ್ಯಾಜ್ಯ ವಸ್ತುಗಳ ಬಗ್ಗೆಯೂ ಮಹತ್ವದ ಸಲಹೆ ನೀಡಿದ ಮಾಜಿ ಪ್ರಧಾನಿಗಳು; ಸೋಲಾರ್ ಪ್ಯಾನೆಲ್‌ಗಳನ್ನು 25 ವರ್ಷಗಳ ಬಳಿಕ ವಿಲೇವಾರಿ ಮಾಡಲೇಬೇಕಾಗುತ್ತದೆ.

ಅವುಗಳನ್ನು ವಿಲೇವಾರಿ ಮಾಡುವ ಬಗ್ಗೆ ನಮ್ಮ ದೇಶದಲ್ಲಿ ಯಾವುದೇ ರೀತಿಯ ವೈಜ್ಞಾನಿಕ ನೀತಿ ಇರುವುಲ್ಲ ಎಂದರು.

ಸೋಲಾರ್ ಪ್ಯಾನೆಲ್‌ಗಳ ವಿಲೇವಾರಿಯಲ್ಲಿ ನಾವು ಅತ್ಯಂತ ಎಚ್ಚರಿಕೆ ವಹಿಸಬೇಕು. ಇಲ್ಲದಿದ್ದರೆ ಭವಿಷ್ಯದಲ್ಲಿ ಗಂಭೀರ ಸಮಸ್ಯೆ ಎದುರಿಸಬೇಕಾಗುತ್ತದೆ. ಹೀಗಾಗಿ, ಅವುಗಳ ವಿಲೇವಾರಿಗೆ ವೈಜ್ಞಾನಿಕ ನೀತಿ ರೂಪಿಸಬೇಕು ಎಂದು ಮಾಜಿ ಪ್ರಧಾನಿಗಳು ಸಲಹೆ ನೀಡಿದರು. ಪರಿಸರ ಸಂರಕ್ಷಣೆ ಮಾಡಿಕೊಳ್ಳುವ ಜವಾಬ್ದಾರಿ ನಮ್ಮ ಮೇಲೆ ಇದೆ. ನವೀಕರಿಸಬಹುದಾದ ಇಂಧನ ಶಕ್ತಿಯಿಂದ ನಮ್ಮ ಪರಿಸರ ಹಾಗೂ ಜೀವ ವೈವಿಧ್ಯದ ಮೇಲೆ ಉಂಟಾಗುವ ದುಷ್ಪರಿಣಾಮದ ಬಗ್ಗೆಯೂ ಅತ್ಯಂತ ಮುನ್ನೆಚ್ಚರಿಕೆ ವಹಿಸಬೇಕು. ಸೋಲಾರ್ ಪ್ಯಾನೆಲ್‌ಗಳನ್ನು ಇದೀಗ ಕೃಷಿ, ಪರಿಸರ ಸೂಕ್ಷ್ಮ ಪ್ರದೇಶದಲ್ಲಿ ಅಳವಡಿಸಲಾಗುತ್ತಿದೆ. ಭವಿಷ್ಯದಲ್ಲಿ ಇವುಗಳನ್ನು ಕೃಷಿ ಯೋಗ್ಯವಲ್ಲದ ಪ್ರದೇಶಗಳಲ್ಲಿ ಅಳವಡಿಸಲು ಯೋಜನೆಗಳನ್ನು ರೂಪಿಸಬೇಕು ಎನ್ನುವುದು ನನ್ನ ಕಳಕಳಿಯ ಸಲಹೆಯಾಗಿದೆ ಎಂದು ಅವರು ಒತ್ತಿ ಹೇಳಿದರು. ಸದ್ಯದ ಸಂದರ್ಭದಲ್ಲಿ ನವೀಕರಿಸಬಹುದಾದ ಇಂಧನ ಶಕ್ತಿಗಳ ಉತ್ಪಾದನೆಗೆ ಹೆಚ್ಚು ಒತ್ತು ನೀಡುತ್ತಿದ್ದೇವೆ. ನಾವು ಕೇವಲ ಇಷ್ಟನ್ನಷ್ಟೆ ಮಾಡಿದರೆ ಸಾಲದು. ಅವುಗಳ ಅಳವಡಿಕೆ, ಬಳಕೆ, ನಿರ್ವಹಣೆ ಪರಿಣಾಮಕಾರಿ ವ್ಯವಸ್ಥೆ ಅತ್ಯಗತ್ಯವಿದೆ. ಈ ಬಗ್ಗೆ ಸರ್ಕಾರ ಗಮನ ಕೊಡಬೇಕು ಎಂದು ಅವರು ಹೇಳಿದರು.


ನವೀಕರಿಸಬಹುದಾದ ಇಂಧನಕ್ಕೆ ಇನ್ನಷ್ಟು ಒತ್ತು ನೀಡಿ ಗ್ರಾಮೀಣ ಪ್ರದೇಶದಲ್ಲಿ ದೊಡ್ಡ ಪ್ರಮಾಣದಲ್ಲಿ ಉದ್ಯೋಗ ಸೃಷ್ಟಿಗೆ ಆದ್ಯತೆ ನೀಡಬೇಕು. ಇದಕ್ಕಾಗಿ ಸಮಗ್ರ ನೀತಿ ರೂಪಿಸಬೇಕು ಎಂದು ಮಾಜಿ ಪ್ರಧಾನಿಗಳು ಸಲಹೆ ಮಾಡಿದರು.

ಪರಿಸರ ರಕ್ಷಣೆ ಮಾಡಿಕೊಂಡು ಹಸಿರು ಹಾಗೂ ಶುದ್ಧ ಇಂಧನದ ಬಳಕೆಯಿಂದ ದೇಶದ ಸುಸ್ಥಿರ ಅಭಿವೃದ್ಧಿಯಾಗಲು ಸಾಧ್ಯ. ಇದಕ್ಕೂ ಮುನ್ನ ಜಲ ವಿದ್ಯುತ್, ಆ ನಂತರ ಸೌರ ವಿದ್ಯುತ್, ಪವನ ವಿದ್ಯುತ್ ಶಕ್ತಿಗಳಿಗೆ ಪ್ರೋತ್ಸಾಹ ಕೊಡಲಾಯಿತು. ಸದ್ಯದ ಸಂದರ್ಭದಲ್ಲಿ ನವೀಕರಿಸಬಹುದಾದ ಇಂಧನಕ್ಕೆ ಮಹತ್ವ ಕೊಡುವುದು ಹೆಚ್ಚಾಗಿದೆ.

ನಮ್ಮ ದೇಶದಲ್ಲಿ ಈಗ 1000 ಗಿಗಾವ್ಯಾಟ್ ಸೌರ ವಿದ್ಯುತ್ ಉತ್ಪಾದನೆಯಾಗುತ್ತಿದೆ. ಈಚಿನ ವರ್ಷಗಳಲ್ಲಿ ಉತ್ಪಾದನೆ ಪ್ರಮಾಣ 30 ಪಟ್ಟು ಹೆಚ್ಚಳವಾಗಿದೆ. ಆದರೂ, ಇಂಧನ ಕ್ಷೇತ್ರದಲ್ಲಿ ಕೆಲವೊಂದು ಆತಂಕಗಳು ಇದ್ದೇ ಇದೆ ಎಂಬುದನ್ನು ನಾವು ಮರೆಯಬಾರದು ಎಂದರು.

**ಮೋದಿ ಬಗ್ಗೆ ಮೆಚ್ಚುಗೆ**

ವಿವಿಧ ಕ್ಷೇತ್ರಗಳಲ್ಲಿ ಪರಿಣಾಮಕಾರಿ ಸಾಧನೆ ಮಾಡಿರುವ ಪ್ರಧಾನಿ ಮೋದಿ ಅವರ ಸರ್ಕಾರದ ಕಾರ್ಯವೈಖರಿ ಬಗ್ಗೆ ಮೆಚ್ಚುಗೆ ವ್ಯಕ್ತಪಡಿಸಿದ ಮಾಜಿ ಪ್ರಧಾನಿಗಳು; ಮೋದಿ ಅವರ ಸರ್ಕಾರ ಅಧಿಕಾರಕ್ಕೆ ಬಂದ ಮೇಲೆ ನವೀಕರಿಸಬಹುದಾದ ಇಂಧನ ಕ್ಷೇತ್ರದಲ್ಲಿ ಕ್ರಾಂತಿಕಾರಕ ಅಭಿವೃದ್ಧಿ ಆಗಿದೆ. ಈ ಸರ್ಕಾರದ ವಿರುದ್ಧ ಕಳೆದ 10 ವರ್ಷಗಳಲ್ಲಿ ಒಂದೇ ಒಂದು ಭ್ರಷ್ಟಾಚಾರದ ಆರೋಪ ಇಲ್ಲ ಎಂಬುದನ್ನು ನಾವು ಗಮನಿಸಬೇಕು ಎಂದು ಅವರು ಹೇಳಿದರು.



**ಗಂಗಾ ಕಲ್ಯಾಣ ಯೋಜನೆಯನ್ನು ನಾನೇ ಜಾರಿ ಮಾಡಿದೆ**

ಹಲವಾರು ರಾಜ್ಯಗಳು ಈ ಕ್ಷೇತ್ರದಲ್ಲಿ ಉತ್ತಮ ಸಾಧನೆ ಮಾಡಿವೆ ಎಂಬುದು ಗಮನಾರ್ಹ. ಇನ್ನು ಕೆಲ ರಾಜ್ಯಗಳಲ್ಲಿ ಈ ಕ್ಷೇತ್ರದ ಪ್ರಗತಿ ಏನೇನೂ ಸಾಲದು ಎನ್ನುವುದು ನನ್ನ ಅಭಿಪ್ರಾಯ. ಇಲ್ಲಿ ಪ್ರಾದೇಶಿಕ ಅಸಮತೋಲನ ನಿವಾರಿಸಲು ಗಮನ ಹರಿಸಬೇಕು ಎಂದು ಅವರು ಸಲಹೆ ಮಾಡಿದರು. ಕೃಷಿ ಕ್ಷೇತ್ರದಲ್ಲಿ ರೈತರು ಅನುಭವಿಸುತ್ತಿರುವ ಕಷ್ಟಗಳ ಅರಿವು ನನಗಿದೆ. ಮುಖ್ಯಮಂತ್ರಿ ಹಾಗೂ ಪ್ರಧಾನಿಯಾಗಿದ್ದಾಗ ಕೃಷಿಕರ ಕಲ್ಯಾಣಕ್ಕೆ ಹಲವು ಪ್ರಮುಖ ಕಾರ್ಯಕ್ರಮಗಳನ್ನು ಜಾರಿಗೆ ತಂದಿದ್ದೇನೆ. ಕರ್ನಾಟಕದ ಮುಖ್ಯಮಂತ್ರಿ ಆಗಿದ್ದಾಗ ಗಂಗಾ ಕಲ್ಯಾಣ ಯೋಜನೆಯನ್ನು ನಾನೇ ಜಾರಿ ಮಾಡಿದೆ ಎಂದು ಮಾಜಿ ಪ್ರಧಾನಿಗಳು ನೆನಪು ಮಾಡಿಕೊಂಡರು.

**ಈ ದಿನದ ದರ** ಪೆಟ್ರೋಲ್: 103.44 ₹/L | ಡೀಸೆಲ್ : 89.97 ₹/L | ಬಂಗಾರ: ₹6,971/Gram24ct ₹6,390/Gram22ct | ಬೆಳ್ಳಿ: ₹82.50/Gram



## ಸಿದ್ಧಸೂಕ್ತಿ

**ಡಾ ಆರೂಢಭಾರತೀ ಸ್ವಾಮೀಜಿ**
**ಶ್ರೀ ಸಿದ್ಧಾರೂಢ ಮಿಷನ್ ಆಶ್ರಮ**
**ರಾಮೋಹಳ್ಳಿ**

## ತನ್ನ ಬಗೆಯೊಳು ಬಾಧಿಸಲರಿಯದು

ನಿಜಗುಣರ ಪರಮಾನುಭವ ಬೋಧೆಯ ಮಾತು. ಜಗತ್ತು ಕಲ್ಪಿತ ಸುಳ್ಳು ಅವಾಸ್ತವ ಎಂದರೆ ತನ್ನ ಪರಮಾತ್ಮನ ನಿಜದ ಸತ್ಯಸ್ವರೂಪದ ಅರಿವಾದ ಬಳಿಕ ಆಶ್ರಯ ಅಧಿಷ್ಠಾನವಾದ ತನ್ನಲ್ಲಿ ಜಗತ್ತು ತೋರಬಾರದಿತ್ತು. ಬಿಸಿಲಿನಿಂದಾಗಿ ಹೊಳೆವ ಕಪ್ಪೆಚಿಪ್ಪಿನಲ್ಲಿ ಬೆಳ್ಳಿ ಎಂಬ ತಪ್ಪು ಕಲ್ಪನೆಯಾಗಿ ಕಪ್ಪೆಚಿಪ್ಪನ್ನು ಹಿಡಿದು ನೋಡಿದ ಬಳಿಕ ಬೆಳ್ಳಿ ಮಂಗಮಾಯ! ಜಗತ್ತೂ ಹಾಗೆ ಇಲ್ಲವಾಗಬೇಕಿತ್ತು. ಆದರೂ ತೋರುವುದಲ್ಲ! ಎಂದರೆ ತೊಂದರೆ ಇಲ್ಲ. ಶತ್ರು ಮಿತ್ರನಾದ ಬಳಿಕವೂ ಭೇಟಿಯಾದಾಗ ಹಿಂದಿನ ಶತ್ರುತ್ವ ನೆನಪಾದರೂ ಈಗ ಅದು ಬಾಧಿಸದು. ಅದರಂತೆ ಜ್ಞಾನಾನಂತರವೂ ಜಗತ್ತು ತೋರಿದಂತೆನಿಸಿದರೂ ಅದು ಮುನ್ನಿನಂತೆ ಬಾಧೆ ನೀಡದು. ಜ್ಞಾನಕಾಲದಲ್ಲಿ ಮುನ್ನಿನ ಜಗದ ವಾಸನೆ ತೋರಿದರೂ ನಿಜಸುಖಕ್ಕೆ ತೊಂದರೆ ಇಲ್ಲ. ಸ್ವಪ್ನದಲ್ಲಿ ತಾನು ಬಂಧಿಯಾಗಿ ಎಚ್ಚತ್ತ ಬಳಿಕ ನೆನಹಿನಿಂದ ತೋರುವ ವಾಸನಾಮಯ ಸ್ವಪ್ನದ ಬೇಡಿ ದುಃಖ ನೀಡದಂತೆ. ಜ್ಞಾನದ ಬಳಿಕವೂ ಜಗತ್ತು ವಾಸನಾಮಯವಾಗಿ ತೋರಿದರೆ ಮೋಕ್ಷ ಹೇಗಾದೀತು ಎಂದರೆ, ನಿಜ ಬಟ್ಟೆಗೂ ಸುಟ್ಟ ಬಟ್ಟೆಗೂ ವ್ಯತ್ಯಾಸ ಇರುವಂತೆ ಜ್ಞಾನಾನಂತರ ತೋರುವ ವಾಸನಾಮಯ ಜಗತ್ತಿಗೂ, ಜಗತ್ತೇ ಸತ್ಯ ಎಂದು ತಿಳಿದ ಅಜ್ಞಾನಾವಸ್ಥೆಯ ಜಗತ್ತಿಗೂ ಬಹಳ ಅಂತರ. ಜ್ಞಾನಾನಂತರದ ವಾಸನಾಮಯ ಜಗತ್ತು, ಕರ್ಪೂರ ತೆಗೆದ ಪಾತ್ರೆಯ ವಾಸನೆ ತುಸು ಹೊತ್ತಿನಲ್ಲೇ ಅಳಿಯುವಂತೆ ಕ್ರಮೇಣ ದೂರಾಗುವುದರಿಂದ ಮೋಕ್ಷ ನಿಶ್ಚಿತ.

## ಸೆಪ್ಟಂಬರ್ 5 ರಿಂದ ಹತ್ತು ಪಾಲಿಕೆ ಸಂಪೂರ್ಣ ಕೆಲಸ ಸ್ಥಗಿತ

• ಉದಯವಾಹಿನಿ, ಬೆಂಗಳೂರು



ಕರ್ನಾಟಕ ರಾಜ್ಯ ಮಹಾನಗರ ಪಾಲಿಕೆ ನೌಕರರ ಸಂಘದ ಬೇಡಿಕೆಗಳ ಈಡೇರಿಕೆಗಾಗಿ ಸೆಪ್ಟಂಬರ್ 4ನೇ ತಾರೀಖು ವರಗೆ ಸರ್ಕಾರಕ್ಕೆ ಗಡುವು ನೀಡಲಾಗಿದೆ ಬೇಡಿಕೆ ಈಡೇರಿಕೆ ಆಗಿಲ್ಲವೆಂದರೆ ಸೆಪ್ಟಂಬರ್ 5ನೇ ತಾರೀಖಿನಿಂದ ಹತ್ತು ಮಹಾನಗರ ಪಾಲಿಕೆ ಕೆಲಸ ಸಂಪೂರ್ಣ ಸ್ಥಗಿತಗೊಳಿಸಿ, ಪ್ರತಿಭಟನೆ ಮಾಡಲಾಗುವುದು ನಮ್ಮ ಹೋರಾಟಕ್ಕೆ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ ಮತ್ತು ಸಚಿವಾಲಯ ನೌಕರರ ಸಂಘ ಸಂಪೂರ್ಣ ಬೆಂಬಲ ನೀಡಿದೆ


## ನೇಣು ಬಿಗಿದುಕೊಂಡು ಆತ್ಮಹತ್ಯೆ

• ಉದಯವಾಹಿನಿ, ಬೆಂಗಳೂರು

ರಾಜಧಾನಿ ಬೆಂಗಳೂರಿನಲ್ಲಿ ಮತ್ತೊಬ್ಬ ಮಹಿಳೆ ನೇಣು ಬಿಗಿದುಕೊಂಡು ಆತ್ಮಹತ್ಯೆಗೆ ಶರಣಾಗಿರುವ ಘಟನೆ ನಡೆದಿದೆ. ಬೆಂಗಳೂರಿನ ಮಲ್ಲೇಶ್ವರಂ ಸಮೀಪದ ಸಾಯಿ ರೆಸಿಡೆನ್ಸಿ ಅಪಾರ್ಟ್ ಮೆಂಟ್ ನಲ್ಲಿ ನೇಣು ಬಿಗಿದುಕೊಂಡು 45 ವರ್ಷದ ಮಹಿಳೆ ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಆತ್ಮಹತ್ಯೆಗೆ ನಿಖರ ಕಾರಣ ತಿಳಿದು ಬಂದಿಲ್ಲ.ಘಟನಾ ಸ್ಥಳಕ್ಕೆ ಪೊಲಿಸರು ಭೇಟಿ ನೀಡಿದ್ದು ಪರಿಶೀಲನೆ ನಡೆಸಿದ್ದಾರೆ. ಮಲ್ಲೇಶ್ವರಂ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಹರಿನಾಮ ಸಂಕೀರ್ತನೆ

• ಉದಯವಾಹಿನಿ, ಬೆಂಗಳೂರು



ತಿರುಮಲ ತಿರುಪತಿ ದೇವಸ್ಥಾನಗಳು ಹಿಂದೂಧರ್ಮ ಪ್ರಚಾರ ಪರಿಷತ್ ವತಿಯಿಂದ ಜಯನಗರ ಐದನೇ ಬಡಾವಣೆಯಲ್ಲಿರುವ ನಂಜನಗೂಡು ಶ್ರೀ ರಾಘವೇಂದ್ರ ಸ್ವಾಮಿಗಳ ಮಠದಲ್ಲಿ ಪರಮಪೂಜ್ಯ ಶ್ರೀ ಶ್ರೀ ಸುಬುಧೇಂದ್ರತೀರ್ಥ ಶ್ರೀ ಪಾದಂಗಳವರ ಆದೇಶಾನುಸಾರ ಶ್ರೀಮಠದ ಹಿರಿಯ ವ್ಯವಸ್ಥಾಪಕರಾದ ಶ್ರೀ ಆರ್ ಕೆ ವಾದೀಂದ್ರಾಚಾರ್ಯರ ನೇತೃತ್ವದಲ್ಲಿ ಆಗಸ್ಟ್ 8, ಗುರುವಾರ ಸಂಜೆ 7-30ಕ್ಕೆ ಶ್ರೀಮತಿ ಚಾಂದಿನಿ ಗರ್ತಿಕೆರೆ ಇವರಿಂದ ಹರಿನಾಮ ಸಂಕೀರ್ತನೆ ಶ್ರೀ ಎಸ್. ಶಶಿಧರ್ (ಪಿಟೀಲು), ಶ್ರೀ ಶ್ರೀನಿವಾಸ್ ಅನಂತರಾಮಯ್ಯ (ಮೃದಂಗ). ಆಗಸ್ಟ್ 9, ಶುಕ್ರವಾರ ಸಂಜೆ 5-30ಕ್ಕೆ ಅಕ್ಷಯ ವಿಪ್ರ ಭಜನಾ ಮಂಡಳಿಯ ಸದಸ್ಯರಿಂದ ಭಜನೆ ನಂತರ ಮ॥ಶಾ॥ಸಂ॥ ಶ್ರೀ ಬ್ರಹ್ಮಣ್ಯಾಚಾರ್ಯರಿಂದ ಶ್ರೀಮದ್ಭಾಗವತ ರತ್ನ ಶ್ರೀ ಪ್ರಹ್ಲಾದರಾಜರ ವೈಭವ ವಿಷಯವಾಗಿ ಧಾರ್ಮಿಕ ಪ್ರವಚನ ಏರ್ಪಡಿಸಿದೆ ಎಂದು ಟಿಟಿಡಿ ಹೆಚ್.ಡಿ.ಪಿ.ಪಿ. ಸಂಚಾಲಕರಾದ ಡಾ॥ ಪಿ. ಭುಜಂಗರಾವ್ ಮತ್ತು ಶ್ರೀಮಠದ ಶ್ರೀ ನಂದಕಿಶೋರ್ ಆಚಾರ್ ತಿಳಿಸಿದ್ದಾರೆ.

## ಮುಡಾ ಹಗರಣ : ರಾಜ್ಯಪಾಲರಿಂದ ಸಿಎಂ ಮತ್ತೊಂದು ಶೋಕಾಸ್ ನೋಟಿಸ್!

• ಉದಯವಾಹಿನಿ, ಬೆಂಗಳೂರು

ಮುಡಾ ಹಗರಣ ಸಂಬಂಧ ಸಿಎಂ ಸಿದ್ದರಾಮಯ್ಯಗೆ ಈಗಾಗಲೇ ಶೋಕಾಸ್ ನೋಟಿಸ್ ನೀಡಿರುವ ರಾಜ್ಯಪಾಲರು ಮತ್ತೊಂದು ನೋಟಿಸ್ ನೀಡುವ ಸಾಧ್ಯತೆ ಇದೆ. ನಿನ್ನೆಯಷ್ಟೇ ಬೆಂಗಳೂರಿಗೆ ಆಗಮಿಸಿರುವ ರಾಜ್ಯಪಾಲ ಗೆಹ್ಲೋಟ್ ಅವರು ಸಿಎಂ ಸಿದ್ದರಾಮಯ್ಯಗೆ ಮತ್ತೊಂದು ನೋಟಿಸ್ ನೀಡುವ ಸಾಧ್ಯತೆ ಇದೆ. ಸಂಪುಟ ಸಭೆಯ ನಿರ್ಧಾರ ಆಧರಿಸಿ ಮತ್ತೊಂದು ನೋಟಿಸ್ ನೀಡುವ ಸಾಧ್ಯತೆ ಇದೆ ಎನ್ನಲಾಗಿದೆ. ಮುಡಾ ಹಗರಣ ಸಂಬಂಧ ರಾಜ್ಯಪಾಲರು ತಮಗೆ ನೀಡಿರುವ ಶೋಕಾಸ್ ನೋಡಿಸ್ ಕುರಿತಂತೆ ಸಿಎಂ ಸಿದ್ದರಾಮಯ್ಯ ಮಹತ್ವದ ಹೇಳಿಕೆ ನೀಡಿದ್ದಾರೆ. ಬೆಳಗಾವಿಯ ಸಾಂಬ್ರಾ ವಿಮಾನ ನಿಲ್ದಾಣದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯಪಾಲರು ಬರಲಿ ನೋಡೋಣ, ಶೋಕಾಸ್ ನೋಟಿಸ್ ವಾಪಸ್ ಪಡೆಯಬೇಕೆಂದು ಹೇಳಿದ್ದೇನೆ ಎಂದರು. ಅಬ್ರಾಹಂ ಕೊಟ್ಟ ದೂರು ರಿಜೆಟ್ ಮಾಡಬೇಕು ಎಂದು ರಾಜ್ಯಪಾಲರಿಗೆ ಹೇಳಿದ್ದೇನೆ. ನೋಡೋಣ ರಾಜ್ಯಪಾಲರು ಯಾವ ತೀರ್ಮಾನ ತೆಗೆದುಕೋಳ್ಳತ್ತಾರೆ. ಮುಂದೆ ಕಾನೂನಾತ್ಮಕ ಹಾಗೂ ರಾಜಕೀಯ ಹೋರಾಟಕ್ಕೆ ಸಿದ್ಧವಾಗಿದ್ದೇನೆ ಎಂದು ತಿಳಿಸಿದ್ದಾರೆ.

## ವರಮಹಾಲಕ್ಷ್ಮಿ ಹಬ್ಬಕ್ಕೆ ಮಹಿಳೆಯರಿಗೆ ರಾಜ್ಯ ಸರ್ಕಾರದಿಂದ ಗುಡ್‌ನ್ಯೂಸ್.!

• ಉದಯವಾಹಿನಿ, ಬೆಂಗಳೂರು

ವರಮಹಾಲಕ್ಷ್ಮಿ ಹಬ್ಬಕ್ಕೆ ಮಹಿಳೆಯರಿಗೆ ರಾಜ್ಯ ಸರ್ಕಾರದಿಂದ ಮಹಿಳೆಯರ ಖಾತೆಗೆ ಇಂದು ಅಥವಾ ನಾಳೆ ಹಣ ಜಮೆಯಾಗುವ ಸಾಧ್ಯತೆಯಿದೆ ಎನ್ನಲಾಗಿದೆ. ಇದರೊಂದಿಗೆ ಕಳೆದ ಎರಡು ತಿಂಗಳಿನಿಂದ ಹಣಕ್ಕಾಗಿ ಕಾಯುತ್ತಿದ್ದ ಮಹಿಳೆಯರಿಗೆ ನೆಮ್ಮದಿ ಸಿಕ್ಕಿದೆ. 26.65 ಲಕ್ಷ ಅರ್ಹ ಫಲಾನುಭವಿಗಳಿಗೆ ಹಣ ಬಿಡುಗಡೆಯಾಗಲಿದೆ ಎನ್ನಲಾಗುತ್ತಿದೆ. ಮೊದಲ ಹಂತದಲ್ಲಿ 533 ಕೋಟಿ ರೂ. ಪಾವತಿಯಾಗಲಿದೆ. ಮೊದಲ ಹಂತದಲ್ಲಿ ಬೆಳಗಾವಿ, ಕಲಬುರ್ಗಿ, ಬೀದರ್, ವಿಜಯಪುರ, ಬಳ್ಳಾರಿ, ರಾಯಚೂರು, ಗದಗ, ಬಾಗಲಕೋಟೆ, ಹಾವೇರಿ, ಕೊಪ್ಪಳ, ಯಾದಗಿರಿ, ಚಿತ್ರದುರ್ಗ, ಬೆಂಗಳೂರು, ಕೋಲಾರ ಜಿಲ್ಲೆಗಳ ಫಲಾನುಭವಿಗಳಿಗೆ ಹಣ ಬಿಡುಗಡೆಯಾಗಲಿದೆ. ಇನ್ನೂ ಸುಳ್ಳು ಮಾಹಿತಿ ನೀಡಿ ಬಿಪಿಎಲ್ ಕಾರ್ಡ್ ಪಡೆದುಕೊಂಡು ಗೃಹಲಕ್ಷ್ಮಿ ಯೋಜನೆಯ ಹಣ ಪಡೆಯುತ್ತಿರುವ ಮಹಿಳೆಯರಿಗೂ ಇನ್ಮುಂದೆ ಗೃಹ ಲಕ್ಷ್ಮಿ ಹಣ ಬರುವುದಿಲ್ಲ ಎನ್ನಲಾಗಿದೆ. ಗೃಹಲಕ್ಷ್ಮಿ ಯೋಜನೆಗೆ ಮುಖ್ಯವಾಗಿ ಬಿಪಿಎಲ್ ಕಾರ್ಡ್ ಕಡ್ಡಾಯವಾಗಿದ್ದು, ಬಿಪಿಎಲ್ ಕಾರ್ಡ್ ರದ್ದಾದ್ದರೆ ಗೃಹಲಕ್ಷ್ಮಿ ಹಣವೂ ರದ್ದಾಗಲಿದೆ ಎನ್ನಲಾಗಿದೆ.

# ಹೊರಗುಳಿದಿರುವ ಮಕ್ಕಳನ್ನು ಗುರುತಿಸಿ ಶಾಲೆಗೆ ಸೇರಿಸಿ


### ■ ಶಾಲೆಯಿಂದ ಹೊರಗುಳಿದ ಮಕ್ಕಳ ಸಮೀಕ್ಷೆ ■ ರಾಜ್ಯ ಸರ್ಕಾರ ಮಹತ್ವದ ಆದೇಶ

• ಉದಯವಾಹಿನಿ, ಬೆಂಗಳೂರು

**ಶಿಕ್ಷಣ ಇಲಾಖೆಯ ಅಧ್ಯಕ್ಷತೆಯಲ್ಲಿ ನಡೆದ ಸಭೆ**

ಶಾಲೆಯಿಂದ ಹೊರಗುಳಿದಿರುವ ಮಕ್ಕಳನ್ನು ಗುರುತಿಸಿ, ಶಾಲೆಗೆ ಹಾಜರಾಗಲು ನಗರ ಸ್ಥಳೀಯ ಸಂಸ್ಥೆಗಳು (ಬಿಬಿಎಂಪಿ ಒಳಗೊಂಡಂತೆ) ಕೈಗೊಳ್ಳಬೇಕಾದ ಕ್ರಮಗಳ ಬಗ್ಗೆ ರಾಜ್ಯ ಸರ್ಕಾರ ಮಹತ್ವದ ಆದೇಶ ಹೊರಡಿಸಿದೆ. ಭಾರತ ಸಂವಿಧಾನದ ಕಲಂ 21(ಎ) ಪ್ರಕಾರ 6 ರಿಂದ 14 ವರ್ಷದ ಪ್ರತಿ ಮಗು 8 ವರ್ಷಗಳ ಶಾಲಾ ಶಿಕ್ಷಣವನ್ನು ಪಡೆಯುವುದು ಮೂಲಭೂತ ಹಕ್ಕಾಗಿರುತ್ತದೆ.

ಶಾಲೆಯಿಂದ ಹೊರಗುಳಿದ ಮಕ್ಕಳನ್ನು The Karnataka Right of Children to Free and Compulsory Education Rules, 2012 ರನ್ವಯ ಸ್ಥಳೀಯ ಸಂಸ್ಥೆಗಳು ಶಿಕ್ಷಣ ರಿಜಿಸ್ಟರ್ ಅನ್ನು ನಿರ್ವಹಿಸಬೇಕಾಗಿರುತ್ತದೆ. The Karnataka Right of Children to Free and Compulsory Education (Amendment) Rules, 2014 ರನ್ವಯ ಮಕ್ಕಳ ಹಾಜರಾತಿಗೆ ಸಂಬಂಧಿಸಿದಂತೆ ಸ್ಥಳೀಯ ಸಂಸ್ಥೆಗಳು ನಿರ್ವಹಿ ಸಬೇಕಾದ ಜವಾಬ್ದಾರಿಗಳ ಬಗ್ಗೆ ತಿಳಿಸಲಾಗಿದೆ. ಮೇಲೆ ಓದಲಾದ ಕ್ರಮ ಸಂಖ್ಯೆ (1)ರ ರಿಟ್ ಅರ್ಜಿ ಸಂಖ್ಯೆ: 15768/2013ಗೆ ಸಂಬಂಧಿಸಿದಂತೆ ಶಾಲೆಯಿಂದ ಹೊರಗುಳಿದ ಮಕ್ಕಳ ಮನೆ-ಮನೆ ಸಮೀಕ್ಷೆ ಮಾಡುವುದು ಸ್ಥಳೀಯ ಸಂಸ್ಥೆಗಳ ಕರ್ತವ್ಯವಾಗಿರುತ್ತದೆ ಎಂದು ಮಾನ್ಯ ಉಚ್ಚ ನ್ಯಾಯಾಲಯವು ಆದೇಶಿಸಿರುವ ಹಿನ್ನೆಲೆಯಲ್ಲಿ ಶಾಲೆಯಿಂದ ಹೊರಗುಳಿದ ಮಕ್ಕಳನ್ನು ಮುಖ್ಯವಾಹಿನಿಗೆ ತರಲು ಮತ್ತು ಶಾಲೆಯಿಂದ ಹೊರಗುಳಿದ ಮಕ್ಕಳು ಹಾಗೂ ಶಾಲೆಗೆ ದಾಖಲಾಗದ ಮಕ್ಕಳ ಬಗ್ಗೆ ಮಾನ್ಯ ನ್ಯಾಯಾಲಯವು ನೀಡಿರುವ ನಿರ್ದೇಶನದಂತೆ ಶಾಲೆಯಿಂದ ಹೊರಗುಳಿದ ಮಕ್ಕಳ ನಿಖರ ಸಂಖ್ಯೆಯನ್ನು ಗುರುತಿಸುವುದು ಅವಶ್ಯಕವಾಗಿದೆ. ಈ ಹಿನ್ನೆಲೆಯಲ್ಲಿ, ಸೆಂಟರ್ ಫಾರ್ ಇ-ಗವರ್ನೆನ್ಸ್ ಇಲಾಖಾ ವತಿಯಿಂದ ಅಭಿವೃದ್ಧಿ ಪಡಿಸಿರುವ Karnataka H2H Children Survey App ಬಳಸಿಕೊಂಡು ಶಾಲೆಯಿಂದ ಹೊರಗುಳಿದ ಮಕ್ಕಳ ಸಮೀಕ್ಷೆಯನ್ನು ಕೈಗೊಳ್ಳುವ ಕುರಿತಾಗಿ ಮೇಲೆ ಓದಲಾದ ಕ್ರಮ ಸಂಖ್ಯೆ (3)ರ ಸುತ್ತೋಲೆಯಲ್ಲಿ ಸ್ಪಷ್ಟ ನಿರ್ದೇಶನಗಳನ್ನು ನೀಡಲಾಗಿರುತ್ತದೆ. ದಿನಾಂಕ: 30-05-2024 ರಂದು ರಾಜ್ಯ ಯೋಜನಾ ನಿರ್ದೇಶಕರು, ಸಮಗ್ರ ಶಿಕ್ಷಣ ಇಲಾಖೆರವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯ ತೀರ್ಮಾನದಂತೆ mobile appನಲ್ಲಿ ಸೂಕ್ತ ತಿದ್ದುಪಡಿಗಳನ್ನು ಮಾಡಿ, ದಿನಾಂಕ: 03-07-2024 ರಂದು ನವೀಕೃತ ಮೊಬೈಲ್ app ನ ಬಳಕೆಯ ಕುರಿತು ರಾಜ್ಯದ ಎಲ್ಲಾ ಜಿಲ್ಲೆಗಳ ನೋಡಲ್ ಅಧಿಕಾರಿಗಳಿಗೆ ಮಾಸ್ಟರ್ ಟ್ರೈನರ್‌ಗಳಿಗೆ ತರಬೇತಿಯನ್ನು ನೀಡಲಾಗಿರುತ್ತದೆ. ಕಾರ್ಯಕ್ರಮದ ಮುಂದುವರೆದ ಭಾಗವಾಗಿ ಪ್ರತಿಯೊಂದು ನಗರ ಸ್ಥಳೀಯ ಸಂಸ್ಥೆಗಳಲ್ಲಿ ಸಮೀಕ್ಷದಾರರನ್ನು ಗುರುತಿಸಿ ಅವರಿಗೆ ಮಾಸ್ಟರ್ ಟ್ರೈನರ್‌ಗಳ ಮುಖಾಂತರ ತರಬೇತಿ ನೀಡತಕ್ಕದ್ದು. ಈ ಸಮೀಕ್ಷೆಯನ್ನು ನಗರ ಸ್ಥಳೀಯ ಸಂಸ್ಥೆಯ ವ್ಯಾಪ್ತಿಯಲ್ಲಿ (ಬಿಬಿಎಂಪಿ ಒಳಗೊಂಡಂತೆ) ನಡೆಸಲು ಕೈಗೊಳ್ಳಬೇಕಾದ ಕಾರ್ಯ ಚಟುವಟಿಕೆಗಳ ಬಗ್ಗೆ ಈ ಕೆಳಗಿನಂತೆ ಕ್ರಮಗಳನ್ನು ಅನುಸರಿಸುವುದು. ಶಾಲೆಗೆ ದಾಖಲಾಗದಿರುವ ಮಕ್ಕಳನ್ನು ಗುರುತಿಸುವುದು. ಮಾನ್ಯ ಉಚ್ಚ ನ್ಯಾಯಾಲಯದ ನಿರ್ದೇಶನದಂತೆ ಶಾಲೆಗೆ ದಾಖಲಾಗದ ಮಕ್ಕಳ ಮಾಹಿತಿಯನ್ನು ಪ್ರತ್ಯೇಕವಾಗಿ ಸಂಗ್ರಹಿಸಲು ಸೂಚಿಸಲಾಗಿದೆ. ಇದರಲ್ಲಿ 6 ರಿಂದ 14 ವರ್ಷ ವಯೋಮಾನದ ಮಕ್ಕಳ ಮಾಹಿತಿಯನ್ನು ಒಳಗೊಂಡಿರುವುದು. ಈ ಮಕ್ಕಳ ಮಾಹಿತಿಯನ್ನು ಸಂಗ್ರಹಿಸುವ ಪೂರ್ವದಲ್ಲಿ ಅಂಗನವಾಡಿ ಕೇಂದ್ರಗಳಲ್ಲಿರುವ ಎಲ್ಲಾ ಮಕ್ಕಳು ಶಾಲೆಗೆ ದಾಖಲಾಗಿರುವ ಬಗ್ಗೆ ಖಚಿತ ಪಡಿಸಿಕೊಳ್ಳುವುದು. ಸಮೀಕ್ಷೆಯ ಸಮಯದಲ್ಲಿ ವಲಸೆ ಹೋಗಿದ್ದ ಮಕ್ಕಳು, ಕೆಲವು ದಿನಗಳಲ್ಲಿ ವಾಪಸ್ಸು ಬರುವ ಸಂಭವವಿದ್ದಲ್ಲಿ, ಅಂತಹ ಮಕ್ಕಳನ್ನು ಗಣತಿಯ ಸ್ಥಳದಲ್ಲಿ ಪರಿಗಣಿಸಬೇಕು. ಬೇರೆ ಜಿಲ್ಲೆ / ತಾಲ್ಲೂಕುಗಳಲ್ಲಿ ಒಟ್ಟು ಇರುವ ವಲಸೆ ಮಕ್ಕಳ ಪಟ್ಟಿಯನ್ನು ಪರಸ್ಪರ ಪರಿಶೀಲಿಸಿ, ವಿನಿಮಯ ಮಾಡಿಕೊಂಡು, ಎರಡೂ ಮಕ್ಕಳ ಹಸರು ಪುನರಾವರ್ತನೆಯಾಗದಂತೆ ಖಚಿತ ಪಡಿಸಿಕೊಳ್ಳತಕ್ಕದ್ದು. ಇದು ಅತಿ ಮುಖ್ಯವಾದ ಕಾರ್ಯವಾಗಿದೆ. ಸಮೀಕ್ಷೆಯಲ್ಲಿ ಮಕ್ಕಳ ಮನೆಗಳಿಗೆ ಭೇಟಿ ನೀಡಿ, ಶಾಲೆಯಿಂದ ಹೊರಗೆ ಉಳಿದಿರುವ ಬಗ್ಗೆ ಖಚಿತ ಪಡಿಸಿಕೊಳ್ಳುವುದು. ಶಾಲೆ ಬಿಟ್ಟ ಮಕ್ಕಳು ಹಾಗೂ ಶಾಲೆಗೆ ಸೇರದ ಮಕ್ಕಳ ಮಾಹಿತಿಯನ್ನು WER (Ward Education Register ನಲ್ಲಿ ನಿರ್ವಹಿಸುವುದು.



**ಸ್ಥಳೀಯ ಸಂಸ್ಥೆಗಳ ಸಮೀಕ್ಷೆ**

**ಸಮೀಕ್ಷೆ ಅಲ್ಲದೇ ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯ ಜನವಸತಿ ಪ್ರದೇಶಗಳಲ್ಲಿ ರಹಿತವಾಗಿರುವ ಕೈಗಾರಿಕಾ ಸ್ಥಳಗಳು, ಕೃಷಿ ಕಾರ್ಮಿಕ ವಲಯಗಳು, ಕೊಳೆಗೇರಿಗಳು (ಸಂ), ಬಸ್ ಮತ್ತು ರೈಲು ನಿಲ್ದಾಣ, ಧಾರ್ಮಿಕ ಕೇಂದ್ರಗಳು, ಅನಾಥಾಶ್ರಮ, ಬಂದಿಖಾನೆಗಳು, ಕಟ್ಟಡ ಕಾಮಗಾರಿ ನಡೆಯುವ ಸ್ಥಳಗಳು, ಆಸ್ಪತ್ರೆಗಳು, ಹೋಟೆಲಗಳು, ಛತ್ರಗಳು, ಚಿತ್ರಮಂದಿರಗಳು, ಸಣ್ಣ ಕಾರ್ಖಾನೆಗಳು, ತಯಾರಿಸುವ ಸ್ಥಳಗಳು, ಮಂಡಕ್ಕಿ ಭಟ್ಟಿಗಳು ಹಾಗೂ ಇತರೆ ಸ್ಥಳಗಳಲ್ಲಿ ಶಾಲೆಗಳಿಂದ ಮಕ್ಕಳು ಸಿಗುವುದರಿಂದ ನಗರ ಸ್ಥಳೀಯ ಸಂಸ್ಥೆಯ ವ್ಯಾಪ್ತಿಯಲ್ಲಿ (ಬಿ.ಬಿ.ಎಂ.ಪಿ. ಒಳಗೊಂಡಂತೆ) ಮೇಲ್ಕಾಣಿಸಿದ ಸ್ಥಳಗಳನ್ನು ಮುಂಚಿತವಾಗಿ ಗುರುತಿಸಿಕೊಂಡು ಗಣತಿ ಕಾರ್ಯ ಕೈಗೊಳ್ಳತಕ್ಕದ್ದು.**

## ಹೊತ್ತಿ ಉರಿದ ಬಿಎಂಟಿಸಿ ಎಲೆಕ್ಟ್ರಿಕ್ ಬಸ್

• ಉದಯವಾಹಿನಿ, ಬೆಂಗಳೂರು



ಉದಯವಾಹಿನಿ ಚಿತ್ರ

ಮಳೆ ನಡುವೆಯೇ ಚಲಿಸುತ್ತಿದ್ದ ಬಿಎಂಟಿಸಿ ಎಲೆಕ್ಟ್ರಿಕ್ ಬಸ್ ಮಾರ್ಗಮಧ್ಯೆ ಏಕಾಏಕಿ ಬೆಂಕಿ ಕಾಣಿಸಿಕೊಂಡು ಹೊತ್ತಿ ಉರಿದಿದ್ದು, ಅದೃಷ್ಟವಶಾತ್ ಯಾವುದೇ ಪ್ರಾಣಾಪಾಯ ಸಂಭವಿಸಿಲ್ಲ.

ಅಮೃತಹಳ್ಳಿ ಪೊಲೀಸ್ ಠಾಣಾ ವ್ಯಾಪ್ತಿಯ ನಾಗವಾರ-ಹೆಬ್ಬಾಳ ಸರ್ವೀಸ್ ರಸ್ತೆಯಲ್ಲಿ ನಿನ್ನೆ ರಾತ್ರಿ 11.30ರ ಸುಮಾರಿನಲ್ಲಿ ಬಿಎಂಟಿಸಿ ಎಲೆಕ್ಟ್ರಿಕಲ್ ಬಸ್ ಹೋಗುತ್ತಿದ್ದಾಗ ಏಕಾಏಕಿ ಬಸ್‌ನಲ್ಲಿ ಬೆಂಕಿ ಕಾಣಿಸಿಕೊಂಡಿದೆ. ತಕ್ಷಣ ಬಸ್‌ನ ಚಾಲಕ ಹಾಗೂ ನಿರ್ವಾಹಕ ಎಚ್ಚೆತ್ತುಕೊಂಡು ಬಸ್ ನಿಲ್ಲಿಸಿ ಪ್ರಯಾಣಿಕರನ್ನು ಕೆಳಗಿಳಿಸಿ ಅಗ್ನಿಶಾಮಕ ದಳಕ್ಕೆ ಹಾಗೂ ಪೊಲೀಸರಿಗೆ ವಿಷಯ ತಿಳಿಸಿದ್ದಾರೆ.

ಸುದ್ದಿ ತಿಳಿದ ಅಗ್ನಿಶಾಮಕ ಸಿಬ್ಬಂದಿ ವಾಹನದೊಂದಿಗೆ ಬಂದು ಪೊಲೀಸರ ನೆರವಿನೊಂದಿಗೆ ಬೆಂಕಿಯನ್ನು ನಂದಿಸಿದ್ದು, ಬಸ್ ಭಾಗಶಃ ಸುಟ್ಟು ಹಾನಿಗೀಡಾಗಿದೆ. ಸ್ಥಳಕ್ಕೆ ಬಿಎಂಟಿಸಿ ಅಧಿಕಾರಿಗಳು ಭೇಟಿ ನೀಡಿ ಪರಿಶೀಲಿಸಿದರು. ಬಸ್‌ನ ಎಂಜಿನ್‌ಗೆ ಮಳೆ ನೀರು ಹೋಗಿ ಶಾರ್ಟ್ ಸರ್ಕ್ಯೂಟ್ ಉಂಟಾಗಿ ಬೆಂಕಿ ಹೊತ್ತಿಕೊಂಡಿರಬಹುದೆಂಬ ಶಂಕೆ ವ್ಯಕ್ತವಾಗಿದೆ.ಅಮೃತಹಳ್ಳಿ ಠಾಣೆ ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲಿಸಿ ಮುಂದಿನ ಕ್ರಮ ಕೈಗೊಂಡಿದ್ದಾರೆ. ಬಸ್‌ಗೆ ಬೆಂಕಿ ಹೊತ್ತಿಕೊಂಡಿದ್ದರಿಂದ ಹೆಬ್ಬಾಳ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಸುಮಾರು 8 ಕಿಲೋಮೀಟರ್‌ನಷ್ಟು ಸಂಚಾರ ದಟ್ಟಣೆ ಉಂಟಾಗಿದ್ದರಿಂದ 2 ಗಂಟೆಗೂ ಹೆಚ್ಚು ಕಾಲ ವಾಹನ ಸವಾರರು ಪರದಾಡುವಂತಾಯಿತು.

## ನೂತನ ಬೌರಿಂಗ್ ಆಸ್ಪತ್ರೆ ಮುಂದಿನ ತಿಂಗಳು ಶಂಕುಸ್ಥಾಪನೆ

• ಉದಯವಾಹಿನಿ, ಬೆಂಗಳೂರು



ಉದಯವಾಹಿನಿ ಚಿತ್ರ

ಸಾರ್ವಜನಿಕರಿಗೆ ಕೈಗೆಟುಕುವ ದರದಲ್ಲಿ ಉತ್ತಮ ವೈದ್ಯಕೀಯ ಚಿಕಿತ್ಸೆ ನೀಡುವ ಸದುದ್ದೇಶದಿಂದ ಶಿವಾಜಿ ನಗರದಲ್ಲಿರುವ ಅಟಲ್ ಬಿಹಾರಿ ವಾಜಪೇಯಿ ವೈದ್ಯಕೀಯ ಕಾಲೇಜು ಮತ್ತು ಸಂಶೋಧನಾ ಸಂಸ್ಥೆಯಾ ಬೌರಿಂಗ್ ಆಸ್ಪತ್ರೆ ಮುಂದಿನ ತಿಂಗಳು ಶಂಕುಸ್ಥಾಪನೆಗೊಳ್ಳಲಿದೆ.

ಈ ಹಿಂದೆ ಇದ್ದ ಬೌರಿಂಗ್ ಆಸ್ಪತ್ರೆಯನ್ನು ನೆಲಸಮಗೊಳಿಸಿದ ನಂತರ ನೂತನ ಹತ್ತು ಅಂತಸ್ತಿನ 500 ಹಾಸಿಗೆಗಳ ಸೌಲಭ್ಯವುಳ್ಳ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಯನ್ನು ಮುಂದಿನ ತಿಂಗಳು ಶಂಕುಸ್ಥಾಪನೆಗೊಳ್ಳಲಿದೆ ಎಂದು ವೈದ್ಯಕೀಯ ಶಿಕ್ಷಣ, ಕೌಶಲ್ಯಾಭಿವೃದ್ಧಿ ಮತ್ತು ಜೀವನೋಪಾಯ ಸಚಿವ ಡಾ.ಶರಣ ಪ್ರಕಾಶ್ ಪಾಟೀಲ್ ಅಟಲ್ ಬಿಹಾರಿ ವಾಜಪೇಯಿ ವೈದ್ಯಕೀಯ ಕಾಲೇಜು ಮತ್ತು ಸಂಶೋಧನಾ ಸಂಸ್ಥೆಗೆ ಭೇಟಿ ನೀಡಿದ ವೇಳೆ ವರದಿಗಾರರಿಗೆ ಹೇಳಿದರು.

ಇದೆ ವೇಳೆ ಅಲ್ಲಿನ ಡೆಂಘೀ ವಾರ್ಡ್ ಗೆ ಭೇಟಿ ನೀಡಿ ರೋಗಿಗಳ ಆರೋಗ್ಯ ವಿಚಾರಿಸಿದರು. ಆಸ್ಪತ್ರೆಯಲ್ಲಿ ವೈದ್ಯರು ಸೂಕ್ತವಾದ ಚಿಕಿತ್ಸೆ ನೀಡುತ್ತಿದ್ದಾರೆಯೇ ಬೆಳಗಿನ ಉಪಹಾರ, ಮಧ್ಯಾಹ್ನದ ಬೋಜನ ಸಮಯಕ್ಕೆ ಸರಿಯಾಗಿ ನೀಡುತ್ತಿದ್ದಾರೆಯೇ ಎಂದು ರೋಗಿಗಳಿಂದ ಮಾಹಿತಿ ಪಡೆದುಕೊಂಡರು. ಅಟಲ್ ಬಿಹಾರಿ ವಾಜಪೇಯಿ ವೈದ್ಯ ಕೀಯ ಕಾಲೇಜುನಿಂದ ಶಿವಾಜಿನಗರದ ಚರಕ ಆಸ್ಪತ್ರೆಗೆ ಕಾಲ್ನಡಿಗೆಯಲ್ಲಿ ಭೇಟಿ ನೀಡಿದ ಸಚಿವ ಪಾಟೀಲ್ ಮಧ್ಯಮ ವರ್ಗದ ಜನರಿಗೆ ಅನುಕೂಲ ಅಗುವಂತೆ ಚರಕ ಆಸ್ಪತ್ರೆ ರೆಡಿಯಾಗ್ತಿದೆ. ಕೆಲವೇ ದಿನದಲ್ಲಿ ಲೋಕಾರ್ಪಣೆ ಆಗಲಿದೆ ಎಂದು ಹೇಳಿದರು.

ಈ ಕಟ್ಟಡ ಬಿಬಿಎಂಪಿ ಮಾಡಿದೆ, ಇನ್ಫ್ರಾಸ್ಟ್ರಕ್ಚರ್ ಕೊಟ್ಟಿದ್ದು ಇನ್ಫೋಸಿಸ್. ಲೋಕಾರ್ಪಣೆ ಮಾಡೋದಕ್ಕೆ ಸರ್ಕಾರದಿಂದ ಏನೇನು ಬೇಕು ಅದನ್ನುಮಾಡಿಕೊಳ್ಳಲಾಗಿದೆ. ಕಾರ್ಡಿಯಾಕ್, ನ್ಯೂರೋ, ನೆಫ್ರಾಲಜಿ ಸೇರಿದಂತೆ ಎಲ್ಲಾ ಚಿಕಿತ್ಸೆ ಚರಕ ಆಸ್ಪತ್ರೆಯಲ್ಲಿ ನೀಡಲಾಗುತ್ತೆ. ಬಿಪಿಎಲ್ ಕಾರ್ಡ್ ದಾರರಿಗೆ ಉಚಿತ ಚಿಕಿತ್ಸೆ ಸಿಗಲಿದೆ, ಎಂದು ಪಾಟೀಲ್ ಮಾಹಿತಿ ನೀಡಿದರು. ಈ ಸಂದರ್ಭದಲ್ಲಿ ಶಿವಾಜಿನಗರ ಶಾಸಕ ರಿಜ್ವಾನ್ ಅರ್ಷದ್ ಹಾಗೂ ಹಿರಿಯ ಅಧಿಕಾರಿಗಳು ಡಾ.ಪಾಟೀಲ್ ಜೊತೆಗಿದ್ದರು.

## ಕೆಎಎಸ್ ಪೂರ್ವಭಾವಿ ಪರೀಕ್ಷೆ ಮುಂದೂಡಿಕೆ

• ಉದಯವಾಹಿನಿ, ಬೆಂಗಳೂರು

ಕೆಪಿಎಸ್ಸಿಯಿಂದ ಆಗಸ್ಟ್.25ರಂದು ಕೆಎಎಸ್ ಹುದ್ದೆಗಳಿಗೆ ಪೂರ್ವಭಾವಿ ಪರೀಕ್ಷೆಯನ್ನು ನಡೆಸುವುದಾಗಿ ನಿಗದಿ ಪಡಿಸಲಾಗಿತ್ತು. ಈ ಪರೀಕ್ಷಾ ದಿನಾಂಕವನ್ನು ಯಾವುದೇ ಕಾರಣ ಕ್ಕೂ ಬದಲಾವಣೆ ಮಾಡಲ್ಲ ಅಂತನೂ ಕೆಪಿ ಎಸ್ಸಿ ಕಾರ್ಯದರ್ಶಿ ಸ್ಪಷ್ಟ ಪಡಿಸಿದ್ದರು. ಇದರ ನಡುವೆಯೂ ಆಗಸ್ಟ್.25ರಂದು ನಡೆಯಬೇಕಿದ್ದಂತ ಕೆಪಿಎಸ್ಸಿ ಪೂರ್ವಭಾವಿ ಪರೀಕ್ಷೆಯನ್ನು ಮುಂದೂಡಲಾಗಿದೆ. ಈ ಕುರಿತಂತೆ ಏಕಖಅಯಿಂದ ಪತ್ರಿಕಾ ಪ್ರಕಟಣೆಯಲ್ಲಿ ಮಾಹಿತಿ ಬಿಡುಗಡೆ ಮಾಡಲಾಗಿದ್ದು, ದಿನಾಂಕ 25-08-2024ರಂದು 2023-24ನೇ ಸಾಲಿನ ಗೆಜೆಟೆಡ್ ಪ್ರೊಬೇಷನರ್ಸ್ ಹುದ್ದೆಗ ಗ್ರೂಪ್ 'ಎ' ಮತ್ತು 'ಬಿ' ವೃಂದದ ಒಟ್ಟು 384 ಹುದ್ದೆಗಳ ನೇಮಕಾತಿಗೆ ಪೂರ್ವಭಾವಿ ಪರೀಕ್ಷೆಯನ್ನು ನಿಗದಿ ಪಡಿಸಲಾಗಿತ್ತು. ಆದರೇ ಅಂದೇ ಬೇರೆ ಪರೀಕ್ಷೆಗಳು ನಿಗದಿಯಾಗಿದ್ದರಿಂದ ಪರೀಕ್ಷೆ ಮುಂದೂಡುವಂತೆ ಅಭ್ಯರ್ಥಿಗಳು ಮನವಿ ಮಾಡಿದ್ದರು ಎಂದಿದೆ. ಈ ಹಿನ್ನಲೆಯಲ್ಲಿ ವಿದ್ಯಾರ್ಥಿಗಳ ಹಿತದೃಷ್ಠಿಯಿಂದ ಆಗಸ್ಟ್.25, 2024ರಂದು ನಡೆಸಲು ನಿಗದಿ ಪಡಿಸಿದ್ದಂತ ಕೆಎಎಸ್ ಹುದ್ದೆಗಳ ನೇಮಕಾತಿಯ ಪೂರ್ವಭಾವಿ ಪರೀಕ್ಷೆಯನ್ನು ಮುಂದೂಡಿಕೆ ಮಾಡಲಾಗಿದೆ. ಆಗಸ್ಟ್.25ರ ಬದಲಾಗಿ ಆಗಸ್ಟ್.27ರ ಮಂಗಳವಾರದಂದು ನಡೆಸಲು ಮರು ನಿಗದಿ ಪಡಿಸಲಾಗಿದೆ ಎಂಬುದಾಗಿ ಸ್ಪಷ್ಟ ಪಡಿಸಿದೆ.

## ಅಫಿಡವಿಟ್‌ನಲ್ಲಿ ಪತ್ನಿ ಆಸ್ತಿ ಕುರಿತು ತಪ್ಪು ಮಾಹಿತಿ

• ಉದಯವಾಹಿನಿ, ಬೆಂಗಳೂರು



ಉದಯವಾಹಿನಿ ಚಿತ್ರ

2013ರ ಚುನಾವಣಾ ಅಫಿಡವಿಟ್‌ನಲ್ಲಿ ತಮ್ಮ ಪತ್ನಿಯ ಆಸ್ತಿ ಉಲ್ಲೇಖ ಮಾಡದೆ ತಪ್ಪು ಮಾಹಿತಿ ನೀಡುತ್ತೀರಿ. ನಂತರ 2018ರಲ್ಲಿ ಅದರ ಮಾರುಕಟ್ಟೆ ಮೌಲ್ಯ ರೂ 25 ಲಕ್ಷ ಎಂದು ನಮೂದಿಸಿದ್ದೀರಿ. 5 ವರ್ಷಗಳಾದ ಮೇಲೆ ದಿಢೀರನೆ ಆಸ್ತಿ ಹೊಂದಿರುವ ಬಗ್ಗೆ ಜ್ಞಾನೋದಯವಾಯಿತಾ ಎಂದು ಸಿದ್ದರಾಮಯ್ಯ ಅವರಿಗೆ ವಿಧಾನಸಭೆಯ ಪ್ರತಿ ಪಕ್ಷದ ನಾಯಕ ಆರ್.ಅಶೋಕ್ ಪ್ರಶ್ನೆ ಎಸೆದಿದ್ದಾರೆ.

ಈ ಕುರಿತು ತಮ ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಸಿದ್ದರಾಮಯ್ಯ ಅವರಿಗೆ ಸಾಲು ಸಾಲು ಪ್ರಶ್ನೆಗಳನ್ನು ಮುಂದಿಟ್ಟಿರುವ ಅಶೋಕ್ ಅವರು, ಹಗರಣ ಬೆಳಕಿಗೆ ಬಂದ ಮೇಲೆ 63 ಕೋಟಿ ಕೊಡಿ ಸೈಟು ಬಿಟ್ಟುಕೊಡುತ್ತೇನೆ ಹೇಳುತ್ತೀರಿ. 2018ರಲ್ಲಿ ರೂ 25 ಲಕ್ಷ ಇದ್ದ ಆಸ್ತಿ ಮೌಲ್ಯ, 2024ರಲ್ಲಿ ರೂ 63 ಕೋಟಿ ಆಗಲು ಹೇಗೆ ಸಾಧ್ಯ, ಇದೇನಾದರೂ ರಾಹುಲ್ ಗಾಂಧಿ ಅವರ ಆಲೂಗಡ್ಡೆ ಹಾಕಿ ಚಿನ್ನ ತೆಗೆಯುವ ಯೋಜನೆಯ ಭಾಗವಾ? ಎಂದು ವ್ಯಂಗ್ಯವಾಡಿದ್ದಾರೆ.

50:50ರ ಅನುಪಾತದಲ್ಲಿ ಅಭಿವೃದ್ಧಿಪಡಿಸಿದ ನಿವೇಶನಗಳನ್ನು ಪರಿಹಾರ ರೂಪದಲ್ಲಿ ಕೊಡುವುದು ಬೇಡ ನಗರಾಭಿವೃದ್ಧಿ ಇಲಾಖೆ ಆದೇಶವಿದ್ದರೂ ಅದನ್ನ ಉಲ್ಲಂಸಿ ಮೂಡಾ ಅಧ್ಯಕ್ಷ ಮರಿಗೌಡ ಅವರು ಹಗರಣದ ಬಾಗಿಲನ್ನು ತೆಗೆದಿದ್ದು ಏಕೆ ಇದರ ಹಿಂದೆ ಯಾವ ಪ್ರಭಾವಿ ಶಕ್ತಿ ಕೆಲಸ ಮಾಡುತ್ತಿತ್ತು ಉತ್ತರ ಕೊಡಿ ಸಿದ್ದರಾಮಯ್ಯ ಎಂದು ಆಗ್ರಹಿಸಿದ್ದಾರೆ.

ಆತ್ಮಹತ್ಯೆಗೆ ಶರಣಾದ ವಾಲೀಕಿ ಅಭಿವೃದ್ಧಿ ನಿಗಮದ ಪ್ರಾಮಾಣಿಕ ದಲಿತ ಅಧಿಕಾರಿ ಚಂದ್ರಶೇಖರನ್ ಅವರು ತಮ ಡೆತ್ ನೋಟ್ ನಲ್ಲಿ ಸಚಿವ ನಾಗೇಂದ್ರ ಅವರ ಮೌಖಿಕ ಆದೇಶದಂತೆ ಅವ್ಯವಹಾರ ನಡೆದಿದೆ ಎಂದು ಸ್ಪಷ್ಟವಾಗಿ ಉಲ್ಲೇಖ ಮಾಡಿದ್ದರೂ, ಎಸ್‌ಐಟಿ ನ್ಯಾಯಾಲಯಕ್ಕೆ ಸಲ್ಲಿಸಿರುವ ದೋಷಾರೋಪ ಪಟ್ಟಿಯಲ್ಲಿ ಮಾಜಿ ಸಚಿವ ನಾಗೇಂದ್ರ ಹಾಗೂ ಶಾಸಕ ಬಸವರಾಜ ದದ್ದಲ್ ಹೆಸರನ್ನು ನಮೂದಿಸಿಲ್ಲದಿರುವುದು ಎಸ್‌ಐಟಿ ತನಿಖೆ ನಿಷ್ಪಕ್ಷಪಾತವಾಗಿ ನಡೆಯುತ್ತಿಲ್ಲ ಎಂಬುದಕ್ಕೆ ಮತ್ತೊಂದು ಸಾಕ್ಷಿಯಾಗಿದೆ ಎಂದು ಸರ್ಕಾರದ ವಿರುದ್ಧ ವಾಗ್ದಳಿ ನಡೆಸಿದ್ದಾರೆ.

## ಬೆಂಗಳೂರು ವಿಮಾನ ನಿಲ್ದಾಣದಲ್ಲಿ 6,626 ಸಮುದ್ರ ಕುದುರೆ ವಶ; ಮೂವರ ಬಂಧನ

• ಉದಯವಾಹಿನಿ, ಬೆಂಗಳೂರು

ಇಲ್ಲಿನ ಕೆಂಪೇಗೌಡ ಅಂತರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ 6,626 ಸಮುದ್ರ ಕುದುರೆಗಳೊಂದಿಗೆ ತಮಿಳುನಾಡಿನ ಮೂವರನ್ನು ಬಂಧಿಸುವ ಮೂಲಕ ಕಂದಾಯ ಗುಪ್ತಚರ ನಿರ್ದೇಶನಾಲಯವು ಒಣಗಿದ ಸಮುದ್ರ ಕುದುರೆಗಳ ಕಳ್ಳಸಾಗಣೆ ದಂಧೆಯನ್ನು ಭೇದಿಸಿದೆ. ಇದರೊಂದಿಗೆ ಒಣಗಿದ ಸಮುದ್ರ ಕುದುರೆಗಳ ಅಕ್ರಮ ವ್ಯಾಪಾರದಲ್ಲಿ ತೊಡಗಿಸಿಕೊಂಡಿದ್ದ ಕಳ್ಳಸಾಗಣೆ ಜಾಲವೊಂದನ್ನು ಬೇಧಿಸಲಾಗಿದೆ ಎಂದು ಡಿಆರ್‌ಐ ಅಧಿಕಾರಿಯೊಬ್ಬರು ಹೇಳಿದ್ದಾರೆ.

ಖಚಿತ ಮಾಹಿತಿ ಮೇರೆಗೆ ಆಗಸ್ಟ್ 3 ರಂದು ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದ ಟರ್ಮಿನಲ್ 1ರಲ್ಲಿ ಕಾರ್ಯಪ್ರವೃತ್ತರಾದ ನಗರದ ಡಿಆರ್‌ಐ ಅಧಿಕಾರಿಗಳು ಮೂವರು ವ್ಯಕ್ತಿಗಳನ್ನು ಬಂಧಿಸಿದ್ದಾರೆ ಎಂದು ಅವರು ತಿಳಿಸಿದ್ದಾರೆ. ಖಾಸಗಿ ವಿಮಾನಯಾನ ಸಂಸ್ಥೆಯೊಂದರ ವಿಮಾನದಲ್ಲಿ ಮುಂಬೈ ಮೂಲಕ ಸಿಂಗಾಪುರಕ್ಕೆ ತೆರಳುತ್ತಿದ್ದ ಶಂಕಿತರ ಸಾಮಾನು ಸರಂಜಾಮುಗಳನ್ನು ಪರಿಶೀಲಿಸಿದಾಗ 6,626 (ಒಣಗಿದ) ಸಮುದ್ರಕುದುರೆಗಳು ಪತ್ತೆಯಾಗಿವೆ. ಇದು ಇತ್ತೀಚಿನ ದಿನಗಳಲ್ಲಿ ಅತಿ ದೊಡ್ಡ ಕಳ್ಳಸಾಗಣೆಯಾಗಿದ್ದು, ಮೂವರು ಪ್ರಯಾಣಿಕರನ್ನು ಬಂಧಿಸಲಾಗಿದ್ದು, ವಿಚಾರಣೆ ನಡೆಸಲಾಗುತ್ತಿದೆ.



ಉದಯವಾಹಿನಿ ಚಿತ್ರ

**ಭಾರತದಲ್ಲಿ ವನ್ಯಜೀವಿ (ಸಂರಕ್ಷಣೆ) ಕಾಯ್ದೆಯಡಿ ಎಲ್ಲಾ ಜಾತಿಯ ಸಮುದ್ರ ಕುದುರೆಗಳ ಮಾರಾಟ, ಖರೀದಿ ಮತ್ತು ಯಾವುದೇ ರೀತಿಯ ಬಳಕೆಯನ್ನು ನಿಷೇಧಿಸಲಾಗಿದ್ದು, ಇದು ಶಿಕ್ಷಾರ್ಹ ಅಪರಾಧವಾಗಿದೆ. ಆಗಸ್ಟ್ 4 ರಂದು ಕಾರ್ಯಾಚರಣೆಯ ನಂತರ ಕಳ್ಳಸಾಗಣೆ ಕಾರ್ಯಾಚರಣೆಯ ಪ್ರಮುಖ ವ್ಯಕ್ತಿಯನ್ನು ಬಂಧಿಸಲಾಯಿತು. ಬಂಧಿತ ಸಿಂಗಾಪುರಕ್ಕೆ ಸಮುದ್ರಕುದುರೆಗಳ ಸಾಗಣೆ ಮಾಡುವಲ್ಲಿ ಪ್ರಮುಖ ಪಾತ್ರವಹಿಸಿದ್ದ ಎಂದು ಡಿಆರ್ ಐ ಅಧಿಕಾರಿಗಳು ತಿಳಿಸಿದ್ದಾರೆ. ಆಗ್ನೇಯ ಏಷ್ಯಾದ ಮಾರುಕಟ್ಟೆಗಳಲ್ಲಿ ಒಣಗಿದ ಸಮುದ್ರ ಕುದುರೆಗಳಿಗೆ ಬೇಡಿಕೆ ಹೆಚ್ಚಿದೆ. ಅಲ್ಲಿ ಸಾಂಪ್ರದಾಯಿಕ ಔಷಧ, ಪಾಕಶಾಲೆ,ಅಕ್ವೇರಿಯಂಗಳಿಗೆ ಅಲಂಕಾರಿಕಾ ಮತ್ತಿತರ ಕಾರಣಕ್ಕೆ ಒಣಗಿದ ಸಮುದ್ರ ಕುದುರೆಗಳನ್ನು ಬಳಸಲಾಗುತ್ತದೆ ಎಂದು ಅವರು ಹೇಳಿದರು.**

ಇವರೆಲ್ಲರೂ ತಮಿಳುನಾಡಿನವರು ಎಂದು ಅಧಿಕಾರಿ ತಿಳಿಸಿದ್ದಾರೆ.

# ಮೈಸೂರು ಚಲೋ, ಮಂಡ್ಯದಲ್ಲಿ ದೋಸ್ತಿಗಳ ಒಗ್ಗಟ್ಟಿನ ಹೆಜ್ಜೆ

### ■ ಸಿದ್ದರಾಮಯ್ಯನವರ ರಾಜೀನಾಮೆಗೆ ಒತ್ತಾಯಿಸಿ ಎನ್‌ಡಿಎ ಮೈತ್ರಿಕೂಟ ಬೆಂಗಳೂರಿನಿಂದ ಮೈಸೂರುವರೆಗೆ ಪಾದಯಾತ್ರೆ

• ಉದಯವಾಹಿನಿ, ಬೆಂಗಳೂರು



ಉದಯವಾಹಿನಿ ಚಿತ್ರ

**ದೋಸ್ತಿ ಟಾರ್ಗೆಟ್ ಸಿಎಂ ಡಿಸಿಎಂ**

ಮಹರ್ಷಿ ವಾಲೀಕಿ ಅಭಿವೃದ್ಧಿ ನಿಗಮ ಮತ್ತು ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ (ಮುಡಾ)ದಲ್ಲಿ ನಡೆದಿರುವ ಭ್ರಷ್ಟಾಚಾರ ಪ್ರಕರಣದ ಸಂಬಂಧ ಸಿಎಂ ಸಿದ್ದರಾಮಯ್ಯ ರಾಜೀನಾಮೆಗೆ ಒತ್ತಾಯಿಸಿ ಬಿಜೆಪಿ-ಜೆಡಿಎಸ್ ನಡೆಸುತ್ತಿರುವ ಜಂಟಿ ಹೋರಾಟದಲ್ಲಿ ಟಾರ್ಗೆಟ್ ಆಗುತ್ತಿರುವವವರು ಡಿಸಿಎಂ ಡಿ.ಕೆ.ಶಿವಕುಮಾರ್ ಮಾತ್ರ ಸಿದ್ದರಾಮಯ್ಯನವರ ರಾಜೀನಾಮೆಗೆ ಒತ್ತಾಯಿಸಿ ಎನ್‌ಡಿಎ ಮೈತ್ರಿಕೂಟ ಬೆಂಗಳೂರಿನಿಂದ ಮೈಸೂರುವರೆಗೆ ನಡೆಸುತ್ತಿರುವ ಪಾದಯಾತ್ರೆ ಪ್ರಾರಂಭ ವಾಗಿ 4ನೇ ದಿನಕ್ಕೆ ಕಾಲಿಟ್ಟಿದೆ.

ಅಸಲಿಗೆ ಎರಡೂ ಪಕ್ಷಗಳಿಗೆ ಗುರಿಯಾಗಬೇಕಾಗಿದ್ದ ಸಿಎಂ ಸಿದ್ದರಾಮಯ್ಯ, ಸದ್ಯ ಕಾನೂನಿನ ಸಂಕಷ್ಟಕ್ಕೆ ಸಿಲುಕಿದ್ದರೆ ಬಿಜೆಪಿ-ಜೆಡಿಎಸ್ ಗುರಿ ಡಿಸಿಎಂ ಶಿವಕುಮಾರ್ ಆಗುತ್ತಿದ್ದಾರೆ. ಪಾದಯಾತ್ರೆ ಪ್ರಾರಂಭಕ್ಕೂ ಮುನ್ನವೇ ಸರ್ಕಾರದ ವಿರುದ್ಧ ಜನಾಂದೋಲನ ರೂಪಿಸಿದ್ದ ಶಿವಕುಮಾರ್ ಮುಖ್ಯವಾಗಿ ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ, ರಾಜ್ಯ ಬಿಜೆಪಿ ಅಧ್ಯಕ್ಷ ಬಿ.ವೈ. ವಿಜಯೇಂದ್ರ, ಮಾಜಿ ಸಿಎಂ ಬಿ.ಎಸ್.ಯಡಿಯೂರಪ್ಪ ಸೇರಿದಂತೆ ಬಿಜೆಪಿ ಮತ್ತು ಜೆಡಿಎಸ್ ನಾಯಕರನ್ನು ಗುರಿಯಾಗಿಟ್ಟುಕೊಂಡು ಕೆಂಡ ಕಾರುತ್ತಿದ್ದಾರೆ.

ಇದಕ್ಕೆ ಪ್ರತಿಯಾಗಿ ನಾವೇನು ಕಡಿಮೆ ಎಂಬಂತೆ ಕುಮಾರಸ್ವಾಮಿ, ವಿಜಯೇಂದ್ರ ಸೇರಿದಂತೆ ಎರಡೂ ಪಕ್ಷಗಳ ನಾಯಕರು ಸಿದ್ದರಾಮಯ್ಯನವರನ್ನು ಬದಿಗಿರಿಸಿ, ಡಿ.ಕೆ. ಶಿವಕುಮಾರ್ ಅವರನ್ನು ವೈಯಕ್ತಿಕ ನೆಲಗಟ್ಟಿನಲ್ಲಿ ದಾಳಿ ನಡೆಸುತ್ತಿರುವುದು ಪಾದಯಾತ್ರೆಯ ವಿಶೇಷವಾಗಿದೆ.

ಪಾದಯಾತ್ರೆಯುದ್ದಕ್ಕೂ ಡಿ.ಕೆ.ಶಿವಕುಮಾರ್ ಮತ್ತು ಕುಮಾರಸ್ವಾಮಿ ಅವರುಗಳು ತಮ ಕುಟುಂಬದ ಆಸ್ತಿ ವಿಷಯವೂ ಪ್ರಸ್ತಾಪವಾಗಿದೆ. ಅದರಲ್ಲೂ ಪ್ರತಿದಿನ ಜನಾಂದೋಲನ ನಡೆಸುತ್ತಿರುವ ಡಿಕೆಶಿ ಎರಡೂ ಪಕ್ಷಗಳ ಭ್ರಷ್ಟಾಚಾರವನ್ನು ಜನತೆಗೆ ಮನವರಿಕೆ ಮಾಡಿಕೊಡುವ ಪ್ರಯತ್ನ ಮಾಡುತ್ತಿದ್ದಾರೆ.

**ಯಾವ ಪಾದಯಾತ್ರೆಯಲ್ಲಿ ಸಿದ್ದರಾಮಯ್ಯ ಗುರಿಯಾಗಬೇಕಾಗಿತ್ತೋ ಬದಲಿಗೆ ಇಲ್ಲಿ ಶಿವಕುಮಾರ್ ಎರಡೂ ಪಕ್ಷಗಳಿಗೆ ಆಹಾರವಾಗಿದ್ದಾರೆ.ಇತ್ತೀಚೆಗೆ ನಡೆದ ಲೋಕಸಭಾ ಚುನಾವಣೆಯಲ್ಲಿ ಹಳೆ ಮೈಸೂರು ವಿಭಾಗದ ಪ್ರಾಂತ್ಯದಲ್ಲಿ ಎನ್‌ಡಿಎ ನಿರೀಕ್ಷೆಗೂ ಮೀರಿದ ಗೆಲುವು ಸಾಧಿಸಿತ್ತು. 14 ಲೋಕಸಭಾ ಕ್ಷೇತ್ರಗಳ ಪೈಕಿ ಹಾಸನ, ಚಾಮರಾಜನಗರ ಹೊರತುಪಡಿಸಿದರೆ 12 ಕ್ಷೇತ್ರಗಳನ್ನು ಬಿಜೆಪಿ-ಜೆಡಿಎಸ್ ಮೈತ್ರಿಕೂಟ ಗೆದ್ದುಕೊಂಡಿತ್ತು.**

ಇದಕ್ಕೆ ಪ್ರತಿಯಾಗಿ ಸೇರಿಗೆ ಸವ್ವಾ ಸೇರು ಎಂಬಂತೆ ಕುಮಾರಸ್ವಾಮಿ ಕೂಡ ಡಿಕೆಶಿಯನ್ನು ಗುರಿಯಾಗಿಟ್ಟುಕೊಂಡು ಹಿಂದೆಂದಿಗಿಂತಲೂ ಆಕ್ರಮಣಕಾರಿ ಶೈಲಿಯಲ್ಲಿ ವಾಗ್ದಾಳಿ ನಡೆಸುತ್ತಿದ್ದಾರೆ. ಡಿಕೆಶಿ ಭ್ರಷ್ಟಾಚಾರದ ಪಿತಾಮಹ.

ಅವರು ಭ್ರಷ್ಟಾಚಾರದ ಬಗ್ಗೆ ಮಾತನಾಡದಿರುವುದೇ ಲೇಸು ಎಂದು ಬಿ.ವೈ.ವಿಜಯೇಂದ್ರ ಮಾಡಿದ ಆರೋಪವೇ ಇದಕ್ಕೆ ಮುನ್ನುಡಿ ಬರೆದಿತ್ತು.ಯಾವಾಗ ವಿಜಯೇಂದ್ರ ತಮ ಮೇಲೆ ಇಷ್ಟು ವೈಯಕ್ತಿಕ ನೆಲಗಟ್ಟಿನಲ್ಲಿ ಆರೋಪ ಮಾಡಿದರೋ ಆಗ ಕೆರಳಿ ಕೆಂಡವಾದ ಡಿಕೆಶಿಯವರು ಯಡಿಯೂರಪ್ಪ ಹಾಗೂ ವಿಜಯೇಂದ್ರರ ಜೊತೆಗೆ ಕುಮಾರಸ್ವಾಮಿ ಕುಟುಂಬದವರ ವಿರುದ್ಧ ಆರೋಪಗಳ ಸುರಿಮಳೆಗೈದರು.

**ಕಳೆದ ವಿಧಾನಸಭಾ ಚುನಾವಣೆಯಲ್ಲಿ ಹಳೆ ಮೈಸೂರು ವಿಭಾಗ ಬಹುತೇಕ ಕಾಂಗ್ರೇಸ್ ಮಯವಾಗಿತ್ತು. ಜೆಡಿಎಸ್‌ನ ಭದ್ರಕೋಟೆಯನ್ನು ಡಿಕೆಶಿ ಯಶಸ್ವಿಯಾಗಿ ಬೇಧಿಸಿದ್ದರು.ಯಾವಾಗ ಲೋಕಸಭಾ ಚುನಾವಣೆಯಲ್ಲಿ ಫಲಿತಾಂಶ ವ್ಯತಿರಿಕ್ತವಾಗಿ ಹೊರಬಂದಿತೋ, ಅಸ್ತಿತ್ವ ಉಳಿಸಿಕೊಳ್ಳಲು ಕುಮಾರಸ್ವಾಮಿ ಮತ್ತು ಡಿಕೆಶಿ ಪೈಪೋಟಿಗೆ ಬಿದ್ದಂತೆ ವಾಕ್ಸಮರಕ್ಕೆ ನಿಂತಿದ್ದಾರೆ.**

ಇಡೀ ಪಾದಯಾತ್ರೆಯು ಕುಮಾರಸ್ವಾಮಿ ಹಾಗೂ ಡಿಕೆಶಿ ಅವರ ಆಸ್ತಿ ಸಮರವಾಗಿ ಮಾರ್ಪಟ್ಟಿದೆ.

ನಾನು ನಿನ್ನ ಹಾಗೆ ಅಕ್ರಮ ಆಸ್ತಿ ಸಂಪಾದನೆ ಮಾಡಿಲ್ಲ ಎಂದು ಒಬ್ಬರು ಹೇಳಿದರೆ, ಮತ್ತೊಬ್ಬರು ಕನಕಪುರದ ಟೆಂಟ್‌ನಲ್ಲಿ ಸಿನಿಮಾ ತೋರಿಸಿ ಆಸ್ತಿ ಬರೆಸಿಕೊಂಡಿದ್ದೇನೆಯೇ ಎಂದು ತಿರುಗೇಟು ಕೊಡುತ್ತಿದ್ದಾರೆ. ಇಬ್ಬರ ಜಗಳದಲ್ಲಿ ಸಿದ್ದರಾಮಯ್ಯ ಪ್ರಕರಣ ಗೌಣವಾಗಿದೆ. ಈ ಎಲ್ಲಾ ಆಟವನ್ನು ಬಿಜೆಪಿ ಸೂಕ್ಷ್ಮವಾಗಿ ಗಮನಿಸುತ್ತಿದ್ದು, ಸದ್ದಿಲ್ಲದೆ ಹಳೆ ಮೈಸೂರಿನಲ್ಲಿ ಪಕ್ಷ ಸಂಘಟನೆಯ ಬೇರುಗಳನ್ನು ಬಲಪಡಿಸಿಕೊಳ್ಳುತ್ತಿದೆ.

# ಡಿಕೆಶಿ ಮನೆ ಹಾಳಾಗ ಎಂದು ಜನ ಶಾಪ ಹಾಕ್ತಿದ್ದಾರೆ: ಎಚ್‌ಡಿಕೆ

## 1985ರಲ್ಲಿ ಸಾತನೂರಿನಿಂದ ಸ್ಪರ್ಧಿಸಲು ದೇವೇಗೌಡರು ನನಗೆ ಅವಕಾಶ ಕೊಟ್ಟಿದ್ದರೆ ಶಿವಕುಮಾರ್ ಬೆಳೆಯೋಕೆ ಆಗುತ್ತಿತ್ತಾ?

• ಉದಯವಾಹಿನಿ, ಚನ್ನಪಟ್ಟಣ

ಕಳೆದ ಚುನಾವಣೆಯಲ್ಲಿ ಡಿ.ಕೆ. ಶಿವಕುಮಾರ್ ಅವರನ್ನು ಮುಖ್ಯಮಂತ್ರಿ ಮಾಡಬೇಕು ಎಂದು ಆಶೀರ್ವದಿಸಿದವರೇ ಈಗ ನನ್ನ ಬಳಿ ಬಂದು 'ಅವನ ಮನೆ ಹಾಳಾಗ' ಎಂದು ಬೈಯ್ಯುತ್ತಿದ್ದಾರೆ. ಬೆಂಗಳೂರಿನಲ್ಲಿ ಕಸ ತೆಗೆಯಲು, ಮನೆ ಕಟ್ಟಲು ಇವರಿಗೆ ಕಮಿಷನ್ ಕೊಡಬೇಕಾದ ಸ್ಥಿತಿ ಬಂದಿದೆ' ಎಂದು ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಕಿಡಿಕಾರಿದರು.

ಮುಡಾ ಹಗರಣ ವಿರೋಧಿಸಿ ಹಮ್ಮಿಕೊಂಡ ಮೈಸೂರು ಚಲೋ' ಪಾದಯಾತ್ರೆಯ ಮೂರನೇ ದಿನ ಚನ್ನಪಟ್ಟಣದಲ್ಲಿ ಮಾತನಾಡಿದ ಅವರು, 1985ರಲ್ಲಿ ಸಾತನೂರಿನಿಂದ ಸ್ಪರ್ಧಿಸಲು ದೇವೇಗೌಡರು ನನಗೆ ಅವಕಾಶ ಕೊಟ್ಟಿದ್ದರೆ ಶಿವಕುಮಾರ್ ಬೆಳೆಯೋಕೆ ಆಗುತ್ತಿತ್ತಾ? ಇವರ ಬೆಳವಣಿಗೆಗೆ ದೇವೇಗೌಡರ ಕೃಪಾ ಕಟಾಕ್ಷವೂ ಕಾರಣ ಎಂದರು. ನನ್ನ ಪ್ಯಾಂಟ್ ಒಳಗೆ ಖಾಕಿ ಚಡ್ಡಿ ಇದೆ ಎಂದಿರುವ ಸಚಿವ ಜಮೀರ್, ಹಿಂದೆ ನನ್ನೊಂದಿಗೆ ಇದ್ದಾಗ ಏನೆಲ್ಲಾ ಮಾಡಿದ್ದರು. ತಾಯಿ ಹೆಸರಿನಲ್ಲಿ ಯಾವ ಪ್ರಮಾಣ ಮಾಡಿದ್ದರು ಗೊತ್ತಿದೆ. ಒಂದು ಕಾಲದಲ್ಲಿ ಏನೂ ಗತಿ ಇಲ್ಲದ ಅರಸೀಕೆರೆ ಶಾಸಕ ನಮ್ಮ ಪಕ್ಷದಲ್ಲಿಯೇ ಇದ್ದು ಬಲಿತ ಮಜ್ಜಿಗೆ ಕಳ್ಳ, ಚನ್ನಪಟ್ಟಣಕ್ಕೆ ಬಂದು ನನ್ನ ವಿರುದ್ಧ ಭಾಷಣ ಮಾಡಿ ಸವಾಲು ಹಾಕುತ್ತಾರೆ. ಇವರ ಬಂಡವಾಳವೆಲ್ಲಾ ನನಗೆ ಚನ್ನಾಗಿ ಗೊತ್ತಿದೆ' ಎಂದು ತಿರುಗೇಟು ನೀಡಿದರು.

'ಅಹಿಂದ ಹೆಸರೇಳಿಕೊಂಡು ಅಧಿಕಾರಕ್ಕೆ ಬಂದಿರುವ ಸಿದ್ದರಾಮಯ್ಯ ದುರಾಳಿತ ನಡೆಸುತ್ತಿದ್ದಾರೆ. ನಮ್ಮ ಪಾದಯಾತ್ರೆ ಉದ್ದೇಶ ಭ್ರಷ್ಟ ಕಾಂಗ್ರೆಸ್ ಸರ್ಕಾರವನ್ನು ಕಿತ್ತೊಗೆಯುವುದೇ ಹೊರತು, ನಾವು ಅಧಿಕಾರಕ್ಕೆ ಬರಬೇಕು ಎಂದಲ್ಲ' ಎಂದು ಬಿಜೆಪಿ ಅಧ್ಯಕ್ಷ ಬಿ.ವೈ. ವಿಜಯೇಂದ್ರ ಹೇಳಿದರು.

ಪಾದಯಾತ್ರೆ ಕಂಡು ಭಯಪಟ್ಟಿರುವ ಸಿದ್ದರಾಮಯ್ಯ ಬೆಂಬಲಕ್ಕೆ ಕಾಂಗ್ರೆಸ್ ಕೇಂದ್ರ ನಾಯ ಕರು ರಾಜ್ಯಕ್ಕೆ ಬಂದಿದ್ದಾರೆ. ರಾಜ್ಯದ ಪ್ರವಾಹಕ್ಕೆ ಪರಿಹಾರ ಘೋಷಿಸದ ಸಿದ್ದರಾಮಯ್ಯ ಕೇರಳದ ವಯನಾಡ್‌ನಲ್ಲಿ ನೂರು ಮನೆ ನಿರ್ಮಾಣ ಘೋಷಣೆ ಮಾಡಿ, ದೆಹಲಿ ನಾಯಕರನ್ನು ಸಂತುಷ್ಟಪಡಿಸಲು ಮುಂದಾಗಿದ್ದಾರೆ ಎಂದು ಟೀಕಿಸಿದರು.

ಸಿದ್ದರಾಮಯ್ಯ ಈಗ ಲೂಟಿರಾಮಯ್ಯ ಆಗಿದ್ದಾರೆ. ಅವರಿಗೆ ಮನೆ ಕಟ್ಟೋಕೆ 14 ನಿವೇಶನ ಬೇಕಿತ್ತಾ? ಅವರು ಬೇಗ ಸಿ.ಎಂ ಕುರ್ಚಿಯಿಂದ ಇಳಿಯಲಿ ಎಂದೇ ಶಿವಕುಮಾರ್ ಒಬ್ಬರೇ ಜನಾಂದೋಲನ ಕಾರ್ಯಕ್ರಮ ಮಾಡುತ್ತಿದ್ದಾರೆ. ವೇದಿಕೆಯಲ್ಲಿ ಕುಮಾರಸ್ವಾಮಿ ಅವರು ಮಾತನಾಡುವಾಗ


ಉದಯವಾಹಿನಿ ಚಿತ್ರ

**ಮನೆ ಕಟ್ಟೋಕೆ 14 ನಿವೇಶನ ಬೇಕಿತ್ತಾ?**

ಬಿಜೆಪಿಯ ವಿಧಾನ ಪರಿಷತ್ ಸದಸ್ಯ ಸಿ.ಪಿ. ಯೋಗೇಶ್ವರ್ ಬೆಂಬಲಿಗರು 'ಸಿಪಿವೈಗೆ ಚನ್ನಪಟ್ಟಣ ಟಿಕೆಟ್ ಘೋಷಿಸಿ' ಎಂದು ಕೂಗತೊಡಗಿದರು. ಆಗ ಸಿಟ್ಟಿಗೆದ್ದ ಎಚ್‌ಡಿಕೆ ಚನ್ನಪಟ್ಟಣದಲ್ಲಿ ಏನು ನಡೆಯುತ್ತಿದೆ ಎಂಬುದು ಗೊತ್ತಿದೆ. ಎರಡೂ ಪಕ್ಷದವರು ಮೊದಲು ನಿಷ್ಠೆ ತೋರಿಸಿ. ನಾವೀಗ ಟಿಕೆಟ್ ಹಂಚೋಕೆ ಬಂದಿಲ್ಲ. ಇಲ್ಲಿ ಎನ್‌ಡಿಎ ಉಳಿಯಬೇಕಿದ್ದು ಕಾಂಗ್ರೆಸ್‌ಗೆ ಕ್ಷೇತ್ರವನ್ನು ಬಿಟ್ಟು ಕೊಡುವುದಿಲ್ಲ. ಬಿಜೆಪಿ ಮತ್ತು ಜೆಡಿಎಸ್ ಸಮನ್ವಯ ಸಮಿತಿ ನಾಯಕರು ದೆಹಲಿಯಲ್ಲಿ ಟಿಕೆಟ್ ತೀರ್ಮಾನ ತೆಗೆದುಕೊಳ್ಳುತ್ತಾರೆ. ಯಾರೇ ಅಭ್ಯರ್ಥಿಯಾದರೂ ಅವರನ್ನು ಗೆಲ್ಲಿಸಬೇಕು' ಎಂದು ಹರಿಹಾಯ್ದರು. ಸಿಪಿವೈ ಬೆಂಬಲಿಗರ ಮೇಲೆ ಎಚ್‌ಡಿಕೆ ಗರಂ ವೇದಿಕೆಯಲ್ಲಿ ಕುಮಾರಸ್ವಾಮಿ ಅವರು ಮಾತನಾಡುವಾಗ ಬಿಜೆಪಿಯ ವಿಧಾನ ಪರಿಷತ್ ಸದಸ್ಯ ಸಿ.ಪಿ. ಯೋಗೇಶ್ವರ್ ಬೆಂಬಲಿಗರು

### ಸಿಪಿವೈ ಬದಲು ನಿಖಿಲ್ ?

ಇತ್ತೀಚೆಗೆ ಅವರ ತಂದೆ ನಿಧನರಾದ ಹಿನ್ನೆಲೆಯಲ್ಲಿ ಪಾದಯಾತ್ರೆಗೆ ಗೈರಾಗಿರುವುದಾಗಿ ಹೇಳಿಕೊಂಡಿದ್ದ ಅವರು ಕೆಲ ಹೊತ್ತು ಪ್ರತ್ಯಕ್ಷವಾಗಿ ಮಾಯವಾಗಿದ್ದು ಚರ್ಚೆಗೆ ಗ್ರಾಸವಾಗಿದೆ. ಕ್ಷೇತ್ರದಲ್ಲಿ ಸಿಪಿವೈ ಬದಲು ನಿಖಿಲ್ ಕಣಕ್ಕಿಳಿಸಲು ಎಚ್‌ಡಿಕೆ ಒಲವು ತೋರಿರುವುದೇ ಇದಕ್ಕೆ ಕಾರಣ ಎಂದು ಮೂಲಗಳು ತಿಳಿಸಿವೆ.

'ಸಿಪಿವೈಗೆ ಚನ್ನಪಟ್ಟಣ ಟಿಕೆಟ್ ಘೋಷಿಸಿ' ಎಂದು ಕೂಗತೊಡಗಿದರು. ಆಗ ಸಿಟ್ಟಿಗೆದ್ದ ಎಚ್‌ಡಿಕೆ 'ಚನ್ನಪಟ್ಟಣದಲ್ಲಿ ಏನು ನಡೆಯುತ್ತಿದೆ ಎಂಬುದು ಗೊತ್ತಿದೆ. ಎರಡೂ ಪಕ್ಷದವರು ಮೊದಲು ನಿಷ್ಠೆ ತೋರಿಸಿ. ನಾವೀಗ ಟಿಕೆಟ್ ಹಂಚೋಕೆ ಬಂದಿಲ್ಲ. ಸಮಾನ ಮನಸ್ಕರ ಹೆಸರಿನಲ್ಲಿ ಬಿಜೆಪಿ ಬಾವುಟ ಇಟ್ಟುಕೊಂಡು ಸಭೆ ಕರೆಯುತ್ತೀರಾ? ಇಲ್ಲಿ ಎನ್‌ಡಿಎ ಉಳಿಯಬೇಕಿದ್ದು ಕಾಂಗ್ರೆಸ್‌ಗೆ ಕ್ಷೇತ್ರವನ್ನು ಬಿಟ್ಟು ಕೊಡುವುದಿಲ್ಲ. ಬಿಜೆಪಿ ಮತ್ತು ಜೆಡಿಎಸ್ ಸಮನ್ವಯ ಸಮಿತಿ ನಾಯಕರು ದೆಹಲಿಯಲ್ಲಿ ಟಿಕೆಟ್ ಕುರಿತು ತೀರ್ಮಾನ ತೆಗೆದುಕೊಳ್ಳುತ್ತಾರೆ. ಯಾರೇ ಅಭ್ಯರ್ಥಿಯಾದರೂ ಅವರನ್ನು ಗೆಲ್ಲಿಸಬೇಕು' ಎಂದು ಹರಿಹಾಯ್ದರು. ಹೆಚ್ಚು ಹೊತ್ತು ಇರದ ವೇದಿಕೆ ಹತ್ತದ ಸಿಪಿವೈ ಪಾದಯಾತ್ರೆಯಲ್ಲಿ ಬಿಜೆಪಿ ನಾಯಕರ ಜೊತೆ ಕೆಲ ಹೊತ್ತು ಹೆಜ್ಜೆ ಹಾಕಿದ ಚನ್ನಪಟ್ಟಣ ಟಿಕೆಟ್ ಆಕಾಂಕ್ಷಿ ಯೋಗೇಶ್ವರ್ ನಂತರ ಎಲ್ಲಿಯೂ ಕಾಣಿಸಿಕೊಳ್ಳಲಿಲ್ಲ. ಬಹಿರಂಗ ಸಮಾವೇಶದ ವೇದಿಕೆಯಲ್ಲೂ ಅವರ ಗೈರು ಎದ್ದು ಕಾಣುತ್ತಿತ್ತು. ಅಲ್ಲದೆ ಪಾದಯಾತ್ರೆ ಮಾರ್ಗದಲ್ಲಿ ಅಳವಡಿಸಿದ್ದ ಫ್ಲೆಕ್ಸ್‌ಗಳಲ್ಲಿ ಸಿಪಿವೈ ಭಾವಚಿತ್ರ ಕಾಣಲಿಲ್ಲ. ಎಲ್ಲೆಲ್ಲೂ ನಿಖಿಲ್ ಭಾವಚಿತ್ರವೇ ಎದ್ದು ಕಾಣುತ್ತಿತ್ತು. ಈ ಕುರಿತು ಕೇಳಿದ ಮಾಧ್ಯಮದವರಿಗೆ ಪ್ರತಿಕ್ರಿಯಿಸಿದ ಸಿಪಿವೈ 'ನೆನ್ನೆ ಹಾಕಿದ್ದ ಕಾಂಗ್ರೆಸ್ ಫ್ಲೆಕ್ಸ್ ಅನ್ನು ಇಂದು ಕಿತ್ತುಕೊಂಡು ಹೋಗಿದ್ದಾರೆ.

> ಇಂದು ಹಾಕಿರುವ ಬಿಜೆಪಿ-ಜೆಡಿಎಸ್ ಫ್ಲೆಕ್ಸ್ ಅನ್ನು ನಾಳೆ ಕಿತ್ತುಕೊಂಡು ಹೋಗುತ್ತಾರೆ. ಹಾಗಾಗಿ ನಾನು ಅದರ ಬಗ್ಗೆ ಚಿಂತೆ ಮಾಡುವುದಿಲ್ಲ. ನನ್ನ ಭಾವಚಿತ್ರ ಕ್ಷೇತ್ರದ ಜನರ ಮನಸ್ಸಿನಲ್ಲಿದೆ. ಜನಗಳ ಹೃದಯದಲ್ಲಿರುವ ನಾನು ಏನಾಗಬೇಕೆಂದು ಜನ ತೀರ್ಮಾನಿಸುತ್ತಾರೆ' ಎಂದು ಮಾರ್ಮಿಕವಾಗಿ ಹೇಳಿದರು
> 
> -ಎಚ್.ಡಿ.ಕುಮಾರಸ್ವಾಮಿ, ಕೇಂದ್ರ ಸಚಿವ

## ಭಾರತ ಧಾರ್ಮಿಕ ಹಾಗೂ ಆಧ್ಯಾತ್ಮಿಕ ಪರಂಪರೆಯನ್ನು ಮೈಗೂಡಿಸಿಕೊಳ್ಳುವ ರಾಷ್ಟ್ರ: ಪಿ ಚೇತನ್

• ಉದಯವಾಹಿನಿ ಬಂಗಾರಪೇಟೆ

ಮೂಲತಃ ಭಾರತ ಧಾರ್ಮಿಕ ಹಾಗೂ ಆಧ್ಯಾತ್ಮಿಕ ಪರಂಪರೆಯನ್ನು ಮೈಗೂಡಿಸಿಕೊಳ್ಳುವ ರಾಷ್ಟ್ರ, ಗ್ರಾಮಗಳ ಸರ್ವತೋಮುಖ ಒಳಿತಿಗಾಗಿ ಇಂದು ಶಕ್ತಿ ದೇವರುಗಳ ಆರಾಧನೆ ಮಾಡಲಾಗುತ್ತಿದೆ ಎಂದು ಬಿಜೆಪಿ ಯುವ ಮುಖಂಡ ಪಿ ಚೇತನ್ ತಿಳಿಸಿದರು.

ತಾಲ್ಲೂಕಿನ ಕೆಸರನಹಳ್ಳಿ ಗ್ರಾಮ ಪಂಚಾಯಿತಿಯಲ್ಲಿ ಗ್ರಾಮದ ಶಕ್ತಿ ದೇವತೆಗಳಾದ ಓಂ ಶಕ್ತಿ, ದಂಡು ಮಾರಿಯಮ್ಮ, ಗಂಗಮ್ಮ, ಚೌಡೇಶ್ವರಮ್ಮ, ನೆಲಗಂಗಮ್ಮ, ಹಾಗೂ ಕೋದಂಡರಾಮಸ್ವಾಮಿ ದೇವಾಲಯದಲ್ಲಿ ಹಮ್ಮಿಕೊಂಡಿದ ಶಕ್ತಿದೇವತೆಗಳ ಆರಾಧನೆ ಮತ್ತು ಆಡಿ ಮಸದ ಗಂಜಿ ಮಹೋತ್ಸವ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿ, ಆಷಾಢ ಅಮಾವಾಸ್ಯೆ ಪ್ರಯುಕ್ತ ಇಂದು ಗ್ರಾಮಗಳಲ್ಲಿ ಸುಖ, ಸಂವೃದ್ಧಿ ಮತ್ತು ಸಕಾಲಕ್ಕೆ ಮಳೆ ,ಬೆಳೆ, ಆಗಬೇಕು, ಗ್ರಾಮದಲ್ಲಿ ಯಾವುದೇ ಸಾಂಕ್ರಾಮಿಕ ರೋಗಗಳು ಹರಡದಂತೆ ಗ್ರಾಮವನ್ನು ರಕ್ಷಣೆ


ಉದಯವಾಹಿನಿ ಚಿತ್ರ

ಮಾಡುವಂತೆ ಶಕ್ತಿ ದೇವರುಗಳಿಗೆ ಶಾಂತಿ ಮಾಡುವ ಹಿನ್ನೆಲೆ ಗಂಜಿ ಮಹೋತ್ಸವವನ್ನು ಮಾಡಲಾಗಿದೆ ತಿಳಿಸಿ ಎಲ್ಲಾ ದೇವಾಲಯಗಳು ಸಹ ಹರಕೆಯುತ್ತ ಮಹಿಳೆಯರು ಮಡಿಕೆಯನ್ನು ತಲೆಯ ಮೇಲೆ ಇಟ್ಟು ಪಂಬು ಹೊಡೆಯುವು ದರ ಮೂಲಕ ಪ್ರಮುಖ ಬೀದಿಗಳಲ್ಲಿ ಸಂಚರಿಸಿ ದೇವಾಲಯಗಳಲ್ಲಿ ವಿಶೇಷ ಪೂಜೆ ಕೈಕಾರಿಗಳನ್ನು ನೆರವೇರಸಲಾಗುತ್ತದೆ ಎಂದು ತಿಳಿದಿದ್ದರು.

ಇದೇ ಸಂದರ್ಭದಲ್ಲಿ ಗ್ರಾಮದ ಸದಸ್ಯರಾದ ಕೆವಿ ಶ್ರೀನಿವಾಸ್, ಕೆವಿ ವೇಲಯ್ಯ, ಪೂಜಾರಿ ರವಿ, ವೆಂಕಟಾಚಲಪತಿ, ಸೋಮೇಶ್, ಯುವರಾಜ್, ಸೇರಿದಂತೆ ಇನ್ನೂ ಹಲವರು ಮಹಿಳೆಯರು ಸುತ್ತ ಮುತ್ತಲಿನ ಗ್ರಾಮಸ್ಥರು ಉಪಸ್ಥಿತರಿದ್ದರು.

## ಕ್ರೀಡಾಪಟುಗಳಿಗೆ ಮಾನಸಿಕ ಕೌಶಲ್ಯ ಬಹಳ ಪ್ರಾಮುಖ್ಯ : ಮರಿಸ್ವಾಮಿ

• ಉದಯವಾಹಿನಿ, ಶಿಡ್ಲಘಟ್ಟ

ಕ್ರೀಡಾಪಟುಗಳಿಗೆ ಮಾನಸಿಕ ಕೌಶಲ್ಯ ಬಹಳ ದೊಡ್ಡದಾಗಿದ್ದರೆ ಮಾತ್ರ ಕ್ರೀಡೆಯಲ್ಲಿ ಯಶಸ್ವಿಗೊಳಿಸಲು ಸಾಧ್ಯ ಎಂದು ಚಿಕ್ಕಬಳ್ಳಾಪುರ ಜಿಲ್ಲಾ ಪದವಿ ಪೂರ್ವ ಕಾಲೇಜುಗಳ ಉಪನಿರ್ದೇಶಕ ಮರಿಸ್ವಾಮಿ ಅಭಿಪ್ರಾಯಪಟ್ಟರು.

ನಗರದ ನೆಹರೂ ಕ್ರೀಡಾಂಗಣದಲ್ಲಿ ಶಾಲಾ ಶಿಕ್ಷಣ ಇಲಾಖೆ, ತಾಲ್ಲೂಕು ಪದವಿ ಪೂರ್ವ ಕಾಲೇಜುಗಳ ಸಮಿತಿವತಿಯಿಂದ ಆಯೋಜಿಸಿದ್ದ ತಾಲ್ಲೂಕು ಮಟ್ಟದ ಕ್ರೀಡಾಕೂಟವನ್ನು ಉದ್ಘಾಟಿಸಿ ಮಾತನಾಡಿದರು.

ತಾಲೂಕು ಮಟ್ಟದಲ್ಲಿ ಜಯಶಾಲಿಯಾದ ಕ್ರೀಡಾಪಟುಗಳು ಜಿಲ್ಲಾ ಮಟ್ಟಕ್ಕೆ ಆಯ್ಕೆಯಾಗಿ ಚಿಕ್ಕಬಳ್ಳಾಪುರ ನಾಗಾರ್ಜುನ ಕಾಲೇಜಿನಲ್ಲಿ ಸ್ಪರ್ಧಿಸಬೇಕಾಗುತ್ತದೆ. ಸೋಲು ಗೆಲುವನ್ನು ಸಮಾನವಾಗಿ ಸ್ವೀಕರಿಸಿ ನಮ್ಮ ತಾಲ್ಲೂಕಿಗೆ ಕೀರ್ತಿಯನ್ನು ತರಬೇಕು ಎಂದರು. ಪದವಿಪೂರ್ವ ಕಾಲೇಜಿನ ಪ್ರಾಂಶುಪಾಲರಾದ ವೆಂಕಟಶಿವಾರೆಡ್ಡಿ ಮಾತನಾಡಿ ಕ್ರೀಡೆಯಿಂದ ಶಿಸ್ತು,


ಉದಯವಾಹಿನಿ ಚಿತ್ರ

**ಸೋಲು ಕೊನೆಯಲ್ಲ, ಗೆಲವು ಶಾಶ್ವತವಲ್ಲ**

ಸಂಯಮ ಮತ್ತು ಆರೋಗ್ಯ ವೃದ್ಧಿಸುತ್ತದೆ. ಕ್ರೀಡೆಯಲ್ಲಿ ಎಲ್ಲರೂ ಗೆಲ್ಲಲು ಸಾಧ್ಯವಿಲ್ಲ. ಪ್ರತಿಯೊಬ್ಬರೂ ಗೆಲ್ಲ ಬೇಕು ಎಂದು ಕ್ರೀಡೆಯಲ್ಲಿ ಪಾಲ್ಗೊಳ್ಳುತ್ತಾರೆ. ಆದರೆ ಉತ್ತಮ ತರಬೇತಿ ಪರಿಣತಿಯನ್ನು ಹೊಂದಿದವರು ಮಾತ್ರ ಗೆಲವು ಸಾಧಿಸುತ್ತಾರೆ.

ಸೋಲು ಕೊನೆಯಲ್ಲ, ಗೆಲವು ಶಾಶ್ವತವಲ್ಲ ಎಂದರು. ಸಂದರ್ಭದಲ್ಲಿ ಎನ್ ಎಸ್ ಎಸ್ ಹೆಚ್.ಸಿ ಮುನಿರಾಜು, ತೀರ್ಪುಗಾರಾಗಿ ದೈಹಿಕ ಶಿಕ್ಷಕ ದೇವೇಂದ್ರಪ್ಪ, ದೈಹಿಕ ಶಿಕ್ಷಕರ ತಾಲ್ಲೂಕು ಅಧ್ಯಕ್ಷ ಕೆ.ವಿ ಪ್ರಕಾಶ್ ಬಾಬು, ಉಪಾಧ್ಯಕ್ಷೆ ನೇತ್ರಾವತಿ, ಕಾರ್ಯದರ್ಶಿ ಕೃಷ್ಣಪ್ಪ, ಅಕ್ಷರ ಪಿಯು ಕಾಲೇಜು ಪ್ರಾಂಶುಪಾಲ ಬಿ.ವಿ ಪ್ರಕಾಶ್, ಡಾಲ್ಫಿನ್ ಶಾಲೆಯ ದೈಹಿಕ ಶಿಕ್ಷಕ ಸಂಪತ್ ಕುಮಾರ್,ಅನ್ನಪೂರ್ಣ, ನೋಡಲ್ ಉಪನ್ಯಾಸಕರು, ಎಲ್ಲಾ ಕಾಲೇಜು ಪ್ರಾಂಶುಪಾಲರು, ತೀರ್ಪುಗಾರರು ಶಾಲಾ ಕಾಲೇಜು ವಿದ್ಯಾರ್ಥಿಗಳು ಹಾಜರಿದ್ದರು.

> ಕಾಲೇಜುಗಳಲ್ಲಿ ಶಿಕ್ಷಣಕ್ಕೆ ನೀಡುವಷ್ಟೇ ಮಹತ್ವವನ್ನು ಕ್ರೀಡೆಗಳಿಗೂ ನೀಡುವುದರಿಂದ ವಿದ್ಯಾರ್ಥಿಗಳು ಇನ್ನಷ್ಟು ಆಸಕ್ತಿಯಿಂದ ಶಿಕ್ಷಣದಲ್ಲಿ ತೊಡಗಲು ಸಾಧ್ಯ. ವಿದ್ಯಾರ್ಥಿಗಳಲ್ಲಿ ಧೈರ್ಯ, ಸಂಹನ ಕೌಶಲ್ಯ, ಜನರ ಜೊತೆಗಿನ ಒಡನಾಟಗಳನ್ನು ಗುರ್ತಿಸಲು ಕ್ರೀಡಾಕೂಟಗಳು ಉತ್ತಮ ಮಾರ್ಗವಾಗಿದೆ
> 
> -ಸಿ.ಎ ನರೇಂದ್ರಕುಮಾರ್, ಕ್ಷೇತ್ರ ಶಿಕ್ಷಣಾಧಿಕಾರಿ

## ಹಳ್ಳಿಗೊಂದು ಕೆರೆ ನಿರ್ಮಾಣವಾಗಬೇಕು,ಉತ್ತಮ ಆರೋಗ್ಯಕ್ಕೆ ನೀರು ಅವಶ್ಯ

• ಉದಯವಾಹಿನಿ ತುಮಕೂರು

ಹಳ್ಳಿಗೊಂದು ಕೆರೆ ನಿರ್ಮಾಣವಾಗಬೇಕು,ಗಂಗೆ ಇದ್ದಲ್ಲಿ ನಗರೀಕರಣ,ಜನಸಂಖ್ಯೆ ಇರುತ್ತದೆ, ನೀರು ಇದ್ದರೆ ಏನು ಬೇಕಾದರೂ ಬೆಳೆಯಬಹುದು,ಕೆರೆ ನಿರ್ಮಾಣ ಮಾಡುವುದು ದೊಡ್ಡದಲ್ಲ ಅದನ್ನು ನಿರ್ವ ಹಣೆ ಮಾಡಬೇಕು,ಕೆರೆಯ ಸುತ್ತ ಪ್ರಾಣಿ,ಪಕ್ಷಿಗಳ ಸಂಕುಲಗಳಿಗೆ ಅನುಕೂಲವಾಗಲು ಹತ್ತಿ,ಹಲಸು,ನೇರಳೆ, ಅರಳೀಮರಗಳನ್ನು ನೆಟ್ಟು ಬೆಳೆಸಬೇಕು ಗ್ರಾಮಸ್ಥರು ಕೆರೆಯ ಸುತ್ತ ಗಲೀಜು ಮಾಡದೆ ಸ್ವಚ್ಛವಾಗಿಟ್ಟುಕೊಂಡು ಕೆರೆಯ ಲಾಭವನ್ನು ಪಡೆಯಬೇಕು,ಡಾ||ಡಿ. ವೀರೇಂದ್ರಹೆಗ್ಗಡೆರವರು ಗ್ರಾಮೀಣ ಪ್ರದೇಶದ ಜನರಿಗೆ ಆರ್ಥಿಕವಾಗಿ,ಸಾಮಾಜಿಕವಾಗಿ,ಶೈಕ್ಷಣಿಕವಾಗಿ ಹಲವಾರು ಯೋಜನೆಗಳನ್ನು ಜಾರಿಗೆ ತಂದು ಕಾರ್ಯಗತಗೊಳಿಸಿದ್ದಾರೆ ಎಂದು ಗ್ರಾಮಾಂತರ ಕ್ಷೇತ್ರದ ಶಾಸಕರಾದ ಬಿ.ಸುರೇಶ್ ಗೌಡರವರು ತಿಳಿಸಿದರು.

ಅವರು ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ, ಬಿ.ಸಿ.ಟ್ರಸ್ಟ್(ರಿ) ವತಿಯಿಂದ ಹಾಗೂ ಗೂಳೂರು ಗ್ರಾಮ ಪಂಚಾಯಿತಿ ಮತ್ತು ಗೂಳೆಹರಿವೆ ಕೆರೆ ಅಭಿವೃದ್ಧಿ ಸಮಿತಿಯ ಸಹಭಾಗಿತ್ವದಲ್ಲಿ ''ನಮ್ಮೂರು ನಮ್ಮ ಕೆರೆ'' ಯೋಜನೆಯಡಿ ಗೂಳ ಹರಿವೆಯಲ್ಲಿ ಪುನಶ್ಚೇತನಗೊಳಿಸಲಾದ 672ನೇ ನಮ್ಮೂರು ನಮ್ಮ


ಉದಯವಾಹಿನಿ ಚಿತ್ರ

**ನಮ್ಮೂರು ನಮ್ಮ ಕೆರೆಯ ನಾಮಫಲಕ ಅನಾವರಣ**

ಕೆರೆಯ ನಾಮಫಲಕ ಅನಾವರಣ ಹಾಗೂ ಕೆರೆ ಹಸ್ತಾಂತರ,ಸುಜ್ಞಾನ ನಿಧಿ ವಿತರಣೆ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಪ್ರಾಸ್ತಾವಿಕವಾಗಿ ಮಾತನಾಡಿದ ತುಮಕೂರು 1 ಜಿಲ್ಲೆಯ ಜಿಲ್ಲಾ ನಿರ್ದೇಶಕರಾದ ಸತೀಶ್ ಸುವರ್ಣ ರವರು ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯಿಂದ ಕಳೆದ 42 ವರ್ಷಗಳಿಂದ ಹಲವಾರು ಕಾರ್ಯಕ್ರಮಗಳನ್ನು ಜಾರಿಗೊಳಿಸಲಾಗಿದೆ.

ತುಮಕೂರಿನಲ್ಲಿ 13 ವರ್ಷಗಳಿಂದ ಉತ್ತಮ ರೀತಿಯಲ್ಲಿ ಕಾರ್ಯನಿರ್ವಹಿಸುತ್ತಿದ್ದು ಮಹಿಳೆಯರ ಸ್ವಾವಲಂಬನೆಯ ಬದುಕನ್ನು ಕಟ್ಟಲು ಟೊಂಕ ಕಟ್ಟಿ ಕೆಲಸನಿರ್ವಹಿಸುತ್ತಿದೆ,ರಾಷ್ಟ್ರೀಕೃತ ಬ್ಯಾಂಕ್ ಮತ್ತು ಸದಸ್ಯರ ನಡುವೆ ನಾವು ಕೊಂಡಿಯಾಗಿ ಕೆಲಸ ನಿರ್ವಹಿಸುತ್ತಿದ್ದೇವೆ, ಶುದ್ಧಗಂಗಾ, ವಾತ್ಸಲ್ಯ ಮನೆ ನಿರ್ಮಾಣ, ಸುಜ್ಞಾನ ನಿಧಿ,ಪ್ರತಿ ತಿಂಗಳು ಅಶಕ್ತರಿಗೆ ಪಿಂಚಣಿ ಹೀಗೆ ನೂರಾರು ಕಾರ್ಯಕ್ರಮಗಳನ್ನು ಜಾರಿಗೊಳಿಸಿ ಸಮಾಜಕ್ಕೆ ನೀಡುತ್ತಿದ್ದೇವೆ ಎಂದು ತಿಳಿಸಿದರು. ಮುಖ್ಯ ಅತಿಥಿಗಳಾಗಿ ಭಾಗವಹಿಸಿದ ಮಾಜಿ ಜಿಲ್ಲಾ ಪಂಚಾಯತ್ ಸದಸ್ಯರಾದ ಗೂಳೂರು ಶಿವಕುಮಾರ್‌ರವರು ಯೋಜನೆಯ ಕಾರ್ಯಕ್ರಮಗಳ ಬಗ್ಗೆ ಪ್ರಶಂಸೆಯನ್ನು ವ್ಯಕ್ತಪಡಿಸಿದರು ಹಾಗೂ ಯೋಜನೆಯು ಮತ್ತಷ್ಟು ಕೆರೆಗಳನ್ನು ಅಭಿವೃದ್ಧಿಗೊಳಿಸುವ ಕಾರ್ಯದಲ್ಲಿ ತೊಡಗಲಿ ಎಂದು ಶುಭ ಹಾರೈಸಿದರು.

ಈ ಸಂದರ್ಭದಲ್ಲಿ ತಾಲ್ಲೂಕು ಯೋಜನಾಧಿಕಾರಿಗಳಾದ ಪ್ರಭಾಕರ್ ರಮನಾಯಕ್, ಕೆರೆ ಅಭಿಯಂತರ ಭರತ್,ರವೀಶ್, ಶ್ರೀಧರ್, ಹನುಮಂತಯ್ಯ. ಶ್ರೀಮತಿ ರೇಣುಕಾ. ಅಂಗಡಿರಂಗಯ್ಯ, ಗಂಗಾಧರಯ್ಯ, ರಂಗಸ್ವಾಮಿ. ಲಕ್ಷ್ಮಯ್ಯ, ಹಾಗೂ ಕೆರೆ ಅಭಿವೃದ್ಧಿ ಸಮಿತಿಯ ಸರ್ವ ಸದಸ್ಯರು ಮತ್ತು ಕೃಷಿ ಮೇಲ್ವಿಚಾರಕರಾದ ಅನುಕುಮಾರ್, ವಲಯ ಮೇಲ್ವಿಚಾರಕರು ಹಾಗೂ ತಾಲ್ಲೂಕಿನ ಜ್ಞಾನ ವಿಕಾಸ ವಿಕಾಸ ಸಮನ್ವಯಾಧಿಕಾರಿ ಶ್ರೀಮತಿ ಎನ್.ವಿ. ನಾಗಮಣಿ. ಗುಳೂರು ವಲಯದ ಸೇವಾ ಪ್ರತಿನಿಧಿಗಳು ಮತ್ತು ಪ್ರಗತಿ ಬಂದು ಮತ್ತು ಸಹಾಯ ಸಂಘಗಳ ಸದಸ್ಯರುಗಳು ಪಾಲ್ಗೊಂಡಿದ್ದರು.

## ಶಾಸಕ ಚೆನ್ನಾರೆಡ್ಡಿ ಪಾಟೀಲ್ ವಜಾಗೆ ಒತ್ತಾಯ

• ಉದಯವಾಹಿನಿ ಮೈಸೂರು

ಯಾದಗಿರಿ ನಗರ ಪೊಲೀಸ್ ಠಾಣೆಯ ಪಿಎಸ್‌ಐ ಪರಶುರಾಮ್ ಆತ್ಮಹತ್ಯೆಗೆ ಕಾರಣವಾಗಿರುವ ಶಾಸಕ ಚೆನ್ನಾರೆಡ್ಡಿ ಪಾಟೀಲ್ ತುನ್ನೂರು ಅವರನ್ನು ಶಾಸಕ ಸ್ಥಾನದಿಂದ ವಜಾಗೊಳಿಸಿ ಮೃತ ಅಧಿಕಾರಿಯ ಕುಟುಂಬಕ್ಕೆ ಸೂಕ್ತ ಪರಿಹಾರ ನೀಡಬೇಕು ಎಂದು ಆಗ್ರಹಿಸಿ ದಲಿತ ಸಂಘರ್ಷ ಸಮಿತಿ ವತಿಯಿಂದ ಪ್ರತಿಭಟನೆ ನಡೆಸಲಾಯಿತು.

ನಗರದ ಪುರಭವನದ ಬಳಿಯ ಡಾ.ಬಿ.ಆರ್. ಅಂಬೇಡ್ಕರ್ ಪ್ರತಿಮೆ ಎದುರು ಜಮಾವಣೆಗೊಂಡ ಪ್ರತಿಭಟನಾಕಾರರು ವಿವಿಧ ಘೋಷಣೆಗಳನ್ನು ಕೂಗಿ ಆಕ್ರೋಶ ವ್ಯಕ್ತಪಡಿಸಿದರು. ಕಳೆದ 7 ತಿಂಗಳ ಹಿಂದಷ್ಟೇ ಯಾದಗಿರಿ ನಗರ ಪೊಲೀಸ್ ಠಾಣೆಗೆ ವರ್ಗಾವಣೆಯಾಗಿ ಬಂದಿದ್ದ ಪಿಎಸ್‌ಐ ಪರಶುರಾಮ್ ಅವರನ್ನು ಇದೆ ಠಾಣೆಯಲ್ಲಿ ಮುಂದುವರೆಸಲು 30 ಲಕ್ಷ ರೂ. ಬೇಡಿಕೆ ಇಟ್ಟು ಶಾಸಕ ಚೆನ್ನಾರೆಡ್ಡಿ ಪಾಟೀಲ್ ತುನ್ನೂರು ಮತ್ತು ಆತನ ಮಗ ಸನ್ನಿ ಗೌಡ ಮಾನಸಿಕವಾಗಿ ಹಿಂಸಿಸಿ, ಅವಮಾನಿಸಿ, ಖಿನ್ನತೆಗೊಳಗಾಗುವಂತೆ ಮಾಡಿದ್ದರು. ಪರಿಣಾಮ ಪರಶುರಾಮ್ ಆತ್ಮಹತ್ಯೆಗೆ ಶರಣಾಗಲು ಕಾರಣವಾಗಿದೆ ಎಂದು ಅವರ ಪತ್ನಿ ಎನ್.ವಿ.ಶ್ವೇತಾ ತಮ್ಮ ದೂರಿನಲ್ಲಿ ತಿಳಿಸಿದ್ದಾರೆ. ಈ ದುರ್ಘಟನೆಯಿಂದ


ಉದಯವಾಹಿನಿ ಚಿತ್ರ

ನಾಗರಿಕ ಸಮಾಜ ತಲೆತಗ್ಗಿಸುವಂತಾಗಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ದಲಿತ ಸಂಘರ್ಷ ಸಮಿತಿಯ ಸಂಚಾಲಕ ಚೋರನಹಳ್ಳಿ ಶಿವಣ್ಣ ಮಾತನಾಡಿ, ಪಿಎಸ್‌ಐ ಪರಶುರಾಮ್ ಆತ್ಮಹತ್ಯೆ ಪ್ರಕರಣವನ್ನು ಉನ್ನತ ಮಟ್ಟದಲ್ಲಿ ನಡೆಸಬೇಕು. ಶಾಸಕ ಚೆನ್ನಾರೆಡ್ಡಿ ಪಾಟೀಲ್ ತುನ್ನೂರು ಮತ್ತು ಆತನ ಮಗ ಸನ್ನಿಗೌಡ ವಿರುದ್ಧ ಕಾನೂನು ಕ್ರಮ ಜರುಗಿಸಿ ಶಾಸಕರ ಆಸ್ತಿ ಮುಟ್ಟಗೋಲು ಹಾಕಿ ಮೃತ ಅಧಿಕಾರಿಯ ಕುಟುಂಬಕ್ಕೆ ಹಸ್ತಾಂತರಿಸಬೇಕು. ಮೃತ ಅಧಿಕಾರಿ ಪತ್ನಿಗೆ ಸರ್ಕಾರಿ ಉದ್ಯೋಗ ನೀಡಿ ಸರ್ಕಾರದಿಂದ 50 ಲಕ್ಷ ರೂ. ಪರಿಹಾರ ನೀಡಬೇಕು. ಎಲ್ಲಾ ಇಲಾಖೆಗಳಲ್ಲೂ ಕೌನ್ಸಿಲಿಂಗ್ ಮೂಲಕವೇ ವರ್ಗಾವಣೆ ನೀತಿ ಜಾರಿಯಾಗಿ ವರ್ಗಾವಣೆಯಲ್ಲಿ ರಾಜಕಾರಣಿಗಳ ಹಸ್ತಕ್ಷೇಪ ತಡೆಗಟ್ಟುವ ಕಾಯ್ದೆ ರೂಪಿಸಬೇಕು ಎಂದು ಒತ್ತಾಯಿಸಿದರು.

## ರಾಜಕೀಯವಾಗಿ ಸಿದ್ದರಾಮಯ್ಯ ಮುಗಿಸಲು ಷಡ್ಯಂತ್ರ

• ಉದಯವಾಹಿನಿ ಚಿಕ್ಕಬಳ್ಳಾಪುರ

ಬಿಜೆಪಿ ಮತ್ತು ಜೆಡಿಎಸ್ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ರಾಜಕೀಯವಾಗಿ ಮುಗಿಸಲು ಸಂಚು ನಡೆಸಿವೆ. ಮುಡಾ ನಿವೇಶನ ಹಂಚಿಕೆ ಪ್ರಕರಣದ ನೆಪದಲ್ಲಿ ತೇಜೋವಧೆಗೆ ಯತ್ನಿಸುತ್ತಿವೆ ಎಂದು ಆರೋಪಿಸಿ ಕಾಂಗ್ರೆಸ್ ಮತ್ತು ಹಿಂದುಳಿದ ಜಾತಿಗಳ ಒಕ್ಕೂಟದ ಸದಸ್ಯರು ನಗರದಲ್ಲಿ ಸೋಮವಾರ ಪ್ರತಿಭಟಿಸಿದರು. ಶಿಡ್ಲಘಟ್ಟ ವೃತ್ತದಲ್ಲಿ ಸಮಾವೇಶಗೊಂಡ ಕಾರ್ಯಕರ್ತರು ಮತ್ತು ಮುಖಂಡರು ಬಿಜೆಪಿ, ಜೆಡಿಎಸ್ ವಿರುದ್ಧ ಘೋಷಣೆಗಳನ್ನು ಕೂಗಿದರು. ಮಾನವ ಸರಪಳಿ ನಿರ್ಮಿಸಿ ಆಕ್ರೋಶ ವ್ಯಕ್ತಪಡಿಸಿದರು. ರಾಜ್ಯ ಸರ್ಕಾರವನ್ನು ಅಸ್ಥಿರಗೊಳಿಸುವ ಪ್ರಯತ್ನ ನಿಲ್ಲಬೇಕು ಎಂದು ಜಿಲ್ಲಾಡಳಿತದ ಮೂಲಕ ರಾಜ್ಯಪಾಲರಿಗೆ ಮನವಿ ಸಲ್ಲಿಸಿದರು. ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಕೆ.ಎನ್.ಕೇಶವರೆಡ್ಡಿ ಮಾತನಾಡಿ, ಕೋಮುವಾದಿಗಳು ಅಧಿಕಾರದ ಆಸೆಗಾಗಿ ರಾಜ್ಯ ಸರ್ಕಾರವನ್ನು ಅಸ್ಥಿರಗೊಳಿಸಲು ಯತ್ನಿಸುತ್ತಿದ್ದಾರೆ. 15 ಬಾರಿ ಬಜೆಟ್ ಮಂಡಿಸಿದ 40 ವರ್ಷಗಳ ರಾಜಕೀಯ ಅನುಭವ ಹೊಂದಿರುವ ಸಿದ್ದರಾಮಯ್ಯ ಜನಾನುರಾಗಿ ನಾಯಕರು ಎಂದರು. ಹಲವು ಮಹತ್ವದ ಹುದ್ದೆಗಳನ್ನು ನಿರ್ವಹಿಸಿದ ಅವರು ಕಪ್ಪು ಚುಕ್ಕೆ ಇಲ್ಲದೆ ಆಡಳಿತ ನಡೆಸಿದ್ದಾರೆ. ಅವರ ವರ್ಚಸ್ಸಿಗೆ ಮಸಿ ಬಳಿದು ರಾಜಕೀಯವಾಗಿ ಮುಗಿಸುವ ಹುನ್ನಾರ ಮಾಡುತ್ತಿದ್ದಾರೆ ಎಂದು ಆರೋಪಿಸಿದರು. ಮುಡಾ ಮತ್ತು ಮಹರ್ಷಿ ವಾಲ್ಮೀಕಿ ನಿಗಮದ ವಿವಾದದಲ್ಲಿ ಸಿದ್ದರಾಮಯ್ಯ ಅವರ ಹೆಸರನ್ನು ತಳಕು ಹಾಕಲಾಗುತ್ತಿದೆ.

ಆದರೆ ಮುಖ್ಯಮಂತ್ರಿ ಅವರೇ ತನಿಖಾ ಆಯೋಗ ರಚಿಸಿದ್ದರೂ ರಾಜ್ಯ ಸರ್ಕಾರವನ್ನು ಅಸ್ಥಿರಗೊಳಿಸುವುದು, ಸಿದ್ದರಾಮಯ್ಯ ಅವರನ್ನು ದುರ್ಬಲಗೊಳಿಸುವ ಕುತಂತ್ರಗಳು ನಡೆಯುತ್ತಲೇ ಇದೆ ಎಂದು ಕಿಡಿಕಾರಿದರು.

# ಹಗರಣಗಳ ತನಿಖೆಗೆ ವಿಶೇಷ ಕೋರ್ಟ್ ಸ್ಥಾಪನೆಗೆ ಒತ್ತಾಯ

## ರಾಜ್ಯದ ಮರ್ಯಾದೆಯನ್ನು ರಾಷ್ಟಮಟ್ಟದಲ್ಲಿ ಹಾಳು ಮಾಡುತ್ತಿರುವ ಅನಕ್ಷರಸ್ಥ ರಾಜಕೀಯ ಪಕ್ಷಗಳ ವಿರುದ್ಧ ಆಕ್ರೋಶ

• ಉದಯವಾಹಿನಿ ಕೋಲಾರ

ರಾಜ್ಯದಲ್ಲಿ ತಾಂಡವಾಡುತ್ತಿರುವ ಭ್ರಷ್ಟಚಾರ ಹಗರಣಗಳನ್ನು ತನಿಖೆ ಮಾಡಲು ವಿಶೇಷ ನ್ಯಾಯಾಧೀಶರ ನ್ಯಾಯಾಲಯವನ್ನು ಸ್ಥಾಪನೆ ಮಾಡಿ ಜನ ಸಾಮಾನ್ಯರ ನಂಬಿಕೆಯನ್ನು ಉಳಿಸುವಂತೆ ರೈತ ಸಂಘದ ಮಹಿಳಾ ಜಿಲ್ಲಾಧ್ಯಕ್ಷೆ ಎ.ನಳಿನಿಗೌಡ ರಾಷ್ಟ್ರಪತಿರವನ್ನು ಒತ್ತಾಯಿಸಿದರು.

ಗ್ರಾಮೀಣ ಪ್ರದೇಶಗಳ ಕೂಲಿಕಾರ್ಮಿಕರ ಸಮಸ್ಯೆಗಳ ಬಗ್ಗೆ ಪ್ರಗತಿಪರ ಬಂಗವಾದಿ ನಾಗರಾಜ್ ರವರ ತೋಟದಲ್ಲಿ ಚರ್ಚೆ ಮಾಡಿ ಪತ್ರಿಕಾ ಹೇಳಿಕೆ ನೀಡಿ ಮಾತನಾಡಿದ ಅವರು ಪ್ರಜೆಗಳಿಂದ ಪ್ರಜೆಗಳಿಂದ ಪ್ರಜೆಗಳಿಗಾಗಿ,ಪ್ರಜೆಗಳಿಗೋಸ್ಕರ ಚುನಾಯಿತರಾದ ಜನಪ್ರತಿನಿದಿಗಳು ಜನಸಾಮಾನ್ಯರ ಸಮಸ್ಯೆಗಳನ್ನು ಮರೆತು, ಸಂವಿಧಾನದ ಆಶಯಗಳಂತೆ ನಡೆದುಕೊಳ್ಳದೆ ಜನ, ರೈತ, ಕೂಲಿಕಾರ್ಮಿಕ ವಿರೋದಿ ನೀತಿಗಳನ್ನು ಅನುಸರಿಸಿ ಸಮಸ್ಯೆಗಳಿಗೆ ಸ್ಪಂದಿಸದೆ ಜನರ ತೆರಿಗೆ ಹಣದಲ್ಲಿ ಉಚಿತ ಮನರಂಜನೆಯನ್ನು ಪಡೆದು ರಾಜ್ಯದ ಮರ್ಯಾದೆಯನ್ನು ರಾಷ್ಟಮಟ್ಟದಲ್ಲಿ ಹಾಳು ಮಾಡುತ್ತಿರುವ ಅನಕ್ಷರಸ್ಥ ರಾಜಕೀಯ ಪಕ್ಷಗಳ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು.

ಮುಡ ಹಾಗೂ ವಾಲ್ಮಿಕಿ ನಿಗಮದ ಹಗರಣದ ಸುಳಿಯಲ್ಲಿ ಸಿಲುಕಿ ಪ್ರತಿನಿತ್ಯ ಅದೇ ಕನಸಿನಲ್ಲಿ ಕಾಲಹರಣ ಮಾಡುತ್ತಿರುವ ಆಡಳಿತ ಪಕ್ಷದ ಮುಖ್ಯಮಂತ್ರಿಗಳು ಹಗರಣವನ್ನು ತನಿಖೆ ಮಾಡಿ ಸರ್ಕಾರ ಉರುಳಿಸಿ ಮತ್ತೆ ಅಧಿಕಾರ ಹಿಡಿಯುವ ದುರಾಸೆಯಲ್ಲಿ ಆಡಳಿತ ವಿರೋದಿ ಎನ್.ಡಿ.ಎ ಪಕ್ಷಗಳು ಇದರ ಮದ್ಯೆ ಮೂಲಭೂತ ಸೌಕರ್ಯಗಳಿಂದ ವಂಚಿತವಾಗಿರುವ ರಾಜ್ಯದ ಜನತೆ ಕಣ್ಣಿದ್ದು ಕುರುಡರಂತೆ ಮಾತಿದ್ದು, ಮೂಕರಂತೆ ವರ್ತನೆ ಮಾಡುವ ಜೊತೆಗೆ ಯಾವ ಪಕ್ಷವೂ ರೈತರ ದಲಿತರ ಕೂಲಿಕಾರ್ಮಿಕರ ಸಮಸ್ಯೆಗಳು ಬಂದಾಗ ಆಯಾ ಜಿಲ್ಲೆಯಿಂದ ಪಾದಯಾತ್ರೆ ಮಾಡಿದಂತ ಜನರ ಸಮಸ್ಯೆಗೆ ಏಕೆ ಸ್ಪಂದಿಸುತ್ತಿಲ್ಲ ಎಂದು ಮೂರು ಪಕ್ಷಗಳಿಗೆ ಪ್ರಶ್ನಿಸಿದರು.

ನಿಷ್ಠಾವಂತ ಪ್ರಮಾಣಿಕ ಅಧಿಕಾರಿಗಳಿಗೆ ಸರ್ಕಾರಗಳಲ್ಲಿ ಭದ್ರತೆ ಇಲ್ಲ ಅಕ್ಷರಸ್ಥರು ಅನಕ್ಷರಸ್ಥರ ರಾಜಕೀಯ ವ್ಯಕ್ತಿಗಳ ಒತ್ತಡಕ್ಕೆ ಮಣಿದು ಜನರ ಹಣವನ್ನು ನಕಲಿ ದಾಖಲೆ ಸೃಷ್ಠಿಸಿ ರಾಜಕಾರಣಿಗಳಿಗೆ ನೀಡಿ ಕಡೆಯದಾಗಿ ಮಾನ ಮಾರ್ಯದೆಗೆ ಅಂಜಿ ತನ್ನ ಜೀವವನ್ನು ಕಳೆದುಕೊಂಡು ಕುಟುಂಬಗಳನ್ನು ಬೀದಿ ಪಾಲು ಮಾಡುವ ಜೊತೆಗೆ ಸರ್ಕಾರಿ ಅಧಿಕಾರಿಗಳ ವರ್ಗಾವಣೆ ದಂದೆ ಎಂಬುದು ನಿರಂತರವಾಗಿ ನಡೆಯುತ್ತಿದ್ದರೂ ಪ್ರಕರಣವನ್ನು ಗಂಬೀರವಾಗಿ ಪರಿಗಣಿಸದೆ ಇರುವುದು ಹದಗೆಟ್ಟಿರುವ ಕಾನೂನು ಸುವ್ಯವಸ್ಥೆಗೆ ಹಿಡಿದಂತ ಕೈಗನ್ನಡಿಯಾಗಿದೆ ಎಂದು ಉದಾಹರಣೆ ನೀಡಿದರು.

> ರಾಜ್ಯದಲ್ಲಿ ಅತಿವೃಷ್ಠಿ, ಅನಾವೃಷ್ಠಿಯಿಂದ ಒಂದು ಭಾಗ ಜನ ಸಾಮಾನ್ಯರ ಬದುಕು ಬೀದಿಗೆ ಬೀಳುತ್ತಿದ್ದರೆ ಮತ್ತೊಂದು ಭಾಗದಲ್ಲಿ ಮಳೆಯಿಲ್ಲದೆ ಜಾನುವಾರುಗಳಿಗೆ ನೀರು ಮೇವಿಲ್ಲದೆ ಪರದಾಡುವ ಜೊತೆಗೆ ಲಕ್ಷಾಂತರ ರೂ. ಬಂಡವಾಳ ಹಾಕಿ ಬೆಳೆದಿರುವ ಬೆಳೆಗಳಿಗೆ ರೋಗ ನಿಯಂತ್ರಣವಿಲ್ಲದೆ ಖಾಸಗಿ ಸಾಲಕ್ಕೆ ಸಿಲುಕಿ ಪರದಾಡುವ ಜೊತೆಗೆ ಸಾಲ ತೀರಿಸಲಾಗದೆ ರಾಜ್ಯದಲ್ಲಿ ಸಾವಿರಾರು ಜನ ರೈತರು ಆತ್ಮಹತ್ಯೆ ಮಾಡಿಕೊಳ್ಳುತ್ತಿದ್ದರೂ ಸಮಸ್ಯೆಗಳನ್ನು ಗಂಭೀರವಾಗಿ ಪರಿಗಣಿಸದೆ ಇರುವುದು ರಾಜ್ಯದ ಜನರಿಗೆ ಮಾಡಿದ ರಾಜಕಾರಣಿಗಳ ಮಹಾದ್ರೋಹ ಎಂದು ಅಸಮಾಧಾನ ವ್ಯಕ್ತಪಡಿಸಿದರು
> 
> -ಎ.ನಳಿನಿಗೌಡ, ಜಿಲ್ಲಾಧ್ಯಕ್ಷೆ


ಉದಯವಾಹಿನಿ ಚಿತ್ರ

### ಭ್ರಷ್ಟಚಾರ ತನಿಖೆ ಮಾಡಿ

ರಾಷ್ಟಪತಿಗಳು ರಾಜ್ಯದ ಹಗರಗಳು ಭ್ರಷ್ಟಚಾರ ತನಿಖೆ ಮಾಡಿ ಜನ ಸಾಮಾನ್ಯರು ಪ್ರಜಾ ವ್ಯವಸ್ಥೆ ಮೇಲೆ ಇಟ್ಟಿರುವ ನಂಬಿಕೆ ಉಳಿಯಬೇಕಾದರೆ ಕೂಡಲೇ ವಿಶೇಷ ನ್ಯಾಯಾದೀಶರ ನ್ಯಾಯಾಲಯ ಸ್ಥಾಪನೆ ಮಾಡುವ ಮುಖಾಂತರ ಪ್ರಜಾ ಗಣತಂತ್ರವನ್ನು ಉಳಿಸಬೇಕೆಂದು ಪತ್ರಿಕಾ ಹೇಳಿಕಾ ಮುಖಾಂತರ ಕೂಲಿ ಕಾರ್ಮಿಕರೊಂದಿಗೆ ಒತ್ತಾಯಿಸಿದರು.

**ನಿಷ್ಠಾವಂತ ಅಧಿಕಾರಿಗಳಿಗೆ ಸರ್ಕಾರದಲ್ಲಿ ಭದ್ರತೆ ಇಲ್ಲ**

## ಮಿನಿ ನ್ಯೂಸ್

### ಮಗಳ ಶವವನ್ನಿಟ್ಟುಕೊಂಡು ತಂದೆಗಾಗಿ ಕಾದು ಕುಳಿತ ಕುಟುಂಬ

• ಉದಯವಾಹಿನಿ ಮೈಸೂರು

ಸ್ನೇಹಿತರ ಜೊತೆ ಸ್ಕೂಟರ್‌ನಲ್ಲಿ ಹೋಗುತ್ತಿದ್ದಾಗ ಡಿವೈಡರ್‌ಗೆ ಡಿಕ್ಕಿ ಹೊಡೆದು ಯುವತಿ ಮೃತಪಟ್ಟಿದ್ದು, ಶವಸಂಸ್ಕಾರ ಮಾಡದೇ ಮನೆಬಿಟ್ಟು ಹೋದ ತಂದೆಯ ಬರುವಿಕೆಗಾಗಿ ಕುಟುಂಬ ಕಾಯುತ್ತಿರುವ ಮನಕಲುಕುವ ಘಟನೆ ನಗರದಲ್ಲಿ ನಡೆದಿದೆ. ನಗರದ ಕನಕಗಿರಿ ನಿವಾಸಿ ಕವನ ಮೃತಪಟ್ಟ ದುರ್ದೈವಿ. ಹೂಟಗಳ್ಳಿ ಸಮೀಪ ಸ್ನೇಹಿತರ ಜೊತೆ ಸ್ಕೂಟರ್‌ನಲ್ಲಿ ತೆರಳುತ್ತಿದ್ದಾಗ ಡಿವೈಡರ್‌ಗೆ ಡಿಕ್ಕಿ ಹೊಡೆದು ಕೆಳಗೆ ಬಿದ್ದ ಪರಿಣಾಮ ಯುವತಿ ಸ್ಥಳದಲ್ಲೇ ಮೃತಪಟ್ಟಿದ್ದಾಳೆ.

ಖಾಸಗಿ ಕಾಲೇಜೊಂದರಲ್ಲಿ ಅಂತಿಮ ವರ್ಷದ ಬಿಕಾಂ ಓದುತ್ತಿರುವ ಕವನ ಪ್ರತಿಭಾವಂತ ವಿದ್ಯಾರ್ಥಿನಿಯಾಗಿದ್ದಳು. ಕಳೆದ ಮೂರು ತಿಂಗಳ ಹಿಂದೆಯಷ್ಟೇ ಈಕೆಯ ತಂದೆ ನಾಗರಾಜ್ ಮನೆಬಿಟ್ಟು ಹೋಗಿದ್ದಾರೆ. ಅಪಘಾತದಲ್ಲಿ ಮಗಳು ಮೃತಪಟ್ಟಿದ್ದಾಳೆ. ನಿಮಗಾಗಿ ಮೃತದೇಹವನ್ನು ಇರಿಸಿಕೊಂಡಿದ್ದೇವೆ. ಯಾವುದೇ ಬೇಸರವಿದ್ದರೂ ಮರೆತು ಮನೆಗೆ ಬನ್ನಿ ಎಂದು ನೊಂದ ಕುಟುಂಬ ಸದಸ್ಯರು ಮಾಧ್ಯಮ ಹಾಗೂ ಸಾಮಾಜಿಕ ಜಾಲತಾಣದಲ್ಲಿ ಮನವಿ ಮಾಡಿದ್ದಾರೆ.ಅಂತ್ಯಕ್ರಿಯೆಗೆ ಮುನ್ನ ಕವನಳ ತಂದೆ ಮನೆಗೆ ಹಿಂದಿರುಗಲಿ ಎಂಬುದೇ ನಗರದ ಜನತೆಯ ಆಶಯವಾಗಿದೆ.

### ಗೌರವ ಡಾಕ್ಟರೇಟ್ ಬೇಡ: ಕಿಚ್ಚ ಸುದೀಪ್

• ಉದಯವಾಹಿನಿ ತುಮಕೂರು

ನಟ ಕಿಚ್ಚ ಸುದೀಪ್ ಗೌರವ ಡಾಕ್ಟರೇಟ್ ಪದವಿಯನ್ನು ತಿರಸ್ಕರಿಸಿ ಸುದ್ದಿಯಲ್ಲಿದ್ದಾರೆ. ಕಿಚ್ಚನ ಈ ನಡೆಗೆ ಎಲ್ಲರಿಂದ ಮೆಚ್ಚುಗೆ ವ್ಯಕ್ತವಾಗಿದೆ. ಕಿಚ್ಚ ಸುದೀಪ್ ಅವರು ಹೀರೋ ಆಗಿ ಗಮನ ಸೆಳೆದಿದ್ದಾರೆ. ಅವರು ಚಿತ್ರರಂಗಕ್ಕೆ ನೀಡಿದ ಕೊಡುಗೆ ತುಂಬಾನೇ ದೊಡ್ಡದು.

ಇದರ ಜೊತೆಗೆ ಅವರು ಸಾಕಷ್ಟು ಸಮಾಜಮುಖಿ ಕೆಲಸವನ್ನು ಕೂಡ ಮಾಡುತ್ತಿದ್ದಾರೆ. ಸುದೀಪ್ ಅವರ ಒಳ್ಳೆಯ ಕೆಲಸವನ್ನು ಗಮನಿಸಿ ತುಮಕೂರು ವಿಶ್ವವಿದ್ಯಾಲಯ ಗೌರವ ಡಾಕ್ಟರೇಟ್ ನೀಡಲು ಮುಂದಾಗಿತ್ತು. ಆದರೆ, ಇದನ್ನು ಕಿಚ್ಚ ಸುದೀಪ್ ನಿರಾಕರಿಸಿದ್ದಾರೆ. ಕಿಚ್ಚ ಸುದೀಪ್ ಮಾದರಿ ನಡೆಗೆ ಎಲ್ಲರಿಂದ ಮೆಚ್ಚುಗೆ ವ್ಯಕ್ತವಾಗಿದೆ. ಕಿಚ್ಚ ಸುದೀಪ್‌ಗೆ ಗೌರವ ಡಾಕ್ಟರೇಟ್ ನೀಡಲು ತುಮಕೂರು ವಿವಿ ನಿರ್ಧರಿಸಿತ್ತು. ವಿವಿ ಸಿಂಡಿಕೇಟ್ ಸಭೆಯಲ್ಲಿ ಚರ್ಚೆ ನಡೆಸಿ ಸುದೀಪ್ ಗಮನಕ್ಕೆ ತರಲಾಗಿತ್ತು.ವಿವಿ ನಿರ್ಧಾರಕ್ಕೆ ಹೃದಯಪೂರ್ವಕ ಧನ್ಯವಾದ ತಿಳಿಸಿರುವ ಸುದೀಪ್ ಅವರು, ಇದನ್ನು ವಿನಮ್ರವಾಗಿ ನಿರಾಕರಿಸಿದ್ದಾರೆ. ಸಮಾಜದಲ್ಲಿ ಸೇವೆ ಮಾಡಿದ ನನಗಿಂತ ಹಿರಿಯರು ಇದ್ದಾರೆ. ಅವರಿಗೆ ಡಾಕ್ಟರೇಟ್ ನೀಡಿ ಎಂದು ಸುದೀಪ್ ಕೋರಿದ್ದಾರೆ.

### ಕುಮಾರಸ್ವಾಮಿ ಬ್ಲಾಕ್ ಮೇಲ್ ರಾಜಕಾರಣಿ: ಡಿ.ಕೆ ಶಿವಕುಮಾರ್

• ಉದಯವಾಹಿನಿ ಮದ್ದೂರು

ಕುಮಾರಸ್ವಾಮಿ ಬ್ಲಾಕ್ ಮೇಲ್ ರಾಜಕಾರಣಿ. ಪಾದಯಾತ್ರೆಗೆ ಜೆಡಿಎಸ್ ಬರುವುದಿಲ್ಲ ಎಂದು ಬಿಜೆಪಿಗೆ ಬೆದರಿಸಿದರು. ನಂತರ ಜೊತೆಯಲ್ಲಿ ಹೋದರು. ನನ್ನ ಮೇಲೆ ಆರೋಪ ಮಾಡುತ್ತಿರುವ ಅವರಿಗೆ ಧನ್ಯವಾದಗಳು ಎಂದು ಡಿಸಿಎಂ ಡಿ.ಕೆ ಶಿವಕುಮಾರ್ ಕಿಡಿಕಾರಿದ್ದಾರೆ. ವಾಲ್ಮೀಕಿ ನಿಗಮದ ಹಗರಣವನ್ನು ಹೈಕಮಾಂಡಿಗೆ ಕಳುಹಿಸಲಾಗಿದೆ ಎನ್ನುವ ವಿಜಯೇಂದ್ರ ಅವರ ಆರೋಪದ ಬಗ್ಗೆ ಕೇಳಿದಾಗ ಅವರ ತಂದೆ ರಾಜಿನಾಮೆಗೆ ಕಾರಣನಾದ ವ್ಯಕ್ತಿ ಆತ. ಮೊದಲ ಬಾರಿಗೆ ಶಾಸಕರಾಗಿ, ಬಿಜೆಪಿಯ ರಾಜ್ಯಾಧ್ಯಕ್ಷರಾಗಿದ್ದಾರೆ. ಅದನ್ನು ಖುಷಿಯಾಗಿ ಅನುಭವಿಸಲಿ ಎಂದರು.



ಜನಾಂದೋಲನ ಯಾತ್ರೆಯನ್ನು ಬಿಜೆಪಿ ಪಶ್ಚತ್ತಾಪ ಯಾತ್ರೆ ಎಂದು ಕರೆದಿದ್ದಾರೆ ಎನ್ನುವ ಬಗ್ಗೆ ಕೇಳಿದಾಗ ಅವರದ್ದು ನಿಜವಾದ ಪಶ್ಚತ್ತಾಪ ಯಾತ್ರೆ ಕರ್ನಾಟಕದ ಹೆಸರು ಹಾಳು ಮಾಡಿದರು. ಭ್ರಷ್ಟರಾಜ್ಯವೆಂದು ಕೆಟ್ಟ ಹೆಸರು ತಂದರು. ನಾವೀಗ ಅದನ್ನು ಶುದ್ದೀಕರಣ ಮಾಡುತ್ತಿದ್ದೇವೆ ಎಂದು ಹೇಳಿದರು. ರಾಜ್ಯಪಾಲರ ತೀರ್ಮಾನ ಹಾಗೂ ಅವರ ಮುಂದಿನ ನಡೆ ಬಗ್ಗೆ ಕೇಳಿದಾಗ ನೆಲದ ಕಾನೂನಿಗೆ ರಾಜ್ಯಪಾಲರು ಗೌರವ ನೀಡುತ್ತಾರೆ ಎಂದು ಭಾವಿಸಿರುವೆ. ಸಿಎಂ ಅವರಿಗೆ ನೋಟಿಸ್ ನೀಡುವ ಕೆಲಸಕ್ಕೆ ಕೈ ಹಾಕುವುದಿಲ್ಲ ಎಂದು ಭಾವಿಸಿರುವೆ. ರಾಜ್ಯಪಾಲರು ನಮ್ಮ ಸಲಹೆ ಕೇಳುತ್ತಾರೆ ಎಂದು ಭಾವಿಸಿದ್ದೇವೆ. ಇದಾಗದಿದ್ದರೆ ನಮ್ಮಬೇರೆ ಪ್ರಯತ್ನ ಮಾಡುತ್ತೇವೆ ಎಂದರು. ಪಾದಯಾತ್ರೆ ಬಗ್ಗೆ ಹಾಗೂ ನಡೆಸುತ್ತಿರುವವರಿಗೆ ನಿಮ್ಮ ಸಂದೇಶವೇನು ಎಂದಾಗ ಶುಭವಾಗಲಿ. ಪಾದಯಾತ್ರೆಯ ಖುಷಿಯನ್ನು ಅನುಭವಿಸಲಿ. ಪಾದಯಾತ್ರೆಯನ್ನು ಗಂಭೀರವಾಗಿ ಪರಿಗಣಿಸಿಯೇ ಇಲ್ಲ ಎಂದು ಹೇಳಿದರು.

### ಸ್ಪರ್ಧೆ ಶತಸಿದ್ಧ, ಪಕ್ಷ ಗೊತ್ತಿಲ್ಲ: ಯೋಗೇಶ್ವರ್

• ಉದಯವಾಹಿನಿ ಚನ್ನಪಟ್ಟಣ

ಮುಂಬರುವ ಚನ್ನಪಟ್ಟಣ ವಿಧಾನಸಭಾ ಕ್ಷೇತ್ರದ ಉಪ ಚುನಾವಣೆಯಲ್ಲಿ ನಾನು ಸ್ಪರ್ಧಿಸುವುದು ಶತಸಿದ್ಧ. ಆದರೆ ಯಾವ ಪಕ್ಷದಿಂದ ಸ್ಪರ್ಧಿಸಬೇಕು ಎಂಬ ತೀರ್ಮಾನವನ್ನು ಬೆಂಬಲಿಗರು, ಹಿತೈಷಿಗಳಿಗೆ ಬಿಟ್ಟಿದ್ದೇನೆ' ಎಂದು ವಿಧಾನ ಪರಿಷತ್ ಸದಸ್ಯ ಸಿ.ಪಿ.ಯೋಗೇಶ್ವರ್ ಹೇಳಿದ್ದಾರೆ. ಸಮಾನ ಮನಸ್ಕರ ವೇದಿಕೆ ಹಾಗೂ ಯೋಗೇಶ್ವರ್ ಅಭಿಮಾನಿ ಬಳಗ ತಾಲ್ಲೂಕಿನ ಕೂಡ್ಲೂರು ಬಳಿಯ ರೆಸಾರ್ಟ್‌ನಲ್ಲಿ ಹಮ್ಮಿಕೊಂಡಿದ್ದ ಸ್ವಾಭಿಮಾನಿ ಸಮಾವೇಶದ ಪೂರ್ವ ಭಾವಿ ಸಭೆಯಲ್ಲಿ ಅವರು ಮಾತನಾಡಿದರು.

'ಚನ್ನಪಟ್ಟಣ ಜನತೆ ಉಪ ಚುನಾವಣೆಯಲ್ಲಿ ನನ್ನ ಸ್ಪರ್ಧೆಯನ್ನು ಬಯಸುತ್ತಿದ್ದಾರೆ. ಹೋದ ಕಡೆಯಲ್ಲಿ ಜನ ಪಕ್ಷಾತೀತ ಮತ್ತು ಜಾತ್ಯತೀತವಾಗಿ ನಿಮ್ಮ ಜೊತೆ ಇರುತ್ತೇವೆ ಎಂಬ ಆಶ್ವಾಸನೆ ನೀಡುತ್ತಿದ್ದಾರೆ' ಎಂದರು. ಆಗಸ್ಟ್ 11ರಂದು ತಾಲ್ಲೂಕಿನಲ್ಲಿ 'ನಮ್ಮ ಶಾಸಕ, ನಮ್ಮ ಹಕ್ಕು' ಸ್ವಾಭಿಮಾನಿ ಸಮಾವೇಶ ನಡೆಯಲಿದೆ. ಈ ಸಮಾವೇಶ ತಾಲ್ಲೂಕಿನ ರಾಜಕೀಯ ಅಸ್ಮಿತೆ ಮತ್ತು ಸ್ವಾಭಿಮಾನ ತೀರ್ಮಾನಿಸುವ ರಾಜಕೀಯದ ದಿಕ್ಸೂಚಿ ಆಗಲಿದೆ. ನಾನು ರಾಜಕೀಯದಲ್ಲಿ ಮುಂದುವರೆಯುವ ಅಥವಾ ರಾಜಕೀಯ ಬಿಡುವ, ಚುನಾವಣೆಗೆ ಸ್ಪರ್ಧಿಸುವ ಇಲ್ಲವೇ ಹಿಂದೆ ಸರಿಯುವ ನಿರ್ಧಾರ ಆ ಸಭೆಯಲ್ಲಿ ಅಂತಿಮವಾಗಲಿದೆ' ಎಂದು ಹೇಳಿದರು. ನನ್ನ ರಾಜಕೀಯ ಜೀವನದಲ್ಲಿ ಬೆಂಬಲಿಗರು ಹಾಗೂ ಹಿತೈಷಿಗಳ ಪಾತ್ರ ಅಪಾರವಾಗಿದೆ. ಹಾಗಾಗಿ ಮುಂಬರುವ ಉಪ ಚುನಾವಣೆ ವಿಚಾರವಾಗಿ ಅಂದು ನನ್ನ ಬೆಂಬಲಿಗರು ಹಾಗೂ ಹಿತೈಷಿಗಳು ತೆಗೆದುಕೊಳ್ಳುವ ನಿರ್ಧಾರಕ್ಕೆ ನಾನು ಬದ್ಧವಾಗಿರುತ್ತೇನೆ' ಎಂದು ಘೋಷಿಸಿದರು.


ಉದಯವಾಹಿನಿ ಚಿತ್ರ

ಅಂತರಾಳದಿಂದ.. EDITORIAL

# ಜೆಡಿಎಸ್ ತನ್ನನ್ನು ತಾನು ಕಾಪಾಡಿಕೊಳ್ಳಲಿ

ಬಿಜೆಪಿ, ಜೆಡಿಎಸ್‌ಗಳು ದಿಲ್ಲಿ ನಾಯಕರ ಒತ್ತಡಕ್ಕೆ ಮಣಿದು ಆರಂಭಿಸಿರುವ ಪಾದಯಾತ್ರೆ ಮೈಸೂರನ್ನು ತಲುಪುವುದರೊಳಗೆ ಸಿದ್ದರಾಮಯ್ಯನವರ ನೇತೃತ್ವದ ಕಾಂಗ್ರೆಸ್ ಸರಕಾರ ಪತನಗೊಳ್ಳುತ್ತದೆ ಎಂದು ಬಿಜೆಪಿ ಅಧ್ಯಕ್ಷ ವಿಜಯೇಂದ್ರರ ತಂದೆ ಯಡಿಯೂರಪ್ಪ ಮತ್ತು ದೇವೇಗೌಡರ ಪುತ್ರ ಕುಮಾರಸ್ವಾಮಿ ಹೇಳಿದ್ದಾರೆ. ಒಲ್ಲದ ಮನಸ್ಸಿನಿಂದಲೇ ಬಿಜೆಪಿ ಜೊತೆಗೆ ಪಾದಯಾತ್ರೆ ಹೊರಟ ಕುಮಾರಸ್ವಾಮಿ ಅವರಿಗೆ ಎಲ್ಲಿ ತಮ್ಮ ಪಕ್ಷದ ಕೋಟೆಯನ್ನೇ ಬಿಜೆಪಿ ಕಬಳಿಸಿಬಿಡುವುದೋ ಎಂಬ ಆತಂಕದಿಂದ ಮೊದಲು ಪಾದಯಾತ್ರೆಯಲ್ಲಿ ಪಾಲ್ಗೊಳ್ಳಲು ನಿರಾಕರಿಸಿದ್ದರು. ಅದರೆ ದಿಲ್ಲಿ ಒತ್ತಡಕ್ಕೆ ಮಣಿದು ಹೆಜ್ಜೆ ಹಾಕುತ್ತಿದ್ದಾರೆ. ದೇಶದಲ್ಲಿ ಬಿಜೆಪಿ ಜೊತೆ ಮೈತ್ರಿ ಇಲ್ಲವೇ ಹೊಂದಾಣಿಕೆ ಮಾಡಿಕೊಂಡ ಯಾವ ಪಕ್ಷವೂ ಸುರಕ್ಷಿತವಾಗಿ ಉಳಿದಿಲ್ಲ ಎಂಬುದು ಕುಮಾರಸ್ವಾಮಿ ಅವರಿಗೂ ಗೊತ್ತಿದೆ. ತನ್ನ ಕೋಮುವಾದಿ ಅಜೆಂಡಾವನ್ನು ಜಾರಿಗೆ ತರಲು ಬಿಜೆಪಿಗೆ ರಾಜಕೀಯ ಅಧಿಕಾರ ಬೇಕು. ಬಹುತೇಕ ಹಿಂದೂಗಳೂ ಸೇರಿ ಸಮಸ್ತ ಭಾರತೀಯರು ಅದನ್ನು ತಿರಸ್ಕರಿಸುತ್ತಿರುವುದರಿಂದ ಪ್ರಾದೇಶಿಕ ಪಕ್ಷಗಳ ಜೊತೆಗೆ ಅದು ಸಂದರ್ಭಸಾಧಕ ಹೊಂದಾಣಿಕೆ ಮಾಡಿಕೊಳ್ಳುತ್ತದೆ. ಇದೊಂದು ರೀತಿ ಧೃತರಾಷ್ಟ್ರಾಲಿಂಗನ ಮೈತ್ರಿ ಮಾಡಿಕೊಂಡ ಪಕ್ಷವನ್ನೇ ನುಂಗಿ ನೀರು ಕುಡಿಯುವುದು ಬಿಜೆಪಿ ಚಾಳಿ. ಈಗ ದೇವೇಗೌಡರ ಜಾತ್ಯತೀತ ಎಂದು ಕರೆದುಕೊಳ್ಳುವ ಜನತಾ ಪಕ್ಷ ಬಿಜೆಪಿಯ ಬಲೆಗೆ ಬಿದ್ದಿದೆ. ಇದೊಂದು ರೀತಿ ಜೇಡರ ಬಲೆಯಲ್ಲದೆ ಬೇರೇನೂ ಅಲ್ಲ ಇದು ಗೊತ್ತಿದ್ದೂ ಕುಮಾರಸ್ವಾಮಿ ಅವರು ರಾಜಕೀಯ ಅಸ್ತಿತ್ವದ ಅನಿವಾರ್ಯತೆಗಾಗಿ ರಾಜಿ ಮಾಡಿಕೊಂಡಿದ್ದಾರೆ. ಮಹಾರಾಷ್ಟ್ರದಲ್ಲಿ ಶಿವಸೇನೆಯ ಜೊತೆಗೆ ಮೈತ್ರಿ ಮಾಡಿಕೊಂಡ ಬಿಜೆಪಿ ಆ ಪಕ್ಷವನ್ನೇ ಒಡೆದು ಏಕನಾಥ್ ಶಿಂದೆಯನ್ನು ಮುಂದಿಟ್ಟುಕೊಂಡು ಇನ್ನೊಂದು ನಕಲಿ ಶಿವಸೇನೆಯನ್ನೇ ಮಾಡಿತು. ಶರದ್ ಪವಾರ್ರ ರಾಷ್ಟ್ರವಾದಿ ಕಾಂಗ್ರೆಸ್ ಪಕ್ಷವನ್ನು ಒಡೆದು ಅಜಿತ್ ಪವಾರ್ ಬಣವನ್ನು ಸೃಷ್ಟಿಸಿ ಶಿಂದೆ ನಾಯಕತ್ವದಲ್ಲಿ ಸರಕಾರ ರಚಿಸಿತು. ಗೋವೆಯಲ್ಲಿ ವಿಧಾನ ಸಭಾ ಚುನಾವಣೆಯಲ್ಲಿ ಸೋತರೂ ಅತ್ಯಂತ ಹೆಚ್ಚು ಸ್ಥಾನಗಳನ್ನು ಗೆದ್ದಿದ್ದ ಕಾಂಗ್ರೆಸನ್ನು ಒಡೆದು ತನ್ನ ಸರಕಾರ ರಚಿಸಿತು. ಮಧ್ಯಪ್ರದೇಶದಲ್ಲೂ ಆಪರೇಶನ್ ಕಮಲದ ಮೂಲಕ ಸರಕಾರ ರಚಿಸಿತ್ತು ಕರ್ನಾಟಕದಲ್ಲೂ ಶಿವಮೊಗ್ಗದ ಸಮಾಜವಾದಿ ನಾಯಕ ಎಸ್.ಬಂಗಾರಪ್ಪನವರನ್ನು ಪಕ್ಷಕ್ಕೆ ಸೇರಿಸಿಕೊಂಡು ಅವರ ಪ್ರಾಬಲ್ಯದ ಮೂಲವನ್ನು ಪತ್ತೆ ಹಚ್ಚಿ ಅವರ ವೋಟ್ ಬ್ಯಾಂಕನ್ನು ಹೈಜಾಕ್ ಮಾಡಿತು. ಇಂತಹ ನೂರಾರು ಉದಾಹರಣೆಗಳಿವೆ. ಕರ್ನಾಟಕದಲ್ಲಿ ಇನ್ನಷ್ಟು ತಳವೂರಲು ಒಕ್ಕಲಿಗರ ಪ್ರಾಬಲ್ಯದ ಹಳೆಯ ಮೈಸೂರಿನ ಭಾಗವನ್ನು ಸ್ವಾಧೀನಪಡಿಸಿಕೊಳ್ಳುವುದು ಸಂಘಪರಿವಾರದ ಕಾರ್ಯತಂತ್ರವಾಗಿದೆ. ಈಗಾಗಲೇ ಟಿಪ್ಪು ಸುಲ್ತಾನ್, ಉರಿಗೌಡ-ನಂಜೆಗೌಡರಂಥ ಸುಳ್ಳು ಕಥಾನಕಗಳ ಮೂಲಕ ಅನೇಕ ಯುವಕರ ಮೆದುಳಿಗೆ ವಿಷಲೇಪನ ಮಾಡಲಾಗಿದೆ. ಆದರೂ ಸಂಪೂರ್ಣವಾಗಿ ಯಶಸ್ಸು ಸಾಧಿಸಲು ಆಗಿಲ್ಲ ಅದಕ್ಕಾಗಿ ಜೆಡಿಎಸ್ ಜೊತೆ ಹೊಂದಾಣಿಕೆ ಮಾಡಿಕೊಂಡು ಅದರ ಸಮಾಧಿಯ ಮೇಲೆ ಜನಾಂಗ ದ್ವೇಷದ ಬಾವುಟ ಹಾರಿಸಲು ಅದು ಮಸಲತ್ತು ನಡೆಸಿದೆ. ಹಳೆಯ ಮೈಸೂರು ಭಾಗದಲ್ಲಿ ಒಕ್ಕಲಿಗರು, ಉತ್ತರ ಕರ್ನಾಟಕದಲ್ಲಿ ಲಿಂಗಾಯತರನ್ನು ಗೆದ್ದು ಕೊಂಡರೆ ಗುಜರಾತಿನಂತೆ ಈ ರಾಜ್ಯವನ್ನು ಸುದೀರ್ಘವಾಗಿ ಆಳುವ ಲೆಕ್ಕಾಚಾರ ಹಾಕಿದ ಸಂಘಪರಿವಾರ ಉತ್ತರ ಕರ್ನಾಟಕದಲ್ಲಿ ವಚನ ದರ್ಶನ ಅಭಿಯಾನವೊಂದನ್ನು ಆರಂಭಿಸಿದ ಶರಣರ ವಚನಗಳನ್ನು ತಿರುಚಿ ವಚನಗಳ ಮೂಲ ವೈದಿಕ ಸಾಹಿತ್ಯ ಎಂದು ಪ್ರಚಾರ ನಡೆಸಿದೆ. ಅದರಲ್ಲಿ ಸಂಘದ ನಾಯಕರಾದ ದತ್ತಾತ್ರೇಯ ಹೊಸಬಾಳೆ, ಬಿ.ಎಲ್. ಸಂತೋಷ್ ಪಾಲ್ಗೊಂಡಿದ್ದಾರೆ. ಇದರ ವಿರುದ್ಧ ಕಲಬುರಗಿಯಲ್ಲಿ ಸಮಾನ ಮನಸ್ಕ ಸಂಘಟನೆಗಳಿಂದ ತೀವ್ರ ವಿರೋಧ ವ್ಯಕ್ತವಾಗಿದೆ.

> **ಮುಡಾ ಪ್ರಕರಣದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯನವರ ಮೇಲೆ ಆರೋಪಿಸಲು ಯಾವುದೇ ಸಾಕ್ಷಾಧಾರಗಳು ಇಲ್ಲ. ಆದರೂ ಮೋದಿ ಮತ್ತು ಅಮಿತ್ ಶಾ ಒತ್ತಡಕ್ಕೆ ಮಣಿದು ಪಾದಯಾತ್ರೆ ಹೊರಟವರು ತಮ್ಮ ಮುಖವನ್ನು ಕನ್ನಡಿಯಲ್ಲಿ ನೋಡಿಕೊಳ್ಳಲಿ ಮಾಜಿ ಮುಖ್ಯಮಂತ್ರಿ ಯಡಿಯೂರಪ್ಪ ಅವರು ಭ್ರಷ್ಟಾಚಾರದ ಆರೋಪದಡಿ ಜೈಲಿಗೆ ಹೋಗಿ ಬಂದವರು. (ಅವರ ಮೇಲೆ ಈಗಲೂ ಪೊಕ್ಸೊ ಪ್ರಕರಣವಿದೆ) ಅವರ ಪುತ್ರ ರಾಜ್ಯ ಬಿಜೆಪಿ ಅಧ್ಯಕ್ಷ ವಿಜಯೇಂದ್ರ ಅಪ್ಪ ಮುಖ್ಯಮಂತ್ರಿಯಾಗಿ ದ್ದಾಗ ಆರ್‌ಟಿಜಿಎಸ್ ಮೂಲಕ ಗುತ್ತಿಗೆದಾರರಿಂದ ಲಂಚ ಪಡೆದ ಆರೋಪವಿದೆ.**

ಇನ್ನು ಜನಾರ್ದನ ರೆಡ್ಡಿ(ಗಣಿ ಲೂಟಿ, ಸಿಬಿಐ, ಈಡಿ, ತನಿಖೆ-ನಾಲ್ಕುವರ್ಷ ಜೈಲು ವಾಸ, ಶ್ರೀರಾಮುಲು (ಗಣಿ ಲೂಟಿ), ಮುನಿರತ್ನನಕಲಿ ವೋಟರ್ ಐಡಿ ಹಗರಣದ ಆರೋಪಿ), ಆರ್. ಅಶೋಕ್ (ಮಾರ್ಕೋಪೋಲೋ ಬಸ್ ಖರೀದಿ ಹಗರಣ), ಎಚ್.ಡಿ. ಕುಮಾರಸ್ವಾಮಿ (ಭೂ ಹಗರಣದ ಬಗ್ಗೆ ಬಿಜೆಪಿಯೇ ಜಾಹೀರಾತು ನೀಡಿತ್ತು ಜೆಡಿಎಸ್ ಟಿಕೆಟ್ ಮಾರಾಟ ಆರೋಪವಿದೆ. ರೇವಣ್ಣರ ಇಡೀ ಕುಟುಂಬ ಅಪಹರಣ, ಅತ್ಯಾಚಾರದ ಆರೋಪದಲ್ಲಿ ಜೈಲು, ಕೋರ್ಟು ಅಲೆಯುತ್ತಿದೆ, ಡಾ. ಅಶ್ವತ್ಥನಾರಾಯಣ (ಪಿಎಸ್‌ಐ ನೇಮಕಾತಿ ಹಗರಣದ ಆರೋಪ) ಬಿಚ್ಚುತ್ತಾ ಹೋದರೆ ಇನ್ನಷ್ಟು ಹಗರಣಗಳು ಹೊರಗೆ ಬರುತ್ತವೆ ಅಷ್ಟೇ ಅಲ್ಲ ಕರ್ನಾಟಕದ ಬಿಜೆಪಿ ಒಡೆದ ಮನೆಯಾಗಿದೆ ವಿಜಯೇಂದ್ರರ ನೇತೃತ್ವದ ಪಾದಯಾತ್ರೆಯಿಂದ ಮುನಿಸಿಕೊಂಡ ಅನೇಕ ಹಿರಿಯ ಬಿಜೆಪಿ ನಾಯಕರು ಈ ಪಾದಯಾತ್ರೆಯಲ್ಲಿ ಪಾಲ್ಗೊಂಡಿಲ್ಲ. ಇದೆಲ್ಲ ಬಿಜೆಪಿ ಹೈ ಕಮಾಂಡ್ ಗೊತ್ತಿಲ್ಲವೆಂದಲ್ಲ.

ಅವರು ಮನಸ್ಸು ಮಾಡಿದರೆ ಪಾದಯಾತ್ರೆ ವಿರುದ್ಧ ಅಪಸ್ವರ ತೆಗೆದ ಬಸನಗೌಡ ಪಾಟೀಲ ಯತ್ನಾಳ್, ರಮೇಶ್ ಜಾರಕಿಹೊಳಿ ಮುಂತಾದವರ ಬಾಯಿ ಮುಚ್ಚಿಸಬಹುದು. ಆದರೆ ಬಿಕ್ಕಟ್ಟು ಬಗೆಹರಿಯುವುದು ಅವರಿಗೂ ಬೇಕಾಗಿಲ್ಲ. ಸಂತೋಷ್ ಬಣಕ್ಕೆ ಯಡಿಯೂರಪ್ಪ, ವಿಜಯೇಂದ್ರರನ್ನು ಕಂಡರೆ ಆಗುವುದಿಲ್ಲ. ವಿಧಾನಪರಿಷತ್ತಿನಲ್ಲಿ ತನ್ನನ್ನು ಕಡೆಗಣಿಸಿ ಛಲವಾದಿ ನಾರಾಯಣಸ್ವಾಮಿಯವರಿಗೆ ಪ್ರತಿಪಕ್ಷ ನಾಯಕನ ಸ್ಥಾನಕೊಟ್ಟಿರುವುದಕ್ಕೆ ಸಿ.ಟಿ.ರವಿಯವರಿಗೆ ಅಸಮಾಧಾನ ಉಂಟಾಗಿರುವುದು ಗುಟ್ಟಿನ ವಿಷಯವಲ್ಲ ಬಿಜೆಪಿ-ಜೆಡಿಎಸ್‌ಗೆ ಕಾಂಗ್ರೆಸ್ ಸರಕಾರವನ್ನು ಟೀಕಿಸಲು ಬೇಕಾದಷ್ಟು ವಿಷಯಗಳಿದ್ದವು.ಇತ್ತೀಚಿನ ಮಳೆ, ನೆರೆ ಹಾವಳಿ, ಭೂ ಕುಸಿತದಂತಹ ವಿಷಯಗಳ ಬಗ್ಗೆ ತರಾಟೆಗೆ ತೆಗೆದುಕೊಳ್ಳಬಹುದಿತ್ತು ರಾಜ್ಯದ ಜನ ಪ್ರವಾಹದಿಂದ ಬೀದಿಗೆ ಬಿದ್ದಿರುವಾಗ ಇವರು ನಡೆಸಿದ ಪ್ರಹಸನ ಅಪಹಾಸ್ಯಕರ.

# ಪರಮಾಣು ಬಳಕೆಯ ಕರಾಳ ಮುಖದ ನಿದರ್ಶನ: ಅದೇ ಅಂತಿಮವಾಗಲಿ...



ಎನ್.ಎನ್.ಕಬ್ಬೂರ
• ಉದಯವಾಹಿನಿ, ವಿಶೇಷ

ಪ್ರತಿ ಆಗಸ್ಟ್ 6 ರಂದು ಹಿರೋಷಿಮಾ ದಿನವನ್ನು ಶಾಂತಿ ರಾಜಕಾರಣಕ್ಕಾಗಿ ಪ್ರತಿಪಾದಿಸಲು ಮತ್ತು ಹಿರೋಷಿಮಾದ ಮೇಲಿನ ಪರಮಾಣು ಬಾಂಬ್ ದಾಳಿಯ ದುರಂತ ಪರಿಣಾಮಗಳ ಬಗ್ಗೆ ಜಾಗೃತಿ ಮೂಡಿಸಲು ಒಂದು ಗಂಭೀರ ಸಂದರ್ಭವಾಗಿ ಆಚರಿಸಲಾಗುತ್ತದೆ.

ಎರಡನೆಯ ಮಹಾಯುದ್ಧದ ಸಮಯದಲ್ಲಿ ಯುನೈಟೆಡ್ ಸ್ಟೇಟ್ಸ್ ಜಪಾನಿನ ನಗರವಾದ ಹಿರೋಷಿಮಾದ ಮೇಲೆ 6 ಆಗಸ್ಟ್ 1945 ರಂದು ಪರಮಾಣು ಬಾಂಬ್ ಅನ್ನು ಬೀಳಿಸಿತು, ಇದು 20,000 ಕ್ಕೂ ಹೆಚ್ಚು ಸೈನಿಕರು ಸುಮಾರು 70,000-126,000 ನಾಗರಿಕರ ಸಾವಿಗೆ ಕಾರಣವಾಯಿತು. ಮೂರು ದಿನಗಳ ನಂತರ ಜಪಾನಿನ ಮತ್ತೊಂದು ನಗರ ನಾಗಸಾಕಿಯ ಮೇಲೆ ಇದೇ ರೀತಿಯ ಬಾಂಬ್ ಅನ್ನು ಬೀಳಿಸಲಾಯಿತು, ಇದು ಇನ್ನೂ 80000 ಸಾವುಗಳಿಗೆ ಕಾರಣವಾಯಿತು. ಇದು ವಿಶ್ವದಲ್ಲಿ ಪರಮಾಣು ಶಸ್ತ್ರಾಸ್ತ್ರಗಳ ಬಳಕೆಯ ಮೊದಲ ಮತ್ತು ಏಕೈಕ ನಿದರ್ಶನವಾಗಿದೆ.

**ಗುರಿ ಮತ್ತು ಉದ್ದೇಶ:** ಈ ದಿನವು ಸಂಗೀತ, ನೃತ್ಯ ಮತ್ತು ಹಾಡುಗಳನ್ನು ಒಳಗೊಂಡಂತೆ ಹಲವಾರು ಕಾರ್ಯಕ್ರಮಗಳನ್ನು ಒಳಗೊಂಡಿದೆ, ಎಲ್ಲವೂ ಶಾಂತಿ ರಾಜಕೀಯವನ್ನು ಉತ್ತೇಜಿಸುವ ಮತ್ತು ಬಾಂಬ್ ದಾಳಿಯಲ್ಲಿ ತಮ್ಮ ಪ್ರಾಣ ಕಳೆದುಕೊಂಡವರ ಸ್ಮರಣೆಯನ್ನು ಗೌರವಿಸುವ ಗುರಿಯನ್ನು ಹೊಂದಿದೆ. ಮಹಾಯುದ್ಧವನ್ನು ಮುಗಿಸುವ ಅಮೆರಿಕಾದ ಅಧ್ಯಕ್ಷ ಟ್ರೂಮನ್ನನ ಆಶಯ ಮತ್ತು ಮಿತ್ರರಾಷ್ಟ್ರಗಳ ಆಗ್ರಹವನ್ನು ಅಂದಿನ ಜಪಾನಿನ ಪ್ರಧಾನಿ ಕಂಟಾಕೋ ಸುಜೂಕಿ ನಿರ್ಲಕ್ಷಿಸಿಬಿಟ್ಟ. ಹಾಗಾಗಿ ಅಮೆರಿಕಾ ತನ್ನ ಬಾಂಬ್ ದಾಳಿಗಾಗಿ ಒಂದು ಲಕ್ಷಕ್ಕೂ ಹೆಚ್ಚು ಸೈನಿಕರನ್ನು ಹೊಂದಿದ್ದು, ಅಗಾಧ ಮದ್ದು ಗುಂಡುಗಳನ್ನು ಶೇಖರಿಸಿದ್ದ ಜಪಾನಿನ ಮಿಲಿಟರಿ ಕೇಂದ್ರವಾದ ಹಿರೋಷಿಮಾ ನಗರವನ್ನು ಆಯ್ಕೆ ಮಾಡಿಕೊಂಡಿತು. ಆಗಸ್ಟ್ 6, 1945ರ ಬೆಳಿಗ್ಗೆ 8.16ರ ಸಮಯದಲ್ಲಿ ಭೀಕರ ಶಬ್ದದೊಂದಿಗೆ 20,000 ಟನ್ನಿಗೂ ಅಧಿಕ ಶಕ್ತಿಯೊಂದಿಗೆ ಸ್ಫೋಟ ವಿಚ್ಛಿದ್ರಕಾರಕ ರೂಪದಲ್ಲಿ ಸಂಭವಿಸಿತು. ಕ್ಷಣಾರ್ಧದಲ್ಲೇ ರಾಕ್ಷಸ ಗಾತ್ರದ ಹಣ ಬೆಯಾಕಾರದ 40,000 ಅಡಿ ಎತ್ತರದ ಮೋಡ ಸೃಷ್ಟಿಯಾಗಿ ಹಿರೋಷಿಮಾದ ಸುಮಾರು 10 ಚದರ ಮೈಲಿ ಸುತ್ತಳತೆಯ ಪ್ರದೇಶದಲ್ಲಿದ್ದ ಯಾವ ಮನೆಯೂ ಉಳಿಯಲಿಲ್ಲ. 68,000 ಮಂದಿ ಒಮ್ಮೆಗೆ ಬೆಂದು ಹೋದರು. ಅಗಾಧ ಉಷ್ಣತೆಯ ಪರಿಣಾಮದಿಂದಾಗಿ ಕೆಲಕಾಲದಲ್ಲೇ ಕರಿ ನೀರಿನ ಮಳೆ ಹಿರೋಷಿಮಾದಲ್ಲಿ ಸುರಿಯಿತು.



> **ವಿಮರ್ಶೆಯ ಆತ್ಮಾವಲೋಕನ**
>
> **6ನೇ ಅಗಸ್ಟ 1945 ವಿಶ್ವದ ಚರಿತ್ರೆಯಲ್ಲೊಂದು ಕರಾಳ ದಿನ. ವಿಜ್ಞಾನಿಯ ಸಾಮರ್ಥ್ಯ ವಿನಾಶದ ಹಾದಿ ಹಿಡಿದ ದಿನ. ಯಾವನೋ ಒಬ್ಬ ಅಧಿಕಾರ ಶಾಹಿ ಯುದ್ಧ ಬೇಕೇ ಬೇಕು ಎಂದು ಪಟ್ಟು ಹಿಡಿದದ್ದಕ್ಕೆ ಒಂದು ದೇಶ ಮತ್ತು ಇಡೀ ಜನಾಂಗವೇ ಬೆಲೆ ತೆತ್ತ ದಿನ. ಮನುಷ್ಯನ ಕೈನಲ್ಲಿ ವಿನಾಶಕಾರಕವಾದ ಅಸ್ತ್ರ ಇದ್ದರೆ ಅದನ್ನು ಹೆಚ್ಚು ದಿನ ಪ್ರಯೋಗಿಸದೆ ಆತ ಸುಮ್ಮನಿರಲಾರ ಎಂಬುದು ದೃಢಪಟ್ಟ ದಿನ.**

> **ನಾಗಸಾಕಿ ಪಟ್ಟಣದ ಮೇಲೆ ಆ. 9ರಂದು ದಾಳಿ**

ಈ ದಾಳಿಯ ನಂತರ ಟ್ರೂಮನ್ನನ ದಾಹಾಗ್ನಿಯೇನೂ ಹಿಂಗಲಿಲ್ಲ. ಹಿರೋಷಿಮಾ ಬೆಂಕಿಯ ಜೊತೆಯಲ್ಲಿನ ಆಂತರಿಕ ಬೇಗೆಯಲ್ಲಿ ಬೇಯುತ್ತಿದ್ದ ಜಪಾನ್ ಶರಣಾಗತಿ ಪ್ರಕಟಿಸಲಿಲ್ಲ ಎಂಬ ಕಾರಣಕ್ಕಾಗಿ ಅಮೆರಿಕ, ನಾಗಸಾಕಿ ಪಟ್ಟಣದ ಮೇಲೆ ಆಗಸ್ಟ್ 9ರಂದು ದಾಳಿ ನಡೆಸಿ ಮತ್ತೆ 60,000 ಜನರನ್ನು ಭಸ್ಮ ಮಾಡಿ ಹಾಕಿತು. ಈ ಘಟನೆಗಳಲ್ಲಿ ಒಟ್ಟಾರೆಯಾಗಿ ಅಣು ವಿಕಿರಣಕ್ಕೆ ಸಿಕ್ಕಿ ತೊಂದರೆಗೊಳಪಟ್ಟವರು ಸುಮಾರು ಒಂದು ಲಕ್ಷ ನಲವತ್ತು ಸಾವಿರ ಜನಕ್ಕೂ ಹೆಚ್ಚು.

ಈ ಘಟನೆಯ ನಂತರದಲ್ಲಿ ಎರಡನೆಯ ಮಹಾ ಯುದ್ಧವೇನೋ ಮುಕ್ತಾಯವಾಯಿತು. ಆದರೆ ಮನುಷ್ಯ ರಾಷ್ಟ್ರಗಳು ಇದರಿಂದ ಪಾಠವನ್ನೇನೂ ಕಲಿತಿಲ್ಲ. ಅಂದು ಬಾಂಬ್ ಹಾಕಿದ ಅಮೆರಿಕಾ, ನಾನು ನಿಮಗೆಲ್ಲಾ ಮಾನಿಟರ್. ನಾನು ಬಾಂಬ್ ಇಟ್ಕೋಬಹುದು. ನೀವೆಲ್ಲಾ ಜವಾಬ್ದಾರಿ ಇರೋ ವ್ರಲ್ಲ, ನೀವು ಇಟ್ಕೋಬೇಡಿ ಅಂತ ಬಾಯಿ ಮಾತಲ್ಲಿ ಹೇಳ್ಕೊಂಡು ಕ್ಷುದ್ರವಾಗಿ ಬದುಕ್ತಾ, ಹಿಂದಿನ ಬಾಗಿಲಿನಿಂದ ತನ್ನ ಬಾಂಬ್ ತಂತ್ರಜ್ಞಾನವನ್ನು ಮಾರಿ ಕಾಸು ಮಾಡೋ ಹೀನ ಬುದ್ಧಿಯನ್ನು ಮುಂದುವರೆಸುತ್ತಲೇ ಇದೆ. ಜಪಾನ್ ಕೆಲವರ್ಷದ ಹಿಂದೆ ಸುನಾಮಿ ಸಂದರ್ಭದಲ್ಲಿ ಸುನಾಮಿ ಕಷ್ಟ ತಡೆಯೋದಕ್ಕಿಂತ ಹೆಚ್ಚಿಗೆ ಅಣುವಿಕಿರಣ ಸೋರಿಕೆ ತಡೆಯೋಕೆ ತಿಪ್ಪರಲಾಗ ಹಾಕಿದ್ದು ಜಗಜ್ಜಾಹೀರಾಗಿದೆ.

ಚಿಂದಿ ಚಿಂದಿಯ ರಾಷ್ಟ್ರವಾದರೂ ಸೋವಿಯತ್ ರಷ್ಯಾ ಇನ್ನೂ ತನ್ನ ಯುದ್ಧ ತಂತ್ರಜ್ಞಾನದ ಪೊಗರು ಬಿಟ್ಟಿಲ್ಲ. ಮಧ್ಯ ಪ್ರಾಚ್ಯ ದೇಶಗಳು ತಮಗೆ ಪ್ರಕೃತಿ ದಯಪಾಲಿಸಿರುವ ಶ್ರೀಮಂತಿಕೆಯಿದ್ದೂ ಯಾವುದೋ ಮಣ್ಣುಹಂಟೆಯ ದುರಾಸೆಯಲ್ಲಿ ತಮ್ಮ ಮೇಲೆ ತಾವೇ ಬಾಂಬ್ ಹಾಕಿಕೊಳ್ಳತೊಡಗಿವೆ. ಯಾರನ್ನೂ ನಂಬದ ಚೀಣಾ ತನಗೆ ಲಭ್ಯವಾದ ಶ್ರೀಮಂತಿಕೆಯನ್ನು ಒಳಿತಿಗಾಗಿ ಉಪಯೋಗಿಸಿಕೊಳ್ಳದೆ ಪುಟ್ಟ ಪುಟ್ಟ ದೇ

### ಇತಿಹಾಸ

- ಐತಿಹಾಸಿಕ ಸನ್ನಿವೇಶವು 1945 ರಲ್ಲಿ, ಯುನೈಟೆಡ್ ಸ್ಟೇಟ್ಸ್ ಎರಡು ಪರಮಾಣು ಬಾಂಬ್‌ಗಳನ್ನು 'ದಿ ಲಿಟಲ್ ಬಾಯ್' ಮತ್ತು 'ದಿ ಫ್ಯಾಟ್ ಮ್ಯಾನ್' ಎಂದು ಹೆಸರಿಸಿದ್ದು, ಹಿರೋಷಿಮಾ ಮತ್ತು ನಾಗಸಾಕಿಯಲ್ಲಿ ಕ್ರಮವಾಗಿ ಆಗಸ್ಟ್ 6 ಮತ್ತು 9 ರಂದು ಸ್ಥಾಪಿಸಿತು.
- ಹಿರೋಷಿಮಾದ ಬಾಂಬ್ ದಾಳಿಯು ನಗರದ ನಾಗರಿಕ ಜನಸಂಖ್ಯೆಯ 39 ಪ್ರತಿಶತದಷ್ಟು ನಷ್ಟಕ್ಕೆ ಕಾರಣವಾಯಿತು.
- ಈ ದಿನಾಂಕವು 1945 ರಲ್ಲಿ ಪರಮಾಣು ಶಸ್ತ್ರಾಸ್ತ್ರದ ಸ್ಫೋಟದಿಂದಾಗಿ ಕ್ಷಣಾರ್ಧದಲ್ಲಿ ಸಾವಿರಾರು ಜೀವಗಳ ದುರಂತ ನಷ್ಟವನ್ನು ಗುರುತಿಸಿತು, ಹಿರೋಷಿಮಾ ಅಂತಹ ವಿನಾಶಕಾರಿ ಪರಮಾಣು ದಾಳಿಯನ್ನು ಅನುಭವಿಸಿದ ಮೊದಲ ನಗರವಾಗಿದೆ. ನಾವು ಈ ಘಟನೆಯ ವಾರ್ಷಿಕೋತ್ಸವವನ್ನು ಅಗಸ್ಟ 6 ರಂದು ಸ್ಮರಿಸುತ್ತೇವೆ.
- 1945 ರಲ್ಲಿ ಯುನೈಟೆಡ್ ಸ್ಟೇಟ್ಸ್ ಹಿರೋಷಿಮಾ ಮತ್ತು ನಾಗಾಸಾಕಿಯ ಪರಮಾಣು ಬಾಂಬ್ ಸ್ಫೋಟಗಳ ಸ್ಮರಣಾರ್ಥವಾಗಿ, ಐರ್ ಸ್ಕ್ವೇರ್‌ನಲ್ಲಿ ಗಾಲ್ವೇ ಅಲೈಯನ್ಸ್ ವಾರ್‌ನಲ್ಲಿ ವಾರ್ಷಿಕ ಕಾರ್ಯಕ್ರಮವನ್ನು ನಡೆಸಲಾಗುತ್ತದೆ.

# ಮೆಡಿಕಲ್ ಕಾಲೇಜುಗಳಲ್ಲಿ ವ್ಯಾಸ್ಕ್ಯುಲಾರ್ ವಿಭಾಗ ಪ್ರಾರಂಭ

• ಉದಯವಾಹಿನಿ, ಬೆಂಗಳೂರು



ಉದಯವಾಹಿನಿ ಚಿತ್ರ

ವ್ಯಾಸ್ಕ್ಯುಲಾರ್ ಸಮಸ್ಯೆಗಳನ್ನು ಪತ್ತೆ ಹಚ್ಚಲು ಸಾರ್ವಜನಿಕರಿಗೆ ಕೈಗೆಟುಕುವ ದರದಲ್ಲಿ ಚಿಕಿತ್ಸೆ ನೀಡಲು ಮುಂದಿನ ದಿನಗಳಲ್ಲಿ ರಾಜ್ಯದ ಎಲ್ಲಾ ಸರ್ಕಾರಿ ಮೆಡಿಕಲ್ ಕಾಲೇಜುಗಳಲ್ಲಿ ವ್ಯಾಸ್ಕ್ಯುಲಾರ್ ವಿಭಾಗ ಪ್ರಾರಂಭ ಮಾಡಲಾಗುವುದು ಎಂದು ವೈದ್ಯಕೀಯ ಶಿಕ್ಷಣ ಸಚಿವ ಡಾ.ಶರಣಪ್ರಕಾಶ್ ಪಾಟೀಲ್ ತಿಳಿಸಿದರು.

> **ಸಾರ್ವಜನಿಕರಿಗೆ ಕೈಗೆಟುಕುವ ದರದಲ್ಲಿ ಚಿಕಿತ್ಸೆ**

ಅವರು ವ್ಯಾಸ್ಕ್ಯುಲಾರ್ ಸೊಸೈಟಿ ಆಫ್ ಇಂಡಿಯಾ ಹಾಗೂ ವ್ಯಾಸ್ಕಾರ್ ವತಿಯಿಂದ ನಗರದ ಕಂಠೀರವ ಸ್ಟೇಡಿಯಂನಲ್ಲಿ ಆಯೋಜಿಸಲಾಗಿದ್ದ ವಾಕಥಾನ್ ಗೆ ಚಾಲನೆ ನೀಡಿ ಮಾತನಾದಡಿದರು.

ಈಗಾಗಲೇ ಬೆಂಗಳೂರು, ಮೈಸೂರಿನಲ್ಲಿ ವ್ಯಾಸ್ಕ್ಯುಲಾರ್ ವಿಭಾಗ ಯಶಸ್ವಿಯಾಗಿ ಕಾರ್ಯ ನಿರ್ವಹಿಸುತ್ತಿದೆ. ಕಲುಬುರುಗಿ, ಬೆಳಗಾವಿ ಹುಬ್ಬಳ್ಳಿಯಲ್ಲಿಯೂ ಆರಂಭವಾಗಲಿದ್ದು, ವಿಕ್ಟೋರಿಯಾ, ಸಂಜಯ್ ಗಾಂಧೀ ಆಸ್ಪತ್ರೆಯಲ್ಲಿಯೂ ವಿಭಾಗ ತೆರೆಯುವ ಉದ್ದೇಶವಿಟ್ಟುಕೊಂಡಿದ್ದೇವೆ ಎಂದರು. ವ್ಯಾಸ್ಕಾರ್ ಅಧ್ಯಕ್ಷರಾದ ಡಾ.ವೆಂಕಟೇಶ್ ರೆಡ್ಡಿ ಮಾತನಾಡಿ ಕಳೆದ ಮೂರು ದಶಕಗಳಿಂದ ವ್ಯಾಸ್ಕ್ಯುಲರ್ ಸರ್ಜನ್ ಅಸೋಸಿಯೇಷನ್ ನಿರಂತರ ಸೇವೆ ಸಲ್ಲಿಸುತ್ತಾ ಬಂದಿದ್ದು, ದಿವಂಗತ ಡಾ.ಎನ್.ಕೆ ಭಗವಾನ್ ದೂರದೃಷ್ಟಿ ಹಾಗೂ ಪ್ರಸ್ತುತ ಡಾ.ಕೆ.ಆರ್.ಸುರೇಶ್‌ರವರ ಮಾರ್ಗದರ್ಶನದಲ್ಲಿ ಸಹಸ್ರಾರು ಶಸ್ತ್ರಚಿಕಿತ್ಸೆಗಳ ಮೂಲಕ ಸಾವಿರಾರು ರೋಗಿಗಳು ಶಾಶ್ವತ ಅಂಗವಿಕಲರಾಗುವುದನ್ನು ತಪ್ಪಿಸಿರುವುದು ಹೆಮ್ಮೆಯ ಸಂಗತಿಯಾಗಿದ್ದು ವ್ಯಾಸ್ಕಾರ್ ಅರಿವು ಕಾರ್ಯಕ್ರಮ ನಿರಂತರವಾಗಿರಲಿದೆ ಎಂದು ಎಂದರು. ಕಂಠೀರವ ಸ್ಟೇಡಿಯಂನಿಂದ ಆರಂಭವಾದ ವಾಕಥಾನ್ ಕಸ್ತೂರ್ಬಾ ರಸ್ತೆ, ವಿಧಾನಸೌಧ, ನೃಪತುಂಗ ರಸ್ತೆ ಮುಖಾಂತರ ಕಂಠೀರವ ಸ್ಟೇಡಿಯಂನಲ್ಲಿ ಅಂತ್ಯಗೊಂಡಿತು. ರಾಜ್ಯದ ಸಾವಿರಕ್ಕೂ ಹೆಚ್ಚು ವೈದ್ಯರು, ವೈದ್ಯಕೀಯ ವಿದ್ಯಾರ್ಥಿ, ಶೂಶ್ರೂಷಕ ಸಿಬ್ಬಂಧಿ, ಸ್ವಯಂಸೇವಕರು ಉಪಸ್ಥಿತರಿದ್ದರು.

> **ಹಿರಿಯ ವ್ಯಾಸ್ಕ್ಯುಲಾರ್ ಸರ್ಜನ್ ಡಾ.ಕೆ.ಆರ್.ಸುರೇಶ್ ಮಾತನಾಡಿ ಹೃದಯಾಘಾತದಂತೆ(ಹಾರ್ಟ್ ಅಟ್ಯಾಕ್) ಲೆಗ್ ಅಟ್ಯಾಕ್ ಕೂಡ ಮನುಷ್ಯನಿಗೆ ಪ್ರಾಣಾಂತಿಕವಾಗಿದ್ದು, ಸೂಕ್ತ ಸಮಯದಲ್ಲಿ ಚಿಕಿತ್ಸೆ ನೀಡಿದಿದ್ದರೆ ಕಾಲು ಕತ್ತರಿಸುವ ಸಂದರ್ಭ ಉಂಟಾಗಿ ಜೀವಕ್ಕೆ ಹಾನಿಯಾಗಲಿದೆ. ಧೂಮಪಾನ, ಮಧುಮೇಹ ನಿಯಂತ್ರಣದಲ್ಲಿಟ್ಟುಕೊಳ್ಳುವುದು ಉತ್ತಮ. ನಡೆಯುವಾಗ ಕಾಲಿನಲ್ಲಿ ನೋವು ಕಂಡು ಬಂದರೆ, ಕಾಲಿನಲ್ಲಿ ಜೋಮು ಹಾಗೂ ತಂಪಿನಂತಹ ಲಕ್ಷಣಗಳು ಕಂಡು ಬಂದಾಗ ಹತ್ತಿರದ ವ್ಯಾಸ್ಕ್ಯುಲಾರ್ ಸರ್ಜನ್ ಸಂಪರ್ಕಿಸಬೇಕು ಎಂದು ಸಲಹೆ ನೀಡಿದರು.**

# ಗಾಣಿಗ ಸಮುದಾಯ ಶ್ರಮದಿಂದ ಬದುಕು ಕಟ್ಟಿಕೊಂಡಿದೆ; ಡಿಕೆಶಿ



ಉದಯವಾಹಿನಿ ಚಿತ್ರ

• ಉದಯವಾಹಿನಿ, ಬೆಂಗಳೂರು

ದೀಪ ಉರಿಯುವಾಗ ಎಣ್ಣೆ, ಬತ್ತಿ ಏನೂ ಕಾಣುವುದಿಲ್ಲ. ಕಾಣುವುದು ಬೆಳಕು ಮಾತ್ರ. ಗಾಣಿಗ ಸಮುದಾಯ ತಯಾರಿಸುವ ಎಣ್ಣೆಯು ದೀಪ ಮನುಷ್ಯನನ್ನು ತಂಪಾಗಿಸಲು ತಲೆಗೂ ಬೇಕು. ಗಾಣಿಗ ಸಮುದಾಯ ಶ್ರಮದ ಮೂಲಕ ಬದುಕು ಕಟ್ಟಿಕೊಂಡಿದೆ ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ಅಭಿಪ್ರಾಯಪಟ್ಟರು. ಯಜಮಾನ್ ಜನೋಪಕಾರಿ ದೊಡ್ಡಣ್ಣ ಶೆಟ್ಟಿ ಅವರ 103ನೇ ವಾರ್ಷಿಕ ಆರಾಧನಾ ಮಹೋತ್ಸವದಲ್ಲಿ ಭಾಗವಹಿಸಿ ಮಾತನಾಡಿದ ಅವರು, ಯಾವುದೇ ಮನುಷ್ಯ ಇದೇ ಜಾತಿ, ಧರ್ಮದಲ್ಲಿ ಹುಟ್ಟಬೇಕು ಎಂದು ಹರಕೆ ಹೊತ್ತಿರುವುದಿಲ್ಲ. ಹುಟ್ಟಿದ ನಂತರ ಜಾತ್ಯತೀತವಾಗಿ ಬದುಕಬೇಕು. ದೊಡ್ಡಣ್ಣ ಶೆಟ್ಟರು ಭೇದ ಭಾವ ಮಾಡದೆ ಬದುಕಿದ ಕಾರಣಕ್ಕೆ ಅವರನ್ನು ನೆನಪಿಸುತ್ತಿದ್ದೇವೆ. ನಿಮ್ಮ ವೃತ್ತಿ, ಸಮುದಾಯವನ್ನು ಉಳಿಸಿಕೊಳ್ಳಲು ಸಂಘಟಿತರಾಗಿ ಎಂದು ತಿಳಿಸಿದರು. ದೊಡ್ಡಣ್ಣ ಶೆಟ್ಟರು ಬ್ರಿಟಿಷರ ಆಡಳಿತ ಅವಧಿಯಲ್ಲಿಯೇ ಬೆಂಗಳೂರು ಹೃದಯ ಭಾಗದಲ್ಲಿ ಧರ್ಮಾತ್ಮ ಸಂಸ್ಥೆ ಕಟ್ಟಿ ಸಮಾಜದ ಎಲ್ಲಾ ಸಮುದಾಯಗಳ ನೆರವಿಗೆ ನಿಂತ ಮಹಾನುಭಾವ.

ಮನುಷ್ಯನ ಹುಟ್ಟು ಆಕಸ್ಮಿಕ, ಸಾವು ಖಚಿತ ಇದರ ನಡುವೆ ಏನನ್ನು ಗಳಿಸುತ್ತೇವೆ, ಸಾಧಿಸುತ್ತೇವೆ ಎನ್ನುವುದು ಮುಖ್ಯ. ದೊಡ್ಡಣ್ಣ ಶೆಟ್ಟರು ಗತಿಸಿಹೋಗಿ ನೂರು ವರ್ಷಗಳಾದರೂ ಅವರ ನೆನಪು ನಮ್ಮ ನಡುವೆಯಿದೆ ಎಂದರು. ದೇವರು ಯಾರಿಗೆ ವರ, ಶಾಪ ಏನನ್ನೂ ಕೊಡುವುದಿಲ್ಲ. ಸಿಗುವ ಅವಕಾಶದಲ್ಲಿ ಉಪಕಾರ ಮಾಡಿ. ಅನ್ಯ ಕಾರ್ಯಗಳು ಇರುವ ಕಾರಣ ನಿಮಗೆ ಹೆಚ್ಚಿನ ಸಮಯ ನೀಡಲು ಸಾಧ್ಯವಾಗುತ್ತಿಲ್ಲ. ತುಳಿತಕ್ಕೆ ಒಳಗಾಗಿರುವ ಸಮಾಜವು ಹಿಂದುಳಿದಿದ್ದೇವೆ ಎನ್ನುವ ಚಿಂತೆ ಮಾಡಬಾರದು. ನಿಮ್ಮ ಸಮಸ್ಯೆಗಳನ್ನು ನಮಗೆ ತಿಳಿಸಿ ನಾವು ಬಗೆಹರಿಸುತ್ತೇವೆ ಎಂದು ತಿಳಿಸಿದರು.

# ಬೆಂಗಳೂರಲ್ಲಿ ಭಾರೀ ಮಳೆ: ರಾಜ್ಯದ ಈ ಜಿಲ್ಲೆಗಳಲ್ಲೂ ರೆಡ್ ಅಲರ್ಟ್

• ಉದಯವಾಹಿನಿ, ಬೆಂಗಳೂರು

ನಗರದಲ್ಲಿ ಈಗಾಗಲೇ ಮಳೆಯಾಗುತ್ತಿದೆ. ಭಾರೀ ಮಳೆಯಿಂದ ಸಿಲಿಕಾನ್ ಸಿಟಿ ಜನತೆ ತತ್ತರಿಸಿ ಹೋಗಿದ್ದಾರೆ. ಇದರ ನಡುವೆ ಇಂದಿನಿಂದ ಆಗಸ್ಟ್. 10ರವರೆಗೆ ಬೆಂಗಳೂರಲ್ಲಿ ಭಾರೀ ಮಳೆಯಾಗಲಿದೆ. ರಾಜ್ಯದ ಕೆಲ ಜಿಲ್ಲೆಗಳಲ್ಲೂ ಮಳೆ ಮುಂದುವರೆಯಲಿದೆ ಅಂತ ಹವಾಮಾನ ಇಲಾಖೆ ರೆಡ್ ಅಲರ್ಟ್ ನೀಡಿದೆ.

ಈ ಬಗ್ಗೆ ಹವಾಮಾನ ತಜ್ಞ ಜಿಎಸ್ ಪಾಟೀಲ್ ಅವರು ಮಾಹಿತಿ ಹಂಚಿಕೊಂಡಿದ್ದು, ಇಂದಿನಿಂದ



ಉದಯವಾಹಿನಿ ಚಿತ್ರ

ಆಗಸ್ಟ್.10ರವರೆಗೆ ಬೆಂಗಳೂರಲ್ಲಿ ಮಳೆ ಸಾಧ್ಯತೆ ಇದೆ. ಇವತ್ತು ಕರಾವಳಿ ಜಿಲ್ಲೆಯಲ್ಲೂ ವ್ಯಾಪಕ ಮಳೆಯಾಗಿದೆ ಎಂದರು.

ಉತ್ತರ ಹಾಗೂ ದಕ್ಷಿಣ ಒಳನಾಡಿನ ಕೆಲವು ಕಡೆ ಮಳೆಯಾಗಿದೆ. ಉತ್ತರ ಕನ್ನಡ ಜಿಲ್ಲೆಯ ಸಿರಾಲಿಯಲ್ಲಿ 9 ಸೆಂಟಿ ಮೀಟರ್ ಮಳೆಯಾಗಿದೆ. ರಾಯಚೂರಿನ ಗಬ್ಬೂರಿನಲ್ಲಿ 6 ಸೆಂಟಿ ಮೀಟರ್ ಮಳೆಯಾಗಿದೆ. ಬೆಂಗಳೂರಲ್ಲಿ 4 ಸೆಂಟಿ ಮೀಟರ್ ಆಗಿದೆ ಎಂದು ತಿಳಿಸಿದರು. ಉತ್ತರ ಕನ್ನಡ, ಉಡುಪಿ, ದಕ್ಷಿಣ ಕನ್ನಡ ಜಿಲ್ಲೆಯಲ್ಲೂ ನಾಡಿದ್ದು ಭಾರೀ ಮಳೆಯಾಗಲಿದೆ. ಹೀಗಾಗಿ ಮುಂಜಾಗ್ರತಾ ಕ್ರಮವಾಗಿ ರೆಡ್ ಅಲರ್ಟ್ ನೀಡಲಾಗಿದೆ ಅಂತ ಹೇಳಿದರು.




• ಹಿಂದಿನ ಸಂಚಿಕೆಯಿಂದ

ಯುಧಿಷ್ಠಿರ ಜೀವನಪಥದಲ್ಲಿ ಸಾಗುತ್ತಿರುವವನಿಗೆ ಧರ್ಮಾರ್ಥಕಾಮಗಳಲ್ಲಿ ಯಾವುದು ಸರಿಯಾದ ದಿಕ್ಕಿನಲ್ಲಿ ಮುನ್ನಡೆಯಲು ಸಹಾಯ ಮಾಡುವುದು ಭೀಷ್ಮ:'' ಧರ್ಮಪಥದಲ್ಲಿ ಸಾಗುತ್ತ ಸಂಪತ್ತನ್ನು ಒಗ್ಗೂಡಿಸಿಕೊಂಡವನಲ್ಲಿ ಈ ಮೂರೂ ಜೊತೆಜೊತೆಗೇ ಇರುವುದು. ಸಂಪತ್ತಿಗೆ ಪುಣ್ಯವೇ ಮೂಲ; ಸುಖವೇ ಅದರ ಫಲ ಇಚ್ಛೆಯಲ್ಲಿ ಈ ಮೂರೂ ಗಟ್ಟಿಯಾಗಿ ನೆಲೆಯೂರಿರುವುದು. ಈ ಪ್ರಪಂಚದ ವಸ್ತುಗಳು ಇಂದ್ರಿಯಗಳ ಭೋಗಕ್ಕಾಗಿಯೇ ಇರುವುವಾದರೂ, ಇಚ್ಛೆಯಿಲ್ಲದಿದ್ದರೆ ಅವು ಏನೂ ಮಾಡಲಾರವು. ವಿಷಯವಸ್ತುಗಳಿಂದ ಸಂಪೂರ್ಣವಾಗಿ ಹಿಂದೆಗೆಯುವುದನ್ನು ವಿಮೋಚನೆಯೆನ್ನುವರು. ಸಂಪತ್ತು ಪುಣ್ಯ ಸಂಪಾದನೆಗೂ, ಪುಣ್ಯವು ದೇಹರಕ್ಷಣೆಗೂ ಅಗತ್ಯವಾದುವುಗಳು. ಸುಖವಿರುವುದು ಕೇವಲ ಇಂದ್ರಿಯಗಳ ಪ್ರಿಗಾಗಿ. ಈ ಮೂರಕ್ಕೂ ಸಾಮಾನ್ಯವಾಗಿರುವುದು ಕಾಮ. ಇವುಗಳ ಫಲಭೋಗಕ್ಕಾಗಿಯೇ ಇವನ್ನು ಬೆಂಬತ್ತಿ ಹೋಗುವುದರಿಂದ ಫಲಪ್ರಾಪ್ತಿಯಾಗುವುದಿಲ್ಲ. ಆದರೆ ಆತ್ಮ ಜ್ಞಾನಾರ್ಥವಾಗಿ ಇವುಗಳನ್ನು ಅನುಸರಿಸಿ ನಡೆದಾಗ, ಇವುಗಳನ್ನು ಧ್ಯೇಯಾಸಾಧನೆಗಾಗಿ ಬಳಸಿದಾಗ, ಬೇಕಾದಹಾಗೆ ಫಲಪ್ರಾಪ್ತಿಯಾಗುವುದು. ಪುಣ್ಯವನ್ನು ಆತ್ಮಶುದ್ಧಿಗಾಗಿ ಗಳಿಸಿಕೊಳ್ಳಬೇಕು. ಫಲೇಚ್ಛೆಯಿಲ್ಲದೆ ಬಳಸುವುದಕ್ಕಾಗಿ ಸಂಪತ್ತನ್ನುಗಳಿಸಿಕೊಳ್ಳಬೇಕು. ಸುಖವನ್ನು ದೇಹದ ಸುಸ್ಥಿತಿಗಾಗಿ ಪಡೆಯಬೇಕೇ ಹೊರತು ದೇಹದ ಪ್ರರ್ಥವಾಗಿ ಅಲ್ಲ. ಆದ್ದರಿಂದಲೇ ಈ ಮೂರೂ ಇಚ್ಛೆಯಲ್ಲಿ ನೆಲೆಯುಳ್ಳವು ಎನ್ನುವುದು. ಧರ್ಮ, ಅರ್ಥ, ಕಾಮ ಎಂಬುವು ಮೋಕ್ಷವೆಂಬ ಧ್ಯೇಯಕ್ಕೆ ಕೇವಲ ಸಹಾಯಕಗಳು. ತಪಸ್ಸಿನ ಮೂಲಕವಾಗಿ ಮುಕ್ತಿಯನ್ನು ಪಡೆದಾದಮೇಲೆ ಈ ಮೂರನ್ನೂ ತ್ಯಜಿಸಿಬಿಡಬೇಕು. ವಿಮೋಚನೆಯೇ ಮಾನವನ ಗುರಿ. ಯುಧಿಷ್ಠಿರ ಬುದ್ಧಿಯೇ ಎಲ್ಲಕ್ಕಿಂತ ಮಹತ್ವದ್ದೆಂದೂ ಬುದ್ಧಿಯಿಂದಾಗಿಯೇ ಮಾನವನು ಭವಿಷ್ಯವನ್ನು ರೂಪಿಸಿಕೊಳ್ಳುವನೆಂದೂ ಬುದ್ಧಿಯ ಮೂಲಕವೇ ತುರ್ತು ಪರಿಸ್ಥಿತಿಗಳಲ್ಲಿ ತನ್ನನ್ನು ತಾನು ಕಾಪಾಡಿಕೊಳ್ಳುವನೆಂದೂ ಹೇಳುವರು. ಈ ಬುದ್ಧಿಯ ಬಗ್ಗೆ ನನಗೆ ಹೇಳು. ಉದಾಹರಣೆಗೆ, ರಾಜನೊಬ್ಬನನ್ನು ಅನೇಕ ಶತ್ರುಗಳು ಏಕಕಾಲಕ್ಕೆ ಮುತ್ತಿರುವಾಗ ಈ ಬುದ್ಧಿಯು ಅವನಿಗೆ ತನ್ನನ್ನು ತಾನು ರಕ್ಷಿಸಿಕೊಳ್ಳಲು ಹೇಗೆ ಸಹಾಯಮಾಡುವುದು ಭೀಷ್ಮ ಕಷ್ಟಪರಿಸ್ಥಿತಿಗಳಲ್ಲಿ ರಾಜನ ಕರ್ತವ್ಯಗಳನ್ನು ಹೇಳುವೆನು ಕೇಳು. ಆಗ ಶತ್ರುವು ಮಿತ್ರನಾಗಬಹುದು, ಮಿತ್ರನು ಶತ್ರುವೂ ಆಗಬಹುದು. ಪರಿಸ್ಥಿತಿಯ ಒತ್ತಡದಲ್ಲಿ ಯಾರು ಹೇಗೆ ವರ್ತಿಸುವರೆಂಬುದನ್ನು ಹೇಳಲಾಗದು. ಇಲ್ಲಿಯೇ ಬುದ್ಧಿಯು ನಮಗೆ ಸಹಾಯಕ್ಕೆ ಬರಬೇಕಾದರೆ. ಅದು ಶತ್ರುವಿನೊಂದಿಗೆ ಯುದ್ಧ ಮಾಡಬೇಕೋ ಅಥವಾ ಸಂಧಿ ಮಾಡಿಕೊಳ್ಳ ಬೇಕೋ ಎಂಬುದನ್ನು ನಿರ್ಧರಿಸಲು ಅನುವಾಗುವುದು. ಕಾಲದೇಶಗಳಿಗನುಗುಣವಾಗಿ ಶತ್ರುವಿನೊಡನೆ ಮಿತ್ರತ್ವವನ್ನೂ ಸ್ಥಾಪಿಸಿಕೊಳ್ಳಬೇಕಾಗಿ ಬರಬಹುದು.

ಮುಂದುವರಿಯುವುದು...

# ಬೇಡಿಕೆಗಳ ಈಡೇರಿಸಲು ಕಾರ್ಯದರ್ಶಿಗೆ ಮನವಿ

■ ಮಹಾನಗರ ಪಾಲಿಕೆ ನೌಕರರ ಹೋರಾಟಕ್ಕೆ ರಾಜ್ಯ ಸರ್ಕಾರಿ ನೌಕರರ ಸಂಘ ■ ಸಚಿವಾಲಯ ನೌಕರರ ಸಂಘ ಬೆಂಬಲ

• ಉದಯವಾಹಿನಿ, ಬೆಂಗಳೂರು



ಉದಯವಾಹಿನಿ ಚಿತ್ರ

ಕರ್ನಾಟಕ ರಾಜ್ಯ ಮಹಾನಗರ ಪಾಲಿಕೆ ನೌಕರರ ಸಂಘದ ವತಿಯಿಂದ ವಿವಿಧ 5 ಬೇಡಿಕೆಗಳ ಈಡೇರಿಕೆಗಾಗಿ ತುರ್ತು ಸಭೆಯನ್ನು ರಾಜ್ಯಾಧ್ಯಕ್ಷರಾದ ಎ.ಅಮೃತ್ ರಾಜ್ ರವರ ನೇತೃತ್ವದಲ್ಲಿ ನಡೆಸಲಾಯಿತು. ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಅಧ್ಯಕ್ಷರಾದ ಕೆ.ಷಡಕ್ಷರಿ, ಸಚಿವಾಲಯ ನೌಕರರ ಸಂಘದ ಅಧ್ಯಕ್ಷರಾದ ರಮೇಶ್ ಸಂಗ, ಮಹಾನಗರ ಪಾಲಿಕೆ ನೌಕರರ ಸಂಘದ ರಾಜ್ಯ ಉಪಾಧ್ಯಕ್ಷರಾದ ವಿ. ವೆಂಕಟರಾಮ್, ರಾಜ್ಯ ಪ್ರಧಾನ ಕಾರ್ಯದರ್ಶಿ ಟಿ.ಸಿ. ಬಸವರಾಜಯ್ಯರವರು, ಸಂಚಾಲಕರಾದ ಪ್ರಹ್ಲಾದ್ ಕುಲ ಕರ್ಣಿರವರು ಭಾಗವಹಿಸಿದ್ದರು. ಎ.ಅಮೃತ್ ರಾಜ್ ರವರು ಮಾತನಾಡಿ ಪಾಲಿಕೆಯಲ್ಲಿ ಸಿಬ್ಬಂದಿಗಳ ಕೊರತೆ, ಕೆಲಸದ ಒತ್ತಡದಿಂದ ಮಾನಸಿಕ, ದೈಹಿಕವಾಗಿ ಕುಗ್ಗಿಹೋಗಿದ್ದಾರೆ.

ನಗರಾಭಿವೃದ್ದಿ ಇಲಾಖೆ ಸಚಿವರು, ನಗರಾಭಿವೃದ್ದಿ ಇಲಾಖೆಗೆ ನಮ್ಮ ಬೇಡಿಕೆ ಕುರಿತು ಹಲವಾರು ಬಾರಿ ಮನವಿ ಸಲ್ಲಿಸಿದರು, ಯಾವುದೇ ಪ್ರಯೋಜನವಾಗಿಲ್ಲ, ಅದ್ದರಿಂದ 10ಮಹಾನಗರ ಪಾಲಿಕೆ ಅಧ್ಯಕ್ಷರು, ಪದಾಧಿಕಾರಿಗಳ ಜೊತೆಯಲ್ಲಿ ತುರ್ತು ಸಭೆ ವೃಂದ ನೇಮಕಾತಿ ತಿದ್ದುಪಡಿ ಮಾಡಬೇಕು ಹಾಗೂ ಪಾಲಿಕೆ ನೌಕರರು ಒತ್ತಡದಲ್ಲಿ ಕೆಲಸ ಮತ್ತು ವಯೋಸಹಜವಾಗಿ ಆರೋಗ್ಯ ಸಮಸ್ಯೆಗಳು ಕಾಡುತ್ತದೆ. ರಾಜ್ಯ ಸರ್ಕಾರದ ನೌಕರರಿಗೆ ಜಾರಿಗೆ ಮಾಡಿರುವಂತೆ ಆರೋಗ್ಯ ಸಂಜೀವಿನಿ ಯೋಜನೆ ಮಹಾನಗರಪಾಲಿಕೆ ನೌಕರರಿಗೆ ಯೋಜನೆ ಜಾರಿಗೆ ಮಾಡಬೇಕು. ರಾಜ್ಯ ಸರ್ಕಾರಿ ನೌಕರಿಗೆ ಸಿಗುವ ಕೆ.ಜಿ.ಐ.ಡಿ ಮತ್ತು ಜಿ.ಪಿ.ಎಫ್ ಯೋಜನೆ ಮಹಾನಗರ ಪಾಲಿಕೆ ನೌಕರರಿಗೆ ಅನ್ವಯವಾಗಬೇಕು. ರಾಜ್ಯ ಸರ್ಕಾರಿ ನೌಕರರಿಗೆ ಪ್ರತಿವರ್ಷ ಕ್ರೀಡಾಕೂಟ ಆಯೋಜನೆ ಮಾಡುತ್ತಾರೆ ಅದೇ ಮಾದರಿಯಲ್ಲಿ ಮಹಾನಗರ ಪಾಲಿಕೆ ನೌಕರರಿಗೆ ಪ್ರತಿವರ್ಷ ಕ್ರೀಡಾಕೂಟ ಆಯೋಜನೆ ಮಾಡಬೇಕು. ಸರ್ಕಾರಿ ನೌಕರರು, ಮಹಾನಗರ ಪಾಲಿಕೆ ನೌಕರರು ಎಲ್ಲರು ಒಂದೇ ಸರ್ಕಾರ ತಾರತಮ್ಯ ನೀತಿ ಯಾಕೆ ಮಾಡುತ್ತಿದೆ. ಎಲ್ಲ ನೌಕರರನ್ನು ಸಮಾನವಾಗಿ ನೋಡಬೇಕು, ಪಾಲಿಕೆ ನೌಕರರಿಗೆ ಹಕ್ಕು, ಸೌಲಭ್ಯಗಳು ನೀಡಬೇಕು ಎಂಬುದು ನಮ್ಮ ಒತ್ತಾಯ ಎಂದರು. ರಾಜ್ಯ ಸರ್ಕಾರಿ ನೌಕರರಿಗೆ ಸಿಗುವ ಸೌಲಭ್ಯಗಳು ಮಹಾನಗರ ಪಾಲಿಕೆ ನೌಕರರಿಗೂ ಸಿಗಬೇಕು ವೃಂದ ಮತ್ತು ನೇಮಕಾತಿ ನಿಯಮ ಹೇಳುತ್ತದೆ. ಆರೋಗ್ಯ ಸಂಜೀವಿನಿ ಯೋಜನೆ ಉತ್ತಮವಾಗಿದೆ ರಾಜ್ಯ ಸರ್ಕಾರ ನೌಕರರು, ಮಹಾನಗರ ಪಾಲಿಕೆ, ನಿಗಮ, ಮಂಡಳಿ ಎಲ್ಲರಿಗೂ ಈ ಯೋಜನೆ ಆನ್ವಯವಾಗಲಿ. ಮಹಾನಗರ ಪಾಲಿಕೆ ಕ್ರೀಡಾಕೂಟಕ್ಕೆ ಸರ್ಕಾರ ಸಹಾಯಧನ ನೀಡಲಿ ಎಂದು ಹೇಳಿದರು.

> **ನೌಕರರಿಗೆ ಅವಶ್ಯಕತೆ ಇರುವ ಬೇಡಿಕೆಗಳನ್ನು ಮಹಾನಗರ ಪಾಲಿಕೆ ನೌಕರರು ಹೇಳುತ್ತಿದ್ದಾರೆ, ಸರ್ಕಾರ ಮನ್ನಣೆ ಕೊಡಬೇಕು. ರಾಜ್ಯದ ಎಲ್ಲಾ ಮಹಾನಗರ ಪಾಲಿಕೆಯಲ್ಲಿ ಕ್ರೀಡಾಕೂಟ ಆಯೋಜನೆ ಮತ್ತು ಆರೋಗ್ಯ ಸಂಜೀವಿನಿ ಯೋಜನೆ ಜಾರಿಗೆ ಮಾಡಿದರೆ ಸರ್ಕಾರಕ್ಕೆ ಯಾವುದೇ ನಷ್ಟವಿಲ್ಲ. ಕೆಜಿಐಡಿ ಉತ್ತಮ ಯೋಜನೆ ಇದರಿಂದ ನೌಕರರಿಗೆ ಉತ್ತಮ ಲಾಭ ಸಿಗುತ್ತದೆ. ಹೋರಾಟ ಅನಿವಾರ್ಯವಾಗಿದೆ, ಹೋರಾಟದ ಮೂಲಕ ನ್ಯಾಯ ಪಡೆಯುವ ಸಂದರ್ಭ ಬಂದಿದೆ ಎಂದು ಹೇಳಿದರು.**
>
> -ರಮೇಶ್ ಸಂಗಾ

> **ಆರೋಗ್ಯ ಸಂಜೀವಿನಿ ಯೋಜನೆ ಜಾರಿ**

ರಾಜ್ಯ ಸಮಿತಿ ನಿರ್ದೇಶಕರುಗಳಾದ ಸಾಯಿಶಂಕರ್, ಎ.ಜಿ.ಬಾಬು, ಬಿ.ರುದ್ರೇಶ್, ಕೆ.ನರಸಿಂಹ ಹಾಗೂ ಮೈಸೂರು ಮಹಾನಗರ ಪಾಲಿಕೆ ನೌಕರರ ಸಂಘ ಕಾರ್ಯದರ್ಶಿ ಎಂ.ಬಸವಣ್ಣ, ದಾವಣಗೆರೆ ಮಹಾನಗರ ಪಾಲಿಕೆ ನೌಕರರ ಸಂಘ ಅಧ್ಯಕ್ಷರಾದ ಗೋವಿಂದರಾಜು, ಹುಬ್ಬಳಿ- ಧಾರವಾಡ ಮಹಾನಗರ ಪಾಲಿಕೆ ನೌಕರರ ಸಂಘದ ಅಧ್ಯಕ್ಷರಾದ ಪ್ರಸಾದ್ ಪೆರೂರ, ಬೆಳಗಾಂ ಮಹಾನಗರ ಪಾಲಿಕೆ ನೌಕರರ ಸಂಘದ ಅಧ್ಯಕ್ಷರಾದ ಗುಂಡಪ್ಪನವರ್, ಬಳ್ಳಾರಿ ಮಹಾನಗರ ಪಾಲಿಕೆ ನೌಕರರ ಸಂಘದ ಅಧ್ಯಕ್ಷರಾದ ಗೋವಿಂದಬಾಬು ಎಂ.ಕೆ, ಗುಲ್ಬರ್ಗ ಮಹಾನಗರ ಪಾಲಿಕೆ ನೌಕರರ ಸಂಘದ ಅಧ್ಯಕ್ಷರಾದ ಕಿರಣ್ ಕುಮಾರ್ ಟಂಗಳಿ, ಎಸ್.ಕೆ.ಮುನಿಸಿಪಲ್ ಎಂಪ್ಲಾಯಿಸ್ ಯೂನಿಯನ್ ನೌಕರರ ಸಂಘ ಮಂಗಳೂರು ಅಧ್ಯಕ್ಷರಾದ ಬಾಲು, ಶಿವಮೊಗ್ಗ ಮಹಾನಗರ ಪಾಲಿಕೆ ನೌಕರರ ಸಂಘದ ಅಧ್ಯಕ್ಷರಾದ ಎನ್.ಗೋವಿಂದ್, ವಿಜಯಪುರ ಮಹಾನಗರ ಪಾಲಿಕೆ ನೌಕರರ ಸಂಘ, ತುಮಕೂರು ಮಹಾನಗರ ಪಾಲಿಕೆ ನೌಕರರ ಸಂಘ ಉಪಾಧ್ಯಕರಾದ ನಟರಾಜ್ ಪದಾಧಿಕಾರಿಗಳು ಬಿಬಿಎಂಪಿ ಅಧಿಕಾರಿ ಮತ್ತು ನೌಕರರ ಕ್ಷೇಮಾಭಿವೃದ್ಧಿ ಸಂಘದ ಮಂಜೇಗೌಡ, ಹೆಚ್.ಬಿ.ಹರೀಶ್, ಮಂಜುನಾಥ್, ರೇಣುಕಾಂಬ, ಸಂತೋಷ್ ಕುಮಾರ್ ನಾಯ್ಕ್ ಉಮಾದೇವಿರವರು ಭಾಗವಹಿಸಿದ್ದರು.

> **ರಾಜ್ಯ ಮಹಾನಗರ ಪಾಲಿಕೆ ನೌಕರರ ಸಂಘದ ಹೋರಾಟಕ್ಕೆ ರಾಜ್ಯ ಸರ್ಕಾರಿ ನೌಕರರ ಸಂಘ ಸಂಪೂರ್ಣ ಬೆಂಬಲ ನೀಡಲಾಗುತ್ತದೆ. ಸಚಿವರು, ಇಲಾಖೆಗೆ ಮನವಿ ಸಲ್ಲಿಸಿದರು ಸ್ಪಂದಿಸಲಿಲ್ಲ ಸರ್ಕಾರಗಳು ನೌಕರರನ್ನ ಗೌರವಯುತ ನಡೆಸಿಕೊಳ್ಳಬೇಕು. ವೃಂದ ಮತ್ತು ನೇಮಕಾತಿ ತಿದ್ದುಪಡಿ ಕುರಿತು ಕಾರ್ಯ ದರ್ಶಿಗಳ ಜೊತೆಯಲ್ಲಿ ಸಭೆ ನಡೆಸಲಾಗಿದೆ. ಮಹಾನಗರ ಪಾಲಿಕೆ ನೌಕರರ ಸಮಸ್ಯೆಗಳಿಗೆ ಮುಖ್ಯ ಕಾರ್ಯದರ್ಶಿಗಳನ್ನು ಭೇಟಿ ಮಾಡಿ ಸಮಸ್ಯೆ ನಿವಾರಣೆಗೆ ಪ್ರಯತ್ನಿಸಲಾಗುವುದು.**
>
> -ಕೆ.ಷಡಕ್ಷರಿ

# ಎದೆ ಹಾಲಿನಲ್ಲಿ ಅಪರಿಮಿತವಾದ ಪೋಷಕಾಂಶಗಳು ಅಡಗಿವೆ

## ಮಕ್ಕಳಿಗೆ ಎದೆ ಹಾಲುಣಿಸಲು ಇರುವ ಕೊರತೆಗಳನ್ನು ನೀಗಿಸಿ ಎದೆಹಾಲುಣಿಸಲು ತಾಯಿಗೆ ಪ್ರೋತ್ಸಾಹ ನೀಡಿ: ಗಿರೀಶ್

• ಉದಯವಾಹಿನಿ, ಚಿತ್ರದುರ್ಗ

ತಾಲ್ಲೂಕಿನ ಬೊಮ್ಮೆನಹಳ್ಳಿ ಗ್ರಾಮದ ಅಂಗನವಾಡಿ ಕೇಂದ್ರದಲ್ಲಿ ಆರೋಗ್ಯ ಇಲಾಖೆ ಮತ್ತು ಮಹಿಳಾ ಮಕ್ಕಳ ಅಭಿವೃದ್ಧಿ ಇಲಾಖೆ ಸಹಯೋಗದೊಂದಿಗೆ ವಿಶ್ವ ಸ್ತನ್ಯಪಾನ ಸಪ್ತಾಹ ಕಾರ್ಯಕ್ರಮದಲ್ಲಿ ತಾಲ್ಲೂಕು ಆರೋಗ್ಯಾಧಿಕಾರಿ ಡಾ.ಬಿ.ವಿ.ಗಿರೀಶ್ ಮಾತನಾಡಿ ವಿಶ್ವಸ್ತನ್ಯಪಾನ ಸಪ್ತಾಹವನ್ನು ಪ್ರತೀ ವರ್ಷ ಆಗಸ್ಟ್ ತಿಂಗಳ ಮೊದಲನೇ ವಾರ ಅಂದರೆ 1ರಿಂದ 7 ಆ ಗಸ್ಟ್‌ನಲ್ಲಿ ಆಚರಿಸಲಾಗುತ್ತದೆ. ತಾಯಿಯ ಎದೆ ಹಾಲು ಮಗುವಿಗೆ ಅಮೃತ ಧಾರೆ.

ತಾಯಿ ಎದೆ ಹಾಲಿನಲ್ಲಿ ಅಪರಿಮಿತವಾದ ಪೋಷಕಾಂಶಗಳು ಅ ಡಗಿವೆ ಮಗುವಿಗೆ ರೋಗ ನಿರೋಧಕ ಶಕ್ತಿಯನ್ನು ಹೆಚ್ಚಿಸುತ್ತದೆ. ಹುಟ್ಟಿದ ತಕ್ಷಣ ಮಗುವಿಗೆ ಎಷ್ಟು ಬೇಗಸಾಧ್ಯವೋ ಅಷ್ಟು ಬೇಗ ಎದೆ ಹಾಲನ್ನು ಕುಡಿಸಬೇಕು.

ಎದೆ ಹಾಲು ಕೊಡುವುದರಿಂದ ತಾಯಿ ಮತ್ತು ಮಗುವಿನ ಮಧ್ಯೆ ಉತ್ತಮವಾದ ಗಟ್ಟಿಯಾದ ಬಾಂಧವ್ಯ ಬೆಸೆಯುತ್ತದೆ. ಮಗು ಹುಟ್ಟಿದಾಗಿನಿಂದ 6ತಿಂಗಳ ವಯಸ್ಸಾಗುವವರೆಗೆ ಎದೆಹಾಲನ್ನು ಬಿಟ್ಟು ಬೇರೆ ಏನನ್ನೂ ಕುಡಿಸಬಾರದು. ಆಗ ಮಾತ್ರ ಸಾರ್ಥಕ ಎನಿಸುತ್ತದೆ ಎಂದರು ತಾಲ್ಲೂಕು ಆರೋಗ್ಯ ಶಿಕ್ಷಣಾಧಿಕಾರಿ ಎನ್.ಎಸ್.ಮಂಜುನಾಥ ಮಾತನಾಡಿ ವಿಶ್ವಸ್ತನ್ಯಪಾನ ಸಪ್ತಾಹ ಉದ್ಘಾಟನೆ ಕಾರ್ಯಕ್ರಮ ಸಾರ್ವಜನಿಕ ಆಸ್ಪತ್ರೆ ಹೊಳಲ್ಕೆರೆ.




> ವಿಶ್ವ ಸ್ತನ್ಯಪಾನ ಸಪ್ತಾಹವು ಸ್ತನ್ಯಪಾನ ಮಾಡುವ ತಾಯಂದಿರಿಗೆ ಅನುಕೂಲಕರ ವಾತಾವರಣವನ್ನು ಕಲ್ಪಿಸಲು. ಆರಂಭಿಕ ಬಾಲ್ಯದ ಬೆಳವಣಿಗೆ ಹೆಚ್ಚಿಸಲು, ಪೌಷ್ಠಿಕಾಂಶವನ್ನು ಸುಧಾರಿಸಲು ಹಾಗೂ ಶಿಶು ಮರಣ ಪ್ರಮಾಣವನ್ನು ಕಡಿಮೆ ಮಾಡಲು ಸ್ತನ್ಯಪಾನದ ಅತ್ಯಮೂಲ್ಯ ಪಾತ್ರವುನ್ನು ಒತ್ತಿಹೇಳಲು ಪ್ರಮುಖ ವೇದಿಕೆಯಾಗಿದೆ. ಸ್ತನ್ಯಪಾನ ಅಭ್ಯಾಸಗಳ ಸುಧಾರಣೆಗಾಗಿ ಆರೋಗ್ಯ ವ್ಯವಸ್ಥೆಯನ್ನು ಬಲಪಡಿಸುವ ಚಟುವಟಿಕೆಗಳಿಗೆ ಆದ್ಯತೆ ನೀಡಿ
> – ಬಿ.ಮುಗಪ್ಪ, ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ

ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಬಿ.ಮುಗಪ್ಪ ಮಾತನಾಡುತ್ತಾ ಆರು ತಿಂಗಳವರೆಗೆ ಕೇವಲ ತಾಯಿಯ ಎದೆ ಹಾಲನ್ನು ಮಾತ್ರ ನೀಡಲು, ಎದೆಹಾಲಿನ ಸಂಪೂರ್ಣ ಲಾಭಗಳನ್ನು ಪಡೆಯಲು, ಮಗುವು ಸಂಪೂರ್ಣ ವಿಕಾಸ ಹೊಂದಲು, ಮಗುವನ್ನು ನ್ಯೂಮೋನಿಯಾ, ಅತಿಸಾರಭೇದಿ, ಅಪೌಷ್ಠಿಕತೆ ಇವುಗಳಿಂದ ತಡೆಗಟ್ಟಲು ಸ್ತನ್ಯಪಾನವು ಅತ್ಯಂತ ಮಹತ್ವಪೂರ್ಣ ಪಾತ್ರವನ್ನು ವಹಿಸುತ್ತದೆ.

ಕಾರ್ಯಕ್ರಮದಲ್ಲಿ ಗ್ರಾಮ ಪಂಚಾಯತಿ ಅಧ್ಯಕ್ಷರಾದ ಸುಲೋಚನಮ್ಮ , ಪ್ರಾಥಮಿಕ ಆರೋಗ್ಯ ಸುರಕ್ಷತಾಧಿಕಾರಿಗಳಾದ ಗಾಯತ್ರಿ, ಅನುಸುಯ ಎಮ್, ಸಮುದಾಯ ಆರೋಗ್ಯಾಧಿಕಾರಿ ಶ್ರೀನಿವಾಸ್, ಆರೋಗ್ಯ ನಿರೀಕ್ಷಣಾಧಿಕಾರಿ ಪ್ರವೀಣ್, ಅಂಗನವಾಡಿ ಕಾರ್ಯಕರ್ತೆ ಶಶಿಕಲಾ ಟಿ. , ಆಶಾ ಕಾರ್ಯಕರ್ತೆಯರಾದ ನಾಗಮ್ಮ, ಮಂಜುಳಾ ಎದೆ ಹಾಲುಣಿಸುವ ತಾಯಂದಿರು ಹಾಜರಿದ್ದರು.

### ಕೊರತೆಗಳನ್ನು ಕೊನೆಗೊಳಿಸಿ

ಸರ್ವರಿಗೂ ಸ್ತನ್ಯಪಾನದ ಬೆಂಬಲ ನೀಡಿ ಎದೆಹಾಲುಣಿಸುವುದು ಒಂದು ಸಹಜಕ್ರಿಯೆಯಾಗಿದ್ದರೂ, ಸಾಂಸ್ಥಿಕ ಹೆರಿಗೆಗಳು ಗಣನೀಯವಾಗಿ ಹೆಚ್ಚಾಗಿದ್ದರೂ, ಎದೆಹಾಲು ಕುಡಿಸುವ ಪ್ರಮಾಣ, ಎದೆಹಾಲು ಮುಂದುವರೆಸುವ ಪ್ರಮಾಣ ಕಡಿಮೆಯಾಗಿರುವುದು ಸಮೀಕ್ಷೆಗಳಿಂದ ಕಂಡುಬಂದಿರುವುದನ್ನು ಗಂಭೀರವಾಗಿ ಪರಿಗಣಿಸಲಾಗಿದೆ. ಆರು ತಿಂಗಳವರೆಗೆ ಕೇವಲ ಎದೆಹಾಲು ಉಣಿಸುವ ಪ್ರಮಾಣ ಅಲ್ಪ ಪ್ರಮಾಣದಲ್ಲಿ ಬದಲಾವಣೆಯಾಗಿರುವುದು (54.2% - NFHS-4 ರಿಂದ 61% - NFHS-5) ಸಮಸ್ಯೆಯ ಗಂಭೀರತೆಯನ್ನು ತೋರಿಸುತ್ತದೆ. ಬಹಳಷ್ಟು ತಾಯಂದಿರು ಎದೆಹಾಲು ಉಣಿಸಲು ಪ್ರಾರಂಭಿಸಿದರೂ, ಕೆಲವೇ ತಿಂಗಳುಗಳಲ್ಲಿ ಇತರ ಹಾಲು, ಪಾನೀಯಗಳನ್ನು ನೀಡಲು ಪ್ರಾರಂಭಿಸುತ್ತಾರೆ ಇದರಿಂದ ಶಿಶು ವಿವಿಧ ಸೋಂಕುಗಳಿಗೆ ಗುರಿಯಾಗುತ್ತದೆ. ಕೆಲವು ಸಂದರ್ಭಗಳಲ್ಲಿ ಮರಣವೂ ಸಂಭವಿಸಬಹುದು ಎಂದರು.

---

# ಅಹಿತಕರ ಘಟನೆ ನಡೆಯದಂತೆ ಪೊಲೀಸ್ ಚೌಕಿ ಸ್ಥಾಪನೆ

• ಉದಯವಾಹಿನಿ,ಚಿಂಚೋಳಿ

ನ್ಯಾಯಾಲಯ ಆವರಣದಲ್ಲಿ ಯಾವುದೇ ಅಹಿತಕರ ಘಟನೆ ಜರುಗದಂತೆ ಶಾಂತಿಯುತವಾಗಿರಲು ನ್ಯಾ ಯಾಲಯ ಆವರಣದಲ್ಲಿ ಪೋಲಿಸ್ ಚೌಕಿ ಸ್ಥಾ ಪನೆ ಮಾಡಲಾಗಿದೆ ಎಂದು ಹಿರಿಯ ಶ್ರೇಣಿ ನ್ಯಾಯಾ ಲಯದ ನ್ಯಾಯಾಧೀಶೆ ಜ್ಯೋತಿ ಎಸ್.ಕಾಳೆ ತಿಳಿಸಿದ್ದಾರೆ.

ಪಟ್ಟಣದ ನ್ಯಾಯಾಲಯ ಆವರಣದಲ್ಲಿ ನೂತನವಾಗಿ ನಿರ್ಮಿಸಿದ ಪೋಲಿಸ್ ಚೌಕಿಯನ್ನು ಪೂಜೆಮಾಡಿ ರಿಬ್ಬನ್ ಕತ್ತರಿಸುವ ಮೂಲಕ ಉ ದ್ಘಾಟಿಸಿ ಮಾತನಾಡಿದ ಅವರು, ಈಗಾಗಲೇ ನ್ಯಾಯಾಲಯ ಸಮಯದವರೆಗೆ ಪೋಲಿಸರು ಕಾರ್ಯ ನಿರ್ವಹಿಸಲಿದ್ದು ಮೇಲಾಧಿಕಾರಿಗಳ, ಉಚ್ಚನ್ಯಾಯಾಲಯ ಆದೇಶದ ಅನುಸಾರ ಪೋಲಿಸರು ಕಾರ್ಯನಿರ್ವಹಿಸಲಾಗುವುದು ಎಂದರು. ಡಿವೈಎಸ್ಪಿ ಸಂಗಮೇಶ ಹಿರೇಮಠ ಮಾತನಾಡಿ ನ್ಯಾಯಾಲಯ ಒಳಗೆ ಹಾಗೂ ಹೊರ ಹೋಗುವ ಸಾರ್ವಜನಿಕರ ಮೇಲೆ ಪೋಲಿಸರು ನಿಗಾ ವಹಿಸಲಿದ್ದಾರೆ, ನ್ಯಾಯಾಲಯದ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಪೋಲಿಸ್ ಠಾಣೆಗಳಿಂದ ಒಂದು ಒಂದು ವಾರ ನ್ಯಾಯಾಲಯದ ಪೋಲಿಸ್ ಚೌಕಿಯಲ್ಲಿ ಕಾರ್ಯನಿರ್ವಹಿಸಲು ನೇಮಕ ಮಾಡಲಾಗುವುದು ಎಂದರು. ಈ ಸಂದರ್ಭದಲ್ಲಿ ಪ್ರಧಾನ ಸಿವಿಲ್ ನ್ಯಾಯಾ ಧೀಶರಾದ ದತ್ತುಕುಮಾರ ಜವಳಕರ್, ಸಿಪಿಐ ಎಲ್.ಹೆಚ್.ಗೌಂಡಿ, ಪಿಎಸ್ಐ ಗಂಗಮ್ಮಾ, ವಕೀಲರ ಸಂ ಘದ ಅಧ್ಯಕ್ಷ ಶ್ರೀಮಂತ ಕಟ್ಟಿಮನಿ, ಉಪಾಧ್ಯಕ್ಷ ಜಗ ನ್ನಾಥ ಗಂಜಗಿರಿ, ಚಂದ್ರಶೇಟ್ಟಿ ಜಾಧವ, ನೀಲಕಂಠ ರಾಠೋಡ್, ಶಶಿಕಾಂತ ಅಡಕಿ, ರಾಜೇಂದ್ರ ವರ್ಮಾ, ನಾಗಭೂಷಣ ಹೊಲಗುಂಡಿ, ವಿಜಯಕುಮಾರ ರಾಠೋಡ್, ಶೇಖ್ ಭಕ್ತಿಯಾರ ಜಾಗೀರದಾರ, ಶಂಕರ ರಾಠೋಡ್, ಜಿ.ಕೆ.ಗೋಖಲೆ, ಶಾಮರಾವ ಹೊಸಮನಿ, ಸುದರ್ಶನ ಸಂತಾಳ, ಇರ್ಫಾನ್ ಪ ಟೇಲ, ಹಣಮಂತ ಪೂಜಾರಿ, ಸೂರ್ಯಕಾಂತ, ಮಲ್ಲಿಕಾರ್ಜುನ, ಗುರುನಾಥ ರಾಠೋಡ್, ದೀಲೀಪ ಚವ್ಹಾಣ ಇದ್ದರು.

# ವಿದ್ಯಾರ್ಥಿಗಳು, ಶಿಕ್ಷಕರಿಗೆ ಸ್ವಚ್ಛಗೊಳಿಸುವುದೇ ಕೆಲಸ

• ಉದಯವಾಹಿನಿ, ಚಿಕ್ಕಮಗಳೂರು

ಶಾಲೆ ಎಂಬ ದೇಗುಲದಲ್ಲಿ ನಿತ್ಯ ಸರಸ್ವತಿ ಹಾಗೂ ಗಣೇಶನನ್ನು ನೆನೆದು ಶಿಕ್ಷಕರು ವಿದ್ಯಾರ್ಥಿಗಳಿಗೆ ಜ್ಞಾನವನ್ನು ನೀಡುತ್ತಾರೆ. ಆದರೆ ಶಾಲೆಯ ಆವರಣ ವೊಂದರಲ್ಲಿ ಪುಂಡರು ಎಣ್ಣೆ ಪಾರ್ಟಿ ಮಾಡಿದ ಘಟನೆ ಬೆಳಕಿಗೆ ಬಂದಿದೆ. ಇದರಿಂದಾಗಿ ಬೆಳಗ್ಗೆ ಶಾಲೆಗೆ ಬರುವ ಮಕ್ಕಳು ಆವರಣದಲ್ಲಿ ಬಿದ್ದ ಎಣ್ಣೆ ಬಾಟಲಿಗಳ ದರ್ಶನ ಪಡೆದು ಕೊಠಡಿಗಳಿಗೆ ಪ್ರವೇಶ ಮಾಡುವಂತಾಗಿದೆ. ಹೀಗಿದ್ದರೂ ಇದನ್ನು ಪ್ರಶ್ನೆ ಮಾಡುವವರು ಇಲ್ಲದಂತಾಗಿದೆ.

ಹೌದು... ಚಿಕ್ಕಮಗಳೂರು ತಾಲ್ಲೂಕಿನ ವಸ್ತಾರೆ ಗ್ರಾಮದಲ್ಲಿ ಕಿಡಿಗೇಡಿಗಳು ಶಾಲಾ ಆವರಣವನ್ನೇ ಬಾರ್ ಮಾಡಿಕೊಂಡಿರುವುದು ಕಂಡು ಬಂದಿದೆ. ಗ್ರಾಮದ ಪ್ರಾಥಮಿಕ ಸರ್ಕಾರಿ ಶಾಲೆಯಲ್ಲಿ ಮದ್ಯದ ಬಾಟಲಿಗಳು ಪತ್ತೆಯಾಗಿವೆ. ಈ ಶಾಲೆಯ ಆವರಣದಲ್ಲಿ ಕೆಲ ಕಿಡಿಗೇಡಿಗಳು ರಾತ್ರಿಯಿಡೀ ಎಣ್ಣೆ ಪಾರ್ಟಿ ಮಾಡಿ ಬೆಳಗಿನ ಜಾವ ಮನೆಗೆ ಹೋಗುತ್ತಾರೆ. ಆದರೆ ಬೆಳಗ್ಗೆ ಶಾಲೆಗೆ ಬರುವ ಮಕ್ಕಳು ಬಾಟಲಿಗಳು, ತಿಂದು ಉಳಿದ ಮಾಂಸಾಹಾರವನ್ನು ಇತರ ತ್ಯಾಜ್ಯವನ್ನು ನೋಡಿಕೊಂಡು ಶಾಲಾ ಕೊಠಡಿಗಳಿಗೆ ತೆರಳಬೇಕಾದ ಸ್ಥಿತಿ ನಿರ್ಮಾಣವಾಗಿದೆ. ಇದರಿಂದಾಗಿ ಶಾಲಾ ಆವರಣದಲ್ಲಿ ಮಕ್ಕಳು ಆಟವಾಡುವಂತಿಲ್ಲ, ಪ್ರಾರ್ಥನೆ ಮಾಡುವಂತಿಲ್ಲ, ಯೋಗ ಮಾಡುವಂತಿಲ್ಲ, ಎಲ್ಲಂದರಲ್ಲಿ ಎಣ್ಣೆ ಬಾಟಲಿಗಳು, ಒಡೆದ ಗಾಜುಗಳಿಂದಾಗಿ ಮಕ್ಕಳು ಶಾಲಾ ಆವರಣದಲ್ಲಿ ಆಟವಾಡುವುದನ್ನೇ ಬಿಟ್ಟು ಬಿಟ್ಟಿದ್ದಾರೆ ಎಂದು ಶಿಕ್ಷಕರು ಆರೋಪಿಸಿದ್ದಾರೆ.




ಸ್ಥಳೀಯ ಕಿಡಿಗೇಡಿಗಳು ಶಾಲೆಯ ಆವರಣದಲ್ಲಿ ನಿತ್ಯ ಎಣ್ಣೆ ಪಾರ್ಟಿ ಮಾಡಲು ಅಡ್ಡ ಮಾಡಿಕೊಂಡಿದ್ದಾರೆ. ಇವರು ಮಾಡಿದ ಗಲೀಜನ್ನು ವಿದ್ಯಾರ್ಥಿಗಳು, ಶಿಕ್ಷಕರು ಸ್ವಚ್ಛಗೊಳಿಸುವುದೇ ನಿತ್ಯದ ಕೆಲಸವಾಗಿ ಹೋಗಿದೆ. ಕಿಡಿಗೇಡಿಗಳ ಈ ಅಸಭ್ಯ ವರ್ತನೆಯಿಂದಾಗಿ ವಿದ್ಯಾರ್ಥಿ ಗಳು, ಶಿಕ್ಷಕರು ಬೇಸರ ವ್ಯಕ್ತಪಡಿಸಿದ್ದಾರೆ.ಅಲ್ಲದೆ ಶಾಲಾ ಆವರಣದಲ್ಲಿ ತಡರಾತ್ರಿಯವರೆಗೂ ಕುಡಿದು ಕೂಗಾ ಡಿ ಜಗಳವಾಡಿ ಹೋಗುವುದರಿಂದ ಸ್ಥಳೀಯರು ಬೇಸತ್ತಿದ್ದಾರೆ. ಇದರಿಂದ ಶಾಲೆಯ ಸುತ್ತಲು ವಾಸಿಸುವ ಜನ ರಿಗೆ ತೊಂದರೆಯಾಗಿದೆ. ಅವರಿಗೆ ಬುದ್ಧಿ ಹೇಳಲು ಹೋದವರಿಗೆ ಜೀವ ಬೆದರಿಕೆ ಹಾಕುತ್ತಾರೆ. ಹೀಗಾಗಿ ಅವರಿಗೆ ಬುದ್ಧಿ ಹೇಳುವುದನ್ನೂ ಬಿಟ್ಟು ಬಿಟ್ಟಿರುವುದಾಗಿ ಗ್ರಾಮಸ್ಥರು ಹೇಳುತ್ತಾರೆ. ಇದರಿಂದ ಪೊಲೀಸರು ಕೃತ್ಯ ಎಸಗುವ ಯುವಕರ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಗ್ರಾಮಸ್ಥರು ಆಗ್ರಹಿಸಿದ್ದಾರೆ.

ಕಿಡಿಗೇಡಿಗಳಿಗೆ ಹೆದರಿ ಜನ ಕೂಡ ದೂರು ನೀಡಲು ಮುಂದೆ ಬರುತ್ತಿಲ್ಲ. ಅವರ ಪುಂಡಾಟಿಕೆಯನ್ನು ತಡೆಯಲು ಕೂಡ ಮುಂದಾಗುತ್ತಿಲ್ಲ. ಕಾಲೇಜು ವಯಸ್ಸಿನ ಹುಡುಗರು ಕುಡಿದು ಹಾಳಾಗುತ್ತಿದ್ದಾರೆ ಎನ್ನುವ ಆರೋಪವಿದೆ. ಹೀಗಾಗಿ ಪೊಲೀಸರು ಇದರ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಸ್ಥಳೀಯರು ಒತ್ತಾತಯಿಸಿದ್ದಾರೆ.

# ಪರಶುರಾಮನ ಹೆಸರಿಟ್ಟರೆ ಕಾಂಗ್ರೆಸ್‌ನವರಿಗೇಕೆ ಹೊಟ್ಟೆಉರಿ

• ಉದಯವಾಹಿನಿ, ಉಡುಪಿ

ಕಾರ್ಕಳದ ಪರಶುರಾಮ ಥೀಮ್ ಪಾರ್ಕ್‌ಗೆ ಪರಶುರಾಮನ ಹೆಸರಿಟ್ಟರೆ ಕಾಂಗ್ರೆಸ್‌ನವರಿಗೇಕೆ ಹೊಟ್ಟೆ ಉರಿ ಎಂದು ಬಿಜೆಪಿ ಜಿಲ್ಲಾ ಘಟಕ ಅಧ್ಯಕ್ಷ ಕಿಶೋರ್ ಕುಮಾರ್ ಕುಂದಾಪುರ ಪ್ರಶ್ನಿಸಿದ್ದಾರೆ. ಪರಶುರಾಮ ಥೀಂ ಪಾರ್ಕ್ ವಿಚಾರವಾಗಿ ಕಾಂಗ್ರೆಸ್ ದಬ್ಬಾಳಿಕೆ ನಡೆಸುತ್ತಿದೆ ಎಂದು ಆರೋಪಿಸಿ, ಮಣಿಪಾಲದ ಜಿಲ್ಲಾಧಿಕಾರಿ ಕಚೇರಿ ಮುಂಭಾಗದಲ್ಲಿ ಸೋಮವಾರ ನಡೆದ ಪ್ರತಿಭಟನೆಯಲ್ಲಿ ಅವರು ಮಾತನಾಡಿದರು.

ಒಂದೂ ಕಾಲು ವರ್ಷದಿಂದ ಸುಮ್ಮನಿದ್ದ ಕಾಂಗ್ರೆಸ್ ಸರ್ಕಾರ ಈಗ ಥೀಂ ಪಾರ್ಕ್ ವಿಚಾರಕ್ಕೆ ಸಂಬಂಧಿಸಿ, ನಿರ್ಮಿತಿ ಕೇಂದ್ರದ ಯೋಜನಾ ನಿರ್ದೇಶಕರನ್ನು ಅಮಾನತು ಮಾಡಿದೆ ಎಂದರು.




ಕಾರ್ಕಳದ ಕಾಂಗ್ರೆಸ್ ಮುಖಂಡ ಉದಯ ಕುಮಾರ್ ಮುನಿಯಾಲು ಅವರು ಬೆಂಗಳೂರಿನಲ್ಲಿ ಮೂರ್ತಿ ಜಪ್ತಿ ಮಾಡುವಾಗ ಉಪಸ್ಥಿತರಿದ್ದರು. ಅವರನ್ನು ಪೊಲೀಸ್ ಇಲಾಖೆಗೆ ನೇಮಕ ಮಾಡಿದರೂ ಆಶ್ಚರ್ಯವಿಲ್ಲ ಎಂದರು. ಕಾರ್ಕಳ ಮಂಡಲ ಅಧ್ಯಕ್ಷ ನವೀನ್ ನಾಯ್ಕ್ ಮಾತನಾಡಿ, ಕಾರ್ಕಳದಲ್ಲಿ ದಿನನಿತ್ಯ ಬಿಜೆಪಿ ಕಾರ್ಯಕರ್ತರ ಮೇಲೆ ಸುಳ್ಳುಮೊಕದ್ದಮೆ ದಾಖಲಿಸಲಾಗುತ್ತಿದೆ ಎಂದು ಆರೋಪಿಸಿದರು. ಪ್ರತಿಭಟನೆಯ ಬಳಿಕ ಬಿಜೆಪಿ ನಿಯೋಗ ಜಿಲ್ಲಾ ಧಿಕಾರಿ ಕೆ. ವಿದ್ಯಾಕುಮಾರಿ ಅವರಿಗೆ ಪರಶು ರಾಮ ಥೀಂ ಪಾರ್ಕ್ ವಿವಾದದ ಬಗ್ಗೆ ಸ್ಪಷ್ಟನೆ ನೀ ಡುವಂತೆ ಮನವಿ ಸಲ್ಲಿಸಿತು.

> ಥೀಂ ಪಾರ್ಕ್‌ಗೆ ಪರಶುರಾಮನ ಬದಲು ಶಾಸಕ ಸುನೀಲ್ ಕುಮಾರ್ ಅವರ ಹೆಸರಿಟ್ಟಿದ್ದರೆ, ಕಾಂಗ್ರೆಸ್‌ನವರು ಪ್ರತಿಭಟನೆ ನಡೆಸು ವುದಕ್ಕೆ ಅರ್ಥವಿತ್ತು ಎಂದೂ ಹೇಳಿದ್ದಾರೆ. ಕಾಂಗ್ರೆಸ್‌ನವರು ದೇಶದ ರಾಮನನ್ನು, ಹಿಂದುತ್ವವನ್ನು ಒಪ್ಪಿಕೊಳ್ಳುವುದಿಲ್ಲ ಎಂಬುದು ಇದರಿಂದ ಸಾಬೀತಾಗುತ್ತದೆ ಎಂದರು.

# ಶ್ರೀ ಸುಂಕ್ಲಮ್ಮ ದೇವಸ್ಥಾನದ ಜೀರ್ಣೋದ್ಧಾರಕ್ಕೆ ದೇಣಿಗೆ

• ಉದಯವಾಹಿನಿ, ಸಿರುಗುಪ್ಪ

ತಾಲ್ಲೂಕಿನ ಕೆ.ಬೆಳಗಲ್ ಗ್ರಾಮದಲ್ಲಿ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ವತಿಯಿಂದ ಶ್ರೀ ಸುಂಕಲಮ್ಮ ದೇವಸ್ಥಾನದ ಜೀರ್ಣೋದ್ಧಾರಕ್ಕೆ ಎಸ್.ಡಿ.ಆರ್.ಪಿ. ಜಿಲ್ಲಾ ನಿರ್ದೇಶಕ ರೋಹಿತಾಕ್ಷ ಹಾಗೂ ತಾಲ್ಲೂಕು ಯೋಜನಾ ನಿರ್ದೇಶಕ ಸುಧೀರ್ ಹಂಗಳೂರು 1 ಲಕ್ಷ 50 ಸಾವಿರ ಮೊತ್ತದ ದೇಣಿಗೆಯ ಡಿಡಿಯನ್ನು ದೇವಸ್ಥಾನ ಅಭಿವೃದ್ಧಿ ಕಮಿಟಿಯವರಿಗೆ ವಿತರಿಸಿದರು. ರೋಹಿತಾಕ್ಷ ಅವರು ಮಾತನಾಡಿ ಗ್ರಾಮಗಳ ಸರ್ವತೋಮುಖ ಅಭಿವೃದ್ಧಿಗೆ ಗ್ರಾಮಗಳಲ್ಲಿ ದೇವರ ಪೂಜೆ, ಜಾತ್ರೋತ್ಸವ ಕಾರ್ಯಕ್ರಮಗಳು, ಆಧ್ಯಾತ್ಮಿಕ ಚಿಂತನೆಗಳು, ಧಾರ್ಮಿಕ ಕಾರ್ಯಗಳು ಗ್ರಾಮಗಳ ಜನರು ಸಮೃದ್ಧ ಜೀವನ ನಡೆಸಲು ಸಹಕಾರಿಯಾಗಿವೆಂದು ತಿಳಿಸಿದರೆಂದು ಯೋಜನೆಯ ಕೃಷಿ ವಲಯ ಮೇಲ್ವಿಚಾರಕ ಪ್ರಭು ಹಿರೇಮಠ್ ತಿಳಿಸಿದ್ದಾರೆ.




ಕಾರ್ಯಕ್ರಮದಲ್ಲಿ ಸುಂಕ್ಲಮ್ಮ ದೇವಿ ದೇವಸ್ಥಾನ ಅಭಿವೃದ್ಧಿ ಸಮಿತಿ ಅಧ್ಯಕ್ಷ ದ್ಯಾವಣ್ಣ, ಗ್ರಾಮ ಪಂಚಾಯಿತಿ ಅಧ್ಯಕ್ಷೆ ಮಹಾಂಕಾಳಿ, ಮುಖಂಡರಾದ ವೆಂಕಟೇಶರೆಡ್ಡಿ, ಒಕ್ಕೂಟದ ಅಧ್ಯಕ್ಷ ರಾಮಾಂಜನೇಯ, ವಲಯ ಮೇಲ್ವಿಚಾರಕ ಪ್ರತಾಪಸಿಂಗ್, ಆರತಿ, ಸೇವಾಪ್ರತಿನಿಧಿ ಹೇಮಾವತಿ ತಂಡದ ಸದಸ್ಯರು, ಇನ್ನಿತರರಿದ್ದರು

# ನಾಲ್ಕು ತಿಂಗಳು ಗತಿಸಿದರೂ ರೈತರ ಅಕೌಂಟಿಗೆ ಹಣ ಜಮಾ ಆಗಿಲ್ಲ

• ಉದಯವಾಹಿನಿ, ಸಿಂಧನೂರು

ಮಾರ್ಚ್ 2023 ರಿಂದ ಖರೀದಿ ಕೇಂದ್ರಕ್ಕೆ ಜೋಳ ಮಾರಾಟ ಮಾಡಿ 4 ತಿಂಗಳ ಗತಿಸಿದರೂ ಇನ್ನು ವರಿಗೂ ರೈತರಿಗೆ ಅಮೌಂಟ್ ಹಾಕಿಲ್ಲ. ಎಂದು ಕರ್ನಾಟಕ ರಾಜ್ಯ ರೈತ ಸಂಘ, ಹಸಿರು ಸೇನೆಯಿಂದ ತಾಲ್ಲೂಕು ತಹಶೀಲ್ದಾರ್ ಅವರಿಗೆ ಮನವಿ ಪತ್ರ ಸಲ್ಲಿಸಿ ಒತ್ತಾಯ ಮಾಡಿದರು.

ವ್ಯವಸಾಯ ಸೇವಾ ಸಹಕಾರ ಸಂಘ ಅಲಬನೂರು ಖರೀದಿ ಕೇಂದ್ರದಲ್ಲಿ ಜೋಳ ಮಾರಾಟ ಮಾಡಿದರು ಪಾವತಿಯಾಗಿಲ್ಲ.




> ಇನ್ನೂ ಜಮಾವಾಗದೆ ಈ ಮುಂಚೆ ರೈತರು ಬೇರೆಯವರಲ್ಲಿ ಸಾಲ ಪಡೆದಿದ್ದು ಅವರಿಗೆ ಯಾವ ಉತ್ತರ ನೀಡಬೇಕೆಂದು ತಿಳಿಯದಂತೆ ಚಿಂತಾ ಜನಕರಾಗಿರುತ್ತಾರೆ. ಈಗ ಮಳೆ ಬಂದು ರೈತರು ತಮ್ಮ ಜಮೀನುಗಳಲ್ಲಿ ನಾಟಿ ಮಾಡುವ ರಸಗೊಬ್ಬರ ಖರೀದಿಸಲು ಹಣ ಇಲ್ಲದೆ ಗೋಳಾಡುವ ಸ್ಥಿತಿ ನಿರ್ಮಾಣವಾಗಿದೆ.

ಕಳೆದ ವರ್ಷ ಬರಗಾಲ ಅನಾವೃಷ್ಟಿಯಿಂದ ಇತಹದರಲ್ಲಿ ಅಲ್ಪ ಸ್ವಲ್ಪ ಬೆಳೆ ಬಂದರು ಕೂಡ ಮಾರುಕಟ್ಟೆಯಲ್ಲಿ ಬೆಂಬಲ ಬೆಲೆ ಸಿಗದೆ ಕಲರೈತರು ಈ ಕೇಂದ್ರದಲ್ಲಿ ಮಾರಾಟ ಮಾಡಲಾಗಿ ಒಂದು ವಾರದಲ್ಲಿ ಹಣ ಜಮಾ ಆಗುತ್ತದೆಂದು ಮಾರಾಟ ಮಾಡಿರುತ್ತಾರೆ. ಸರಕಾರ ರೈತರ ಮೇಲೆ ಕರುಣೆ ಎಂಬ ಏನಾದರೂ ಇದ್ದರೆ ಕೇಂದ್ರಕ್ಕೆ ಮನ ವರಿಕೆ ಮಾಡಿ ರೈತರಿಗೆ ಖಾತೆಗೆ ಹಣ ಜಮಾ ಮಾಡಬೇಕೆಂದು ಆಗ್ರಹಿಸಿದರು. ಈ ಸಂದರ್ಭದಲ್ಲಿ.ರಾಮಯ್ಯ ಜವಳಗೇರಾ. ವೆಂಕಟೇಶ್ ಕೋಠಾ. ರಮೇಶ್ ಮುಕ್ಕುಂದಾ ಹನುಮಂತ ನಾಗಪ್ಪ. ಪಾರಯ್ಯಸ್ವಾಮಿ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ರಾಜ್ಯಪಾಲರ ಕ್ರಮ ವಿರೋಧಿಸಿ ಹೊನ್ನಾಳಿ ಬಂದ್

• ಉದಯವಾಹಿನಿ, ಹೊನ್ನಾಳಿ

ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದ (ಮುಡಾ) ನಿವೇಶನಕ್ಕೆ ಸಂಬಂಧಿಸಿದಂತೆ ರಾಜ್ಯಪಾಲ ಥಾವರ ಚಂದ್ ಗೆಹಲೋಥ್ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ನೋಟಿಸ್ ನೀಡಿರುವ ಕ್ರಮ ವಿರೋಧಿಸಿ ಮಂಗಳವಾರ ಹೊನ್ನಾಳಿ ಬಂದ್ ನಡೆಸಲಾಗಿದೆ.

ಸಿದ್ದರಾಮಯ್ಯ ಅಭಿಮಾನಿ ಬಳಗ ಹಾಗೂ ಅಹಿಂದ ಒಕ್ಕೂಟದ ಕಾರ್ಯಕರ್ತರು ಕರೆನೀಡಿದ ಬಂದ್ ಗೆ ಸಾರ್ವಜನಿಕರಿಂದ ಬೆಂಬಲ ವ್ಯಕ್ತವಾಗಿದೆ.ಪಟ್ಟಣದಲ್ಲಿ ಅಂಗಡಿಗಳು ಬಾಗಿಲು ಮುಚ್ಚಿದ್ದು, ಸಾರಿಗೆ ಸಂಚಾರ ಸ್ಥಗಿತಗೊಂಡಿದೆ. ಬಿಜೆಪಿ ಮತ್ತು ಜೆಡಿಎಸ್ ವಿರುದ್ಧ ಆಕ್ರೋಶ ವ್ಯಕ್ತವಾಗಿದೆ.

ಪಟ್ಟಣದ ಪ್ರಮುಖ ಬೀದಿಗಳಲ್ಲಿ ಸಂಚಾರಿಸಿದ ಸಿದ್ದರಾಮಯ್ಯ ಅಭಿಮಾನಿಗಳು ಬಂದ್ ಬೆಂಬಲ ಕೋರಿದರು. ಬೆಳಿಗ್ಗೆಯಿಂದಲೇ ಅಂಗಡಿಗಳು ಬಾಗಿಲು ತೆರೆದಿಲ್ಲ. ಆಟೊ, ಖಾಸಗಿ ಬಸ್ ಸಂಚಾರ ಸ್ಥಗಿತಗೊಂಡಿದೆ. ಕೆಎಸ್‌ಆರ್‌ಟಿಸಿ, ಖಾಸಗಿ ಬಸ್ ನಿಲ್ದಾಣಗಳು ಪ್ರಯಾಣಿಕರಿಲ್ಲದೆ ಬಿಕೊ ಎನ್ನುತ್ತಿವೆ. ಸಿದ್ದರಾಮಯ್ಯ ವಿರುದ್ಧ ಸೇಡಿನ ರಾಜ ಕಾರಣ ಮಾಡಲಾಗುತ್ತಿದೆ ಎಂದು ಆರೋಪಿಸಿ ಪ್ರತಿಭಟನಕಾರರು ಪಟ್ಟಣದಲ್ಲಿ ಮೆರವಣಿಗೆ ನಡೆಸಲು ಸಜ್ಜಾಗಿದ್ದಾರೆ. ಮುಖ್ಯಮಂತ್ರಿ ಸಿದ್ದರಾಮಯ್ಯ ರಾಜೀನಾಮೆಗೆ ಒತ್ತಾಯಿಸಿ ಬಿಜೆಪಿ–ಜೆಡಿಎಸ್ ನಡೆಸುತ್ತಿರುವ ಪಾದಯಾತ್ರೆ ಕುರಿತು ಆಕ್ರೋಶ ವ್ಯಕ್ತಪಡಿಸಿದ್ದಾರೆ. ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ವೃತ್ತದಲ್ಲಿ ಸಭೆ ಸೇರಿ ತಾಲ್ಲೂಕು ಕಚೇರಿ ವರೆಗೆ ಮೆರವಣಿಗೆಯಲ್ಲಿ ಸಾಗಲಿದ್ದಾರೆ.




# ಪುರಾಣ ಪ್ರವಚನದಿಂದ ಮನಶಾಂತಿ: ಸಿದ್ದಲಿಂಗಯ್ಯ ಶಾಸ್ತ್ರಿಗಳು

• ಉದಯವಾಹಿನಿ, ಸಿರುಗುಪ್ಪ

ತಾಲ್ಲೂಕಿನ ಸಿರಿಗೇರಿ ಗ್ರಾಮದ ಶ್ರೀ ನಾಗನಾಥೇಶ್ವರ ದೇವಸ್ಥಾನದ ಆವರಣದಲ್ಲಿ ಸೋಮವಾರದಿಂದ ಒಂದು ತಿಂಗಳ ಕಾಲ ಶ್ರಾವಣ ಮಾಸದ ಅಂಗವಾಗಿ ತ್ರಿವಿಧ ದಾಸೋಹ ಮೂರ್ತಿ ಬರಗಾಲದ ಬಂಟ ಕಲಬುರ್ಗಿಯ ಶರಣಬಸವೇಶ್ವರ ಕಾರ್ಯಕ್ರಮವನ್ನು ಪುರಾಣ ಪ್ರವಚನಕಾರರಾದ ಗದಗ ಜಿಲ್ಲೆ ದೇವಗಿರಿಯ ಶಿವಯೋಗಿ ಶಾಸ್ತ್ರಿ ಗಡ್ಡ ಮಠದ ಪುಟ್ಟರಾಜ ಕವಿಗವಾಯಿಗಳವರ ಪರಮ ಶಿಷ್ಯರಾದ ಸಿದ್ದಲಿಂಗಯ್ಯ ಶಾಸ್ತ್ರಿಗಳು ಉದ್ಘಾಟಿಸಿದರು.

ಗ್ರಾಮದ ಪ್ರಮುಖರಿಂದ ಗುರು ಪಂಚಾಚಾರ್ಯರ ಧ್ವಜಾರೋಹಣದವನ್ನು ನೆರವೇರಿಸಲಾಯಿತು. ಸಿದ್ದಲಿಂಗಯ್ಯ ಶಾಸ್ತ್ರಿಗಳು ಮಾತನಾಡಿ ಪುರಾಣ ಪ್ರವಚನಗಳಿಂದ ಮನಸ್ಸಿನ ದುಗಡವನ್ನು ಹೋಗಲಾಡಿಸಿ ಸಂತಸದ ಕ್ಷಣಗಳನ್ನು ಕಳೆಯಬಹುದು ಎಂದರು.




ದೇವಸ್ಥಾನದ ಧರ್ಮದರ್ಶಿಯಾದ ಬಿ ಮಹಾರುದ್ರಗೌಡ ಮಾತನಾಡಿ ಒಂದು ತಿಂಗಳು ತಪಸ್ಸು ಮಾಡಿ ಪುರಾಣ ಪ್ರವಚನಕ್ಕೆ ಬನ್ನಿ ಮನಸ್ಸನ್ನು ಕೇಂದ್ರೀಕರಿಸಿ ಎಂದರು.

ಗದುಗಿನ ವೀರೇಶ್ವರ ಪುಣ್ಯಶ್ರಮದ ಸಂಗೀತ ಗಾನ ಚತುರ ದೇವರೆಡ್ಡಿ ಹುಂಡೇಕಲ್ಲ, ತಬಲ ವಾದಕರಾದ ಬಸವರಾಜ್ ಚಲಗೇರಿ ಪುರಾಣ ಪ್ರವಚನಕಾರರಿಗೆ ಸಾಥ್ ನೀಡಿದರು.

ಈ ಸಂದರ್ಭದಲ್ಲಿ ಪ್ರಮುಖರಾದ ಅಂಬರೀಶ್ ಗೌಡ, ಕೆ.ಎಂ ವೀರೇಶಯ ಸ್ವಾಮಿ, ಆರ್.ನಾಗರಾಜ್ ಗೌಡ, ಭೀಮನಗೌಡ,ವಿರೂಪಾಕ್ಷ ಗೌಡ, ಯಲ್ಲನಗೌಡ, ಬಕಾಟೆ ಈರಯ್ಯ, ಪೂಜಾರ್ ಸಿದ್ದಯ್ಯ, ಸಿ.ಎಂ ಚೆನ್ನಬಸಯ್ಯಸ್ವಾಮಿ, ಪಂಚಾಕ್ಷರಯ್ಯ, ಶಂಕರ ಗೌಡ,ಮೌಲಪ್ಪ ಇತರರು ಇದ್ದರು.

> ವೃದ್ಧರು, ಮಹಿಳೆಯರಿಗೆ ಹೆಚ್ಚು ತಾಳ್ಮೆ ಸ್ವಭಾವವನ್ನು ಹೊಂದಿರುತ್ತಾರೆ ಏಕೆಂದರೆ ಅವರುಗಳೇ ಅತಿ ಹೆಚ್ಚು ಪುರಾಣವನ್ನು ಆಲಿಸುವುದು, ಪಠಿಸುವುದು ಮಾಡುತ್ತಾರೆ.ಹೀಗಾಗಿ ಮನೆಯಲ್ಲಿ ಹೆಚ್ಚು ಒತ್ತಡವಿದ್ದರೂ ಅವರು ತಾಳ್ಮೆಯಿಂದ ಸಮಸ್ಯೆಗಳನ್ನು ನಿಭಾಯಿಸುತ್ತಾರೆ. ಪ್ರತಿಯೊಬ್ಬರೂ ಪೌರಾಣಿಕ ದಂತಹ ಒಳ್ಳೆಯ ವಿಚಾರಧಾರೆಗಳನ್ನು ಆಲಿಸಿ ಎಂದು ತಮ್ಮ ಆಶೀರ್ವಚನದಲ್ಲಿ ಹೇಳಿದರು.

## ಮಿನಿ ನ್ಯೂಸ್

### ಶಾಲಾ ಬಸ್ ಹರಿದು 5 ವರ್ಷದ ಬಾಲಕ ಸ್ಥಳದಲ್ಲೇ ಸಾವು

• ಉದಯವಾಹಿನಿ, ವಿಜಯಪುರ

ವಿಜಯಪುರ ಜಿಲ್ಲೆಯಲ್ಲಿ ಬೆಳ್ಳಂಬೆಳಗ್ಗೆ ಘೋರ ದುರಂತ ಸಂಭವಿಸಿದ್ದು, ಶಾಲಾ ಬಸ್ ಹರಿದು 5 ವರ್ಷದ ಬಾಲಕ ಸ್ಥಳದಲ್ಲೇ ಸಾವನ್ನಪ್ಪಿರುವ ಘಟನೆ ನಡೆದಿದೆ. ವಿಜಯಪುರ ಜಿಲ್ಲೆಯ ನೀಡಗುಂಡಿ ತಾಲ್ಲೂಕಿನ ಅರಳದಿನ್ನಿ ಗ್ರಾಮದಲ್ಲಿ ಮನೆಯಿಂದ ಅಂಗನವಾಡಿಗೆ ಹೋಗುತ್ತಿದ್ದ ವೇಳೆ ಶಾಲಾ ಬಸ್ ಹರಿದು ಗ್ರಾಮದ 5 ವರ್ಷದ ಬಾಲಕ ಬಸವರಾಜ್ ಸ್ಥಳದಲ್ಲೇ ಸಾವನ್ನಪ್ಪಿದ್ದಾನೆ. ಅಪಘಾತದ ಬಳಿಕ ಶಾಲಾ ಬಸ್ ಚಾಲಕ ಸ್ಥಳದಿಂದ ಪರಾರಿಯಾಗಿದ್ದಾನೆ. ಸ್ಥಳಕ್ಕೆ ಪೊಲೀಸರು ಭೇಟಿ ನೀಡಿದ್ದು, ಪರಿಶೀಲನೆ ನಡೆಸಿದ್ದಾರೆ.

### ಕೇಂದ್ರ ಸಚಿವೆ ಕರಂದ್ಲಾಜೆಗೆ ‘ಸಿದ್ಧಾಂತ ಶಿಖಾಮಣಿ’ ಕೊಡುಗೆ

• ಉದಯವಾಹಿನಿ, ಬೀದರ್

ಶ್ರಾವಣ ಪ್ರಯುಕ್ತ ಸಿದ್ಧಾಂತ ಶಿಖಾಮಣಿ ಗ್ರಂಥ ಅರ್ಪಣೆ ಅಭಿಯಾನದ ಅಂಗವಾಗಿ ಕೇಂದ್ರ ಸರ್ಕಾರದ ಸಾಂಸ್ಥಿಕ ಪ್ರಾಣಿ ನೀತಿ ಸಮಿತಿಯ ಸದಸ್ಯ ಶಿವಯ್ಯ ಸ್ವಾಮಿ ಅವರು ನವದೆಹಲಿಯಲ್ಲಿ ಕೇಂದ್ರದ ಸೂಕ್ಷ್ಮ, ಮಧ್ಯಮ ಉದ್ಯಮಗಳು ಹಾಗೂ ಕಾರ್ಮಿಕ ಖಾತೆ ಸಚಿವೆ ಶೋಭಾ ಕರಂದ್ಲಾಜೆ ಅವರಿಗೆ ಸಿದ್ಧಾಂತ ಶಿ ಖಾಮಣಿ ಗ್ರಂಥ ಕೊಡುಗೆಯಾಗಿ ನೀಡಿದರು. ಸಿದ್ಧಾಂತ ಶಿಖಾಮಣಿ ಗ್ರಂಥವನ್ನು ಎಲ್ಲೆಡೆ ತಲುಪಿಸಲು ಸೆಪ್ಟೆಂಬರ್ 2ರ ವರೆಗೆ ಅಭಿಯಾನ ಹಮ್ಮಿಕೊಳ್ಳಲಾಗಿದೆ ಎಂದು ಶಿವಯ್ಯ ಸ್ವಾಮಿ ತಿಳಿಸಿದರು.

ಕೇಂದ್ರ ಸಚಿವರು, ರಾಜ್ಯ ಸಚಿವರು, ಲೋಕಸಭೆ ಸದಸ್ಯರು, ವಿದೇಶಿ ರಾಯಭಾರಿಗಳು, ಐಎಎಸ್ ಅಧಿಕಾರಿಗಳು, ವಿಶ್ವವಿದ್ಯಾಲಯಗಳ ಕುಲಪತಿಗಳು ಸೇರಿ 1,008 ಜನರಿಗೆ ಗ್ರಂಥ ವಿತರಿಸಲಾಗುತ್ತಿದೆ ಎಂದು ಹೇಳಿದರು. ಅಭಿಯಾನದ ಬಗ್ಗೆ ಮೆಚ್ಚುಗೆ ವ್ಯಕ್ತಪಡಿಸಿದ ಕರಂದ್ಲಾಜೆ ಅವರು, ಸಿದ್ಧಾಂತ ಶಿಖಾಮಣಿ ಪವಿತ್ರ ಗ್ರಂಥವಾಗಿದೆ. ಇದನ್ನು ಪ್ರತಿಯೊಬ್ಬರೂ ಪಾರಾಯಣ ಮಾಡಬೇಕು ಎಂದು ತಿಳಿಸಿದರು.

### ವಿದ್ಯುತ್ ವ್ಯತ್ಯಯ ಇಂದು

• ಉದಯವಾಹಿನಿ, ಬಳ್ಳಾರಿ

ನಗರ ಜೆಸ್ಕಾಂ ಉಪವಿಭಾಗ–1 ರ ವ್ಯಾಪ್ತಿಗೆ ಬರುವ 220/11ಕೆವಿ ಅಲ್ಲೀಪುರ ವಿದ್ಯುತ್ ವಿತರಣ ಕೇಂದ್ರದಿಂದ ವಿದ್ಯುತ್ ಸರಬರಾಜು ಆಗುವ ಎಫ್–72 ಫೀಡರ್‌ನ ತುರ್ತು ನಿರ್ವಹಣಾ ಕಾಮಗಾರಿ ಕೈಗೆತ್ತಿಕೊಳ್ಳುತ್ತಿರುವುದರಿಂದ ಇಂದು ಬೆಳಿಗ್ಗೆ 10 ಗಂಟೆಯಿಂದ ಸಂಜೆ 5 ಗಂಟೆಯವರೆಗೆ ನಗರದ ಕಂಟೋನ್‌ಮೆಂಟ್, ಸೂರ್ಯ ಕಾಲೋನಿ, ತಿಲಕ್ ನಗರ, ಸುಧಾ ಕ್ರಾಸ್, ನಂದಿ ಕಾಲೋನಿ, ಹೆಚ್‌ಆರ್‌ಜಿ ಕಾಲೋನಿ, ಜಯನಗರ, ರಹಿಮಾಬಾದ್ ಕಾಲೋನಿ, ನಲಂದ ಕಾಲೇಜ್, ವಿಜಯನಗರ ಕಾಲೋನಿ, ಕೆಹೆಚ್‌ಬಿ ಕಾಲೋನಿ, ಜಗನ್ನಾಥ ಮಂದಿರ, ಭಾಸ್ಕರ ನಾಯ್ಡು, ಸೆಂಟ್ ಜೋಸೆಫ್ ಶಾಲೆ ಸೇರಿದಂತೆ ಇನ್ನೂ ಮುಂತಾದ ಏರಿಯಾಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ ಎಂದು ಬಳ್ಳಾರಿ ನಗರ ಜೆಸ್ಕಾಂ ಉಪವಿಭಾಗ–1 ರ ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಉತ್ತಮ ಶಿಕ್ಷಕ ಪ್ರಶಸ್ತಿಗೆ ಅರ್ಜಿ

• ಉದಯವಾಹಿನಿ, ಬಳ್ಳಾರಿ

ಪ್ರಸಕ್ತ ಸಾಲಿನ ರಾಜ್ಯ ಮಟ್ಟದ ಉತ್ತಮ ಶಿಕ್ಷಕ ಪ್ರಶಸ್ತಿಗೆ ಜಿಲ್ಲೆಯ ಅರ್ಹ ಶಿಕ್ಷಕರಿಂದ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ಜಿಲ್ಲೆಯ ಅರ್ಹ ಶಿಕ್ಷಕರು, ವಿಶೇಷ ಶಿಕ್ಷಕರು ಮತ್ತು ಮುಖ್ಯ ಶಿಕ್ಷಕರು ವೆಬ್‌ಸೈಟ್‌ಗೆ ಭೇಟಿ ನೀಡಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಬಹುದು. ಅರ್ಜಿ ಸಲ್ಲಿಸಲು ಆ.16 ಕೊನೆಯ ದಿನವಾಗಿರುತ್ತದೆ.

ಹೆಚ್ಚಿನ ಮಾಹಿತಿಗಾಗಿ ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕರ ಕಚೇರಿಗೆ ಸಂಪರ್ಕಿಸಬಹುದು ಎಂದು ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕಿ ಉಮಾದೇವಿ ಅವರು ತಿಳಿಸಿದ್ದಾರೆ.

### ಹುಬ್ಬಳ್ಳಿ -ಅಗಡಿ ನಡುವೆ ಬಸ್ ವ್ಯವಸ್ಥೆ

• ಉದಯವಾಹಿನಿ, ಹುಬ್ಬಳ್ಳಿ

ಶಾಲಾ, ಕಾಲೇಜು ವಿದ್ಯಾರ್ಥಿಗಳು, ಸಾರ್ವಜನಿಕರಿಗೆ ಅನುಕೂಲವಾಗಲು ಹುಬ್ಬಳ್ಳಿ, ಅಗಡಿ ಗ್ರಾಮಕ್ಕೆ ಬಸ್ ಸೌಕರ್ಯ ಕಲ್ಪಿಸುವ ಸಲುವಾಗಿ ಮಾಡಿದ್ದ ಮನವಿಗೆ ಸರ್ಕಾರ ಸ್ಪಂದಿಸಿ, ಹುಬ್ಬಳ್ಳಿ ಗ್ರಾಮಾಂತರ ವಿಭಾಗದಿಂದ ಬಸ್ ವ್ಯವಸ್ಥೆ ಮಾಡಿದ್ದು ಜನರು ಹರ್ಷ ವ್ಯಕ್ತಪಡಿಸಿದ್ದಾರೆ. ಗ್ರಾಮ ಪಂಚಾಯಿತಿ ಸದಸ್ಯರು, ಸಂಗಪ್ಪ ಗಾಮಂಗಟ್ಟಿ, ಶೋಭಾ ಹೊಸಮನಿ, ತಿಪ್ಪಣ್ಣ, ಮಂಜು ಬಿರಣ್ಣವರ, ಶಂಕ್ರಮ್ಮ ಬಡಿಗೇರ, ಅನಸವ್ವ ಬ್ಯಾಟಿ ಹಾಗೂ ವಿದ್ಯಾರ್ಥಿಗಳು ಬಸ್‌ಗೆ ಪೂಜೆ ಸಲ್ಲಿಸಿ ಸಂಭ್ರಮಾಚರಿಸಿದರು.

ಅಗಡಿ ಗ್ರಾಮ ಪಂಚಾಯಿತಿ ಮಾಜಿ ಅಧ್ಯಕ್ಷ ಸುರೇಶ ಮೂಕಪ ಸಂಗಣ್ಣವರ, ವಿದ್ಯಾರ್ಥಿಗಳು, ಸಾರ್ವಜನಿಕರು ಸಾರಿಗೆ ಸಚಿವ ರಾಮಲಿಂಗಾರಡ್ಡಿ ಅವರಿಗೆ ಬಸ್ ಕಲ್ಪಿಸುವಂತೆ ಮನವಿ ಮಾಡಿದ್ದರು.

# ಪಿಎಸ್‌ಐ ಕುಟುಂಬಕ್ಕೆ 2 ಕೋಟಿ ರೂ. ಪರಿಹಾರಕ್ಕೆ ಒತ್ತಾಯ

## ಸರ್ಕಾರದಲ್ಲಿ ಉದ್ಯೋಗ ನೀಡಬೇಕು ಎಂದು ಮಹಾಸಭಾ ಆಗ್ರಹ

• ಉದಯವಾಹಿನಿ, ಸಿಂಧನೂರು

ಯಾದಗಿರಿ ಪಿಎಸ್ಐ ಪರಶುರಾಮ್ ಸಾವಿನ ಕು ರಿತು ತನಿಖೆ ಸಿಬಿಐಗೆ ವಹಿಸಿ, ನೊಂದವರು ಕುಟುಂಬಕ್ಕೆ 02 ಕೋಟಿ ಮೊತ್ತವನ್ನು ಪರಿಹಾರ ಮಂಜೂರಿ ಮಾಡುವುದು, ಸರ್ಕಾರದ ಉದ್ಯೋಗ ನೀಡಬೇಕೆಂದು ಆಗ್ರಹಿಸಿದರು. ಛಲ ವಾದಿ ಮಹಾಸಭಾದ ತಾಲ್ಲೂಕು ಸಮಿತಿಯಿಂದ ತಾಲ್ಲೂಕು ತಹಶೀಲ್ದಾರ್ ಮೂಲಕ ಮಾನ್ಯ ಮುಖ್ಯಮಂತ್ರಿ, ಗೃಹ ಸಚಿವರಿಗೆ ಮನವಿ ಪತ್ರ ಸಲ್ಲಿಸಿ ಪ್ರತಿಭಟಿಸಿದರು.

ನಂತರ ಪ್ರತಿಭಟನೆ ಉದ್ದೇಶಿಸಿ ಮಾತನಾಡಿದ ಛಲವಾದಿ ಮಹಾಸಭಾದ ತಾಲ್ಲೂಕು ಅಧ್ಯಕ್ಷ ಡಾ. ರಾಮಣ್ಣಗೋನವಾರ್ ಹಲವು ಹತ್ತು ಕನಸು ಗಳು ಕಟ್ಟಿಕೊಂಡು ಬಾಳಬೇಕಾದ ಒಬ್ಬ ದಕ್ಷ ಪ್ರಾಮಾಣಿಕ ಅಧಿಕಾರಿ ಸಾವು ಕಂಡಿರುವುದು ಒಂದು ವಿಪರ್ಯಾಸ ಸಂಗತಿಯಾಗಿದೆ. ಒಬ್ಬ ಪಿಎಸ್ಐ ಅವರ ಸಂಗಾತಿಯಲ್ಲ. ಬಹುತೇಕ ಇಂತಹ ಅಧಿಕಾರಿಗಳು ಕಿರುಕುಳ ತಪ್ಪಿದ್ದಿಲ್ಲ. ಶಾಸಕ, ಅವರು ಮಗನ ಪಿತೂರಿ ಹಣದ ದಾಹದಿಂದ ಒ ಬ್ಬ ದಕ್ಷ ಪೊಲೀಸ್ ಅಧಿಕಾರಿ ಸಾವಿಗೆ ಕಾರಣರಾಗಿದ್ದಾರೆ. ಇವತ್ತು ಯುವ ಪೀಳಿಗೆ ತಲೆ ತಗ್ಗಿಸುವಂತಾಗಿದೆ. ಸರ್ಕಾರ ಅನೊಂದು ಕುಟುಂಬಕ್ಕೆ 2 ಕೋಟಿ ರೂ ಪರಿಹಾರದ ಹಣ ನೀಡಬೇಕು ಮತ್ತು ಉದ್ಯೋ ಗ ನೀಡಬೇಕೆಂದ ಸರ್ಕಾರಕ್ಕೆ ಒತ್ತಾಯ ಮಾಡಿದರು.




ಈ ಸಂದರ್ಭದಲ್ಲಿ ಮಾತನಾಡಿದ ಛಲವಾದಿ ಮಹಾಸಭಾದ ಜಿಲ್ಲಾ ಉಪಾಧ್ಯಕ್ಷ ಹನುಮಂತಪ್ಪ ಗೊಮರ್ಷಿ ಪಕ್ಷ ಯಾವುದೇ ಇರಲಿ ಶಾಸಕರು ಯಾವುದೇ ಪಕ್ಷದವರು ಇರಲಿ, ನ್ಯಾಯ ಎಲ್ಲರಿಗೂ ಒಂದೇ ಆಗಿರಬೇಕು ತಮ್ಮ ಪಕ್ಷ ದವರು ಎಂದು ಅವರನ್ನು ಕರೆಯಿಸಿ ಮಣಿ ಹಾಕುವ ಕೆಲಸವನ್ನು ಸರಕಾರ ಮಾ ಡಬಾರದು ಎಂಬ ಸತ್ಯ ಮಾತಾಗಿದೆ.

ಈ ಸಂದರ್ಭದಲ್ಲಿ ನರಸಪ್ಪ ಕಟ್ಟಿಮನಿ. ಬಿ ಎನ್ ಯರದಿಹಾಳ. ಹನುಮಂತಪ್ಪ ವಕೀಲರು ಬೂದಿವಾಳ. ಶರಣಬಸವ ಮಲ್ಲಾಪೂರ್. ವಿರುಪಣ್ಣ ಬೂದಿವಾಳ. ರಾಜು ಉದ್ಬಾಳ ಮುದುಕಪ್ಪ ಮಲ್ಲಾಪೂರ್. ನಿರುಪಾದಿ ಸಸಾಲಮರಿ.ಬಸವ ಇದ್ದರು.

> ಒಬ್ಬ ದಕ್ಷ ಪೊಲೀಸ್ ಅಧಿಕಾರಿ ಪರಶುರಾಮ್ ಪಿಎಸ್‌ಐ ಸಾವಿಗೆ ಶಾಸಕ ಚೆನ್ನಾರೆಡ್ಡಿ ಹಾಗೂ ಮಗನಾದ ಪಂಪನಗೌಡ ವರ್ಗಾವಣೆ ದಂಧೆಯಲ್ಲಿ 30 ಲಕ್ಷ ಹಣಕ್ಕಾಗಿ ಬೇಡಿಕೆ ಇಟ್ಟು .ಅನೇಕ ತರಹದ ತೊಂದರೆ ಕೊಟ್ಟಿರುವುದು ಈಗಾಗಲೇ ಮಾಧ್ಯಮಗಳಿಂದ ಬಯಲಾಗಿದೆ. ಸರಕಾರ ಸಿಐಡಿಗೆ ವಹಿಸಿ ಕೈ ತೊಳೆದುಕೊಳ್ಳುವುದಲ್ಲ ಸಿಬಿಐ ತನಿಖೆಗೆ ವಹಿಸಬೇಕು ಆರೋಪಿಗಳಾದ ಶಾಸಕ ಚನ್ನಾ ರೆಡ್ಡಿ ಹಾಗೂ ಪಂಪನಗೌಡನ್ನು ಬಂಧಿಸಬೇಕೆಂದು ಮಹಾಸಭಾ ಆಗ್ರಹವಾಗಿದೆ
> – ಹನುಮಂತಪ್ಪ
> ಛಲವಾದಿ ಮಹಾಸಭಾದ ಜಿಲ್ಲಾ ಉಪಾಧ್ಯಕ್ಷ

# 78ನೇ ಸ್ವಾತಂತ್ರ್ಯ ದಿನಾಚರಣೆ ನಿಮಿತ್ತ ಪೂರ್ವಭಾವಿ ಸಭೆ

## 78ನೇ ಸ್ವಾತಂತ್ರ್ಯ ದಿನಾಚರಣೆ ಕಾರ್ಯಕ್ರಮಕ್ಕೆ ಬರದಿರುವ ಅಧಿಕಾರಿಗಳ ವಿರುದ್ಧ ಸೂಕ್ತ ಕ್ರಮ

• ಉದಯವಾಹಿನಿ,ಚಿಂಚೋಳಿ

15ನೇ ಆಗಸ್ಟ್ ರಂದು 78ನೇ ಸ್ವಾತಂತ್ರ್ಯ ದಿನಾಚರಣೆ ಕಾರ್ಯಕ್ರಮ ಅತ್ಯಂತ ಸಡಗರ ಸಂಭ್ರಮದಿಂದ ತಾಲ್ಲೂ ಕಾಡಳಿತ ಕ್ರೀಂಡಾಗಣದಲ್ಲಿ ಮಾಡಲಾಗಿದ್ದು ರಾ ಷ್ಟ್ರ ಧ್ವಜಾರೋಹಣ, ಸಾಂಸ್ಕೃತಿಕ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದ್ದು ವಿವಿಧ ರಂಗದಲ್ಲಿ ಸಾಧನೆಗೈದ ಸಾಧಕರಿಗೆ ಸನ್ಮಾನಿಸಿ ಗೌರವಿಸಲಾಗುವುದು ಎಂದು ತಹಶೀಲ್ದಾರ್ ಸುಬ್ಬಣ್ಣ ಜಮಖಂಡಿ ಹೇಳಿದರು.

ಪಟ್ಟಣದ ಚಂದಾಪೂರದ ತಹಸೀಲ್ ಸಭಾಂಗಣದಲ್ಲಿ 78ನೇ ಸ್ವಾತಂತ್ರ್ಯ ದಿನಾಚರಣೆ ನಿಮಿತ್ತ ಹಮ್ಮಿಕೊಂಡಿದ್ದ ಪೂರ್ವಭಾವಿ ಸಭೆಯಲ್ಲಿ ಮಾತನಾಡಿದ ಅವರು,ತಾಲ್ಲೂಕಾ ಮಟ್ಟದ ಅಧಿಕಾರಿಗಳು ತಾಲ್ಲೂಕಾಡಳಿತ ವತಿಯಿಂದ ಕರೆದ ಯಾವುದೇ ಸಭೆ ಸಮಾರಂಭಗಳಲ್ಲಿ ರಾಷ್ಟ್ರೀಯ ಕಾರ್ಯ ಕ್ರಮಗಳಲ್ಲಿ ಪಾಲ್ಗೋಳ್ಳುತ್ತಿಲ್ಲಾ ನನಗೆ ಬಹಳಷ್ಟು ಬೇಸರವಾಗುತ್ತಿದೆ 15ನೇ ಅಗಷ್ಟ್ 78ನೇ ಸ್ವಾತಂತ್ರ್ಯ ದಿನಾಚರಣೆಯಲ್ಲಿ ಹಾಜರಾತಿ ತೆಗೆದುಕೊಳ್ಳಲಾಗುವುದು ತಪ್ಪದೆ ಎಲ್ಲಾ ಅಧಿಕಾರಿಗಳು ಸಿಬ್ಬಂದಿ ವರ್ಗ ಜೋತೆಗೆ ಆಗಮಿಸಬೇಕು ಕಾರ್ಯಕ್ರಮಕ್ಕೆ ಬರದೆ ಇರುವ ಅಧಿಕಾರಿಗಳ ವಿರುದ್ಧ ಜಿಲ್ಲಾಧಿಕಾರಿಗಳಿಗೆ ಗಮನಕ್ಕೆ ತಂದು ಸೂಕ್ತ ಕ್ರಮ ಕೈಗೊಳ್ಳಲಾಗುವುದು ಎಂದು ಖಡಕ್ ಕ್ಕಾಗಿ ಹೇಳಿದರು. ಯಾವುದೇ ಅಧಿಕಾರಿಗಳು ಗೈರಾದರೆ ಜಿಲ್ಲಾಧಿಕಾರಿಗಳಿಗೆ ರಿಪೋರ್ಟ್ ಮಾಡಲಾಗುವುದು,15ನೇ ಅಗಷ್ಟ್ ಸ್ವಾತಂತ್ರ್ಯ ದಿನಾಚರಣೆ ಅಂಗವಾಗಿ ಎಲ್ಲಾ ಸರ್ಕಾರಿ ಕಛೇರಿಗಳು ಸೇರಿದಂತೆ ಸಂಘಸಂಸ್ಥೆಗಳಲ್ಲಿ ತಪ್ಪದೆ ರಾಷ್ಟ್ರಧ್ವಜಾರೋಹಣ ಮಾಡಬೇಕು ಮತ್ತು ಸಾಯಂಕಾಲ 6ಗಂಟೆಗೆ ಇಳಿಸಬೇಕು ಇದರಲ್ಲಿ ಯಾವುದೇ ಮುಲಾಜಿಲ್ಲದೆ ಯಾವುದೇ ಧ್ವಜ ಕಟ್ಟುವಲ್ಲಿ ಇಳಿಸುವಲ್ಲಿ ತಪ್ಪಾದರೆ ಕ್ರಮಕೈಗೊಳ್ಳಲಾಗುವುದು.

ಈಗಾಗಲೇ ಮಳೆಗಾಲ ಹೆಚ್ಚಾಗಿರುವುದರಿಂದ ಅತಿವೃಷ್ಟಿ ಅನಾವೃಷ್ಟಿ ಆಗುವ ಮೊದಲು ಗ್ರಾಮ ಪಂಚಾಯಿತಿವಾರು ಈಗಾಗಲೇ ತಾಲ್ಲೂಕಾಡಳಿತ ವತಿಯಿಂದ ನೋಡಲ್ ಅಧಿಕಾರಿಗಳು ನೆಮಕ ಮಾಡಲಾಗಿದೆ ನೋಡಲ್ ಅಧಿಕಾರಿಗಳು ಆಯಾ ಗ್ರಾಮ ಪಂಚಾಯಿತಿಯಲ್ಲಿ ಸಭೆ ನಡೆಸಿ ಅಲ್ಲಿ ಆಗುವ ಅತಿವೃಷ್ಟಿ ಅನಾವೃಷ್ಟಿ ಬಗ್ಗೆ ಮುಂಜಾಗ್ರತಾ ಕ್ರಮ ಕೈಗೊಂಡು ಮುಂ ಚಿತವಾಗಿ ತಾಲ್ಲೂಕಾಡಳಿತಕ್ಕೆ ವರದಿ ಸಲ್ಲಿಸುವಂತೆ ನೋ ಡಲ್ ಅಧಿಕಾರಿಗಳಿಗೆ ತಹಶೀಲ್ದಾರ್ ಸುಬ್ಬಣ್ಣ ಜಮಖಂಡಿ ತಾಕೀತು ಮಾಡಿದರು. ತಾಪಂ.ಇಓ ಶಂಕರ ರಾಠೋಡ್, ಗ್ರೇಡ್2 ತಹಶೀಲ್ದಾರ್ ವೆಂಕಟೇಶ ದುಗ್ಗನ್, ಟಿಹೆಚ್‌ಓ ಮಹ್ಮದ್ ಗಫಾರ, ಪಶು ವೈದ್ಯಕೀಯ ಧನರಾಜ ಬೋಮ್ಮಾ, ಸಮಾಜ ಕಲ್ಯಾಣ ಪ್ರಭುಲಿಂಗ ವಾಲಿ, ಬಿಸಿಎಂ ಅನುಸೋಯಾ ಚವ್ಹಾಣ, ಅಲ್ಪಸಂಖ್ಯಾತರ ನವಾಬ್ ಮಸೂದ್, ಅರಣ್ಯ ಭಾಗಣ್ಣಗೌಡ, ಪುರಸಭೆ ಕಾಶಿನಾಥ ಧನ್ನಿ, ಬಿಆರ್ ಸಿ ನಾಗಶೇಟ್ಟಿ ಭದ್ರಶೇಟ್ಟಿ, ತೋಟಗಾರಿಕೆ ರಾಜಕುಮಾರ ಗೋವಿನ್, ಪಿಡ್ಬ್ಲೂಡಿ ಜೆಇ ಗಿರಿರಾಜ ಸಜ್ಜನ, ಸುಭಾಷ್ ನಿಡಗುಂದಾ, ಪ್ರೋ.ಮಲ್ಲಿಕಾರ್ಜುನ ಪಾಲಾಮೋರ್, ಸುರೇಶ ದೇಶಪಾಂಡೆ, ಕೃಷಿ ಇಮ್ರಾನ್ ಅಲಿ,ಕೃಷಿ ಅಭಿಲಾಷ ಸುಬೇದಾರ ಇದ್ದರು

> ತಪ್ಪದೆ ಎಲ್ಲಾ ಸರ್ಕಾರಿ ಕಛೇರಿಗಳಲ್ಲಿ ಸಂಘ ಸಂಸ್ಥೆಗಳಲ್ಲಿ ಮಹಾಪುರುಷರ ಭಾವಚಿತ್ರ ಸಮೀಪ ದೀಪಾಲಂಕಾರ ತಪ್ಪದೆ ಮಾಡ ಬೇಕು, ಕ್ರಿಡಾಂಗಣದಲ್ಲಿ ಸ್ವಚ್ಚತೆ, ನೀರಿನ ವ್ಯವಸ್ಥೆ, ಶಾಮೀಯಾ ನ ವ್ಯವಸ್ಥೆ,ಚಿಂಚೋಳಿಯಿಂದ ಕ್ರಿಡಾಂಗಣದವರೆಗೆ ಬಸ್ಸಿನ ವ್ಯವಸ್ಥೆ ಮಾಡಲಾಗುವುದು ಬೆಳಿಗ್ಗೆ 8.30ಕ್ಕೆ ಕ್ರೀಂಡಾಗಣದಲ್ಲಿ ಎಲ್ಲೋರು ಪಾ ಲ್ಗೊಂಡು ಕಾರ್ಯಕ್ರಮ ಯಶಸ್ವಿಗೊಳಿಸಬೇಕು ಎಂದರು.

# ರಾಯಭಾರ ಕಚೇರಿಯಲ್ಲಿ ಮುಜಿಬುರ್ ರೆಹಮಾನ್ ಫೋಟೋ ತೆರವು

## ಅಮೆರಿಕ ದೇಶದಲ್ಲಿ ಇರುವ ಬಾಂಗ್ಲಾ ಮೂಲದವರಿಂದ ಪ್ರತಿಭಟನೆ, ಬಾಂಗ್ಲಾ ದೇಶದ ರಾಯಭಾರ ಕಚೇರಿ ಮೇಲೆ ದಾಳಿ



**ಅಮೆರಿಕದಲ್ಲೂ ಬಾಂಗ್ಲಾ ಹೋರಾಟದ ಕಾವು**

**ನ್ಯೂಯಾರ್ಕ್:** ಬಾಂಗ್ಲಾ ದೇಶದಲ್ಲಿ ನಡೆಯುತ್ತಿರುವ ವಿದ್ಯಾರ್ಥಿಗಳ ಪ್ರತಿಭಟನೆ, ಹಿಂಸಾಚಾರ ಹಾಗೂ ರಾಜಕೀಯ ಸ್ಥಿತ್ಯಂತರಗಳ ಬಿಸಿ ದೂರದ ಅಮೆರಿಕ ದೇಶಕ್ಕೂ ತಟ್ಟಿದೆ. ಅಮೆರಿಕದ ನ್ಯೂಯಾರ್ಕ್ ನಗರದಲ್ಲಿ ಇರುವ ಬಾಂಗ್ಲಾ ದೇಶದ ರಾಯಭಾರ ಕಚೇರಿ ಮುಂದೆ ಪ್ರತಿಭಟನೆ ನಡೆಸಿದ ನೂರಾರು ಮಂದಿ, ರಾಯಭಾರ ಕಚೇರಿ ಒಳಗೆ ಪ್ರದರ್ಶಿಸಲಾಗಿದ್ದ ಶೇಖ್ ಮುಜಿಬುರ್ ರೆಹಮಾನ್ ಅವರ ಫೋಟೋವನ್ನು ತೆರವುಗೊಳಿಸಿದ್ದಾರೆ!

ಬಾಂಗ್ಲಾ ದೇಶದ ಸಂಸ್ಥಾಪಕರಾದ ಶೇಖ್ ಮುಜೀಬುರ್ ರೆಹಮಾನ್ ಅವರ ಪುತ್ರಿ, ಬಾಂಗ್ಲಾ ದೇ ಶದ ನಿರ್ಗಮಿತ ಪ್ರಧಾನ ಮಂತ್ರಿ ಶೇಖ್ ಹಸೀನಾ ವಿರುದ್ಧ ಸರ್ವಾಧಿಕಾರಿ ಧೋರಣೆ ಅನುಸರಿಸುತ್ತಿದ್ದಾರೆ ಎಂದು ಆರೋಪಿಸಿ ಹಿಂಸಾತ್ಮಕ ಪ್ರತಿ ಭಟನೆ ನಡೆಸಿದ ವಿದ್ಯಾರ್ಥಿಗಳು, ಅವರನ್ನ ಅಧಿಕಾರದಿಂದ ಕಿತ್ತೊಗೆದಿದ್ದು ಮಾತ್ರವಲ್ಲ, ದೇಶದಿಂದಲೇ ಪಲಾಯನ ಮಾಡುವಂತೆ ಮಾಡಿದ್ದಾರೆ! ಈ ಹೋರಾಟ ಬಿಸಿಯನ್ನ ಅಮೆರಿಕದಲ್ಲಿ ಇರುವ ಬಾಂಗ್ಲಾ ದೇಶೀಯರೂ ಕಾಯ್ದುಕೊಂಡಿದ್ದಾರೆ.

ಬಾಂಗ್ಲಾ ದೇಶದಲ್ಲಿ ಸ್ವಾತಂತ್ರ್ಯ ಹೋರಾಟಗಾರರಿಗೆ ನೀಡುವ ಮೀಸಲಾತಿ ವಿರುದ್ಧ ಬಹು ಕಾಲದಿಂದ ಹೋರಾಟ ನಡೆಸಿಕೊಂಡು ಬಂದಿದ್ದ ವಿದ್ಯಾರ್ಥಿಗಳು ನಿರ್ಣಾಯಕ ಹೋರಾಟ ನಡೆ ಸುತ್ತಿದ್ದು, ಈ ಹೋ ರಾಟಕ್ಕೆ ಬಾಂಗ್ಲಾ ದೇಶದ ಸೇನೆಯ ನೆರವೂ ಸಿಕ್ಕಿದೆ. ಸದ್ಯ, ಬಾಂಗ್ಲಾ ದೇಶದಲ್ಲಿ ತಾತ್ಕಾಲಿಕ ಸರ್ಕಾರವನ್ನ ಅಲ್ಲಿನ ಅಧ್ಯಕ್ಷರು ರಚನೆ ಮಾಡಿದ್ದು, ಬಾಂಗ್ಲಾ ನಿರ್ಮಾತೃ ಶೇಖ್ ಮುಜೀಬುರ್ ರೆಹಮಾನ್ ಅವರ ಪುತ್ರಿ 77 ವರ್ಷ ವಯಸ್ಸಿನ ಶೇಖ್ ಹಸೀನಾ ಅವರು ಇದೀಗ ಭಾರತದಲ್ಲಿ ಆಶ್ರಯ ಪಡೆದಿದ್ದಾರೆ. ಬಾಂಗ್ಲಾ ದೇಶದಲ್ಲಿ ನಡೆಯುತ್ತಿರುವ ಹಿಂಸಾತ್ಮಕ ಹೋರಾಟಗಳು ಈವರೆಗೆ ನೂರಾರು ಮಂದಿಯನ್ನು ಬಲಿ ಪಡೆದಿದೆ.

**ಅಮೆರಿಕದಲ್ಲಿನ ರಾಯಭಾರ ಕಚೇರಿ ಮೇಲೆ ದಾಳಿ:** ಬಾಂಗ್ಲಾ ದೇಶದಲ್ಲಿ ಪ್ರಧಾ ನಿಯನ್ನೇ ದೇಶ ಬಿಟ್ಟು ಓಡುವಂತೆ ಮಾಡಿದ ಪ್ರತಿಭಟ ನಾ ಕಾರರು ಮರು ದಿನ ಅಮೆರಿಕದಲ್ಲೂ ಆರ್ಭಟಿಸಿ ದರು. ಈಗಾಗಲೇ ಅಮೆರಿಕ ಸರ್ಕಾರ ಬಾಂಗ್ಲಾ ದೇಶದಲ್ಲಿನ ಮಧ್ಯಂತರ ತಾತ್ಕಾಲಿಕ ಸರ್ಕಾರ ರಚನೆಯನ್ನ ಹಾಗೂ ಬಾಂಗ್ಲಾ ಅಧ್ಯಕ್ಷರು, ಸೇನೆಯ ಮಧ್ಯ ಪ್ರವೇಶವನ್ನ ಸ್ವಾಗತಿಸಿದೆ. ಆದಷ್ಟು ಬೇಗ ಬಾಂಗ್ಲಾ ದೇಶದಲ್ಲಿ ಸ್ಥಿರತೆ ನೆಲೆಸಲಿ ಎಂದು ಆಶಿಸಿದೆ. ಈ ನಡುವೆಯೇ ಅಮೆರಿಕ ದೇಶದಲ್ಲಿ ಇರುವ ಬಾಂಗ್ಲಾ ಮೂಲದವರು ನ್ಯೂಯಾರ್ಕ್ ನಗರದಲ್ಲಿ ಇರುವ ಬಾಂಗ್ಲಾ ದೇಶದ ರಾಯಭಾರ ಕಚೇರಿಗೆ ನುಗ್ಗಿದರು. ಅಲ್ಲಿನ ಗೋಡೆಯಲ್ಲಿ ನೇತು ಹಾಕಿದ್ದ ಬಾಂಗ್ಲಾ ನಿರ್ಮಾತೃ ಶೇಖ್ ಮುಜೀಬುರ್ ರೆಹಮಾನ್ ಅವರ ಫೋಟೋ ತೆರವುಗೊಳಿಸಿದರು.

ಬಾಂಗ್ಲಾ ದೇಶದ ರಾಜಧಾನಿ ಢಾಕಾದಲ್ಲಿ ಶೇಖ್ ಮುಜೀಬುರ್ ರೆಹಮಾನ್ ಅವರ ಪ್ರತಿಮೆಯನ್ನೇ ಧ್ವಂಸಗೊಳಿಸಿದ್ದ ಪ್ರತಿಭಟನಾಕಾರರು, ಇದೀಗ ಅಮೆರಿಕದಲ್ಲೂ ಇದೇ ರೀತಿಯ ದಾಳಿ ನಡೆಸಿದ್ದಾರೆ.

ಜೊತೆಯಲ್ಲೇ ಬಾಂಗ್ಲಾ ದೇಶದ ಧ್ವಜದ ಬಣ್ಣವನ್ನು ಪ್ರತಿನಿಧಿಸುವ ಟೋಪಿ ಧರಿಸಿ ತಮ್ಮ ದೇಶ ಪ್ರೇಮವನ್ನೂ ಮೆರೆದಿದ್ದಾರೆ. ಬಾಂಗ್ಲಾ ದೇಶದ ಪ್ರಧಾನಿ ಕಚೇರಿ, ಪ್ರಧಾನಿಗಳ ಅಧಿಕೃತ ಸರ್ಕಾರಿ ನಿವಾಸ, ಸಂಸತ್ ಭವನ ಸೇರಿದಂತೆ ಎಲ್ಲೆಡೆ ದಾಳಿ ನಡೆಸಿದ ಪ್ರತಿಭಟನಾ ನಿರತ ವಿದ್ಯಾರ್ಥಿಗಳು, ಶೇಖ್ ಹಸೀನಾ ಸರ್ಕಾರ ಹಾಗೂ ಅವರ ಪಕ್ಷವಾದ ಆವಾಮಿ ಲೀಗ್ ವಿರುದ್ಧ ಆಕ್ರೋಶ ಹೊರ ಹಾಕಿದ್ದರು.

**ಬಾಂಗ್ಲಾ ದೇಶದಲ್ಲಿ ಶೇಖ್ ಹಸೀನಾ ಹಾಗೂ ಅವರ ತಂದೆ ದಿವಂಗತ ಶೇಖ್ ಮುಜೀಬುರ್ ರೆಹಮಾನ್ ವಿರುದ್ಧ ಆಕ್ರೋಶ ವ್ಯಕ್ತಪಡಿಸುತ್ತಿರುವ ಪ್ರತಿಭಟನಾಕಾರರು ಅಮೆರಿಕದ ರಾಯಭಾರ ಕಚೇರಿಯಲ್ಲೂ ಮುಜೀಬುರ್ ರೆಹಮಾನ್ ಫೋಟೋ ತೆರವು ಮಾಡಿದ್ದಾರೆ. ರಾಯಭಾರ ಕಚೇರಿಯಲ್ಲಿ ಇದ್ದ ಹಲವು ವಸ್ತುಗಳನ್ನೂ ಕಿತ್ತೊಗೆದಿದ್ದಾರೆ. ಒಟ್ಟಿನಲ್ಲಿ ಮಗಳ ಮೇಲಿನ ಸಿಟ್ಟಿಗೆ ಬಾಂಗ್ಲಾ ದೇಶ ಕಟ್ಟಿದ ತಂದೆಗೇ ಅಗೌರವ ತೋರುವ ಕೆಲಸಗಳು ಬಾಂಗ್ಲಾ ದೇಶದಲ್ಲಿ ಮಾತ್ರವಲ್ಲ, ವಿಶ್ವಾದ್ಯಂತ ನಡೆಯುತ್ತಿವೆ.**

### ಸ್ವಾತಂತ್ರ್ಯ ಹೋರಾಟಗಾರರ ಮೀಸಲಾತಿ ರಾಜಕೀಯ

**ಬಾಂಗ್ಲಾ ವಿಮೋಚನಾ ಚಳವಳಿ ನಡೆಸಿದ್ದವರಿಗೆ ಆರಂಭದಲ್ಲಿ ಮೀಸಲಾತಿ ಸೌಲಭ್ಯ ಇತ್ತು. ಇದೇ ಸೌಲಭ್ಯ ಸ್ವಾತಂತ್ರ್ಯ ಹೋರಾಟಗಾರರ ಮಕ್ಕಳು ಹಾಗೂ ಮೊಮ್ಮಕ್ಕಳಿಗೂ ವಿಸ್ತರಣೆ ಆಗಿತ್ತು! ಬಹುತೇಕ ಸ್ವಾತಂತ್ರ್ಯ ಹೋರಾಟಗಾರರ ಸಂತತಿ ಶೇಖ್ ಹಸೀನಾ ಅವರ ಆವಾಮಿ ಲೀಗ್ ಪಕ್ಷದ ಜೊತೆ ಗುರ್ತಿಸಿಕೊಂಡಿತ್ತು ಹೀಗಾಗಿ, ಇದು ಪಕ್ಷದ ಮೀಸಲಾತಿಯಾಗಿ ಬದಲಾಗಿತ್ತು ಅನ್ನೋದು ಪ್ರತಿಭಟನಾಕಾರರ ಆರೋಪ ಬಾಂಗ್ಲಾ ದೇಶದ ಒಟ್ಟು ಜನಸಂಖ್ಯೆಯಲ್ಲಿ ಬೆರಳೆಣಿಯಷ್ಟು ಶೇಕಡಾವಾರು ಜನಸಂಖ್ಯೆ ಹೊಂದಿದ್ದ ಆವಾಮಿ ಲೀಗ್ ಬೆಂಬಲಿಗರಿಗೆ ಶೇ. 30ರಷ್ಟು ಮೀಸಲಾತಿ ಏಕೆ ಎಂದು ವಿದ್ಯಾರ್ಥಿ ಸಂಘಟನೆಗಳು ಪ್ರಶ್ನಿಸಿದಾಗ ಅವರನ್ನು ದೇಶ ದ್ರೋಹಿಗಳು ಎಂದು ಜರಿದಿದ್ದ ಶೇಖ್ ಹಸೀನಾ, ಇದೀಗ ಅದರ ಬೆಲೆ ತೆತ್ತಿದ್ದಾರೆ ಎಂದು ರಾಜಕೀಯ ವಿಶ್ಲೇಷಕರು ಹೇಳುತ್ತಾರೆ.**

# ಮುರ್ಮುಗೆ ಕಂಪ್ಯಾನಿಯನ್ ಆಫ್ ದಿ ಆರ್ಡರ್ ಆಫ್ ಫಿಜಿ ಪ್ರಶಸ್ತಿ



**ಸುವಾ:** ಭಾರತದ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರಿಗೆ ಮಂಗಳವಾರ ಫಿಜಿ ದೇಶದ ಅತ್ಯುನ್ನತ ನಾಗರಿಕ ಪ್ರಶಸ್ತಿಯಾದ ಕಂಪ್ಯಾನಿಯನ್ ಆಫ್ ದಿ ಆರ್ಡರ್ ಆಫ್ ಫಿಜಿಯನ್ನು ಪ್ರದಾನ ಮಾಡಲಾಯಿತು, ಅವರು ಉಭಯ ದೇಶಗಳ ನಡುವಿನ ಬಾಂಧವ್ಯವನ್ನು ಶ್ಲಾಘಿಸಿದರು ಮತ್ತು ಭಾರತವು ಫಿಜಿಯೊಂದಿಗೆ ಪಾಲುದಾರಿಕೆಗೆ ಸಿದ್ಧವಾಗಿದೆ ಎಂದು ಹೇಳಿದರು. ಫಿಜಿಯ ಅಧ್ಯಕ್ಷ ರತು ವಿಲಿಯಮ್ ಮೈವಲಿಲಿ ಕಟೋನಿವೆರೆ ಅವರು ದ್ರೌಪದಿ ಮುರ್ಮು ಅವರಿಗೆ ಆರ್ಡರ್ ಆಫ್ ಫಿಜಿಯ ಒಡನಾಡಿಯನ್ನು ನೀಡಿದರು. ಇದು ಫಿಜಿಯ ಅತ್ಯುನ್ನತ ನಾಗರಿಕ ಪ್ರಶಸ್ತಿಯಾಗಿದೆ ಎಂದು ಅಧ್ಯಕ್ಷರ ಕಚೇರಿಯು ಎಕ್ಸ್‌ನಲ್ಲಿನ ಪೋಸ್ಟ್‌ನಲ್ಲಿ ತಿಳಿಸಿದೆ. ಫಿಜಿಗೆ ಎರಡು ದಿನಗಳ ಭೇಟಿಯಲ್ಲಿರುವ ಮುರ್ಮು, ಈ ಗೌರವವು ಭಾರತ, ಫಿಜಿ ನಡುವಿನ ಸ್ನೇಹದ ಆಳ ವಾದ ಸಂ ಬಂಧದ ಪ್ರತಿಬಿಂಬವಾಗಿದೆ ಎಂದು ಬಣ್ಣಿಸಿದರು.

ಭಾರತೀಯ ರಾಷ್ಟ್ರದ ಮುಖ್ಯಸ್ಥರೊಬ್ಬರು ದ್ವೀಪ ಸಮೂಹ ರಾಷ್ಟ್ರಕ್ಕೆ ಇದು ಮೊದಲ ಭೇಟಿಯಾಗಿದೆ. ಮುರ್ಮು ಅವರು ಫಿಜಿಯನ್ ಸಂಸತ್ತನ್ನು ಉದ್ದೇಶಿಸಿ ಮಾತನಾಡಿದರು. ಭಾರತವು ಜಾಗತಿಕ ಮಟ್ಟದಲ್ಲಿ ಬಲವಾಗಿ ಹೊರಹೊಮ್ಮುತ್ತಿದ್ದಂತೆ, ನಿಮ ಆದ್ಯತೆಗಳ ಪ್ರಕಾರ, ಬಲವಾದ, ಚೇತರಿಸಿಕೊಳ್ಳುವ ಮತ್ತು ಹೆಚ್ಚು ಸಮೃದ್ಧ ರಾಷ್ಟ್ರವನ್ನು ನಿರ್ಮಿಸಲು ನಾವು ಫಿಜಿಯೊಂದಿಗೆ ಪಾಲುದಾರರಾಗಲು ಸಿದ್ಧರಾಗಿದ್ದೇವೆ. ಪರಸ್ಪರ ಪಾಲುದಾರಿಕೆಯಲ್ಲಿ ಪೂರ್ಣ ಸಾಮರ್ಥ್ಯವನ್ನು ಅನ್ಲಾಕ್ ಮಾಡಲು ನಾವು ಒಗ್ಗೂಡೋಣ. ನಮ ಪ್ರೀತಿಯ ಎರಡೂ ದೇಶಗಳ ಜನರಿಗೆ ಪ್ರಯೋಜನವಾಗಿದೆ, ಎಂದು ಅವರು ಸಂಸತ್ತಿನಲ್ಲಿ ಮಾತನಾಡುತ್ತಾ ಹೇಳಿದರು.

ಗಾತ್ರದಲ್ಲಿ ಅಗಾಧ ವ್ಯತ್ಯಾಸವಿದ್ದರೂ, ಭಾರತ, ಫಿಜಿಯು ರೋಮಾಂಚಕ ಪ್ರಜಾಪ್ರಭುತ್ವಗಳನ್ನು ಒಳಗೊಂಡಂತೆ ಬಹಳಷ್ಟು ಸಾಮ್ಯತೆಗಳನ್ನು ಹೊಂದಿದೆ ಎಂದು ಅವರು ಹೇಳಿದರು. ಸುಮಾರು 10 ವರ್ಷಗಳ ಹಿಂದೆ ಇದೇ ಸಭಾಂಗಣದಲ್ಲಿ ಮಾತನಾಡಿದ ಪ್ರಧಾನಿ ನರೇಂದ್ರ ಮೋದಿ ಅವರು ಭಾರತ ಮತ್ತು ಫಿಜಿಯನ್ನು ಒಂದುಗೂಡಿಸುವ ಕೆಲವು ಮೂಲಭೂತ ಮೌಲ್ಯಗಳನ್ನು ಒತ್ತಿಹೇಳಿದ್ದರು ಎಂದು ಅವರು ನೆನಪಿಸಿಕೊಂಡರು.

**ಇಲ್ಲಿ ನನ್ನ ಅಲ್ಪಾವಧಿಯಲ್ಲಿ, ಪ್ರಪಂಚದ ಉಳಿದ ಭಾಗಗಳು ಫಿಜಿಯಿಂದ ಕಲಿಯಲು ತುಂಬಾ ಇದೆ ಎಂದು ನಾನು ನೋಡುತ್ತೇನೆ. ಸೌಮ್ಯವಾದ ಫಿಜಿಯನ್ ಜೀವನ ವಿಧಾನ, ಸಂಪ್ರದಾಯಗಳು ಮತ್ತು ಪದ್ಧತಿಗಳ ಆಳವಾದ ಬೇರೂರಿರುವ ಗೌರವ, ಮುಕ್ತ, ಬಹುಸಂಸ್ಕೃತಿಯ ಪರಿಸರವು ಫಿಜಿಯನ್ನು ಹಾಗೆ ಮಾಡುತ್ತದೆ. ಹೆಚ್ಚುತ್ತಿರುವ ಘರ್ಷಣೆಯ ಜಗತ್ತಿನಲ್ಲಿ ವಿಶೇಷವೆಂದರೆ ಫಿಜಿ ಪ್ರಪಂಚದ ಉಳಿದ ಭಾಗಗಳು ತನ್ನ ಸಂತೋಷವನ್ನು ಕಂಡುಕೊಳ್ಳುವ ಸ್ಥಳವಾಗಿದೆ ಎಂದು ಅವರು ಹೇಳಿದರು.**

ಸುವಾದಲ್ಲಿ ಸ್ಥಾಪಿಸಲಾಗುವ ಸೂಪರ್ ಸ್ಪೆಷಾಲಿಟಿ ಕಾರ್ಡಿಯಾಲಜಿ ಆಸ್ಪತ್ರೆ ಸೇರಿದಂತೆ ಹೊಸದಾಗಿ ಘೋಷಿಸಲಾದ ಯೋಜನೆಗಳು ಫಿಜಿ ಮತ್ತು ವಿಶಾಲವಾದ ಪೆಸಿಫಿಕ್ ಪ್ರದೇಶದ ಜನರ ಆದ್ಯತೆಯ ಅಗತ್ಯಗಳನ್ನು ಪೂರೈಸಲು ಸಹಾಯ ಮಾಡುತ್ತದೆ ಎಂದು ಅವರು ವಿಶ್ವಾಸ ವ್ಯಕ್ತಪಡಿಸಿದರು.

# ವಿದೇಶಗಳಲ್ಲಿ ವ್ಯಾಸಂಗ ಮಾಡುತ್ತಿದ್ದಾರೆ 13 ಲಕ್ಷ ಭಾರತೀಯ ವಿದ್ಯಾರ್ಥಿಗಳು



**ನವದೆಹಲಿ:** ವಿದೇಶಗಳಲ್ಲಿ 13 ಲಕ್ಷಕ್ಕೂ ಹೆಚ್ಚು ಭಾರತೀಯ ವಿದ್ಯಾರ್ಥಿಗಳು ವ್ಯಾಸಂಗ ಮಾಡುತ್ತಿದ್ದಾರೆ. ಅದರಲ್ಲೂ ಕೆನಡಾದಲ್ಲಿ ಅತಿ ಹೆಚ್ಚು ಭಾರತೀಯ ವಿದ್ಯಾರ್ಥಿಗಳು ಇದ್ದಾರೆ ಎಂದು ವರದಿಯಾಗಿದೆ. ವಿದೇಶದಲ್ಲಿ ವ್ಯಾಸಂಗ ಮಾಡುತ್ತಿರುವ ಒಟ್ಟು 13,35, 878 ಭಾರತೀಯ ವಿದ್ಯಾರ್ಥಿಗಳ ಪೈಕಿ 4, 27,000 ಕೆನಡಾದಲ್ಲಿದ್ದಾರೆ ಎಂದು ತಿಳಿದುಬಂದಿದೆ.

ಕಳೆದ ಕೆಲವು ವರ್ಷಗಳಲ್ಲಿ, ವಿದೇಶದಿಂದ ಉನ್ನತ ಶಿಕ್ಷಣವನ್ನು ಪಡೆಯುವ ವಿದ್ಯಾರ್ಥಿಗಳ ಸಂಖ್ಯೆಯಲ್ಲಿ ಗಮನಾರ್ಹ ಏರಿಕೆ ಕಂಡುಬಂದಿದೆ. ವಿದೇಶಾಂಗ ವ್ಯವಹಾರಗಳ ರಾಜ್ಯ ಸಚಿವ ಕೀರ್ತಿ ವರ್ಧನ್ ಸಿಂಗ್ ಅವರು ರಾಜ್ಯಸಭೆಯಲ್ಲಿ ಹಂಚಿಕೊಂಡ ಮಾಹಿತಿಯ ಪ್ರಕಾರ, 2024 ರಲ್ಲಿ ಸುಮಾರು 13,35,878 ಭಾರತೀಯ ವಿದ್ಯಾರ್ಥಿಗಳು ವಿದೇಶದಲ್ಲಿ ಉನ್ನತ ಶಿಕ್ಷಣವನ್ನು ಪಡೆಯುತ್ತಿದ್ದಾರೆ. ಇದು 2023 ರಲ್ಲಿ 13,18,955 ವಿದ್ಯಾರ್ಥಿಗಳಿಂದ ಹೆಚ್ಚಳವಾಗಿದೆ ಮತ್ತು 2022 ರಲ್ಲಿ 9,07,404 ಆಗಿತ್ತು ಎನ್ನಲಾಗಿದೆ. ಅಧ್ಯಯನಕ್ಕಾಗಿ ವಿದೇಶಕ್ಕೆ ತೆರಳುವ ವಲಸಿಗ ವಿದ್ಯಾರ್ಥಿಗಳ ಡೇಟಾವನ್ನು ಸರ್ಕಾರ ನಿರ್ವಹಿಸುತ್ತಿದೆಯೇ ಎಂಬ ಪ್ರಶ್ನೆಗಳಿಗೆ ಸಚಿವರು ರಾಜ್ಯಸಭೆಯಲ್ಲಿ ಲಿಖಿತ ಪ್ರತಿಕ್ರಿಯೆಯಲ್ಲಿ ಈ ಡೇಟಾವನ್ನು ಹಂಚಿಕೊಂಡಿದ್ದಾರೆ.

ಪ್ರಸಕ್ತ ವರ್ಷದಲ್ಲಿ ಅತಿ ಹೆಚ್ಚು ವಿದ್ಯಾರ್ಥಿಗಳು ಕೆನಡಾದಲ್ಲಿ ಪ್ರವೇಶ ಪಡೆದಿದ್ದಾರೆ. ವಿದೇಶದಲ್ಲಿ ವ್ಯಾಸಂಗ ಮಾಡುತ್ತಿರುವ ಒಟ್ಟು 13,35,878 ಭಾರತೀಯ ವಿದ್ಯಾರ್ಥಿಗಳ ಪೈಕಿ 4,27,000 ಕೆನಡಾದಲ್ಲಿ ವ್ಯಾಸಂಗ ಮಾಡುತ್ತಿದ್ದಾರೆ. ಯುನೈಟೆಡ್ ಸ್ಟೇಟ್ಸ್ 3,37, 630 ದಾಖಲಾತಿಗಳೊಂದಿಗೆ ಎರಡನೇ ಅತಿ ಹೆಚ್ಚು ವಿದ್ಯಾರ್ಥಿಗಳನ್ನು ಹೊಂದಿದೆ. ಚೀನಾದಲ್ಲಿ 8,580, ಗ್ರೀಸ್‌ನಲ್ಲಿ ಎಂಟು, ಇಸ್ರೇಲ್‌ನಲ್ಲಿ 900, ಪಾಕಿಸ್ತಾನದಲ್ಲಿ 14 ಮತ್ತು ಉಕ್ರೇನ್‌ನಲ್ಲಿ 2510 ಮಂದಿ ಓದುತ್ತಿದ್ದಾರೆ. ವಿದೇಶದಲ್ಲಿರುವ ಭಾರತೀಯ ಮಿಷನ್‌ಗಳು ವಿದೇಶದಲ್ಲಿ ಓದುತ್ತಿರುವ ಭಾರತೀಯ ವಿದ್ಯಾರ್ಥಿ ಗಳೊಂದಿಗೆ ನಿರಂತರವಾಗಿ ತೊಡಗಿಸಿಕೊಳ್ಳುತ್ತವೆ, ಅವರೊಂದಿಗೆ ಅಥವಾ ಗ್ಲೋಬಲ್ ರಿಶ್ತಾ ಪೋರ್ಟಲ್‌ನಲ್ಲಿ ನೋಂದಾಯಿಸಲು ಪ್ರೋತ್ಸಾಹಿಸುತ್ತವೆ. ಅವರು ವಿದೇಶಕ್ಕೆ ಪ್ರಯಾಣಿಸುವ ಭಾರತೀಯ ವಿದ್ಯಾರ್ಥಿಗಳಿಗೆ ಸ್ವಾಗತ ಸಮಾರಂಭಗಳನ್ನು ಆಯೋಜಿಸುತ್ತಾರೆ ಎಂದು ಸಿಂಗ್ ಹೇಳಿದ್ದಾರೆ ಎಂದು ಸುದ್ದಿ ಸಂಸ್ಥೆ ಪಿಟಿಐ ವರದಿ ಮಾಡಿದೆ.

# ಆರ್ಥಿಕ ಸವಾಲು ಗುರುತಿಸುವಲ್ಲಿ ಮೋದಿ ಸರ್ಕಾರ ವಿಫಲ




**ನವದೆಹಲಿ:** ದುರ್ಬಲ ಗ್ರಾಹಕರ ಬೇಡಿಕೆಯ ಬೆಳವಣಿಗೆಯ ವಾಸ್ತವತೆಯನ್ನು ಇಂಡಿಯಾ ಇಂಕ್ ನಿಭಾಯಿಸುತ್ತಿದೆ ಎಂದು ಕಾಂಗ್ರೆಸ್ ಹೇಳಿದೆ ಮತ್ತು ಮೋದಿ ಸರ್ಕಾರವು ಈ ಅತ್ಯಂತ ಮೂಲಭೂತ ಆರ್ಥಿಕ ಸವಾಲನ್ನು ಗುರುತಿಸಲು ನಿರಾ ಕರಿಸುತ್ತಿದೆ ಎಂದು ಆರೋಪಿಸಿದೆ.

2024-25ರ ಹಣಕಾಸು ವರ್ಷದಲ್ಲಿ ನಿವ್ವಳ ಗಳಿಕೆ ಯಲ್ಲಿ ಕುಸಿತ ಮತ್ತು ಆದಾಯದಲ್ಲಿ ಸಾಧಾರಣ ಏಕ-ಅಂಕಿಯ ಏರಿಕೆಯೊಂದಿಗೆ ಇಂಡಿಯಾ ಇಂಕ್ ನಿಶ್ಯಬ್ದ ಆರಂಭವನ್ನು ವರದಿ ಮಾಡಿದೆ ಎಂದು ಮಾಧ್ಯಮ ವರದಿಯನ್ನು ಎಕ್ಸ್‌ನಲ್ಲಿ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಸಂವಹನದ ಉಸ್ತುವಾರಿ ಜೈರಾಮ್ ರಮೇಶ್ ಹಂಚಿಕೊಂಡಿದ್ದಾರೆ. ರಮೇಶ್ ತಮ ಪೋಸ್ಟ್‌ನಲ್ಲಿ, ಕಳೆದ ಕೆಲವು ವರ್ಷಗಳಲ್ಲಿ ಇಂಡಿಯಾ ಇಂಕ್‌ನ ಕಾರ್ಪೊರೇಟ್ ಲಾಭಗಳ ಹೆಚ್ಚಳವು ಹೆಚ್ಚುತ್ತಿರುವ ಮಾರಾಟದ ಪ್ರಮಾಣದಿಂದ ದಢವಾದ ಆದಾಯದ ಬೆಳವಣಿಗೆಯ ಮೇಲೆ ನಿರ್ಮಿಸಲಾಗಿಲ ಎಂದಿದ್ದಾರೆ.

ಈ ಟೈಲ್‌ವಿಂಡ್‌ಗಳು ನೀಡಿದ ಕಾರ್ಪೊರೇಟ್ ಲಾಭಗಳಿಗೆ ತಾತ್ಕಾಲಿಕ ಉತ್ತೇಜನವು ಈಗ ಕಡಿಮೆಯಾಗುತ್ತಿದೆ, ಇಂಡಿಯಾ ಇಂಕ್ ದುರ್ಬಲ ಗ್ರಾಹಕರ ಬೇಡಿಕೆಯ ಬೆಳವಣಿಗೆಯ ವಾಸ್ತವದೊಂದಿಗೆ ವ್ಯವಹರಿಸುತ್ತಿದೆ ಎಂದು ಅವರು ಹೇಳಿದರು.

ಇದು ಅತ್ಯಂತ ಮೂಲಭೂತ ಆರ್ಥಿಕ ಸವಾಲಾಗಿದೆ, ಇದು ಜೈವಿಕವಲ್ಲದ ಪ್ರಧಾನ ಮಂತ್ರಿಯ ಸರ್ಕಾರವು ಗುರುತಿಸಲು, ಹಿಡಿತ ಸಾಧಿಸಲು ನಿರಾಕರಿಸುತ್ತಿದೆ ಎಂದು ರಮೇಶ್ ಹೇಳಿದರು.

# 2 ಬಾರಿ ಗರುಡ ವಾಹನವೇರಿ ಭಕ್ತರಿಗೆ ದರ್ಶನ ನೀಡಲಿದ್ದಾರೆ ತಿಮಪ್ಪ



**ತಿರುಪತಿ:** ತಿರುಮಲದ ಶ್ರೀ ವೆಂಕಟೇಶ್ವರ ಸ್ವಾಮಿ ಈ ತಿಂಗಳು ಎರಡು ಬಾರಿ ಗರುಡ ವಾಹನದಲ್ಲಿ ತನ್ನ ಭಕ್ತರಿಗೆ ದಿವ್ಯದರ್ಶನ ನೀಡಲಿದ್ದಾರೆ. ಈ ತಿಂಗಳಲ್ಲಿ ಏಳುಬೆಟ್ಟದ ತಿಮಪ್ಪ ಸ್ವಾಮಿಯು ಎರಡು ಬಾರಿ ಗರುಡವಾಹನದ ಮೇಲೆ ಸವಾರಿ ಮಾಡುತ್ತಾರೆ. ಆ. 9ರಂದು ಗರುಡ ಪಂಚಮಿ, ಆ.19 ಶ್ರಾವಣ ಪೌರ್ಣಮಿಯಂದು ಗರುಡ ಸೇವೆ ನಡೆಯಲಿದೆ. ಗರುಡ ಪಂಚಮಿ ಮತ್ತು ಶ್ರಾವಣಿ ಪೌರ್ಣಮಿಯ ದಿನದಂದು ತಿಮಪ್ಪ ಸ್ವಾಮಿ ಗರುಡವಾಹನದ ಮೇಲೆ ನಾಲ್ಕು ಮಹಡಿ ಬೀದಿಗಳಲ್ಲಿ ಸಂಚರಿಸಿ ಭಕ್ತರನ್ನು ಆಶೀರ್ವದಿಸಲಿದ್ದಾರೆ.

ಆ. 9 ರಂದು ಗರುಡ ಪಂಚಮಿಯ ದಿನದಂದು ಸಂಜೆ 7 ರಿಂದ 9 ರವರೆಗೆ ತಿರುಮಲದ ಮಹಡಿ ಬೀದಿಗಳಲ್ಲಿ ತನ್ನಿಷ್ಟದ ವಾಹನವಾದ ಗರುಡನನ್ನು ಏರಿ ಭಕ್ತಾದಿಗಳಿಗೆ ಆಶೀರ್ವಾದ ನೀಡುತ್ತಾರೆ. ಗರುಡಾತನು ಶ್ರೀವಾರಿಯ ವಾಹನಗಳಲ್ಲಿ ಅಗ್ರಗಣ್ಯನು. ತಿರುಮಲ ತಿರುಪತಿ ದೇವಸ್ಥಾನ ಆಡಳಿತ ಮಂಡಳಿ (ಟಿಟಿಡಿ) ವತಿಯಿಂದ ಪ್ರತಿ ವರ್ಷ ಗರುಡ ಪಂಚಮಿಯನ್ನು ಶ್ರಾವಣ ಶುಕ್ಲ ಪಕ್ಷದ 5 ನೇ ದಿನದಂದು ಆಚರಿಸಲಾಗುತ್ತದೆ.

ನವವಿವಾಹಿತರು ತಮ ವೈವಾಹಿಕ ಜೀವನ ಸುಖಮಯವಾಗಿರಲು ಗರುಡಪಂಚಮಿ ಪೂಜೆಯನ್ನು ಮಾಡುತ್ತಾರೆ ಮತ್ತು ಮಹಿಳೆಯರು ತಮ ಮಗುವನ್ನು ಗರುಡನಂತೆ ಬಲಶಾಲಿ ಮತ್ತು ಒಳ್ಳೆಯ ಸ್ವಭಾವವನ್ನು ಹೊಂದಲು ಪೂಜಿಸುತ್ತಾರೆ ಎಂದು ನಂಬಲಾಗಿದೆ. ಆ. 19 ರಂದು ಶ್ರಾವಣ ಪೌರ್ಣಮಿ ಬರುತ್ತದೆ ಮತ್ತು ಟಿಟಿಡಿ ವತಿಯಿಂದ ಗರುಡ ವಾಹನ ಸೇವೆಯು ಪ್ರತಿ ತಿಂಗಳ ಹುಣ್ಣಿಮೆಯಂದು ನಡೆಸಲಾಗುತ್ತದೆ. ಆ.19 ರಂದು ಶ್ರಾವಣ ಪೌರ್ಣಮಿಯಂದು ಪೂರ್ಣಮಿ ಗರುಡಸೇವೆ ವಿಜಂಭಣೆಯಿಂದ ನಡೆಯಲಿದೆ. ಇದರ ಅಂಗವಾಗಿ ಸಂಜೆ 7ರಿಂದ 9ರವರೆಗೆ ತಿಮಪ್ಪ ಸ್ವಾಮಿಯು ಗರುಡ ವಾಹನವೇರಿ ದೇವಸ್ಥಾನದ ನಾಲ್ಕು ಬೀದಿಗಳಲ್ಲಿ ಸಂಚರಿಸಿ ಭಕ್ತರಿಗೆ ದರ್ಶನ ನೀಡಲಿದ್ದಾರೆ.

# 20 ವರ್ಷಗಳ ನಂತರ ಸಿಕ್ಕಿಬಿದ್ದ ಬ್ಯಾಂಕ್ ವಂಚಕ

**ನವದೆಹಲಿ:** ಬ್ಯಾಂಕ್ ವಂಚನೆ ಪ್ರಕರಣದಲ್ಲಿ ಭಾಗಿಯಾಗಿ ಕಳೆದ 20 ವರ್ಷಗಳಿಂದ ತಲೆಮರೆಸಿಕೊಂಡಿದ್ದ ಆರೋಪಿಯನ್ನು ಬಂಧಿಸುವಲ್ಲಿ ಸಿಬಿಐ ಯಶಸ್ವಿಯಾಗಿದೆ. ಬಂಧಿತ ಆರೋಪಿಯನ್ನು ವಿಚಲಪತಿ ರಾವ್ ಎಂದು ಗುರುತಿಸಲಾಗಿದೆ. ಈತ ತನ್ನ ಗುರುತು ಮತ್ತು ಸ್ಥಳವನ್ನು ಮರೆಮಾಚಿ ಜೀವನ ನಡೆಸುತ್ತಿದ್ದ, ಕಂಪ್ಯೂಟರ್ ಆಪರೇಟರ್ ಆಗಿ ನಂತರ ಸ್ವಾಮೀಜಿ ವೇಷ ಧರಿಸಿದ್ದರೂ ಆತನನ್ನು ಬಂಧಿಸುವಲ್ಲಿ ಸಿಬಿಐ ಅಧಿಕಾರಿಗಳು ಯಶಸ್ವಿಯಾಗಿದ್ದಾರೆ.

2002ರಲ್ಲಿ ಹೈದಾರಾಬಾದ್‌ನ ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾದ ಚಂದುಲಾಲ್ ಬಿರಾದಾಯಿ ಶಾಖೆಯಲ್ಲಿ ಕಂಪ್ಯೂಟರ್ ಆಪರೇಟರ್ ಆಗಿ ಕಾರ್ಯ ನಿರ್ವಹಿಸುತ್ತಿದ್ದರು. ಆ ಸಮಯದಲ್ಲಿ ಅವರು ಬ್ಯಾಂಕ್‌ಗೆ 50 ಲಕ್ಷ ರೂ. ವಂಚಿಸಿದ್ದರು.

2006ರಲ್ಲಿ ಸಿಬಿಐ ಎರಡು ಚಾರ್ಜ್‌ಶೀಟ್‌ಗಳನ್ನು ಸಲ್ಲಿಸಿತ್ತು, ಪ್ರಕರಣದಲ್ಲಿ ಆರೋಪಿಯಾಗಿರುವ ಛಲಪತಿ ಪತ್ನಿ ಕಾಪಾಟಿಪುರ ಪೊಲೀಸ್ ಠಾಣೆಯಲ್ಲಿ ನಾಪತ್ತೆ ದೂರು ದಾಖಲಿಸಿದ್ದರು. ಏಳು ವರ್ಷಗಳ ನಂತರ ಅವರು ಪತಿ ಮತಪಟ್ಟಿದ್ದಾರೆಂದು ಹೇಳಿ ಸಿವಿಲ್ ನ್ಯಾಯಾಲಯದಲ್ಲಿ ಅರ್ಜಿಸಲ್ಲಿಸಿದ್ದರು. ಹೈದರಾಬಾದ್ ನ್ಯಾಯಾಲಯ ಅವರ ಪರವಾಗಿ ಆದೇಶವನ್ನು ನೀಡಿತ್ತು. ತನ್ನ ಪತಿಯ ಆಸ್ತಿಯನ್ನು ಮುಟ್ಟುಗೋಲು ಹಾಕಿಕೊಳ್ಳಲು ತೆಲಂಗಾಣ ಹೈಕೋರ್ಟ್‌ನಿಂದ ತಡೆಯಾಜ್ಞೆ ಪಡೆದಿದ್ದರು.

ಸಿಬಿಐ ಅವರನ್ನು ಪತ್ತೆಹಚ್ಚಲು ಪ್ರಯತ್ನಿಸಿದಾಗ, ಚಲಪತಿ ಅವರು 2014 ರಲ್ಲಿ ಸೇಲಂನಿಂದ ಪಲಾಯನ ಮಾಡಿದರು ಮತ್ತು ಭೋಪಾಲ್‌ಗೆ ತೆರಳಿ ಅಲ್ಲಿ ಸಾಲ ವಸೂಲಾತಿ ಏಜೆಂಟ್ ಆಗಿ ಕೆಲಸ ಮಾಡಿದರು.

ಉತ್ತರಾಖಂಡದ ರುದ್ರಪುರಕ್ಕೆ ಶಾಲೆಯೊಂದರಲ್ಲಿ ಕೆಲಸ ಮಾಡಲು ಶುರುಮಾಡಿದರು. 2016 ರಲ್ಲಿ ಔರಂಗಾಬಾದ್‌ನ ಆಶ್ರಮಕ್ಕೆ ತೆರಳಿದರು, ಅಲ್ಲಿ ಅವರು ತಮ ಹೆಸರನ್ನು ಸ್ವಾಮಿ ವಿಧಿತಾತಾನಂದ ತೀರ್ಥ ಎಂದು ಬದಲಾಯಿಸಿಕೊಂಡರು ಮತ್ತು ಮತ್ತೊಂದು ಆಧಾರ್ ಕಾರ್ಡ್ ಪಡೆದುಕೊಂಡಿದ್ದ.

2021 ರಲ್ಲಿ ಪಲಾಯನ ಮಾಡುವ ಮೊದಲು ಅವರು ಆಶ್ರಮಕ್ಕೆ 70 ಲಕ್ಷ ರೂಪಾಯಿಗಳನ್ನು ವಂಚಿಸಿದ್ದರು ಎಂಬುದು ನಂತರ ಗೊತ್ತಾಗಿದೆ. ತನಿಖೆಯ ವೇಳೆ, ಸಿಬಿಐ ತಮಿಳುನಾಡಿನ ತಿರುನಲ್ವೇಲಿಯ ನರಸಿಂಗನಲ್ಲೂರು ಗ್ರಾಮದಲ್ಲಿ ಅವರನ್ನು ಪತ್ತೆ ಮಾಡಿದೆ. ಚಲಪತಿ ಅವರನ್ನು ಹೈದರಾಬಾದ್‌ನಲ್ಲಿರುವ ಸಿಬಿಐ ಪ್ರಕರಣಗಳ ವಿಶೇಷ ನ್ಯಾಯಾಧೀಶರ ಮುಂದೆ ಹಾಜರುಪಡಿಸಲಾಗಿದ್ದು, ಆ. 16 ರವರೆಗೆ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಲಾಗಿದೆ.

# ಕೇರಳದಲ್ಲಿ ಕಾಣಿಸಿಕೊಂಡ ಅಮೀಬಿಕ್ ಬ್ರೈನ್ ಫೀವರ್

**ತಿರುವನಂತಪುರಂ:** ದಕ್ಷಿಣ ಕೇರಳ ಜಿಲ್ಲೆಯ ಕೊಳದಲ್ಲಿ ಸ್ನಾನ ಮಾಡಿದ ಮೂವರಿಗೆ ಅಮೀಬಿಕ್ ಮೆನಿಂಗೊಎನ್ಸೆಫಾಲಿಟಿಸ್ ಇರುವುದು ಪತ್ತೆಯಾಗಿದೆ ಎಂದು ರಾಜ್ಯ ಆರೋಗ್ಯ ಸಚಿವೆ ವೀಣಾ ಜಾರ್ಜ್ ತಿಳಿಸಿದ್ದಾರೆ. ಹೇಳಿಕೆಯೊಂದರಲ್ಲಿ, ತಿರುವನಂತಪುರದಲ್ಲಿ ಇತ್ತೀಚೆಗೆ ಸಂಭವಿಸಿದ ಸಾವು ಸಹ ಮಾರಣಾಂತಿಕ ಕಾಯಿಲೆಯಿಂದ ದಢಪಟ್ಟಿದೆ ಎಂದು ಅವರು ಬಹಿರಂಗಪಡಿಸಿದರು, ಇದನ್ನು ಸಾಮಾನ್ಯವಾಗಿ ಅಮೀಬಿಕ್ ಬ್ರೈನ್ ಫೀವರ್ ಎಂದು ಕರೆಯಲಾಗುತ್ತದೆ.

ಈ ರೋಗ ಪತ್ತೆಯಾದ ಮೂವರು ರೋಗಿಗಳು ಪ್ರಸ್ತುತ ತಿರುವನಂತಪುರಂ ವೈದ್ಯಕೀಯ ಕಾಲೇಜು ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ. ಸಚಿವರ ಪ್ರಕಾರ, ಈ ಎಲ್ಲಾ ರೋಗಿಗಳು ಅವರು ಸ್ನಾನ ಮಾಡಿದ ಕೊಳದಿಂದ ವೈರಸ್ ಸಂಪರ್ಕಕ್ಕೆ ಬಂದಿದ್ದಾರೆ. ತಿರುವನಂತಪುರಂನಲ್ಲಿ ಅಮೀಬಿಕ್ ಮೆನಿಂಗೊ ಎನ್ಸೆಫಾಲಿಟಿಸ್ ಪ್ರಕರಣಗಳು ದೃಢಪಟ್ಟಿರುವ ಹಿನ್ನೆಲೆಯಲ್ಲಿ, ಆರೋಗ್ಯ ಇಲಾಖೆ ಸಲಹೆಯನ್ನು ನೀಡಿದೆ. ಪ್ರಾಣಿಗಳಿಗೆ ಸ್ನಾನ ಮಾಡುವ ಕೊಳಗಳ ನೀರ ನ್ನು ಬಳಸುವ ಜನರು ಅಥವಾ ನೀರಿನ ಹಯಸಿಂತ್ ಇರುವಲ್ಲಿ ಎಚ್ಚರಿಕೆ ವಹಿಸಲು ಸಲಹೆ ನೀಡಲಾಗುತ್ತದೆ.

ಸ್ನಾನ ಮಾಡುವುದನ್ನು ಅಥವಾ ಕಲುಷಿತ ನೀರಿನಲ್ಲಿ ಮುಖ ತೊಳೆಯುವುದನ್ನು ತಪ್ಪಿಸುವಂತೆ ಸಲಹೆಯು ಶಿಫಾರಸು ಮಾಡಿದೆ.

ಅಮೀಬಿಕ್ ಮೆನಿಂಗೊಎನ್ಸೆಫಾಲಿಟಿಸ್ ಅಮೀಬಾ ನೇಗ್ಲೇರಿಯಾ ಫೌಲೆರಿಯಿಂದ ಉಂಟಾಗುವ ಅಪರೂಪದ ಮತ್ತು ಆಗಾಗ್ಗೆ ಮಾರಣಾಂತಿಕ ಕಾಯಿಲೆಯಾಗಿದೆ.

# ನೊಬೆಲ್ ವಿಜೇತ ಮೊಹಮದ್ ಯೂನಸ್ ಬಾಂಗ್ಲಾದೇಶದ ನಾಯಕ?

## ಹಿಂದೂ ವಿರೋಧಿ ಹೋರಾಟವಾಗಿ ಪರಿವರ್ತನೆಗೊಂಡ ಬಾಂಗ್ಲಾ ಪ್ರತಿಭಟನೆ, ಏರ್ ಇಂಡಿಯಾ ವಿಮಾನ ಹಾರಾಟ ರದ್ದು



**ಢಾಕಾ:** ಪ್ರಧಾನಿ ಶೇಖ್ ಹಸೀನಾ ಅವರು ತಮ ಸರ್ಕಾರದ ವಿರುದ್ಧ ಭಾರೀ ಪ್ರತಿಭಟನೆಗಳಿಂದಾಗಿ ರಾಜೀನಾಮೆ ನೀಡಿ ದೇಶದಿಂದ ಪಲಾಯನ ಮಾಡಿದ ಒಂದು ದಿನದ ನಂತರ, ಬಾಂಗ್ಲಾದೇಶದ ಮಧ್ಯಂತರ ಸರ್ಕಾರದ ಮುಖ್ಯಸ್ಥರಾಗಿ ನೊಬೆಲ್ ಪ್ರಶಸ್ತಿ ವಿಜೇತ ಮೊಹಮದ್ ಯೂನಸ್ ಅವರನ್ನು ನೇಮಿಸಬೇಕು ಎಂದು ಬಾಂಗ್ಲಾ ವಿದ್ಯಾರ್ಥಿಗಳು ಒತ್ತಾಯಿಸುತ್ತಿದ್ದಾರೆ. ಮಂಗಳವಾರ ಮುಂಜಾನೆ ಸಾಮಾಜಿಕ ಮಾಧ್ಯಮದಲ್ಲಿ ಪೋಸ್ಟ್ ಮಾಡಿದ ವೀಡಿಯೊದಲ್ಲಿ, ಚಳವಳಿಯ ಪ್ರಮುಖ ಸಂಯೋಜಕರಲ್ಲಿ ಒಬ್ಬರಾದ ನಹಿದ್ ಇಸ್ಲಾಂ ಅವರು ಈಗಾಗಲೇ 84 ವರ್ಷದ ಯೂನಸ್ ಅವರೊಂದಿಗೆ ಮಾತನಾಡಿದ್ದಾರೆ, ಅವರು ಬಾಂಗ್ಲಾದೇಶವನ್ನು ಉಳಿಸುವ ಜವಾಬ್ದಾರಿಯನ್ನು ತೆಗೆದುಕೊಳ್ಳಲು ಒಪ್ಪಿಕೊಂಡಿದ್ದಾರೆ ಎಂದು ಬರೆದುಕೊಂಡಿದ್ದಾರೆ.

ನಾವು ಮಧ್ಯಂತರ ಸರ್ಕಾರವನ್ನು ರಚಿಸಲಾಗುವುದು ಎಂದು ನಿರ್ಧರಿಸಿದ್ದೇವೆ, ಇದರಲ್ಲಿ ವ್ಯಾಪಕ ಸ್ವೀಕಾರಾರ್ಹತೆಯನ್ನು ಹೊಂದಿರುವ ಅಂತರಾಷ್ಟ್ರೀಯವಾಗಿ ಹೆಸರಾಂತ ನೊಬೆಲ್ ಪ್ರಶಸ್ತಿ ವಿಜೇತ ಡಾ ಮೊಹಮದ್ ಯೂನಸ್ ಮುಖ್ಯ ಸಲಹೆಗಾರರಾಗಿದ್ದಾರೆ ಎಂದು ಇತರ ಇಬ್ಬರು ಸಂಯೋಜಕರಿಂದ ಸುತ್ತುವರೆದಿರುವ ನಹಿದ್ ಹೇಳಿದರು. ಮಧ್ಯಂತರ ಸರ್ಕಾರದ ಇತರ ಸದಸ್ಯರ ಹೆಸರನ್ನು ಶೀಘ್ರದಲ್ಲೇ ಪ್ರಕಟಿಸಲಾಗುವುದು ಎಂದು ಅವರು ಹೇಳಿದರು.

ಸಂಸತ್ತನ್ನು ವಿಸರ್ಜಿಸಿದ ನಂತರ ಆದಷ್ಟು ಬೇಗ ಮಧ್ಯಂತರ ಸರ್ಕಾರವನ್ನು ರಚಿಸಲಾಗುವುದು ಎಂದು ಅಧ್ಯಕ್ಷ ಮೊಹಮದ್ ಶಹಾಬುದ್ದೀನ್ ಹೇಳಿದ ಗಂಟೆಗಳ ನಂತರ ಅವರ ಘೋಷಣೆ ಬಂದಿದೆ. ತಡರಾತ್ರಿ ರಾಷ್ಟ್ರವನ್ನುದ್ದೇಶಿಸಿ ದೂರದರ್ಶನದ ಭಾಷಣದಲ್ಲಿ, ಅಧ್ಯಕ್ಷರು ಹಲವಾರು ಪ್ರಕರಣಗಳಲ್ಲಿ ಶಿಕ್ಷೆಗೊಳಗಾದ ನಂತರ ಗಹಬಂಧನದಲ್ಲಿರುವ ಮಾಜಿ ಪ್ರಧಾನಿ ಖಲೀದಾ ಜಿಯಾ ಅವರನ್ನು ಬಿಡುಗಡೆ ಮಾಡಲು ಆದೇಶಿಸಿದರು. ಮಧ್ಯಂತರ ಆಡಳಿತದ ಚೌಕಟ್ಟನ್ನು ಘೋಷಿಸಲು ಗುಂಪು ಮೊದಲು 24 ಗಂಟೆಗಳನ್ನು ತೆಗೆದುಕೊಂಡಿತು ಆದರೆ ಅಸ್ತವ್ಯಸ್ತವಾಗಿರುವ ಪರಿಸ್ಥಿತಿಯು ತಕ್ಷಣವೇ ಹೆಸರನ್ನು ಘೋಷಿಸಲು ಒತ್ತಾಯಿಸಿತು ಎಂದು ನಹಿದ್ ಹೇಳಿದರು.

ಬಡ ಪುರುಷರ ಬ್ಯಾಂಕಿಂಗ್‌ನ ಪ್ರಯೋಗವು ಬಾಂಗ್ಲಾದೇಶವನ್ನು ಮೈಕ್ರೋಕ್ರೆಡಿಟ್‌ನ ತವರು ಎಂಬ ಖ್ಯಾತಿಯನ್ನು ಗಳಿಸಿದ ಯುನಸ್ ನೇತತ್ವದ ಮಧ್ಯಂತರ ಸರ್ಕಾರವನ್ನು ರಚಿಸಲು ಸಾಧ್ಯವಾದಷ್ಟು ಬೇಗ ಕ್ರಮಗಳನ್ನು ತೆಗೆದುಕೊಳ್ಳುವಂತೆ ಅವರು ಅಧ್ಯಕ್ಷರನ್ನು ಒತ್ತಾಯಿಸಿದರು. ಯೂನಸ್ ಪ್ರಸ್ತುತ ದೇಶದಿಂದ ಹೊರಗಿದ್ದಾರೆ ಆದರೆ ಹಸೀನಾ ಅವರ ಆಡಳಿತವನ್ನು ಹೊರಹಾಕುವುದನ್ನು ಸ್ವಾಗತಿಸಿದರು, ಅಭಿವದ್ಧಿಯನ್ನು ದೇಶದ ಎರಡನೇ ವಿಮೋಚನೆ ಎಂದು ವಿವರಿಸಿದರು. ಮಾಧ್ಯಮ ವರದಿಗಳ ಪ್ರಕಾರ, ಬಾಂಗ್ಲಾದೇಶದಾದ್ಯಂತ ಕಳೆದ ಎರಡು ದಿನಗಳ ಹಿಂಸಾಚಾರದಲ್ಲಿ ಕನಿಷ್ಠ 119 ಜನರು ಸಾವನ್ನಪ್ಪಿದ್ದಾರೆ. ವ್ಯಾಪಕ ಹಿಂಸಾಚಾರ ಮತ್ತು ಲೂಟಿಯ ಬಗ್ಗೆ, ಕ್ರಾಂತಿಯನ್ನು ವಿಫಲಗೊಳಿಸಲು ಹೊರಹಾಕಲ್ಪಟ್ಟ ಫ್ಯಾಸಿಸ್ಟ್‌ಗಳು ಮತ್ತು ಅವರ ಸಹಯೋಗಿಗಳು ಇದನ್ನು ನಡೆಸುತ್ತಿದ್ದಾರೆ ಎಂದು ನಹಿದ್ ಹೇಳಿದರು. ದೇಶದಲ್ಲಿ ಅರಾಜಕತೆ ಮತ್ತು ಜನರ ಜೀವನದ ಮೇಲೆ ಅಭದ್ರತೆ ಇರುವುದರಿಂದ, ದೇಶದಲ್ಲಿ ಕಾನೂನು ಮತ್ತು ಸುವ್ಯವಸ್ಥೆಯನ್ನು ಪುನಃಸ್ಥಾಪಿಸಲು ತ್ವರಿತ ಮತ್ತು ಪರಿಣಾಮಕಾರಿ ಕ್ರಮಗಳನ್ನು ತೆಗೆದುಕೊಳ್ಳುವಂತೆ ನಾವು ಅಧ್ಯಕ್ಷರನ್ನು ಒತ್ತಾಯಿಸುತ್ತೇವೆ ಮತ್ತು ಸ್ವಾತಂತ್ರ್ಯ ಬಯಸುವ ವಿದ್ಯಾರ್ಥಿಗಳು ಸಹ ಕಾನೂನಿನ ಸಹಾಯಕ್ಕಾಗಿ ಬೀದಿಗಿಳಿಯುತ್ತಾರೆ ಎಂದು ಎಚ್ಚರಿಸಿದ್ದಾರೆ.

ವಿದ್ಯಾರ್ಥಿಗಳು ಪ್ರಸ್ತಾಪಿಸಿದ ಸರ್ಕಾರವನ್ನು ಹೊರತುಪಡಿಸಿ ಬೇರೆ ಯಾವುದೇ ಸರ್ಕಾರವನ್ನು ಸ್ವೀಕರಿಸಲಾಗುವುದಿಲ್ಲ. ನಾವು ಹೇಳಿದಂತೆ, ಯಾವುದೇ ಮಿಲಿಟರಿ ಸರ್ಕಾರ ಅಥವಾ ಮಿಲಿಟರಿ ಬೆಂಬಲಿತ ಸರ್ಕಾರ ಅಥವಾ ಫ್ಯಾಸಿಸ್ಟ್ ಸರ್ಕಾರವನ್ನು ಒಪ್ಪಿಕೊಳ್ಳುವುದಿಲ್ಲ ಎಂದು ನಹಿದ್ ಹೇಳಿದರು.

**ಪ್ರತಿಮೆ ಧ್ವಂಸ:** ಬಾಂಗ್ಲಾದಲ್ಲಿ ಪ್ರತಿಭಟನಾ ನಿರತ ಯುವಸಮೂಹ, ಬಾಂಗ್ಲಾದ ಸ್ಥಾಪಕ ಹಾಗೂ ಮಾಜಿ ಪ್ರಧಾನಿ ಶೇಖ್ ಹಸೀನಾರ ತಂದೆ, ಮಾಜಿ ಪ್ರಧಾನಿ ಶೇಖ್ ಮುಜಿಬುರ್ ರೆಹಮಾನ್ ಅವರ ಪುತ್ಥಳಿಯನ್ನೂ ಧ್ವಂಸಗೊಳಿಸಿದ್ದಾರೆ.

ಪಾಕಿಸ್ತಾನದ ಪೂರ್ವಭಾಗವಾಗಿದ್ದ ಬಾಂಗ್ಲಾ ಸ್ವತಂತ್ರ ದೇಶವಾಗಬೇಕೆಂದು ರೆಹಮಾನ್‌ರ ಮುಂದಾಳತ್ವದಲ್ಲಿ ಅವಾಮಿ ಲೀಗ್ ಹೋರಾಟ ನಡೆಸಿತ್ತು. 1971ರಲ್ಲಿ ಬಾಂಗ್ಲಾದೇಶ ಅಸ್ತಿತ್ವಕ್ಕೆ ಬಂದಾಗ ಮೊದಲ ಪ್ರಧಾನಿಯಾದ ಇವರು, ಅಧ್ಯಕ್ಷೀಯ ಮಾದರಿಯ ಸರ್ಕಾರದ ಸಂವಿಧಾನವನ್ನು ಜಾರಿಗೆ ತಂದ ಹೆಗ್ಗಳಿಕೆಗೆ ಪಾತ್ರರಾಗಿದ್ದರು.

**ಏರ್‌ಪೋರ್ಟ್ ಕಾರ್ಯಾಚರಣೆ ಬಂದ್;** ಬಾಂಗ್ಲಾ ದೇಶದ ಪ್ರಮುಖ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣವಾಗಿರುವ ಢಾಕಾದ ಹಜ್ರತ್ ಶಾಹ್ ಜಲಾ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣವು ತನ್ನ ಕಾರ್ಯಾಚರಣೆಯನ್ನು ಸ್ಥಗಿತಗೊಳಿಸಿದೆ. ಹಿಂಸಾಚಾರ ತೀವ್ರಗೊಂಡು ಪ್ರತಿಭಟನಾಕಾರರು ವಿಮಾನ ನಿಲ್ದಾಣಕ್ಕೆ ಮುತ್ತಿಗೆ ಹಾಕಿದ್ದಾರೆ. ಹೀಗಾಗಿ ವಿಮಾನಗಳ ಹಾರಾಟಗಳನ್ನು ಸ್ಥಗಿತಗೊಳಿಸಲಾಗಿದೆ.

**ರೈಲು ಸಂಚಾರ ರದ್ದು**

**ಬಾಂಗ್ಲಾದೇಶದಲ್ಲಿ ಹಿಂಸಾಚಾರ ತೀವ್ರಗೊಂಡಿರುವುದರಿಂದ ಕೋಲ್ಕತಾ ಹಾಗೂ ಢಾಕಾ ನಡುವೆ ಸಂಚರಿಸುತ್ತಿದ್ದ ಮೈತ್ರಿ ಎಕ್ಸ್‌ಪ್ರೆಸ್ ರೈಲಿನ ಸೇವೆ ರದ್ದುಗೊಳಿಸಲಾಗಿದೆ. ಬಾಂಗ್ಲಾದಲ್ಲಿ ವಿದ್ಯಾರ್ಥಿ ಸಂಘರ್ಷ ಜೋರಾದ ಬೆನ್ನಲ್ಲೇ ಈ ರೈಲು ಜು.19ರಿಂದಲೇ ತನ್ನ ಸಂಚಾರವನ್ನು ನಿಲ್ಲಿಸಿತ್ತು. ಆ ದರೆ ಬಾಂಗ್ಲಾದಲ್ಲಿನ ಅಧಿಕಾರಿಗಳ ಸೂಚನೆ ಮೇರೆಗೆ ಸಂಚಾರವನ್ನು ರದ್ದುಗೊಳಿಸಲಾಗಿದೆ ಎಂದು ಪೂರ್ವ ರೈಲ್ವೆ ಹೇಳಿದೆ. ಈ ರೈಲು ವಾರಕ್ಕೆ ಎರಡು ಬಾರಿ ಕೋಲ್ಕತಾದಿಂದ ಹೊರಟು ಬಾಂಗ್ಲಾದೇಶದ ರಾಜಧಾನಿ ಢಾಕಾಗೆ ತಲುಪುತ್ತಿತ್ತು. 2008ರಲ್ಲಿ ಲಾಲು ಪ್ರಸಾದ್ ಯಾದವ್ ಅವರು ರೈಲ್ವೆ ಸಚಿವರಾಗಿದ್ದಾಗ ಉದ್ಘಾಟಿಸಿದ್ದರು.**

## ಮಿನಿ ನ್ಯೂಸ್

### ಬಿಹಾರ ಸಿಎಂ ಕಚೇರಿ ಸ್ಫೋಟಿಸುವ ಬೆದರಿಕೆ ಹಾಕಿದವನು ಅಂದರ್

**ಪಾಟ್ನಾ:** ಬಿಹಾರ ಮುಖ್ಯಮಂತ್ರಿ ನಿತೀಶ್ ಕುಮಾರ್ ಅವರ ಪಾಟ್ನಾದಲ್ಲಿರುವ ಕಚೇರಿಯನ್ನು ಸ್ಫೋಟಿಸುವ ಬೆದರಿಕೆಯ ಇಮೇಲ್ ಕಳುಹಿಸಿದ ಆರೋಪದ ಮೇಲೆ ಕೋಲ್ಕತ್ತಾದ 51 ವರ್ಷದ ವ್ಯಕ್ತಿಯನ್ನು ಪೊಲೀಸರು ಬಂಧಿಸಿದ್ದಾರೆ. ಪ್ರಾಥಮಿಕ ತನಿಖೆಯಿಂದ ಆರೋಪಿಯು ಯಾವುದೇ ಭಯೋತ್ಪಾದಕ ಗುಂಪಿನೊಂದಿಗೆ ಸಂಪರ್ಕ ಹೊಂದಿಲ್ಲ ಎಂದು ತಿಳಿದುಬಂದಿದೆ, ಆದರೂ ಅವನು ಅಲ್-ಖೈದಾದೊಂದಿಗೆ ಸಂಬಂಧ ಹೊಂದಿದ್ದಾನೆ ಎಂದು ಇಮೇಲ್‌ನಲ್ಲಿ ಹೇಳಿಕೊಂಡಿದ್ದಾನೆ. ಕೋಲ್ಕತ್ತಾದ ಬೌಬಜಾರ್ ಪ್ರದೇಶದಲ್ಲಿ ಬಂಧಿಸಲಾದ ವ್ಯಕ್ತಿಯನ್ನು ಟ್ರಾನ್ಸಿಟ್ ರಿಮಾಂಡ್ ಪಡೆದ ನಂತರ ಪಾಟ್ನಾಕ್ಕೆ ಕರೆತರಲಾಗುವುದು ಎಂದು ಪಾಟ್ನಾದ ಹಿರಿಯ ಪೊಲೀಸ್ ವರಿಷ್ಠಾಧಿಕಾರಿ (ಎಸ್‌ಎಸ್‌ಪಿ) ರಾಜೀವ್ ಮಿಶ್ರಾ ಪಿಟಿಐಗೆ ತಿಳಿಸಿದ್ದಾರೆ.

ಆರೋಪಿ ಮೊಹಮದ್ ಜಾಹಿದ್ ಬಿಬಿ ಗಂಗೂಲಿ ಸ್ಟ್ರೀಟ್‌ನಲ್ಲಿರುವ ಸಣ್ಣ ಅಂಗಡಿಯ ಮಾಲೀಕ, ಬಿಹಾರದ ಬೇಗುಸರಾಯ್ ಜಿಲ್ಲೆಯವನು. ಜುಲೈ 16 ರಂದು ಅವರು ಏಕೆ ಬೆದರಿಕೆ ಮೇಲ್ ಕಳುಹಿಸಿದ್ದಾರೆ ಎಂಬುದು ಇನ್ನೂ ಸ್ಪಷ್ಟವಾಗಿಲ್ಲ. ಕೋಲ್ಕತ್ತಾದ ಬೌಬಜಾರ್ ಪ್ರದೇಶದಿಂದ ಪಾಟ್ನಾ ಪೊಲೀಸರ ತಂಡ ಅವರನ್ನು ಬಂಧಿಸಿದೆ. ಅವರು ಮೇಲ್ ಕಳುಹಿಸಿದ್ದ ಮೊಬೈಲ್ ಫೋನ್ ಅನ್ನು ಸಹ ವಶಪಡಿಸಿಕೊಳ್ಳಲಾಗಿದೆ ಎಂದು ರಾಜೀವ್ ಮಿಶ್ರಾ ಹೇಳಿದ್ದಾರೆ. ಅವರನ್ನು ಬಿಹಾರ ರಾಜಧಾನಿಗೆ ಕರೆತಂದ ನಂತರ ಹೆಚ್ಚಿನ ವಿಚಾರಣೆ ನಡೆಸಲಾಗುವುದು ಎಂದು ಅವರು ಹೇಳಿದರು. ಆ. 2 ರಂದು ಸಚಿವಾಲಯ ಪೊಲೀಸ್ ಠಾಣೆ ಎಸ್‌ಎಚ್‌ಒ ಸಂಜೀವ್ ಕುಮಾರ್ ಹೇಳಿಕೆಯ ಆಧಾರದ ಮೇಲೆ ಎಫ್‌ಐಆರ್ ದಾಖಲಿಸಲಾಗಿದೆ.

### ವಯನಾಡು ದುರಂತ : ಚಾಲಿಯಾರ್ ನದಿ ದಡದಲ್ಲಿ ಮುಂದುವರೆದ ಶೋಧ

**ವಯನಾಡ್:** ಉತ್ತರ ಕೇರಳ ಜಿಲ್ಲೆಯಲ್ಲಿ ಸಂಭವಿಸಿದ ಭಾರೀ ಭೂಕುಸಿತದಿಂದ ನೂರಾರು ಮಂದಿ ಸಾವನ್ನಪ್ಪಿದ ಒಂದು ವಾರದ ನಂತರ, ಮಂಗಳವಾರ ಶೋಧ ಕಾರ್ಯಾಚರಣೆಯು ಚಾಲಿಯಾರ್ ನದಿ ಜಲಾನಯನ ಪ್ರದೇಶದಲ್ಲಿ ಹೆಚ್ಚು ಕೇಂದ್ರೀಕತವಾಗಿದ್ದು, ಹೆಲಿಕಾಪ್ಟರ್‌ನಲ್ಲಿ ವಿಶೇಷ ತಂಡವು ಜಲಮೂಲಗಳು ಅಥವಾ ಅವಶೇಷಗಳನ್ನು ಸ್ಕ್ಯಾನ್ ಮಾಡುತ್ತಿವೆ ಎಂದು ಜಿಲ್ಲಾಡಳಿತ ತಿಳಿಸಿದೆ. ಶಾಲೆ ಸಮೀಪವಿರುವ ನದಿ, ಗ್ರಾಮ ಮತ್ತು ನದಿಯ ಕೆಳಭಾಗದಲ್ಲಿ ಶೋಧ ಕಾರ್ಯಾಚರಣೆ ನಡೆಸಲಾಗುವುದು ಎಂದು ಜಿಲ್ಲಾಧಿಕಾರಿ ಮೇಘಶ್ರೀಡಿ ಆರ್ ಸುದ್ದಿಗಾರರಿಗೆ ತಿಳಿಸಿದರು.

ತೀವ್ರ ಶೋಧ ಕಾರ್ಯಾಚರಣೆ ನಡೆಯುತ್ತಿದೆ ಎಂದು ಅವರು ಹೇಳಿದರು. ಎಡಿಜಿಪಿ ಎಂ ಆರ್ ಅಜಿತ್‌ಕುಮಾರ್ ಮಾತನಾಡಿ, ಚಾಲಿಯಾರ್ ನದಿಯುದ್ದಕ್ಕೂ ದುರ್ಗಮ ಪ್ರದೇಶಗಳಿದ್ದು, ಕಳೆದೆರಡು ದಿನಗಳಲ್ಲಿ ಕೆಲವು ಸ್ಥಳೀಯ ಸ್ವಯಂಸೇವಕರು ಸಿಕ್ಕಿಬಿದ್ದಿದ್ದು, ಅವರನ್ನು ರಕ್ಷಿಸಬೇಕಾಗಿದೆ ಎಂದು ಮಾಹಿತಿ ನೀಡಿದ್ದಾರೆ. ಆದ್ದರಿಂದ, ನಾವು ಸ್ಥಳೀಯ ಸ್ವಯಂಸೇವಕರನ್ನು ತಲುಪಲು ಮತ್ತು ಪೊಲೀಸ್ ಎಸ್‌ಒಜಿ ಮತ್ತು ಸೇನಾ ಕಮಾಂಡೋಗಳ ಎರಡು ತಂಡಗಳನ್ನು ರಚಿಸಲು ನಿರ್ಧರಿಸಿದ್ದೇವೆ, ಅವರನ್ನು ಆ ಪ್ರದೇಶಗಳಿಗೆ ಏರ್ ಡ್ರಾಪ್ ಮಾಡಲಾಗುತ್ತದೆ. ಅವರು ಯಾವುದೇ ಶವಗಳನ್ನು ಕಂಡುಕೊಂಡರೆ, ಅದನ್ನು ಅಲ್ಲಿಂದ ವಿಮಾನದಲ್ಲಿ ತರಲಾಗುವುದು ಎಂದು ಅಜಿತ್‌ಕುಮಾರ್ ಹೇಳಿದರು. ಶೋಧ ಕಾರ್ಯಗಳು ಕೊನೆಯ ಹಂತಕ್ಕೆ ಬರುತ್ತಿದ್ದು, ಭೂಮಿಯಲ್ಲಿ 50 ಮೀಟರ್ ಆಳದ ಕೆಸರು ಇರುವ ಸ್ಥಳಗಳಲ್ಲಿ ಶೋಧಿಸಬೇಕಾಗಿದೆ ಎಂದು ಅವರು ಹೇಳಿದರು. ಜನರು ಮತ್ತು ಭಾರೀ ಯಂತ್ರೋಪಕರಣಗಳನ್ನು ಅಲ್ಲಿಗೆ ಕಳುಹಿಸಲು ಸಾಧ್ಯವಿಲ್ಲ ಎಂದು ಅಧಿಕಾರಿ ಹೇಳಿದರು. ಸೋಮವಾರ, ಸಾವಿನ ಸಂಖ್ಯೆ 226 ಕ್ಕೆ ಏರಿದೆ.

### ಯಾವ ಮುಸ್ಲಿಂ ರಾಷ್ಟ್ರವೂ ಸೇಫ್ ಅಲ್ಲ: ಚರ್ಚೆ ಆಗುತ್ತಿದೆ ಕಂಗನಾ ಹೇಳಿಕೆ

**ನವದೆಹಲಿ:** ಯಾವ ಮುಸ್ಲಿಂ ರಾಷ್ಟ್ರವೂ ಸುರಕ್ಷಿತವಲ್ಲ ಎಂದು ಬಿಜೆಪಿ ಸಂಸದೆ ಕಂಗನಾ ರಣಾವತ್ ಹೇಳಿರುವುದು ಭಾರೀ ವಿವಾದ ಸೃಷ್ಟಿಸಿದೆ. ಈ ಬಗ್ಗೆ ಸಾಮಾಜಿಕ ಜಾಲತಾಣ ಎಕ್ಸ್ ನಲ್ಲಿ ಬರೆದುಕೊಂಡಿರುವ ಕಂಗನಾ ಮತ್ತೊಂದು ಚರ್ಚೆಗೆ ನಾಂದಿ ಹಾಡಿದ್ದಾರೆ. ಭಾರತವು ಸುತ್ತಲಿನ ಎಲ್ಲಾ ಇಸ್ಲಾಮಿಕ್ ಪ್ರಜಾಪ್ರಭುತ್ವ ದೇಶಗಳ ಮೂಲ ತಾಯ್ನಾಡು.

ಬಾಂಗ್ಲಾದೇಶದ ಪ್ರಧಾನಿ ಭಾರತದಲ್ಲಿ ಸುರಕ್ಷಿತ ಎಂದು ಭಾವಿಸಿ ಇಲ್ಲಿಗೆ ಆಗಮಿಸಿದ್ದಾರೆ. ಆದರೆ ಭಾರತದಲ್ಲೇ ವಾಸಿಸುವವರು ಹಿಂದೂ ರಾಷ್ಟ್ರ ಯಾಕೆ? ಏಕೆ ರಾಮರಾಜ್ಯ? ಎಂದು ಕೇಳುತ್ತಲೇ ಇರುತ್ತಾರೆ. ಈ ಪ್ರಶ್ನೆಗೆ ಈಗ ಸೂಕ್ತ ಉತ್ತರ ಸಿಕ್ಕಿದೆ ಎಂದು ಅವರು ಹೇಳಿದ್ದಾರೆ. ಮುಸ್ಲಿಂ ದೇಶಗಳಲ್ಲಿ ಯಾರೂ ಸುರಕ್ಷಿತರಲ್ಲ, ಸ್ವತಃ ಮುಸ್ಲಿಮರು ಕೂಡ. ಅಫ್‌ಘಾನಿಸ್ತಾನ, ಪಾಕಿಸ್ತಾನ, ಬಾಂಗ್ಲಾದೇಶ ಮತ್ತು ಬ್ರಿಟನ್‌ನಲ್ಲಿ ನಡೆಯುತ್ತಿರುವ ಬೆಳವಣಿಗೆ ದುರದೃಷ್ಟಕರ. ರಾಮರಾಜ್ಯದಲ್ಲಿ ಬದುಕುತ್ತಿರುವುದು ನಮ ಅದೃಷ್ಟ. ಜೈ ಶ್ರೀ ರಾಮ್ ಎಂದು ಕಂಗನಾ ಅಭಿಪ್ರಾಯ ಪಟ್ಟಿದ್ದಾರೆ. ಸದ್ಯ ಈ ಹೇಳಿಕೆಗೆ ವಿರುದ್ಧ ಪರ-ವಿರೋಧ ಅಭಿಪ್ರಾಯ ವ್ಯಕ್ತವಾಗುತ್ತಿದೆ.

### ಅವಾಮಿ ಲೀಗ್ ನಾಯಕನ ಹೋಟೆಲ್‌ನಲ್ಲಿ ಬೆಂಕಿ ಹಚ್ಚಿ 24 ಮಂದಿಯ ಹತ್ಯೆ

**ಢಾಕಾ:** ಅರಾಜಕತೆ ಸೃಷ್ಟಿಯಾಗಿರುವ ಬಾಂಗ್ಲಾದೇಶದ ಭೀಕರ ಪರಿಸ್ಥಿತಿ ಕುರಿತಾದ ಒಂದೊಂದೇ ವರದಿಗಳು ಹೊರಬೀಳುತ್ತಿವೆ. ಮಾಜಿ ಪ್ರಧಾನಿ ಶೇಖ್ ಹಸೀನಾ ಅವರ ಪಕ್ಷ ಅವಾಮಿ ಲೀಗ್‌ನ ನಾಯಕರೊಬ್ಬರ ಒಡೆತನದಲ್ಲಿರುವ ಢಾಕಾದ ಹೋಟೆಲ್‌ನಲ್ಲಿ ಒಬ್ಬ ಇಂಡೋನೇಷ್ಯಾ ನಾಗರಿಕ ಸೇರಿ 24 ಮಂದಿಯನ್ನು ಉದ್ರಿಕ್ತರ ಗುಂಪು ಜೀವಂತ ಸುಟ್ಟು ಹಾಕಿರುವ ಪ್ರಕರಣ ಬಯಲಾಗಿದೆ. ಶೇಖ್ ಹಸೀನಾ ಪ್ರಧಾನಿ ಹುದ್ದೆಗೆ ರಾಜೀನಾಮೆ ಸಲ್ಲಿಸಿ ದೇಶ ತೊರೆಯುತ್ತಿದ್ದಂತೆ ಈ ಕುಕೃತ್ಯ ನಡೆದಿದೆ ಎಂದು ಸ್ಥಳೀಯ ಪತ್ರಕರ್ತರು ಮತ್ತು ಆಸ್ಪತ್ರೆಯ ಮೂಲಗಳು ತಿಳಿಸಿವೆ. ಸೋಮವಾರ ರಾತ್ರಿ ಉದ್ರಿಕ್ತರ ಗುಂಪು ಜಬೀರ್ ಇಂಟರ್‌ನ್ಯಾಷನಲ್ ಹೋಟೆಲ್‌ಗೆ ನುಗ್ಗಿ ಸಿಬ್ಬಂದಿಗೆ ಬೆಂಕಿ ಹಚ್ಚಿ, ಬಳಿಕ, ಹೋಟೆಲ್‌ಗೂ ಬೆಂಕಿ ಹಚ್ಚಿದ್ದಾರೆ. ಈ ಹೋಟೆಲ್ ಅವಾಮಿ ಲೀಗ್‌ನ ಜೊಶೋರ್ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಶಹೀನ್ ಚಕ್ಲದಾರ್‌ಗೆ ಸೇರಿದ್ದಾಗಿದೆ.

ಜೋಶರ್ ಸರ್ಕಾರಿ ಆಸ್ಪತ್ರೆಯ ವೈದ್ಯರು 24 ಸುಟ್ಟ ಮೃತದೇಹಗಳು ಆಸ್ಪತ್ರೆಗೆ ಬಂದಿರುವುದಾಗಿ ಖಚಿತಪಡಿಸಿದ್ದಾರೆ. ಮತ್ತಷ್ಟು ಜನರು ಸಾವಿಗೀಡಾಗಿರುವ ಆತಂಕ ಸಹ ಇದೆ. ಅವಾಮಿ ಲೀಗ್ ನೇತೃತ್ವದ ಸರ್ಕಾರದ ವಿರುದ್ಧ ಪ್ರತಿಭಟನೆ ನಡೆಸುತ್ತಿದ್ದ ಉದ್ರಿಕ್ತರ ಗುಂಪು ಹೋಟೆಲ್‌ನ ನೆಲಮಹಡಿಗೆ ಬೆಂಕಿ ಹಚ್ಚಿದ್ದು, ಅದು ಕೆಲವೇ ಸಮಯದಲ್ಲಿ ಪೂರ್ತಿ ಹೋಟೆಲ್ ಅನ್ನು ವ್ಯಾಪಿಸಿದೆ. ರಾಜಧಾನಿ ಢಾಕಾದ ಬಂಗಬಂಧು ಅವೆನ್ಯೂನಲ್ಲಿರುವ ಅವಾಮಿ ಲೀಗ್ ಕೇಂದ್ರ ಕಚೇರಿ, ಪಕ್ಷದ ನಾಯಕರು ಮತ್ತು ಕಾರ್ಯಕರ್ತರಿಗೆ ಸೇರಿದ ಮನೆಗಳು, ವ್ಯಾಪಾರಿ ಕೇಂದ್ರಗಳನ್ನು ಪ್ರತಿಭಟನಾಕಾರರು ಧ್ವಂಸಗೊಳಿಸಿದ್ದಾರೆ.

# ಮೂರನೇ ಏಕದಿನ ಪಂದ್ಯಕ್ಕೆ ಟೀಂ ಇಂಡಿಯಾದಲ್ಲಿ 3 ಬದಲಾವಣೆ

## ಇದೀಗ ಸರಣಿಯನ್ನು ಸಮಬಲದಲ್ಲಿ ಅಂತ್ಯಗೊಳಿಸಲು ಕೊನೆಯ ಪಂದ್ಯವನ್ನು ಯಾವುದೇ ಬೆಲೆ ತೆತ್ತಾದರೂ ಗೆಲ್ಲಲೇಬೇಕು




ಭಾರತ ಮತ್ತು ಶ್ರೀಲಂಕಾ ನಡುವಿನ ಏಕದಿನ ಸರಣಿಯ ಮೂರನೇ ಮತ್ತು ಕೊನೆಯ ಪಂದ್ಯ ಆಗಸ್ಟ್ 7 ರಂದು ಕೊಲಂಬೊದ ಆರ್ ಪ್ರೇಮದಾಸ ಕ್ರೀಡಾಂಗಣದಲ್ಲಿ ನಡೆಯಲಿದೆ. ಈ ಸರಣಿಯಲ್ಲಿ ಭಾರತ ತಂಡ ಹಿನ್ನಡೆ ಅನುಭವಿಸಿದ್ದು, ಇದೀಗ ಸರಣಿಯನ್ನು ಸಮಬಲದಲ್ಲಿ ಅಂತ್ಯಗೊಳಿಸಲು ಕೊನೆಯ ಪಂದ್ಯವನ್ನು ಯಾವುದೇ ಬೆಲೆ ತೆತ್ತಾದರೂ ಗೆಲ್ಲಲೇಬೇಕು. ಹೀಗಾಗಿ ಟೀಂ ಇಂಡಿಯಾ ಈ ಹಿಂದಿನ ಎರಡು ಪಂದ್ಯಗಳಲ್ಲಿ ಮಾಡಿದ ತಪ್ಪನ್ನು ಸರಿಪಡಿಸಿಕೊಂಡು ಕಣಕ್ಕಿಳಿಯಬೇಕಾಗಿದೆ. ಆ ರಿಪೇರಿಯ ಕೆಲಸ ತಂಡದ ಆಡುವ ಹನ್ನೊಂದರ ಬಳಗದಲ್ಲಿ ಬದಲಾವಣೆ ತರುವ ಮುಖಾಂತರವೇ ಆಗಬೇಕಿದೆ. ಅದರಂತೆ ಮೂರನೇ ಏಕದಿನ ಪಂದ್ಯದಕ್ಕೆ ಟೀಂ ಇಂಡಿಯಾದಲ್ಲಿ ಪ್ರಮುಖವಾಗಿ 3 ಬದಲಾವಣೆಗಳಾಗುವ ಎಲ್ಲಾ ಸಾಧ್ಯತೆಗಳು ಗೋಚರಿಸುತ್ತಿವೆ.

### ರಾಹುಲ್ ಬದಲಿಗೆ ರಿಷಬ್ ಪಂತ್

ವಿಕೆಟ್ ಕೀಪರ್ ಬ್ಯಾಟ್ಸ್‌ಮನ್ ಕೆಎಲ್ ರಾಹುಲ್ ಈ ಏಕದಿನ ಸರಣಿಯಲ್ಲಿ ನಿರಾಸೆ ಮೂಡಿಸಿದ್ದಾರೆ. ಸರಣಿಯ ಎರಡೂ ಪಂದ್ಯಗಳಲ್ಲಿ ಕೆಎಲ್ ರಾಹುಲ್ ಹೆಚ್ಚಿನ ಕೊಡುಗೆ ನೀಡಲು ಸಾಧ್ಯವಾಗಲಿಲ್ಲ. ಮೊದಲನೇ ಏಕದಿನದಲ್ಲಿ ರಾಹುಲ್ 31 ರನ್ ಬಾರಿಸಿದರಾದರೂ ತಂಡವನ್ನು ಗೆಲುವಿನ ದಡ ಮುಟ್ಟಿಸುವಲ್ಲಿ ವಿಫಲರಾದರು. ಇನ್ನು ಎರಡನೇ ಪಂದ್ಯದಲ್ಲಿ ಕೇವಲ ಎರಡು ಎಸೆತಗಳನ್ನು ಎದುರಿಸಿದ ರಾಹುಲ್ ಶೂನ್ಯಕ್ಕೆ ಔಟಾದರು. ಇಂತಹ ಪರಿಸ್ಥಿತಿಯಲ್ಲಿ ಈಗ ರಿಷಬ್ ಪಂತ್‌ಗೆ, ರಾಹುಲ್ ಸ್ಥಾನದಲ್ಲಿ ವಿಕೆಟ್ ಕೀಪರ್ ಆಗಿ ಅವಕಾಶ ಸಿಗಬಹುದು. ರಿಷಭ್ ತಂಡಕ್ಕೆ ಎಂಟ್ರಿ ಕೊಡುವುದರೊಂದಿಗೆ ಎಡಗೈ ಬ್ಯಾಟ್ಸ್‌ಮನ್‌ಗಳ ಆಯ್ಕೆಯೂ ಇಲೆವೆನ್‌ನಲ್ಲಿ ಹೆಚ್ಚಾಗಲಿದೆ.

### ಹರ್ಷಿತ್ ರಾಣಾಗೆ ಅವಕಾಶ

ಕೊಲಂಬೊದಲ್ಲಿ ವೇಗದ ಬೌಲರ್‌ಗಳಿಗೆ ಹೆಚ್ಚಿನ ಸಹಾಯವಿಲ್ಲ. ಇದಕ್ಕೆ ಪೂರಕವಾಗಿ ಅರ್ಷದೀಪ್ ಸಿಂಗ್ ಮತ್ತು ಮೊಹಮ್ಮದ್ ಸಿರಾಜ್ ಇದುವರೆಗೆ ತಲಾ ಎರಡು ವಿಕೆಟ್‌ಗಳನ್ನು ತೆಗೆಯುವಲ್ಲಿ ಯಶಸ್ವಿಯಾಗಿದ್ದಾರೆ. ಇಂತಹ ಪರಿಸ್ಥಿತಿಯಲ್ಲಿ ಅವರ ಬದಲಿಗೆ ಯುವ ವೇಗಿ ಹಾಗೂ ಆಕ್ರಮಣಕಾರಿ ಬೌಲರ್ ಹರ್ಷಿತ್ ರಾಣಾ ಅವರನ್ನು ತಂಡಕ್ಕೆ ಸೇರಿಸಿಕೊಳ್ಳುವುದು ಉತ್ತಮ ಯೋಜನೆ ಎನಿಸಬಹುದು. ಉತ್ತಮ ಕಟ್ಟರ್ ಮತ್ತು ನಿಧಾನಗತಿಯ ಚೆಂಡುಗಳನ್ನು ಎಸೆಯುವ ಮೂಲಕ ಎಲ್ಲಾರ ಗಮನ ಸೆಳೆದಿದ್ದರು. ಅಷ್ಟೇ ಅಲ್ಲ, ರಾಣಾ ಬ್ಯಾಟಿಂಗ್ ಮೂಲಕವೂ ಕೊಡುಗೆ ನೀಡಬಲ್ಲರು. ಹೀಗಾಗಿ ಮೂರನೇ ಪಂದ್ಯಕ್ಕೆ ರಾಣಾ ತಂಡದಲ್ಲಿ ಎಂಟ್ರಿಕೊಡುವ ಎಲ್ಲಾ ಸಾಧ್ಯತೆಗಳಿವೆ.

### ದುಬೆ ಬದಲಿಗೆ ಪರಾಗ್

ಮೂರನೇ ಏಕದಿನಕ್ಕೆ ಶಿವಂ ದುಬೆ ಬದಲಿಗೆ ರಿಯಾನ್ ಪರಾಗ್ ಅವರನ್ನು ಆಡುವ ಹನ್ನೊಂದರಲ್ಲಿ ಸೇರಿಸುವುದು ತಂಡಕ್ಕೆ ಬೂಸ್ಟ್ ನೀಡಲಿದೆ. ಏಕೆಂದರೆ ಕೊಲಂಬೊ ಪಿಚ್‌ನಲ್ಲಿ ಸ್ಪಿನ್ ಬೌಲರ್‌ಗಳಿಗೆ ಸಹಾಯ ಸಿಕ್ಕಿರುವುದೇ ಇದಕ್ಕೆ ಕಾರಣ. ದುಬೆ ಈ ಹಿಂದೆ ಉತ್ತಮ ಪ್ರದರ್ಶನ ನೀಡಿದ್ದರು, ಆದರೆ ಸಂದರ್ಭಗಳನ್ನು ಪರಿಗಣಿಸಿ, ರಿಯಾನ್ ಪರಾಗ್ ಮೂರನೇ ಏಕದಿನಕ್ಕೆ ಉತ್ತಮ ಆಯ್ಕೆಯಾಗಬಹುದು. ಇದಲ್ಲದೆ ಶ್ರೇಯಸ್ ಅಯ್ಯರ್ ಬದಲಿಗೂ ರಿಯಾನ್ ಅವರನ್ನು ತಂಡದಲ್ಲಿ ಆಯ್ಕೆ ಮಾಡಬಹುದು.

# ಜಾವೆಲಿನ್‌ನಲ್ಲಿ ಭಾರತ ಫೈನಲ್




ಭಾರತದ ಚಿನ್ನ ಹುಡುಗ ನೀರಜ್ ಚೋಪ್ರಾ, ಮೊದಲ ಪ್ರಯತ್ನದಲ್ಲೇ ಪುರುಷರ ಜಾವೆಲಿನ್‌ನಲ್ಲಿ ಫೈನಲ್‌ಗೆ ಅರ್ಹತೆ ಪಡೆದುಕೊಂಡಿದ್ದಾರೆ. 89.34 ಮೀಟರ್ ದೂರ ಎಸೆಯುವ ಮೂಲಕ ಬಂಗಾರದ ಭರವಸೆ ಮೂಡಿಸಿದ್ದಾರೆ. 89.34 ಮೀಟರ್ ದೂರ ಎಸೆತ ಇದು ಜಾಗತಿಕ ಚಾಂಪಿಯನ್‌ಶಿಪ್‌ನಲ್ಲಿ ಚೋಪ್ರಾ ಅವರ ಅತ್ಯುತ್ತಮ ಎಸೆತ ಎಂದು ಹೇಳಲಾಗಿದೆ. ಈ ಹಿಂದೆ ಅವರು 89.94 ಮೀ ಎಸೆತ ಮೂಲಕ ಇತಿಹಾಸ ಸೃಷ್ಟಿಸಿದರು. ಚೋಪ್ರಾ ಅವರು ವೈಯಕ್ತಿಕ ಒಲಿಂಪಿಕ್ ಸ್ಪರ್ಧೆಯಲ್ಲಿ ಎರಡು ಚಿನ್ನದ ಪದಕಗಳನ್ನು ಗೆಲ್ಲುವ ಮೂಲಕ ಭಾರತದ ಜಾವೆಲಿನ್‌ನಲ್ಲೂ ಹಾಗೂ ಒಲಿಂಪಿಕ್ ಹೊಸ ಅಧ್ಯಾಯವನ್ನು ಸೃಷ್ಟಿಸಿದರು. ಇನ್ನು ಅಂತಿಮ ಪಂದ್ಯ ಆಗಸ್ಟ್ 8 ರಂದು ನಡೆಯುವ ಸಾಧ್ಯತೆ ಇದೆ.

ಈ ವರ್ಷ ಕೇವಲ ಮೂರು ಈವೆಂಟ್‌ಗಳಲ್ಲಿ ಭಾಗವಹಿಸಿದ್ದರೂ, ವಿಶ್ವ ಚಾಂಪಿಯನ್‌ನಲ್ಲಿ ಗಮನಾರ್ಹ ಸಾಧನೆ ಮಾಡಿದ್ದಾರೆ. ಈಗಾಗಲೇ ನೀರಜ್ ಚೋಪ್ರಾ ಅವರು ವಿಶ್ವಮಟ್ಟದಲ್ಲಿ ಭಾರಿ ಪೈಪೋಟಿಯನ್ನು ನೀಡುತ್ತಾರೆ. 88.36 ಮೀಟರ್ ಎಸೆದ ಚೋಪ್ರಾ, ಮೇನಲ್ಲಿ ನಡೆದ ದೋಹಾ ಡೈಮಂಡ್ ಲೀಗ್‌ನಲ್ಲಿ ಎರಡನೇ ಸ್ಥಾನವನ್ನು ಗಳಿಸಿದರು. ಇದು ಕೂಡ ಅವರ ಉತ್ತಮ ಸಾಧನೆ ಆಗಿತ್ತು. ನಂತರ ಆಡ್ಕ್ಟರ್ ಸಮಸ್ಯೆಯಿಂದ ಮೇ 28 ರಂದು ಆಸ್ಟ್ರಾವಾ ಗೋಲ್ಡನ್ ಸ್ಪೈಕ್ ಈವೆಂಟ್‌ನಿಂದ ಹಿಂದೆ ಸರಿದರು.

# ಸ್ಪರ್ಧಿಗಳ ನೀರಸ ಪ್ರದರ್ಶನಕ್ಕೆ ಪಡುಕೋಣೆ ಬೇಸರ



ಬ್ಯಾಡ್ಮಿಂಟನ್ ಪುರುಷರ ಸಿಂಗಲ್ಸ್‌ನಲ್ಲಿ ಕಂಚಿನ ಪದಕಕ್ಕಾಗಿ ನಡೆದ ಪಂದ್ಯದಲ್ಲಿ ಭಾರತದ ಪದಕ ಭರವಸೆಯಾಗಿದ್ದ ಲಕ್ಷ್ಯ ಸೇನ್ ಸೋಲುವುದರೊಂದಿಗೆ ಬ್ಯಾಡ್ಮಿಂಟನ್‌ನಲ್ಲಿ ಭಾರತದ ಪದಕದ ಭರವಸೆಯೂ ಅಂತ್ಯಗೊಂಡಿದೆ. ವಾಸ್ತವವಾಗಿ ಈ ಬಾರಿ ಬ್ಯಾಡ್ಮಿಂಟನ್‌ನಿಂದ ಭಾರತಕ್ಕೆ ಅಧಿಕ ಪದಕಗಳನ್ನು ಗೆಲ್ಲುವ ನಿರೀಕ್ಷೆಗಳನ್ನು ಇಟ್ಟುಕೊಳ್ಳಲಾಗಿತ್ತು. ಆದರೆ ಅದೆಲ್ಲವೂ ಹುಸಿಯಾಗಿದೆ. ಪಿವಿ ಸಿಂಧು ಸೇರಿದಂತೆ ದೇಶದ ಸ್ಟಾರ್ ಶಟ್ಲರ್‌ಗಳಿಗೆ ಕನಿಷ್ಠ ಕಂಚಿನ ಪದಕ ಗೆಲ್ಲಲೂ ಸಾಧ್ಯವಾಗಲಿಲ್ಲ. ಆಟಗಾರರ ಈ ನೀರಸ ಪ್ರದರ್ಶನವನ್ನು ಕಂಡು ಇದೀಗ ದೇಶದ ಬ್ಯಾಡ್ಮಿಂಟನ್ ದಂತಕಥೆ ಪ್ರಕಾಶ್ ಪಡುಕೋಣೆ ತೀವ್ರ ಅಸಮಾಧಾನ ಹೊರಹಾಕಿದ್ದಾರೆ.

**ಪದಕವಿಲ್ಲದ ಒಲಿಂಪಿಕ್ಸ್:** ವಾಸ್ತವವಾಗಿ 2008ರ ನಂತರ ಇದೇ ಮೊದಲ ಬಾರಿಗೆ ಭಾರತದ ಶಟ್ಲರ್‌ಗಳು ಒಲಿಂಪಿಕ್ಸ್‌ನಲ್ಲಿ ಪದಕ ಗೆಲ್ಲಲು ವಿಫಲರಾಗಿರುವುದು. 2012 ರ ಒಲಿಂಪಿಕ್ಸ್‌ನಲ್ಲಿ, ಸೈನಾ ನೆಹ್ವಾಲ್ ಕಂಚಿನ ಪದಕವನ್ನು ಗೆಲ್ಲುವ ಮೂಲಕ ಬ್ಯಾಡ್ಮಿಂಟನ್‌ನಲ್ಲಿ ದೇಶಕ್ಕೆ ಮೊದಲ ಪದಕವನ್ನು ಗೆದ್ದುಕೊಟ್ಟಿದ್ದರು. ಆ ಬಳಿಕ ಪಿವಿ ಸಿಂಧು ರಿಯೊ ಒಲಿಂಪಿಕ್ಸ್ ನಲ್ಲಿ ಬೆಳ್ಳಿ ಮತ್ತು ಟೋಕಿಯೊ ಒಲಿಂಪಿಕ್ಸ್‌ನಲ್ಲಿ ಕಂಚಿನ ಪದಕ ಗೆದ್ದಿದ್ದರು. ಹೀಗಾಗಿ ಪ್ಯಾರಿಸ್ ಒಲಿಂಪಿಕ್ಸ್‌ನಲ್ಲಿ ಬ್ಯಾಡ್ಮಿಂಟನ್ ವಿಭಾಗದಲ್ಲಿ ಎರಡಕ್ಕಿಂತ ಹೆಚ್ಚು ಪದಕಗಳನ್ನು ನಿರೀಕ್ಷಿಸಲಾಗಿತ್ತು. ಆದರೆ ಆ ನಿರೀಕ್ಷೆಗೆ ತಕ್ಕಂತ ಪ್ರದರ್ಶನ ನೀಡುವಲ್ಲಿ ಭಾರತದ ಆಟಗಾರರು ಎಡವಿದ್ದಾರೆ.

ಈ ಬಗ್ಗೆ ತೀವ್ರ ಅಸಮಾಧಾನ ಹೊರಹಾಕಿರುವ ಪ್ರಕಾಶ್ ಪಡುಕೋಣೆ, 'ಒಲಿಂಪಿಕ್ಸ್‌ಗೂ ಮುನ್ನ ಭಾರತೀಯ ಅಥ್ಲೀಟ್‌ಗಳ ಪ್ರತಿಯೊಂದು ಬೇಡಿಕೆಯೂ ಈಡೇರಿದ್ದು, ಅವರಿಂದ ವಿಶೇಷವಾಗಿ ಬ್ಯಾಡ್ಮಿಂಟನ್ ತಂಡದಿಂದ ಉತ್ತಮ ಪ್ರದರ್ಶನವನ್ನು ನಿರೀಕ್ಷಿಸಿದ್ದೇವು.

ಆದರೆ ಬ್ಯಾಡ್ಮಿಂಟನ್‌ನಿಂದ ಒಂದೇ ಒಂದು ಪದಕವನ್ನು ಗೆಲ್ಲಲಾಗಲಿಲ್ಲ ಎಂಬುದು ನನಗೆ ಸ್ವಲ್ಪ ನಿರಾಶೆ ತಂದಿದೆ ಎಂದಿದ್ದಾರೆ. ಆದರೆ ಒಲಿಂಪಿಕ್ಸ್ ಆರಂಭಕ್ಕೂ ಮುನ್ನ ಭಾರತದ ಆಟಗಾರರಿಗೆ ಸಂಪೂರ್ಣ ಬೆಂಬಲ ನೀಡಿದ ಕ್ರೀಡಾ ಸಚಿವಾಲಯ ಮತ್ತು ಇತರ ಮಧ್ಯಸ್ಥಗಾರರನ್ನು ಪ್ರಕಾಶ್ ಪಡುಕೋಣೆ ಶ್ಲಾಘಿಸಿದ್ದಾರೆ. ಆದರೆ ಪ್ಯಾರಿಸ್‌ನಲ್ಲಿನ ನಿರಾಶಾದಾಯಕ ಪ್ರದರ್ಶನಕ್ಕೆ ವಿಷಾದ ವ್ಯಕ್ತಪಡಿಸಿದ್ದಾರೆ.




## ಕುಸ್ತಿ ಪಂದ್ಯದಲ್ಲಿ ಮಹತ್ವದ ಸಾಧನೆ ಮಾಡಿದ ಭಾರತ

# ಸೆಮಿಫೈನಲ್‌ಗೆ ತಲುಪಿದ ವಿನೇಶ್



ಪ್ಯಾರಿಸ್ ಒಲಿಂಪಿಕ್ಸ್ 2024 ರಲ್ಲಿ ಕುಸ್ತಿ ಪಂದ್ಯದ ಮಹಿಳೆಯರ 50 ಕೆಜಿ ವಿಭಾಗದ ವಿನೇಶ್ ಫೋಗಟ್ ವಿಭಾಗದ ಉಕ್ರೇನ್‌ನ ಒಕ್ಸಾನಾ ಲಿವಾಚ್ ಅವರನ್ನು 7-5 ರಿಂದ ಸೋಲಿಸಿ. ಸೆಮಿಫೈನಲ್‌ಗೆ ತಲುಪಿದ್ದಾರೆ. ನಾಲ್ಕು ಬಾರಿಯ ವಿಶ್ವ ಚಾಂಪಿಯನ್ ಮತ್ತು ಒಲಂಪಿಕ್ ಚಿನ್ನದ ಪದಕ ವಿಜೇತ ಯುಯಿ ಸುಸಾಕಿ ವಿರುದ್ಧ ಗೆದ್ದು ಇತಿಹಾಸ ಸೃಷ್ಟಿಸಿದ್ದಾರೆ.

ಎರಡು ಬಾರಿ ಒಲಿಂಪಿಯನ್ ಆಗಿರುವ ಅವರು ಕಾಮನ್‌ವೆಲ್ತ್ ಗೇಮ್ಸ್‌ನಲ್ಲಿ ಎರಡು ಮತ್ತು ಏಷ್ಯನ್ ಗೇಮ್ಸ್‌ನಲ್ಲಿ ಒಂದು ಚಿನ್ನದ ಪದಕವನ್ನು ಗಳಿಸಿದ್ದಾರೆ. 2019 ರ ವಿಶ್ವ ಚಾಂಪಿಯನ್‌ಶಿಪ್‌ನಲ್ಲಿ ಕಂಚಿನ ಪದಕವನ್ನು ಪಡೆದರು. ಹಾಗೂ 2021 ರಲ್ಲಿ ಏಷ್ಯನ್ ಚಾಂಪಿಯನ್ ಆಗಿ ಹೊರಹೊಮ್ಮಿದರು. ಪ್ಯಾರಿಸ್ ಒಲಿಂಪಿಕ್ಸ್ 2024 ರ ಅತ್ಯಂತ ರೋಮಾಂಚಕಾರಿ ಪಂದ್ಯಗಳಲ್ಲಿ ವಿನೇಶ್ ಫೋಗಟ್ ಅವರು ವಿಶ್ವ ಚಾಂಪಿಯನ್ ಯುಯಿ ಸುಸಾಕಿ ಅವರನ್ನು ಸೋಲಿಸಿರುವುದು ಬಹಳ ರೋಚಕವಾಗಿತ್ತು. ಇಬ್ಬರು ಕೂಡ ಭಾರೀ ಪೈಪೋಟಿಯನ್ನು ನೀಡಿದ್ದು, ವಿನೇಶ್ ಫೋಗಟ್ ಅವರು ತಮ್ಮ ತಂತ್ರದಿಂದ ಯುಯಿ ಸುಸಾಕಿ ಅವರನ್ನು ಸೋಲಿಸಿದರು. ಸುಸಾಕಿ ವಿರುದ್ಧದ ಗುದ್ದಾಡಿದ ನಂತರ ವಿನೇಶ್ ಫೋಗಟ್ 7-5 ಅಂಕಗಳ ಮೂಲಕ ಉಕ್ರೇನ್‌ನ ಒಕ್ಸಾನಾ ಲಿವಾಚ್‌ರನ್ನು ಸೋಲಿಸುವ ಮೂಲಕ ಸೆಮಿಫೈನಲ್‌ಗೆ ಪ್ರವೇಶಿಸಿದ್ದಾರೆ. ವಿನೇಶ್ ಫೋಗಟ್ ಮತ್ತು ಒಕ್ಸಾನಾ ಲಿವಾಚ್ ಇಬ್ಬರು ಕೂಡ ಸಮಾನವಾಗಿ ಬಲ ಪ್ರದರ್ಶನ ಮಾಡಿದ್ದಾರೆ. ಆದರೆ ಇಲ್ಲಿಯೂ ಕೂಡ ವಿನೇಶ್ ಫೋಗಟ್ ತಮ್ಮ ತಂತ್ರಗಾರಿಕೆಯನ್ನು ಉಪಯೋಗಿಸಿದ್ದರು. ಇದೀಗ ಈ ಮೂಲಕ ವಿನೇಶ್ ಫೋಗಟ್ ಅವರು ಭಾರತಕ್ಕೆ ಚಿನ್ನ ಮುನ್ನಡಿ ಬರೆದಿದ್ದಾರೆ.

## ಆರ್ ಎಂದರೆ ಯಾರು ಎಂದು ನೆಟ್ಟಿಗರು ಶ್ರದ್ಧಾಗೆ ಸೋಷಿಯಲ್ ಮೀಡಿಯಾದಲ್ಲಿ ಪ್ರಶ್ನೆ



# ರಾಹುಲ್ ಮೋದಿ ಜೊತೆ ಶ್ರದ್ಧಾ ಬ್ರೇಕಪ್

ಬಾಲಿವುಡ್ ಬ್ಯೂಟಿ ಶ್ರದ್ಧಾ ಕಪೂರ್ ತಮ್ಮ ಸಿನಿಮಾಗಿಂತ ಖಾಸಗಿ ವಿಚಾರವಾಗಿ ಹೆಚ್ಚುಚ್ಚು ಸುದ್ದಿಯಾಗುತ್ತಿದ್ದಾರೆ. ಇತ್ತೀಚೆಗಷ್ಟೇ ಬಾಯ್ ಫ್ರೆಂಡ್ ಬಗ್ಗೆ ಇನ್ ಡೈರೆಕ್ಟ್ ಆಗಿ ಬಾಯಿಬಿಟ್ಟಿದ್ದ ಶ್ರದ್ಧಾ, ಈಗ ಬ್ರೇಕ್ ಅಪ್ ಮಾಡಿಕೊಂಡಿದ್ದಾರೆ ಎಂದು ಬಿಟೌನ್ ಮಾತಾಡ್ತಿದೆ. ಬಾಯ್ ಫ್ರೆಂಡ್ ರಾಹುಲ್ ಮೋದಿಜೊತೆ ಈ ನಟಿ ಟೂ ಬಿಚ್ಚಿದ್ದಾರಂತೆ.

ಇತ್ತೀಚೆಗಷ್ಟೇ ತಮ್ಮ ಬಾಯ್‌ಫ್ರೆಂಡ್ ಯಾರು ಎಂಬುದರ ಬಗ್ಗೆ ನಟಿ ಸುಳಿವು ಬಿಟ್ಟುಕೊಟ್ಟಿದ್ದರು. ಶ್ರದ್ಧಾ ಕಪೂರ್ ಇತ್ತೀಚೆಗೆ ಹೊಸ ಫೋಟೋವೊಂದನ್ನು ಶೇರ್ ಮಾಡಿದ್ದರು. ಆ ಫೋಟೋದಲ್ಲಿ ಆರ್ ಎಂಬ ಪೆಂಡೆಂಟ್ ಸರವನ್ನು ನಟಿ ಧರಿಸಿದ್ದರು. ಈ ಪೋಸ್ಟ್ ಶೇರ್ ಮಾಡುತ್ತಿದ್ದಂತೆ ಆರ್ ಅಂದರೆ ಯಾರು ಎಂದು ಸಾಮಾಜಿಕ ಜಾಲತಾಣದಲ್ಲಿ ನೆಟ್ಟಿಗರಿಂದ ಚರ್ಚೆಗೆ ಶುರುವಾಗಿತ್ತು.

ಆರ್ ಎಂದರೆ ಯಾರು ಎಂದು ನೆಟ್ಟಿಗರು ಶ್ರದ್ಧಾಗೆ ಸೋಷಿಯಲ್ ಮೀಡಿಯಾದಲ್ಲಿ ಪ್ರಶ್ನೆ ಮಾಡಿದ್ದರು. ಇನ್ನೂ ಕೆಲವರು ಒಂದು ಹೆಜ್ಜೆ ಮುಂದೆ ಹೋಗಿ, ಆರ್ ಅಂದರೆ ರಾಹುಲ್ ಮೋದಿ ಅಲ್ವಾ ಎಂದು ಕೇಳಿದ್ದರು. ಹರಿದು ಬಂದಿದ್ದ ಪ್ರಶ್ನೆಗಳಿಗೆ ನಟಿಯ ಮೌನವೇ ಉತ್ತರವಾಗಿತ್ತು.

'ಆಶಿಕಿ 2' ಬೆಡಗಿ ಶ್ರದ್ಧಾ ಕಪೂರ್ ಗಪ್ ಚುಪ್ ಆಗಿ ರಾಹುಲ್ ಮೋದಿ ಜೊತೆ ಡೇಟಿಂಗ್ ಮಾಡುತ್ತಿದ್ದಾರೆ ಎಂಬ ಸುದ್ದಿಯಿತ್ತು. ಅದಕ್ಕೆ ಪೂರಕವೆಂಬಂತೆ ಅಂಬಾನಿ ಕುಟುಂಬದ ವಿವಾಹ ಪೂರ್ವ ಕಾರ್ಯಕ್ರಮದಲ್ಲಿ ಇಬ್ಬರೂ ಜೊತೆಯಾಗಿ ಕಾಣಿಸಿಕೊಂಡಿದ್ದರು. ಅಂತೆ, ಕಂತೆ ಸುದ್ದಿಗೆ ಮತ್ತಷ್ಟು ಪುಷ್ಠಿ ನೀಡಿದಂತೆ ಆಗಿತ್ತು. ಈಗ ಬ್ರೇಕ್ ಅಪ್ ಸುದ್ದಿ ಕೇಳಿ ಬಂದಿದೆ.

# 40 ಕೋಟಿ ಮೌಲ್ಯದ ಕಂಗನಾ ಬಂಗಲೆ ಮಾರಾಟ

## ಸಿನಿಮಾಗೆ ಬ್ರೇಕ್ ಕೊಟ್ಟು ಪಾಲಿಟಿಕ್ಸ್‌ನಲ್ಲಿ ಸಕ್ರಿಯ



3,042 ಚದರ ಅಡಿ

ಬಾಲಿವುಡ್ ನಟಿ ಕಂಗನಾ ರಣಾವತ್ ಸದ್ಯ ರಾಜಕೀಯ ರಂಗದಲ್ಲಿ ಬ್ಯುಸಿಯಾಗಿದ್ದಾರೆ. ಸಿನಿಮಾಗೆ ಬ್ರೇಕ್ ಕೊಟ್ಟು ಪಾಲಿಟಿಕ್ಸ್‌ನಲ್ಲಿ ತೊಡಗಿಸಿಕೊಂಡಿದ್ದಾರೆ. ಇದೀಗ ಕಂಗನಾ, 40 ಕೋಟಿ ರೂ. ಮೌಲ್ಯದ ಬಂಗಲೆಯನ್ನು ಮಾರಾಟ ಮಾಡಲು ಮುಂದಾಗಿದ್ದಾರೆ ಎಂಬ ಸುದ್ದಿ ಹರಿದಾಡುತ್ತಿದೆ. ನಟಿ ಬಂಗಲೆಯನ್ನು ಮಾರಾಟಕ್ಕೆ ಮುಂದಾಗಿರುವ ವಿಷಯವನ್ನು ಯೂಟ್ಯೂಬ್ ಚಾನೆಲ್‌ವೊಂದು ವರದಿ ಮಾಡಿದೆ. ಮುಂಬೈನಲ್ಲಿರುವ ಕೋಟ್ಯಂತರ ಮೌಲ್ಯದ ಆ ಕಟ್ಟಡದಲ್ಲಿಯೇ ಮಣಿಕರ್ಣಿಕಾ ಸಿನಿಮಾ ಆಫೀಸ್ ಕೂಡ ಇದೆ. ಈ ಕಟ್ಟಡವು ಮುಂಬೈನ ಬಾಂದ್ರಾದಲ್ಲಿ ಎರಡು ಮಹಡಿಗಳಲ್ಲಿ 3,042 ಚದರ ಅಡಿಗಳಲ್ಲಿ ಹರಡಿದೆ. ಇದೀಗ 40 ಕೋಟಿ ರೂ. ಮಾರಲು ನಿಗದಿಯಾಗಿದೆ ಎನ್ನಲಾಗಿದೆ. ಕಂಗನಾ ಅವರ ಇದೇ ಕಟ್ಟಡ ಈ ಮೊದಲು ಕೂಡ ಸುದ್ದಿ ಆಗಿತ್ತು. ನಿಯಮಗಳನ್ನು ಉಲ್ಲಂಘಿಸಿ, ಅಕ್ರಮವಾಗಿ ಕಟ್ಟಡವನ್ನು ವಿಸ್ತರಿಸಲಾಗಿತ್ತು ಎಂಬ ಕಾರಣಕ್ಕೆ ಮುಂಬೈ ಪಾಲಿಕೆ ಅಧಿಕಾರಿಗಳು ಕ್ರಮ ತೆಗೆದುಕೊಂಡಿದ್ದರು. ಅದರ ವಿರುದ್ಧ ನಟಿ ಗರಂ ಆಗಿದ್ದರು.

ಅಂದಹಾಗೆ, ಕಂಗನಾ ನಿರ್ದೇಶಿಸಿ, ನಿರ್ಮಾಣ ಮಾಡಿರುವ 'ಎಮರ್ಜೆನ್ಸಿ' ಸಿನಿಮಾ ರಿಲೀಸ್ ಸಿದ್ಧವಾಗಿದೆ. ಸೆ.6ರಂದು ರಿಲೀಸ್ ಮಾಡಲು ಸಿದ್ಧತೆ ಮಾಡುತ್ತಿದ್ದಾರೆ.



# 2900 ಕೋಟಿ ರೂ. ಒಡೆಯ ಸಲ್ಮಾನ್

ಸಲ್ಮಾನ್ ಖಾನ್, ಬಾಲಿವುಡ್‌ನ ಶ್ರೀಮಂತ ನಟರಲ್ಲಿ ಒಬ್ಬರು. ಅವರು ಬಾಲಿವುಡ್‌ನಲ್ಲಿ ಹಲವು ಯಶಸ್ವಿ ಚಿತ್ರಗಳನ್ನು ನೀಡಿದವರು. ಅವರು ಚಿತ್ರರಂಗಕ್ಕೆ 1988ರಲ್ಲಿ ಕಾಲಿಟ್ಟರು. 'ಬೀವಿ ಹೋ ತೋ ಐಸಿ' ಚಿತ್ರದಿಂದ ಅವರು ಬಣ್ಣದ ಬದುಕು ಆರಂಭಿಸಿದರು. ಅವರು ಪ್ರತಿ ಚಿತ್ರಕ್ಕೆ 100 ಕೋಟಿ ರೂಪಾಯಿಗೂ ಅಧಿಕ ಸಂಭಾವನೆ ಪಡೆಯುತ್ತಾರೆ ಎಂದು ಹೇಳಲಾಗಿದೆ. ಅವರಿಗೆ ಇತ್ತೀಚೆಗೆ ಯಶಸ್ಸು ಸಿಕ್ಕಿಲ್ಲ. ಅವರ ಒಟ್ಟೂ ಆಸ್ತಿ ಬಗ್ಗೆ ಇಲ್ಲಿದೆ ವಿವರ. ಸಲ್ಮಾನ್ ಖಾನ್ ಅವರ ಆಸ್ತಿ 2900 ಕೋಟಿ ರೂಪಾಯಿ. ಸಲ್ಮಾನ್ ಖಾನ್ ಬಳಿ ಹಲವು ದುಬಾರಿ ಪ್ರಾಪರ್ಟಿಗಳು ಇವೆ. ಅವರು ಸಮುದ್ರ ತೀರದತ್ತ ಮುಖ ಮಾಡಿದ ಗ್ಯಾಲಕ್ಸಿ ಅಪಾರ್ಟ್‌ಮೆಂಟ್‌ನಲ್ಲಿ ಟ್ರಿಪ್ಲೆಕ್ಸ್ ಅಪಾರ್ಟ್‌ಮೆಂಟ್ ಹೊಂದಿದ್ದಾರೆ. ಇದು ಸಲ್ಮಾನ್ ಖಾನ್ ಅವರ ದುಬಾರಿ ಮನೆಗಳಲ್ಲಿ ಒಂದು. ಇದರ ಬೆಲೆ 100 ಕೋಟಿ ರೂಪಾಯಿ.

# ಧರ್ಮಸ್ಥಳದಲ್ಲಿ ಅಂಥದ್ದೇನಾಯ್ತು



ನಟ ಯಶ್ ಅವರು ಧರ್ಮಸ್ಥಳಕ್ಕೆ ಬಂದು ದೇವರಿಗೆ ಪೂಜೆ ಸಲ್ಲಿಸಿದ್ದಾರೆ. ಮಂಜುನಾಥ ಸ್ವಾಮಿಯ ಆಶೀರ್ವಾದ ಪಡೆದ ನಂತರ ಅವರರನ್ನು ನೋಡಲು ಫ್ಯಾನ್ಸ್ ಮುಗಿಬಿದ್ದಿದ್ದಾರೆ. ಈ ವೇಳೆ ಸ್ವಲ್ಪ ನೂಕು ನುಗ್ಗಲು ಉಂಟಾಗಿದೆ. ಸೆಲ್ಫಿಗಾಗಿ ಮುಗಿಬೀಳುವ ಅಭಿಮಾನಿಗಳನ್ನು ನಿಭಾಯಿಸುವುದು ಸುಲಭವಲ್ಲ. ಧರ್ಮಸ್ಥಳದಲ್ಲೂ ಅದೇ ರೀತಿ ಆಗಿದೆ.

'ರಾಕಿಂಗ್ ಸ್ಟಾರ್' ಯಶ್ ಅವರು ಫ್ಯಾಮಿಲಿಗೆ ಹೆಚ್ಚು ಸಮಯ ನೀಡುತ್ತಾರೆ. ಅವರು ಕುಟುಂಬ ಸಮೇತರಾಗಿ ಧರ್ಮಸ್ಥಳಕ್ಕೆ ಬಂದಿದ್ದಾರೆ. ಮಂಜುನಾಥ ಸ್ವಾಮಿಯ ದರ್ಶನ ಪಡೆಯಲು ಆಗಮಿಸಿದ ಯಶ್ ಅವರನ್ನು ನೋಡಲು ಅಭಿಮಾನಿಗಳು ಮುಗಿಬಿದ್ದರು. ಯಶ್ ಈಗ ಪ್ಯಾನ್ ಇಂಡಿಯಾ ಸ್ಟಾರ್. ಅವರನ್ನು ಹತ್ತಿರದಿಂದ ನೋಡಬೇಕು, ಜೊತೆಗೊಂದು ಫೋಟೋ ತೆಗೆಸಿಕೊಳ್ಳಬೇಕು ಎಂಬುದು ಫ್ಯಾನ್ಸ್ ಆಸೆ. ಹಾಗಾಗಿ ಧರ್ಮಸ್ಥಳದಲ್ಲೂ ಯಶ್ ಜೊತೆ ಸೆಲ್ಫಿಗಾಗಿ ಅಭಿಮಾನಿಗಳು ಮುಗಿಬಿದ್ದರು. ಈ ಸಂದರ್ಭದಲ್ಲಿ ಜನಜಂಗುಳಿ ನಿಭಾಯಿಸಲು ಕೆಲವರನ್ನು ಬಾಡಿಗಾರ್ಡ್ಸ್ ತಳ್ಳಿದರು. ಇದರಿಂದ ಯಶ್ ಅವರಿಗೆ ಸಡನ್ ಆಗಿ ಕೋಪ ಬಂತು. 'ಟಾಕ್ಸಿಕ್' ಸಿನಿಮಾದ ಕೆಲಸಗಳಲ್ಲಿ ಯಶ್ ತೊಡಗಿಕೊಂಡಿದ್ದಾರೆ. ಬಿಡುವು ಮಾಡಿಕೊಂಡು ಅವರು ದೇವಸ್ಥಾನಕ್ಕೆ ಬಂದಿದ್ದಾರೆ.



ಸ್ವಾತಿಮುತ್ತೇ ಸಿಕ್ಕಂಗೈತೆ

# ಜ್ಯೂ.ಎನ್‌ಟಿಆರ್ ಜೊತೆ ಹೆಜ್ಜೆ ಹಾಕಿದ ಜಾನ್ವಿ ಕಪೂರ್

ಜ್ಯೂ.ಎನ್‌ಟಿಆರ್ ನಟನೆಯ 'ದೇವರ' ಸಿನಿಮಾದ ರೊಮ್ಯಾಂಟಿಕ್ ಸಾಂಗ್ ನೋಡಲು ಕಾಯುತ್ತಿದ್ದ ಫ್ಯಾನ್ಸ್ ಕಾತರಕ್ಕೆ ತೆರೆಬಿದ್ದಿದೆ. 'ದೇವರ' ಚಿತ್ರದ ಸಾಂಗ್ ರಿಲೀಸ್ ಆಗಿದೆ. 'ಸ್ವಾತಿಮುತ್ತೇ ಸಿಕ್ಕಂಗೈತೆ' ಎಂದು ಜ್ಯೂ.ಎನ್‌ಟಿಆರ್ ಜೊತೆ ಜಾನ್ವಿ ಕಪೂರ್ ಸಖತ್ ಆಗಿ ಸ್ಟೇಪ್ ಹಾಕಿದ್ದಾರೆ. ಥೈಲ್ಯಾಂಡ್ ಕಾಡಿನ ಸುಂದರ ಜಾಗವೊಂದರಲ್ಲಿ ದೇವರ ಸಾಂಗ್ ಅನ್ನು ಶೂಟ್ ಮಾಡಿದ್ದಾರೆ. ಕನ್ನಡ ವರ್ಷನ್‌ನಲ್ಲಿ ಮೂಡಿ ಬಂದಿರುವ 'ಸ್ವಾತಿಮುತ್ತೇ ಸಿಕ್ಕಂಗೈತೆ ಹುಡುಗನ ಹುರುಪು' ಹಾಡಿನಲ್ಲಿ, ಸಖತ್ ಹಾಟ್ ಆಗಿ ತಾರಕ್ ಜೊತೆ ಜಾನ್ವಿ ಕುಣಿದು ಕುಪ್ಪಳಿಸಿದ್ದಾರೆ. ಈ ಹಾಡಿಗೆ ಅಭಿಮಾನಿಗಳಿಂದ ಉತ್ತಮ ರೆಸ್ಪಾನ್ಸ್ ಸಿಕ್ಕಿದೆ. ಹಾಡಿನಲ್ಲಿ ಜಾನ್ವಿ ಸುಂದರವಾಗಿ ಕಾಣಿಸಿಕೊಂಡಿದ್ದಾರೆ. ಎಂದೂ ಕಾಣಿಸಿಕೊಂಡಿದ ಲುಕ್‌ನಲ್ಲಿ ಮೋಡಿ ಮಾಡಿದ್ದಾರೆ. ತಾರಕ್ ಮತ್ತು ಕೆಮಿಸ್ಟ್ರಿ ಪಡ್ಡೆಹುಡುಗರ ಮನಸ್ಸು ಗೆದ್ದಿದೆ. ಸಾಂಗ್ ರಿಲೀಸ್ ಕೆಲವೇ ಹೊತ್ತಿನಲ್ಲಿ ಮಿಲಿಯನ್ ಗಟ್ಟಲೇ ವಿವ್ಸ್ ಪಡೆದಿದೆ. ಇದೇ ಸೆ.27ರಂದು ಬಹುಭಾಷೆಯಲ್ಲಿ ಸಿನಿಮಾ ರಿಲೀಸ್ ಆಗಲಿದೆ. ಈ ಚಿತ್ರದಲ್ಲಿ ಜ್ಯೂ.ಎನ್‌ಟಿಆರ್ ಡಬಲ್ ರೋಲ್‌ನಲ್ಲಿ ನಟಿಸಿದ್ದಾರೆ. ಇವರ ಜೊತೆ ಜಾನ್ವಿ ಕಪೂರ್, ಸೈಫ್ ಅಲಿ ಖಾನ್, ಚೈತ್ರಾ ರೈ ಸೇರಿದಂತೆ ಅನೇಕರು ನಟಿಸಿದ್ದಾರೆ. 'ಆರ್‌ಆರ್‌ಆರ್' ಸಿನಿಮಾದ ಸಕ್ಸಸ್ ಬಳಿಕ ಬರುತ್ತಿರುವ 'ದೇವರ' ಚಿತ್ರದ ಮೇಲೆ ಅಭಿಮಾನಿಗಳು ಬೆಟ್ಟದಷ್ಟು ನಿರೀಕ್ಷೆ ಇಟ್ಟುಕೊಂಡಿದ್ದಾರೆ.

Printed by : A. BALACHANDRA, Printed at : RAJHANS ENTERPRISES No. 134, 4th Main Road, Industrial Town, Rajajinagar, Bengaluru 560044, Karnataka. Owned By, Published By, Editor :T. HOMBE GOWDA, No. 1230, Jayamahal, Ground Floor, 13th Cross, 2nd Phase, Girinagar, Bengaluru 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news
ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966